23 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 23 | ಸಂಚಿಕೆ 315 | ನವದೆಹಲಿ | ಬೆಲೆ ₹10 | ಮೇ 21 2026, ಗುರುವಾರ

## ಒಳಪುಟಗಳಲ್ಲಿ

ನಾರ್ವೆಯ ಪ್ರಮುಖ ದಿನಪತ್ರಿಕೆಯಲ್ಲಿ ಪ್ರಧಾನಿ ಮೋದಿ ಅವರಿಗೆ ಅವಮಾನ - ಪು.4

ಪ್ರಧಾನಿ ಮೋದಿ ಪ್ರಚಾರದ ಗೀಳಿರುವ ಇನ್‌ಫ್ಲುಯೆನ್ಸರ್: ಪ್ರಿಯಾಂಕ್ ಖರ್ಗೆ ಟೀಕೆ - ಪು.5

ಸಮುದ್ರದಲ್ಲಿ ಅಸ್ಥಿರ ವಾತಾವರಣ: ಕಡಲಿಗೆ ಇಳಿಯದಂತೆ ಮೀನುಗಾರರಿಗೆ ಎಚ್ಚರಿಕೆ - ಪು.6

# ಜಿಬಿಎ ಐದು ಪಾಲಿಕೆಗಳಿಗೆ ಚುನಾವಣೆ ನಡೆಸಲು ಆ.31ರ ಗಡುವು

**ನವದೆಹಲಿ, ಮೇ 20: ರಾಜ್ಯ ಸರ್ಕಾರವು ಚುನಾವಣೆ ವಿಳಂಬಗೊಳಿಸಲು ಯತ್ನಿಸುತ್ತಿದೆ ಎಂದು ಕಟುವಾಗಿ ಟೀಕಿಸಿದ ಸುಪ್ರೀಂಕೋರ್ಟ್, ಆಗಸ್ಟ್ 31ರೊಳಗೆ ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಅಡಿ ಬರುವ ಐದೂ ಪಾಲಿಕೆಗಳಿಗೆ ಚುನಾವಣೆ ನಡೆಸುವಂತೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದೆ.**

ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಅಡಿ ಬರುವ ಐದು ಪಾಲಿಕೆಗಳಿಗೆ ಚುನಾವಣೆ ಮುಂದೂಡಿಕೆ ಕೋರಿ ರಾಜ್ಯ ಚುನಾವಣಾ ಆಯೋಗ ಸಲ್ಲಿಸಿರುವ ಮಧ್ಯಂತರ ಅರ್ಜಿಯ ವಿಚಾರಣೆಯನ್ನು ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್, ನ್ಯಾಯಮೂರ್ತಿಗಳಾದ ಜೋಯಮಾಲ್ಯ ಬಾಗ್ಚಿ ಮತ್ತು ವಿಪುಲ್ ಎಂ. ಪಾಂಚೋಲಿ ಅವರ ತ್ರಿಸದಸ್ಯ ಪೀಠ ನಡೆಸಿತು.

ಈ ಪ್ರಕರಣವನ್ನು ಅವಲೋಕಿಸಿದರೆ ರಾಜ್ಯ ಸರ್ಕಾರವು ಪಾಲಿಕೆ ಚುನಾವಣೆ ಮುಂದೂಡಲು ಯತ್ನಿಸುತ್ತಿರುವಂತೆ ಕಾಣುತ್ತಿದೆ ಎಂದು ನ್ಯಾಯಾಲಯ ಹೇಳಿತು. ಅಂತಿಮವಾಗಿ, ಪರಿಸ್ಥಿತಿಯನ್ನು ಸಂಪೂರ್ಣವಾಗಿ ಪರಿಗಣಿಸಿ ಗ್ರೇಟರ್ ಬೆಂಗಳೂರು ಪ್ರಾಧಿಕಾರದಡಿ ಬರುವ ಐದೂ ಪಾಲಿಕೆಗಳಿಗೆ ಚುನಾವಣೆ ನಡೆಸಲು ಕೊನೆಯ ಬಾರಿಗೆ ಆಗಸ್ಟ್ 31ರವರೆಗೆ ಕಾಲಾವಕಾಶ ನೀಡಲಾಗಿದೆ ಎಂದು ಆದೇಶಿಸಿತು.

ವಿಚಾರಣೆ ಆರಂಭವಾಗುತ್ತಿದ್ದಂತೆ ರಾಜ್ಯ ಸರ್ಕಾರವನ್ನು ಪ್ರತಿನಿಧಿಸಿದ್ದ ಹಿರಿಯ ವಕೀಲ ಡಾ. ಅಭಿಷೇಕ್ ಮನು



ಸಿಂಘ್ವಿ ಅವರು ಬೆಂಗಳೂರಿನ ಐದು ಪಾಲಿಕೆಗಳಿಗೆ ಜೂನ್ 30ರ ಒಳಗೆ ಚುನಾವಣೆ ನಡೆಸುವಂತೆ ಸುಪ್ರೀಂ ಕೋರ್ಟ್ ಈ ಹಿಂದೆ ನಿರ್ದೇಶಿಸಿತ್ತು. ಸಿಬ್ಬಂದಿಯ ಕೊರತೆಯಿರುವುದರಿಂದ 60 ದಿನಗಳು ಚುನಾವಣೆ ಮುಂದೂಡಬೇಕು. ಐದೂ ಪಾಲಿಕೆಗಳಿಗೆ ಚುನಾವಣೆ ನಡೆಸಲು ಬಜೆಟ್‌ನಲ್ಲಿ ಹಣ ಮೀಸಲಿರಿಸಲಾಗಿದೆ. ಸಿಬ್ಬಂದಿ ಕೊರತೆ ಇರುವುದರಿಂದ ಎರಡರಿಂದ ಮೂರು ತಿಂಗಳು ಕೇಳುತ್ತಿದ್ದೇವೆ ಅಷ್ಟೆ ಎಂದರು.

ಚುನಾವಣೆ ಮುಂದೂಡಿಕೆ ವಿರೋಧಿಸಿ ವಕೀಲ ರಂಗನಾಥ್ ಪರವಾಗಿ ಹಾಜರಾಗಿದ್ದ ಹಿರಿಯ ವಕೀಲ




ಪರಮೇಶ್ವರ್ ಅವರು ನ್ಯಾಯಾಲಯವು ಹಲವು ಬಾರಿ ಕಾಲಾವಕಾಶ ನೀಡಿದ್ದು, ಸರ್ಕಾರ ಚುನಾವಣೆ ನಡೆಸಲು ಮೀನಮೇಷ ಎಣಿಸುತ್ತಿದೆ. 15 ದಿನ ಹೆಚ್ಚುವರಿ ಕಾಲಾವಕಾಶ ನೀಡಬಹುದು. ಅದರ ಮೇಲೆ ಸಮಯ ನೀಡಕೂಡದು ಎಂದರು.

ರಾಜ್ಯ ಚುನಾವಣಾ ಆಯೋಗದ ಪರ ಹಿರಿಯ ವಕೀಲ ಕೆ ಎನ್ ಫಣೀಂದ್ರ ಅವರು ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಮುಖ್ಯ ಆಯುಕ್ತರು ಚುನಾವಣೆ ನಡೆಸಲು ಡಿಸೆಂಬರ್‌ವರೆಗೆ ಕಾಲಾವಕಾಶ ಕೋರಿದ್ದಾರೆ. ಮತ್ತೊಮ್ಮೆ ನ್ಯಾಯಾಲಯದ ಮುಂದೆ ಬರಲು ಅವಕಾಶ ನೀಡಬಾರದು ಎಂದು ಮನವಿ ಮಾಡಿದರು.

ಈ ನಡುವೆ, ಅಡ್ವೊಕೇಟ್ ಜನರಲ್ ಕೆ.ಶಶಿಕಿರಣ್ ಶೆಟ್ಟಿ ಅವರು ಕನಿಷ್ಠ 15 ದಿನವಾದರೂ ಹೆಚ್ಚುವರಿಯಾಗಿ ನೀಡಬೇಕು ಎಂಬ ಮನವಿಯನ್ನು ನ್ಯಾಯಾಲಯ ತಿರಸ್ಕರಿಸಿತು. ಚುನಾವಣೆ ಮುಂದೂಡಿಕೆ ಸಂಬಂಧಿಸಿದ ಎಲ್ಲಾ ಅರ್ಜಿಗಳನ್ನು ವಜಾಗೊಳಿಸಲಾಗಿದೆ ಎಂದು ಆದೇಶಿಸಿತು.

2015ರಲ್ಲಿ ಕೊನೆಯ ಬಾರಿಗೆ ಬಿಬಿಎಂಪಿಗೆ ಚುನಾವಣೆ ನಡೆದಿತ್ತು. 2021ರಲ್ಲಿ ಬಿಬಿಎಂಪಿಯಲ್ಲಿ ಜನಪ್ರತಿನಿಧಿಗಳ ಆಡಳಿತ ಮುಗಿದಿದ್ದು, ಅಂದಿನಿಂದ ಮೀಸಲಾತಿ, ಕ್ಷೇತ್ರ ಪುನರ್ವಿಂಗಡಣೆ ಮತ್ತಿತರ ನೆಪವೊಡ್ಡಿ ರಾಜ್ಯ ಸರ್ಕಾರಗಳು ಚುನಾವಣೆಯನ್ನು ಮುಂದೂಡುತ್ತಾ ಬಂದಿವೆ.

ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಅಡಿ ಬೆಂಗಳೂರು, ಉತ್ತರ, ದಕ್ಷಿಣ, ಪೂರ್ವ, ಪಶ್ಚಿಮ ಮತ್ತು ಕೇಂದ್ರ ಪಾಲಿಕೆಗಳನ್ನು ರೂಪಿಸಲಾಗಿದೆ. ಈ ಎಲ್ಲಾ ಪಾಲಿಕೆಗಳಿಗೆ ಸುಪ್ರೀಂ ಕೋರ್ಟ್ ನಿರ್ದೇಶನದ ಪ್ರಕಾರ ಆಗಸ್ಟ್ 31ರ ಒಳಗೆ ಚುನಾವಣೆ ನಡೆಯಬೇಕಿದೆ.

ಜನಗಣತಿ ಮತ್ತು ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆಗೆ (ಎಸ್‌ಐಆರ್) ಸಿಬ್ಬಂದಿ ನಿಯೋಜಿಸಿರುವುದರಿಂದ ಅವರು ಚುನಾವಣಾ ಕರ್ತವ್ಯಕ್ಕೆ ಅಲಭ್ಯರಾಗಿದ್ದಾರೆ. ಹೀಗಾಗಿ, ಸೆಪ್ಟೆಂಬರ್ 30ರವರೆಗೆ ಚುನಾವಣಾ ಮುಂದೂಡಿಕೆ ಮಾಡಬೇಕು ಎಂದು ರಾಜ್ಯ ಚುನಾವಣಾ ಆಯೋಗವು ಮಧ್ಯಂತರ ಅರ್ಜಿ ಸಲ್ಲಿಸಿತ್ತು.

# 800 ಕೆಪಿಎಸ್ ಆರಂಭಿಸುವ ಸಂಬಂಧ ಶೀಘ್ರ ಟೆಂಡರ್: ಸಿಎಂ ಸೂಚನೆ

**ಬೆಂಗಳೂರು, ಮೇ 20:** ಮುಂದಿನ ಎರಡು ವರ್ಷಗಳಲ್ಲಿ ರಾಜ್ಯದಲ್ಲಿ 800 ಕರ್ನಾಟಕ ಪಬ್ಲಿಕ್ ಸ್ಕೂಲ್ (ಕೆಪಿಎಸ್) ತೆರೆಯುವ ಸಂಬಂಧ ಟೆಂಡರ್ ಪ್ರಕ್ರಿಯೆ ಶೀಘ್ರದಲ್ಲಿ ಆರಂಭಿಸಲು ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚಿಸಿದ್ದಾರೆ.

ಗೃಹ ಕಚೇರಿ ಕೃಷ್ಣಾದಲ್ಲಿ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಸಚಿವರು ಹಾಗೂ ಅಧಿಕಾರಿಗಳೊಂದಿಗೆ ಈ ಕುರಿತು ಸಭೆ ನಡೆಸಿದರು.ಜೂನ್ 1ರಿಂದ ಶಾಲೆಗಳು ಆರಂಭವಾಗುತ್ತಿದ್ದು, ಕೈಗೊಳ್ಳಬೇಕಾದ ಸಿದ್ಧತೆಗಳ ಕುರಿತು ಕ್ರಮ ಕೈಗೊಳ್ಳಬೇಕು. ಎಲ್ಕೆಜಿಯಿಂದ 10ನೇ ತರಗತಿವರೆಗೆ ಕನ್ನಡ ಮತ್ತು ಆಂಗ್ಲ ಮಾಧ್ಯಮಗಳಲ್ಲಿ ಶಿಕ್ಷಣ ದೊರೆಯಲು ಕೆಪಿಎಸ್ ಶಾಲೆಗಳನ್ನು ಆರಂಭಿಸಲಾಗುತ್ತಿದೆ. ಒಂದು ಕೆಪಿಎಸ್ ಶಾಲೆಯಲ್ಲಿ 1200 ಮಕ್ಕಳಿಗೆ ಪ್ರವೇಶಾವಕಾಶ ಸಿಗಲಿದ್ದು, ಎಲ್‌ಕೆಜಿಯಿಂದ ಪಿಯುಸಿವರೆಗೆ ಒಂದೇ ಕಡೆ ಕನ್ನಡ ಮತ್ತು ಇಂಗ್ಲಿಷ್ ಮಾಧ್ಯಮದಲ್ಲಿ ಶಿಕ್ಷಣ ದೊರೆಯಲಿದೆ.

**ಗೃಹ ಕಚೇರಿ ಕೃಷ್ಣಾದಲ್ಲಿ ಸಚಿವರು, ಅಧಿಕಾರಿಗಳ ಜತೆ ಸಿಎಂ ಸಭೆ**




ಮುಂದಿನ ಎರಡು ವರ್ಷಗಳಲ್ಲಿ ಎಲ್ಲಾ 800 ಶಾಲೆಗಳು ಸಂಪೂರ್ಣವಾಗಿ ಸಿದ್ಧವಾಗಬೇಕು. ಶಿವಮೊಗ್ಗದಲ್ಲಿ ಜೂನ್ 1ರಂದು ಕೆಪಿಎಸ್ ಶಾಲೆಗೆ ಚಾಲನೆ ನೀಡಲಾಗುವುದು. ಒಂದು ಕೆಪಿಎಸ್ ಶಾಲೆಯಲ್ಲಿ 1,200 ಮಕ್ಕಳಿಗೆ ಪ್ರವೇಶಾವಕಾಶ ಸಿಗಲಿದೆ. ಕೆಪಿಎಸ್ ಶಾಲೆಗಳಿಗೆ ಬಸ್ ವ್ಯವಸ್ಥೆ ಸೌಲಭ್ಯ ಯಾವ ರೀತಿಯಲ್ಲಿ ಕಲ್ಪಿಸಬಹುದು ಎಂಬ ಬಗ್ಗೆ ಕುರಿತು ಪರಿಶೀಲಿಸಿ ಕ್ರಮ ಕೈಗೊಳ್ಳುವಂತೆ ತಿಳಿಸಿದರು. ಸರ್ಕಾರಿ ಶಾಲೆಗಳಲ್ಲಿ ಶಿಕ್ಷಕರ ಕೊರತೆ ಎದುರಿಸುತ್ತಿದ್ದು, ತಾತ್ಕಾಲಿಕವಾಗಿ ಅತಿಥಿ ಶಿಕ್ಷಕರನ್ನು ನಿಯೋಜಿಸಲಾಗಿದ್ದರೂ ಪರಿಪೂರ್ಣವಾಗಿಲ್ಲ. ವಿದ್ಯಾರ್ಥಿಗಳಿಗೆ ಉಚಿತ ಪಠ್ಯ ಪುಸ್ತಕಗಳೊಂದಿಗೆ ಉಚಿತ ನೋಟ್ ಬುಕ್ ವಿತರಿಸುವ ಬೇಡಿಕೆ ಪರಿಶೀಲನೆ.

ಈ ನಿಟ್ಟಿನಲ್ಲಿ ಖಾಲಿಯಿರುವ 15 ಸಾವಿರ ಶಿಕ್ಷಕರ ಭರ್ತಿ ಸಂಬಂಧ ಕೂಡಲೇ ಆರ್ಥಿಕ ಇಲಾಖೆಗೆ ಪ್ರಸ್ತಾವನೆ ಸಲ್ಲಿಸುವಂತೆ ಅಧಿಕಾರಿಗಳಿಗೆ ಮುಖ್ಯಮಂತ್ರಿಗಳು ಸೂಚನೆ ನೀಡಿದರು.

### ಫಲಿತಾಂಶ ಹೆಚ್ಚಳಕ್ಕೆ ವಿಶೇಷ ಕ್ರಮ ಕೈಗೊಂಡಿದ್ದೇ ಕಾರಣ

**ಈ ಬಾರಿ ಎಸ್‌ಎಸ್‌ಎಲ್ಸಿಯಲ್ಲಿ ಶೇ. 94.10ರಷ್ಟು ಫಲಿತಾಂಶ ದಾಖಲಾಗಿದ್ದು, ಕಳೆದ ವರ್ಷಕ್ಕಿಂತ ಶೇ.14.06 ಹೆಚ್ಚಾಗಿದೆ. ಪಿಯುಸಿಯಲ್ಲಿ ಈ ಬಾರಿ ಶೇ.86.48ರಷ್ಟು ಫಲಿತಾಂಶ ಬಂದಿದ್ದು, ಕಳೆದ ವರ್ಷಕ್ಕಿಂತ ಶೇ.13ರಷ್ಟು ಹೆಚ್ಚಳವಾಗಿದೆ. ಫಲಿತಾಂಶ ಉತ್ತಮಪಡಿಸಲು ಅತಿಥಿ ಶಿಕ್ಷಕರನ್ನು ನೇಮಕ ಮಾಡಲಾಗಿತ್ತು. ಪಠ್ಯ ಆಧಾರಿತ ಅಧ್ಯಯನ ಕ್ರಮ ರೂಪಿಸಲಾಗಿತ್ತು. ರಾಜ್ಯಮಟ್ಟದಲ್ಲಿ ಪೂರ್ವಭಾವಿ ಪರೀಕ್ಷೆಗಳನ್ನು ನಡೆಸಲಾಗಿತ್ತು. ಕಾಲಕಾಲಕ್ಕೆ ಶಿಕ್ಷಕರಿಗೆ ತರಬೇತಿ ನೀಡುವ ಮೂಲಕ ಮೇಲ್ವಿಚಾರಣೆ ಕೈಗೊಳ್ಳಲಾಗಿತ್ತು. ಕಲ್ಯಾಣ ಕರ್ನಾಟಕ ಭಾಗದಲ್ಲಿ ಫಲಿತಾಂಶ ಉತ್ತಮಗೊಳ್ಳಲು ವಿಶೇಷ ತರಬೇತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು ಎಂದು ಶಿಕ್ಷಣ ಸಚಿವ ಮಧು ಬಂಗಾರಪ್ಪ ಮಾಹಿತಿ ನೀಡಿದರು.**



ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಬುಧವಾರ ಇಟಲಿ ಪ್ರಧಾನಿ ಜಾರ್ಜಿಯಾ ಮೆಲೊನಿ ಅವರೊಂದಿಗೆ ರೋಮ್ ನಗರದಲ್ಲಿ ದ್ವಿಪಕ್ಷೀಯ ಮಾತುಕತೆ ನಡೆಸಿದರು.

# ಬಿಡದಿ ಟೌನ್‌ಶಿಪ್: ಜೂನ್ ಮೊದಲ ವಾರದಲ್ಲಿ ಪರಿಹಾರ ವಿತರಣೆ

**ಬೆಂಗಳೂರು, ಮೇ 20:** ರಾಮನಗರ ಬಳಿಯ ಬಿಡದಿಯಲ್ಲಿ ಪ್ರಸ್ತಾವಿತ ಗ್ರೇಟರ್ ಬೆಂಗಳೂರು ಟೌನ್‌ಶಿಪ್ ಯೋಜನೆಗೆ ಶೇ.80ರಷ್ಟು ರೈತರು ಒಪ್ಪಿಗೆ ನೀಡಿದ್ದು, ಜೂನ್ ಮೊದಲ ವಾರದಲ್ಲಿ ಪರಿಹಾರ ವಿತರಣೆ ಪ್ರಾರಂಭವಾಗಲಿದೆ. ಈ ಸಂಬಂಧ ಮೂರು ದಿನಗಳಲ್ಲಿ ಅಧಿಸೂಚನೆ ಹೊರಡಿಸಲಾಗುವುದು ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಬುಧವಾರ ಘೋಷಣೆ ಮಾಡಿದರು.

ಯೋಜನೆಗೆ ವಿರೋಧ ವ್ಯಕ್ತಪಡಿಸಿದ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಹೇಳಿಕೆಗೆ ಪ್ರತಿಕ್ರಿಯಿಸಿದ ಡಿ.ಕೆ. ಶಿವಕುಮಾರ್, ಎಚ್‌ಡಿಕೆ ಮುಖ್ಯಮಂತ್ರಿಯಾಗಿದ್ದ ಅವಧಿಯಲ್ಲೇ ಟೌನ್‌ಶಿಪ್ ಬಗ್ಗೆ ಪ್ರಸ್ತಾಪಿಸಿದ್ದರು. ಈ ವಿಚಾರದಲ್ಲಿ ಜೆಡಿಎಸ್ ನಾಯಕರೊಂದಿಗೆ ಅವರು ಆಯ್ಕೆ ಮಾಡಿದ ಸ್ಥಳ ಮತ್ತು ಸಮಯದಲ್ಲಿ ಸಾರ್ವಜನಿಕ ಚರ್ಚೆಗೆ ಸಿದ್ಧನಿದ್ದೇನೆ ಎಂದು



**ಗ್ರೇಟರ್ ಬೆಂಗಳೂರು ಟೌನ್‌ಶಿಪ್ ಯೋಜನೆಗೆಗೆ ಶೇ.80ರಷ್ಟು ರೈತರ ಒಪ್ಪಿಗೆ**

ಡಿಸಿಎಂ ಸವಾಲು ಹಾಕಿದರು.

ಬಿಡದಿ ಗ್ರೇಟರ್ ಬೆಂಗಳೂರು ಟೌನ್‌ಶಿಪ್ ಯೋಜನೆ ಕುರಿತು ರೈತರೊಂದಿಗೆ ಬುಧವಾರ ಮಹತ್ವದ ಸಭೆ ನಡೆಸಿದ ಬಳಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಗ್ರೇಟರ್ ಬೆಂಗಳೂರು ಟೌನ್‌ಶಿಪ್ ವಿಷಯಕ್ಕೆ ಸಂಬಂಧಿಸಿದಂತೆ ಎಲ್ಲಾ ರೈತರು ಬಂದಿದ್ದರು. ಯೋಜನೆ ಬಗ್ಗೆ ಸರ್ಕಾರ ಪ್ರಕಟಿಸಿರುವ ಪರಿಹಾರ ಕ್ರಮ ಮತ್ತು ಭೂಮಿ ಸ್ವಾಧೀನ ಪ್ರಕ್ರಿಯೆ ಕುರಿತು ರೈತರಿಗೆ ವಿವರ ನೀಡಲಾಗಿದ್ದು, ಹೆಚ್ಚು ಕಡಿಮೆ ಶೇ.80ರಷ್ಟು ರೈತರು ಒಪ್ಪಿಗೆ ನೀಡಿದ್ದಾರೆ. ಪರಿಹಾರವನ್ನು ಆದಷ್ಟು ಬೇಗ ಬಿಡುಗಡೆ ಮಾಡುವಂತೆ ಸರ್ಕಾರವನ್ನು ಒತ್ತಾಯಿಸಿದ್ದಾರೆ. ಭೂಸ್ವಾಧೀನಕ್ಕೆ ಸಂಬಂಧಿಸಿದಂತೆ ಗ್ರಾಮವಾರು ಅಂತಿಮ ಅಧಿಸೂಚನೆಗಳನ್ನು ಹೊರಡಿಸಲಾಗುವುದು ಮತ್ತು ಪರಿಹಾರವನ್ನು ಶೀಘ್ರದಲ್ಲೇ ಬಿಡುಗಡೆ ಮಾಡಲಾಗುವುದು. ಜೂನ್ 30ರೊಳಗೆ ಎಲ್ಲಾ ಸಂಬಂಧಿತ ನೋಟಿಫಿಕೇಶನ್‌ಗಳನ್ನು ಪೂರ್ಣಗೊಳಿಸುವ ಗುರಿ ಇಟ್ಟುಕೊಂಡಿರುವುದಾಗಿ ಡಿ.ಕೆ. ಶಿವಕುಮಾರ್ ಸ್ಪಷ್ಟಪಡಿಸಿದರು.

### ರೈತರ ಬೇಡಿಕೆ

**ಸಭೆಯಲ್ಲಿ ರೈತರು ಕೂಡ ಕೆಲವು ಬೇಡಿಕೆಗಳನ್ನು ಸಭೆಯಲ್ಲಿ ಡಿಕೆಶಿ ಮುಂದಿಟ್ಟರು. ವಿಶೇಷವಾಗಿ, ಅಭಿವೃದ್ಧಿ ಆಗುವ ಜಾಗದಲ್ಲಿ ರೈತರಿಗೆ 30x40 ನಿವೇಶನಗಳನ್ನು ಮಂಜೂರು ಮಾಡಬೇಕು, ಭೂಮಿಯನ್ನು ಸರ್ಕಾರಕ್ಕೆ ನೀಡುತ್ತಿರುವ ಹಿನ್ನೆಲೆಯಲ್ಲಿ, ಹಣದೊಂದಿಗೆ ಕನಿಷ್ಠ ಕೆಲವು ನಿವೇಶನಗಳ ರೂಪದಲ್ಲಿ ಹಿಂತಿರುಗಿ ಸೌಲಭ್ಯ ನೀಡಬೇಕು ಎಂದು ವಿನಂತಿಸಿದರು. ಅಭಿವೃದ್ಧಿಯಾಗುವ ಪ್ರದೇಶದಲ್ಲೇ ಅವರಿಗೆ ನಿವೇಶನ ನೀಡಿದರೆ, ತಮ್ಮ ಭವಿಷ್ಯ ಭದ್ರವಾಗುತ್ತದೆ ಎಂಬ ಅಭಿಪ್ರಾಯವನ್ನು ರೈತರು ವ್ಯಕ್ತಪಡಿಸಿದರು. ಆದರೆ ರೈತರ ಬೇಡಿಕೆಯನ್ನು ತಕ್ಷಣ ಒಪ್ಪಿಕೊಳ್ಳುವ ಬದಲು, ಈ ಬಗ್ಗೆ ಯೋಚನೆ ಮಾಡ್ತೇವೆ ಎಂದು ಡಿಸಿಎಂ ಹೇಳಿದ್ದಾರೆ.**

# ಡ್ರೋನ್, ಟ್ಯಾಂಕರ್ ವಿರೋಧಿ ಕ್ಷಿಪಣಿ ULPGM-V3 ಪ್ರಯೋಗ ಯಶಸ್ವಿ

**ನವದೆಹಲಿ, ಮೇ 20:** ದೇಶೀಯ ರಕ್ಷಣಾ ಸಾಮರ್ಥ್ಯವನ್ನು ಬಲಪಡಿಸುವಲ್ಲಿ ಭಾರತ ಮಹತ್ತರವಾದ ಮೈಲಿಗಲ್ಲನ್ನು ಸಾಧಿಸಿದೆ. ಮಾನವರಹಿತ ವಾಹಕದಿಂದ ಆಕಾಶದಿಂದ ಭೂಮಿಗೆ, ಆಗಸದಿಂದ ಆಗಸಕ್ಕೆ ಉಡಾವಣೆ ಮಾಡಬಹುದಾದ ಯುಎವಿ ಲಾಂಚ್ಡ್ ಪ್ರಿಸಿಷನ್ ಗೈಡೆಡ್ ಮಿಸೈಲ್‌ನ ಅಂತಿಮ ಹಂತದ ಪರೀಕ್ಷಾರ್ಥ ಪ್ರಯೋಗ ಯಶಸ್ವಿಯಾಗಿದೆ. ರಕ್ಷಣಾ ಸಚಿವಾಲಯವು ನೀಡಿದ ಮಾಹಿತಿಯ ಪ್ರಕಾರ, ಯುಎಲ್ಪಿಜಿಎಂ ಕ್ಷಿಪಣಿಯನ್ನು ನಿಯಂತ್ರಿಸಲು ಮತ್ತು ಆದೇಶಿಸಲು ಸಂಯೋಜಿತ 'ಗ್ರೌಂಡ್ ಕಂಟ್ರೋಲ್ ಸಿಸ್ಟಮ್' ಬಳಸಿಕೊಂಡು ಈ ಅಂತಿಮ ಹಂತದ ಪರೀಕ್ಷೆಗಳನ್ನು ನಡೆಸಲಾಗಿದೆ. ಈ ಜಿಸಿಎಸ್ ವ್ಯವಸ್ಥೆಯು ಕ್ಷಿಪಣಿ ಉಡಾವಣಾ ಕಾರ್ಯಾಚರಣೆಗಳನ್ನು ಸ್ವಯಂಚಾಲಿತಗೊಳಿಸಲು ಅತ್ಯಾಧುನಿಕ ತಂತ್ರಜ್ಞಾನ ಹೊಂದಿದೆ ಎಂದು ತಿಳಿಸಿದೆ.

ಕ್ಷಿಪಣಿಗಳ ಅಭಿವೃದ್ಧಿ ಮತ್ತು ಉತ್ಪಾದನೆಗಾಗಿ ಡಿಆರ್‌ಡಿಒ ಎರಡು ಪ್ರಮುಖ ಸಂಸ್ಥೆಗಳಾದ ಹೈದರಾಬಾದ್‌ನ




ಭಾರತ್ ಡೈನಾಮಿಕ್ಸ್ ಮತ್ತು ಅದಾನಿ ಡಿಫೆನ್ಸ್ ಸಿಸ್ಟಮ್ಸ್ ಅಂಡ್ ಟೆಕ್ನಾಲಜೀಸ್ ಜೊತೆ ಪಾಲುದಾರಿಕೆ ಮಾಡಿಕೊಂಡಿದೆ. ಪ್ರಸ್ತುತ ಪರೀಕ್ಷೆಗಳಿಗಾಗಿ ಈ ಕ್ಷಿಪಣಿ ವ್ಯವಸ್ಥೆಯನ್ನು ಬೆಂಗಳೂರಿನ ನ್ಯೂ ಸ್ಪೇಸ್ ರಿಸರ್ಚ್ ಅಂಡ್ ಟೆಕ್ನಾಲಜೀಸ್ ಅಭಿವೃದ್ಧಿಪಡಿಸಿರುವ ಯುಎವಿಗಳಲ್ಲಿ ಅಳವಡಿಸಲಾಗಿದೆ. ಹೈದರಾಬಾದ್‌ನ ರಿಸರ್ಚ್ ಸೆಂಟರ್ ಇಮಾರತ್ ಮುಖ್ಯ ಪ್ರಯೋಗಾಲಯವಾಗಿ ಈ ಯುಎಲ್‌ಪಿಜಿಎಂ ಕ್ಷಿಪಣಿ ಅಭಿವೃದ್ಧಿಪಡಿಸಿದೆ. ಈ ಯಶಸ್ವಿ ಪರೀಕ್ಷೆಗಳು ತಕ್ಷಣದ ಸಾಮೂಹಿಕ ಉತ್ಪಾದನೆಗೆ ಸಜ್ಜಾಗಿರುವ ದೇಶೀಯ ಪೂರೈಕೆ ಸರಪಳಿಯ ಪ್ರಬುದ್ಧತೆಯನ್ನು ದೃಢಪಡಿಸಿವೆ ಎಂದು ಸಚಿವಾಲಯ ಹೇಳಿದೆ.

ಟ್ಯಾಂಕ್ ನಿರೋಧಕ ಪಾತ್ರಕ್ಕಾಗಿ ಆಕಾಶದಿಂದ ಭೂಮಿಗೆ ಮತ್ತು ಡ್ರೋನ್, ಹೆಲಿಕಾಪ್ಟರ್ ಹಾಗೂ ಇತರ ವಾಯುಗಾಮಿ ಗುರಿಗಳಿಗಾಗಿ ಆಕಾಶದಿಂದ ಆಕಾಶಕ್ಕೆ ಎಂಬ ಎರಡೂ ಮಾದರಿಗಳಲ್ಲಿ ಯುಎಲ್‌ಪಿಜಿಎಂ–ವಿ3 ಕ್ಷಿಪಣಿಯ ಯಶಸ್ವಿ ಪರೀಕ್ಷಾರ್ಥ ಪ್ರಯೋಗ ನಡೆಸಿದ್ದನ್ನು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು ಡಿಆರ್‌ಡಿಒ, ಸಾರ್ವಜನಿಕ ವಲಯದ ಉದ್ಯಮಗಳು ಮತ್ತು ಕೈಗಾರಿಕಾ ಸಂಸ್ಥೆಗಳನ್ನು ಶ್ಲಾಘಿಸಿದ್ದಾರೆ. ಇದು ರಕ್ಷಣಾ ವಲಯದ ಆತ್ಮನಿರ್ಭರತೆ ಯಲ್ಲಿನ ಮಹತ್ವದ ಸಾಧನೆ ಎಂದು ಬಣ್ಣಿಸಿದ್ದಾರೆ.

ರಕ್ಷಣಾ ಸಂಶೋಧನೆ ಮತ್ತು ಅಭಿವೃದ್ಧಿ ಇಲಾಖೆಯ ಕಾರ್ಯದರ್ಶಿ ಹಾಗೂ ಡಿಆರ್‌ಡಿಒ ಅಧ್ಯಕ್ಷ ಸಮೀರ್ ಕಾಮತ್ ಅವರು ಈ ಮಹತ್ವದ ಸಾಧನೆಗಾಗಿ ತಮ್ಮ ಎಲ್ಲಾ ತಂಡಗಳನ್ನು ಅಭಿನಂದಿಸಿದ್ದಾರೆ.

# ಹಾರ್ಮುಜ್ ಸಂಚಾರಮುಕ್ತಗೊಳಿಸಲು ಮಿಲಿಟರಿ ನಿಯೋಜನೆಗೆ ಚಿಂತನೆ

**ನವದೆಹಲಿ, ಮೇ 20:** ಜಾಗತಿಕ ಆರ್ಥಿಕತೆ ಮೇಲೆ ಹಿಡಿತ ಸಾಧಿಸಲು ಪ್ರಯತ್ನಿಸುತಿತರುವ ಇರಾನ್ ವಿರುದ್ಧ ವಾಗ್ದಾಳಿ ನಡೆಸಿದ ನ್ಯಾಟೋ ಪ್ರಧಾನ ಕಾರ್ಯದರ್ಶಿ ಮಾರ್ಕ್ ರುಟ್ಟೆ ಅವರು, ಹಾರ್ಮುಜ್ ಜಲಸಂಧಿಯನ್ನು ಮುಕ್ತವಾಗಿಡಲು ನೆರವಾಗುವಂತೆ ಆ ಪ್ರದೇಶಕ್ಕೆ ಮಿಲಿಟರಿ ಆಸ್ತಿಗಳನ್ನು (ಯುದ್ಧನೌಕೆ/ಸೇನಾ ಸಾಮಗ್ರಿ) ನಿಯೋಜಿಸುವ ಕುರಿತು ನ್ಯಾಟೋ ಮಿತ್ರರಾಷ್ಟ್ರಗಳು ಚಿಂತನೆ



ನಡೆಸಿವೆ ಎಂದು ತಿಳಿಸಿದ್ದಾರೆ. ಹಾರ್ಮುಜ್ ಮೂಲಕ ಸಂಚರಿಸುವ ಹಡಗುಗಳಿಗೆ ಅಡ್ಡಿಪಡಿಸುವ ಇರಾನ್‌ನ ಪ್ರಯತ್ನಗಳು ಜಾಗತಿಕ ವ್ಯಾಪಾರ ಮತ್ತು ಮಿತ್ರರಾಷ್ಟ್ರಗಳ ಭದ್ರತೆಗೆ ನೇರ ಬೆದರಿಕೆಯೊಡ್ಡಿದೆ ಎಂದಿದ್ದಾರೆ.

ಸ್ವೀಡನ್‌ನಲ್ಲಿ ನಡೆಯಲಿರುವ ನ್ಯಾಟೋ ವಿದೇಶಾಂಗ ಸಚಿವರ ಸಭೆಗೆ ಮುನ್ನ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ರುಟ್ಟೆ, ಇರಾನ್‌ನ ನಡೆ ನೌಕಾಯಾನದ ಸ್ವಾತಂತ್ರ್ಯ ಮತ್ತು ಜಾಗತಿಕ ವಾಣಿಜ್ಯದ ಮೇಲಿನ ನೇರ ದಾಳಿಯಾಗಿದೆ.ಈ ಆಯಕಟ್ಟಿನ ಜಲಮಾರ್ಗಕ್ಕೆ ಯಾವುದೇ ಅಡ್ಡಿಯುಂಟಾದರೆ ಅದು ಜಾಗತಿಕ ವ್ಯಾಪಾರ ಮತ್ತು ಮಿತ್ರರಾಷ್ಟ್ರಗಳ ಭದ್ರತೆಗೆ ಅಪಾಯವನ್ನುಂಟು ಮಾಡುತ್ತದೆ ಎಂದು ಎಚ್ಚರಿಸಿದ ಅವರು, ಗಲ್ಫ್ ಪ್ರದೇಶದಲ್ಲಿ ನೌಕಾಯಾನದ ಸ್ವಾತಂತ್ರ್ಯವನ್ನು ರಕ್ಷಿಸಲು ಫ್ರಾನ್ಸ್, ಬೆಲ್ಜಿಯಂ, ನೆದರ್ಲೆಂಡ್ಸ್, ಇಟಲಿ, ಜರ್ಮನಿ ಮತ್ತು ಯುನೈಟೆಡ್ ಕಿಂಗ್‌ಡಮ್ ಸೇರಿ ಹಲವಾರು ನ್ಯಾಟೋ ದೇಶಗಳು ಈಗಾಗಲೇ ಆ ಪ್ರದೇಶದ ಬಳಿ ಮಿಲಿಟರಿ ಪಡೆಗಳನ್ನು ನಿಯೋಜಿಸುತ್ತಿವೆ ಎಂದು ತಿಳಿಸಿದರು.

# ದೇಶಾದ್ಯಂತ ಇ-ಬಸ್, ಇ-ಟ್ರಕ್ ಬಳಕೆಗೆ ವೇಗ: ಕೇಂದ್ರ ಸಚಿವ ಎಚ್‌ಡಿಕೆ ನೇತೃತ್ವದಲ್ಲಿ ಸಭೆ

**ನವದೆಹಲಿ, ಮೇ 20:** ದೇಶದ ಸರಕು ಸಾಗಣೆ ಕ್ಷೇತ್ರದಲ್ಲಿ ಮಾಲಿನ್ಯಮುಕ್ತ ಸ್ವಚ್ಛ ಸಾರಿಗೆ ವ್ಯವಸ್ಥೆಗೆ ಮತ್ತಷ್ಟು ಉತ್ತೇಜನ ನೀಡುವ ಉದ್ದೇಶದಿಂದ ಕೇಂದ್ರದ ಬೃಹತ್ ಕೈಗಾರಿಕೆ ಹಾಗೂ ಉಕ್ಕು ಖಾತೆ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರು ಬ್ಯಾಂಕರುಗಳು ಹಾಗೂ ಖಾಸಗಿ ವಲಯದ ವಾಣಿಜ್ಯ ವಾಹನಗಳ ಆಪರೇಟರ್‌ಗಳ ಜತೆ ಉನ್ನತ ಮಟ್ಟದ ಮಾತುಕತೆ ನಡೆಸಿದರು.

ಪ್ರಧಾನಿ ನರೇಂದ್ರ ಮೋದಿ ಅವರ ಮಹತ್ವಾಕಾಂಕ್ಷೆಯ ಪಿಎಂ ಇ ಡ್ರೈವ್ ಯೋಜನೆಯ ಮೂಲಕ ಎಲೆಕ್ಟ್ರಿಕ್ ಸರಕು ಸಾಗಣೆ ಹಾಗೂ ಪ್ರಯಾಣಿಕರ ವಾಹನಗಳ ಬಳಕೆಯನ್ನು ಉತ್ತೇಜಿಸಿ, ಆ ಮೂಲಕ ಭಾರತದ ಸ್ವಚ್ಛ ಚಲನಶೀಲತೆ ಪರಿವರ್ತನೆಯನ್ನು ವೇಗಗೊಳಿಸುವ ಮಹತ್ವದ ಹೆಜ್ಜೆಯಾಗಿ ಸಚಿವರು ಮಹತ್ವದ ಸಮಾಲೋಚನೆ ನಡೆಸಿದರು. ದೇಶಾದ್ಯಂತ ವಿದ್ಯುತ್ ಬಸ್‌ಗಳು ಮತ್ತು ಟ್ರಕ್ಕುಗಳ ವ್ಯಾಪಕ ಅಳವಡಿಕೆ ಮತ್ತು ನಿಯೋಜನೆಯನ್ನು ಉತ್ತೇಜಿಸಲು ಕೇಂದ್ರ ಸಚಿವರು, ಪ್ರಮುಖವಾಗಿ ಬ್ಯಾಂಕರುಗಳು ಮತ್ತು ಖಾಸಗಿ ವಲಯದ ವಾಣಿಜ್ಯ ವಾಹನಗಳ ಆಪರೇಟರ್?ಗಳ ಜತೆ ಆರ್ಥಿಕ ಸಮನ್ವಯತೆ ಸಾಧಿಸುವ ದೃಷ್ಟಿಯಿಂದ ತಮ್ಮ ಸಚಿವಾಲಯದಲ್ಲಿ ಸಭೆಯನ್ನು ಆಯೋಜಿಸಿದ್ದರು.

ದೇಶದಲ್ಲಿ ಅತ್ಯಂತ ವೇಗವಾಗಿ ಬೆಳೆಯುತ್ತಿರುವ ಇವಿ ಸಾರಿಗೆ ಪೂರಕ ವ್ಯವಸ್ಥೆಯನ್ನು ಬಲಪಡಿಸುವ ನಿಟ್ಟಿನಲ್ಲಿ ಇವಿ ವಾಹನಗಳ ಕಾರ್ಯಾಚರಣೆಯ ವಾಸ್ತವಗಳನ್ನು ಅರ್ಥಮಾಡಿಕೊಳ್ಳುವುದು, ಇ–ಬಸ್‌ಗಳು ಮತ್ತು ಇ–ಟ್ರಕ್‌ಗಳನ್ನು ವೇಗವಾಗಿ ಅಳವಡಿಸಿಕೊಳ್ಳುವುದನ್ನು ಉತ್ತೇಜಿಸುವುದು ಮತ್ತು ಸರ್ಕಾರ ಮತ್ತು ಖಾಸಗಿ ಪಾಲುದಾರರ ನಡುವಿನ ಸಹಯೋಗವನ್ನು ಬಲಪಡಿಸುವ ಉದ್ದೇಶದಿಂದ ಸಚಿವರು ಸಮಾಲೋಚನೆ ನಡೆಸಿದರು.

ಕಾರ್ಯದರ್ಶಿ ಕಮ್ರನ್ ರಿಜ್ವಿ ಮತ್ತು ಹೆಚ್ಚುವರಿ ಕಾರ್ಯದರ್ಶಿ ಡಾ. ಹನೀಫ್ ಖುರೇಷಿ ಸೇರಿದಂತೆ ಬೃಹತ್ ಕೈಗಾರಿಕೆ ಸಚಿವಾಲಯದ ಉನ್ನತ ಅಧಿಕಾರಿಗಳು ಚರ್ಚೆಯ ಸಂದರ್ಭದಲ್ಲಿ ಹಾಜರಿದ್ದರು ಮತ್ತು ಭಾರತದಲ್ಲಿ ಇವಿ ಸಾರಿಗೆ ವಲಯದ ಭವಿಷ್ಯದ ಮಾರ್ಗಸೂಚಿ ಕುರಿತು ಪಾಲುದಾರರೊಂದಿಗೆ ತಮ್ಮ ಒಳನೋಟಗಳನ್ನು ಹಂಚಿಕೊಂಡರು.

ಸಭೆಯನ್ನುದ್ದೇಶಿಸಿ ಮಾತನಾಡಿದ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರು; ಭಾರತದಲ್ಲಿ ಪ್ರಯಾಣಿಕ ಸಾರಿಗೆ ವಲಯದ ಭವಿಷ್ಯದ ಬೆನ್ನೆಲುಬಾಗಲು ಎಲೆಕ್ಟ್ರಿಕ್ ಬಸ್‌ಗಳು ಸಜ್ಜಾಗಿವೆ. ಆದರೆ, ಸುಸ್ಥಿರ ಸಾಗಣೆ ಮತ್ತು ಸರಕು ಸಾಗಣೆಯ ಭವಿಷ್ಯವನ್ನು ರೂಪಿಸುವಲ್ಲಿ ಎಲೆಕ್ಟ್ರಿಕ್ ಟ್ರಕ್‌ಗಳು ಪರಿವರ್ತನಾತ್ಮಕ

### ಬ್ಯಾಂಕರ್‌ಗಳು, ಖಾಸಗಿ ವಾಣಿಜ್ಯ ವಾಹನಗಳ ಆಪರೇಟರ್‌ಗಳ ಜತೆ ಸಮಾಲೋಚನೆ




ಪಾತ್ರವನ್ನು ವಹಿಸುತ್ತವೆ. ಈ ನಿಟ್ಟಿನಲ್ಲಿ ಸರಕಾರ ಎಲ್ಲಾ ರೀತಿಯ ಉತ್ತೇಜನಕಾರಿ ಕ್ರಮಗಳನ್ನು ಕೈಗೊಳ್ಳುತ್ತಿದೆ ಎಂದು ಒತ್ತಿ ಹೇಳಿದರು.

"ಭಾರತವು ಎಲೆಕ್ಟ್ರಿಕ್ ವಾಹನಗಳ ಸಾರಿಗೆಯತ್ತ ನಿರ್ಣಾಯಕ ಬದಲಾವಣೆಗೆ ಸಾಕ್ಷಿಯಾಗುತ್ತಿದೆ. ಇ–ಬಸ್‌ಗಳು ಪ್ರಯಾಣಿಕರಿಗೆ ಹೆಚ್ಚು ಅನುಕೂಲ ನೀಡುತ್ತಿವೆ. ಇಂಗಾಲದ ಶೂನ್ಯ ಹೊರಸೂಸುವಿಕೆಯಿಂದ ಪರಿಸರ ರಕ್ಷಣೆಗೆ ದೊಡ್ಡ ಕೊಡುಗೆ ಕೊಡುತ್ತಿವೆ. ಭವಿಷ್ಯದಲ್ಲಿ ಇ–ಟ್ರಕ್‌ಗಳ ಸಂಚಾರವು ರಾಷ್ಟ್ರದ ಸಾರಿಗೆ ಮತ್ತು ಸರಕು ಸಾಗಣೆಯ ಹೊಸ ಯುಗವನ್ನೇ ವ್ಯಾಖ್ಯಾನಿಸುತ್ತವೆ ಎಂದು ಸಚಿವರು ಹೇಳಿದರು.


ಬ್ಯಾಂಕರುಗಳು ಹಾಗೂ ಇವಿ ವಾಣಿಜ್ಯ ವಾಹನಗಳ ಪಾಲುದಾರರ ಸಹಯೋಗದ ನೀತಿ ನಿರೂಪಣೆಯ ಮಹತ್ವದ ಬಗ್ಗೆ ಮಾತನಾಡಿದ ಕೇಂದ್ರ ಸಚಿವರು; ಭಾರತದ ಇವಿ ಸಾರಿಗೆಗೆ ಪಿಎಂ ಇ ಡ್ರೈವ್ ಯೋಜನೆಯ ಮೂಲಕ ಭಾರೀ ಉತ್ತೇಜನ ಕೊಡಲಾಗುತ್ತಿದೆ. ಮುಖ್ಯವಾಗಿ ದೊಡ್ಡ ಪ್ರಮಾಣದಲ್ಲಿ ಸರಕು ಸಾಗಣೆ ಮಾಡುವ ವಾಣಿಜ್ಯ ಟ್ರಕ್ಕುಗಳ ಬಳಕೆಗೆ ಪ್ರೋತ್ಸಾಹ ನೀಡಲಾಗುತ್ತಿದೆ. ಈ ರಾಷ್ಟ್ರದ ಆರ್ಥಿಕತೆ ಮತ್ತಷ್ಟು ವೇಗವಾಗಿ ಬೆಳೆಯಲು ಇಂದು ಶಕ್ತಿ ತುಂಬುತ್ತದೆ ಎಂದು ಪ್ರತಿಪಾದಿಸಿದರು.

"ದೇಶಾದ್ಯಂತ ಸಾರಿಗೆ ಸೇವೆಗಳನ್ನು ಮುನ್ನಡೆಸುತ್ತಿರುವ ನಿರ್ವಾಹಕರು ಮತ್ತು ಪಾಲುದಾರರಿಂದ ನೇರವಾಗಿ ಅಭಿಪ್ರಾಯ ವಿನಿಮಯಕ್ಕೆ ಈ ಸಭೆ ಉತ್ತಮ ವೇದಿಕೆ ಆಗಿತ್ತು. ವಾಣಿಜ್ಯ ಇವಿ ವಾಹನಗಳ ಬಳಕೆ ಮತ್ತು ನಿಯೋಜನೆಯಲ್ಲಿ ಭವಿಷ್ಯದ ಮಾರ್ಗಸೂಚಿ ರೂಪಿಸುವಲ್ಲಿ ಸಭೆಯಲ್ಲಿ ವ್ಯಕ್ತವಾದ ಪ್ರತಿಕ್ರಿಯೆ, ಅಭಿಪ್ರಾಯಗಳು ಅತ್ಯಂತ ಮೌಲಿಕವಾಗಿದ್ದವು" ಎಂದು ಸಚಿವರು ಹೇಳಿದರು.

ಈ ಉಪಕ್ರಮವು ಸುಸ್ಥಿರ ಸಾರಿಗೆ, ಪರಿಣಾಮಕಾರಿ ಸರಕು ಸಾಗಣೆ ವ್ಯವಸ್ಥೆ ನಿರ್ಮಿಸುವುದು, ಕಾರ್ಯಾಚರಣೆಯಲ್ಲಿ ದಕ್ಷತೆ, ಕ್ಷಮತೆಯನ್ನು ತರುವುದು ನಮ್ಮ ಹೆಗ್ಗುರಿ ಆಗಿದ್ದು, ಪ್ರಧಾನಿ ನರೇಂದ್ರ ಮೋದಿ ಅವರ ದೃಷ್ಟಿಕೋನಕ್ಕೆ ಅನುಗುಣವಾಗಿ ಸರಕು ಮತ್ತು ವಾಣಿಜ್ಯ ಸಾರಿಗೆ ವ್ಯವಸ್ಥೆಗೆ ಹಿಂದೆಂದೂ ಕಾಣದಷ್ಟು ದೊಡ್ಡ ಪ್ರಮಾಣದಲ್ಲಿ ಉತ್ತೇಜನ ನೀಡಲಾಗುತ್ತಿದೆ ಎಂದು ಸಚಿವ ಕುಮಾರಸ್ವಾಮಿ ಅವರು ಅಭಿಪ್ರಾಯಪಟ್ಟರು.

"ಪ್ರಧಾನಿ ಮೋದಿ ಅವರ ದೂರದೃಷ್ಟಿಯ ನಾಯಕತ್ವದಲ್ಲಿ, ಭಾರತವು ಸುಸ್ಥಿರತೆ, ನಾವೀನ್ಯತೆ ಮತ್ತು ಪರಿಣಾಮಕಾರಿ ಸಾರ್ವಜನಿಕ ಮೂಲಸೌಕರ್ಯಕ್ಕೆ ಆದ್ಯತೆ ನೀಡುವ ಮೂಲಕ ಭವಿಷ್ಯದತ್ತ ಮುನ್ನಡೆಯುತ್ತಿದೆ. ಇ–ಬಸ್‌ಗಳು ಮತ್ತು ಇ–ಟ್ರಕ್‌ಗಳ ಮೇಲಿನ ಒತ್ತಡವು ಕೇವಲ ಪರಿಸರಕ್ಕಷ್ಟೇ ಪೂರಕವಲ್ಲ, ಹೊಸ ಭಾರತದ ಆರ್ಥಿಕ ಮತ್ತು ಕಾರ್ಯತಂತ್ರದ ಒಂದು ಪ್ರಮುಖ ಭಾಗವಾಗಿದೆ" ಎಂದು ಕುಮಾರಸ್ವಾಮಿ ಅವರು ಪ್ರತಿಪಾದಿಸಿದರು.

**ನಿತ್ಯ ಪಂಚಾಂಗ 21.05.2026 ಗುರುವಾರ**



**ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ಉತ್ತರಾಯಣ–ವಸಂತ/ಗ್ರೀಷ್ಮ ಋತು, ಚಾಂದ್ರಮಾನ, ವೈಶಾಖ ಅಧಿಕ ಜ್ಯೇಷ್ಠ ಮಾಸ**

**ಅಧಿಕ ಜ್ಯೇಷ್ಠ ಶುದ್ಧ, ಪಂಚಮಿ, ಪುನರ್ವಸು ನಕ್ಷತ್ರ, ಅಗಸ್ತ್ಯ ಅಸ್ತ**

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| | ರಾಹುಕಾಲ | ಯಮಗಂಡ | ಗುಳಿಕಕಾಲ |
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 – 12.00 | 1.30 – 3.00 |
| ಮಂಗಳ | 3.00 – 4.30 | 9.00 – 10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 – 12.00 |
| ಗುರು | 1.30 – 3.00 | 6.00 – 7.30 | 9.00 – 10.30 |
| ಶುಕ್ರ | 10.30 – 12.00 | 3.00 – 4.30 | 7.30 – 9.00 |
| ಶನಿ | 9.00 – 10.30 | 1.30 – 3.00 | 6.00 – 7.30 |

# ಮುಂದಿನ 2 ವರ್ಷ ಜನಪರ ಕಾರ್ಯಕ್ರಮಗಳ ಬಗ್ಗೆ ಚಿಂತನೆ: ಪರಂ

**ವಿರೋಧ ಪಕ್ಷಗಳಲ್ಲಿ ವಿರೋಧಿಸುವ ಮನಸ್ಥಿತಿ ಇದ್ದೇ ಇರುತ್ತದೆ: ಡಾ. ಜಿ. ಪರಮೇಶ್ವರ್**

**ತುಮಕೂರು, ಮೇ 20:** ಒಂದು ಪಕ್ಷ ಆಡಳಿತದಲ್ಲಿದೆ ಎಂದರೆ ಅದನ್ನು ವಿರೋಧಿಸುವ ಮನಸ್ಥಿತಿ ವಿರೋಧ ಪಕ್ಷದಲ್ಲಿ ಇದ್ದೇ ಇರುತ್ತದೆ. ಸರ್ಕಾರದ ಪರ ಹಾಗೂ ವಿರೋಧ ಚರ್ಚೆ ಕೇಳಿ ಬರುತ್ತಿರುತ್ತವೆ. ಈ ನಡುವೆಯೂ ನಾವು ಒಂದೊಳ್ಳೆಯ ಆಡಳಿತ ಕೊಡಬೇಕಿದೆ ಎಂದು ಗೃಹ ಸಚಿವ ಡಾ. ಜಿ.ಪರಮೇಶ್ವರ್ ಹೇಳಿದರು.

ನಗರದಲ್ಲಿ ಬುಧವಾರ ಮಾಧ್ಯಮಗಳಿಗೆ ಪ್ರತಿಕ್ರಿಯಿಸಿದ ಅವರು, ನಾವು ಜನರ, ಬಡವರ ಪರವಾಗಿದ್ದೇವೆ. ಐದು ಗ್ಯಾರಂಟಿ ಯೋಜನೆಗಳನ್ನು ನೀಡುತ್ತಿದ್ದೇವೆ. ಇಡೀ ಕರ್ನಾಟಕದ ಜನರಿಗೆ ಒಂದು ಸಂದೇಶ ಹೋಗಬೇಕು. ನಾವು ಜನ ಪರವಾಗಿ 3 ವರ್ಷ ಆಡಳಿತ ನಡೆಸಿದ್ದೇವೆ. ನುಡಿದಂತೆ ನಡೆದಿದ್ದೇವೆ. ಘೋಷಣೆ ಮಾಡಿದ್ದ ಕಾರ್ಯಕ್ರಮಗಳನ್ನು ಅನುಷ್ಠಾನ ಮಾಡಿದ್ದೇವೆ. ಜತೆಗೆ ಇನ್ನು 2 ವರ್ಷದಲ್ಲಿ ಎಷ್ಟು ತ್ವರಿತವಾಗಿ ಕಾರ್ಯಕ್ರಮಗಳು ಆಗಬೇಕು ಎಂಬುದರ ಬಗ್ಗೆ ಚಿಂತನೆ ಮಾಡುತ್ತೇವೆ ಎಂದು ತಿಳಿಸಿದರು. ಜನರನ್ನು ಯಾರೂ ಒತ್ತಾಯ ಮಾಡಿ ಕರೆದುಕೊಂಡು ಬರುವುದಿಲ್ಲ. 1.50 ಲಕ್ಷ ಜನರಿಗೆ ಹಕ್ಕುಪತ್ರ ಕೊಡುತ್ತೇವೆ ಎಂದಾಗ ಅದು ಜನ ವಿರೋಧಿ ಕಾರ್ಯಕ್ರಮ ಆಗುವುದಿಲ್ಲ. ಇದರಲ್ಲಿ ಯಾವುದೇ ದುರುದ್ದೇಶ ಇರಲು ಸಾಧ್ಯವಿಲ್ಲ ಎಂದು ಹೇಳಿದರು.



ಶಿವಮೊಗ್ಗ ಜಿಲ್ಲಾ ಉಸ್ತುವಾರಿ ಸಚಿವ ಎಸ್. ಮಧು ಬಂಗಾರಪ್ಪ ಅವರ ನೇತೃತ್ವದಲ್ಲಿ ಶಿವಮೊಗ್ಗ ವಕೀಲರ ಸಂಘದ ಪದಾಧಿಕಾರಿಗಳ ನಿಯೋಗವು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಗೃಹ ಕಚೇರಿ ಕೃಷ್ಣಾದಲ್ಲಿ ಭೇಟಿಯಾಗಿ, ಶಿವಮೊಗ್ಗಕ್ಕೆ ಹೈಕೋರ್ಟ್ ಸಂಚಾರಿ ಪೀಠದ ಅಗತ್ಯದ ಕುರಿತು ಚರ್ಚಿಸಿ ಮನವಿ ಸಲ್ಲಿಸಿತು. ಈ ಸಂದರ್ಭದಲ್ಲಿ ವಿರಾಜಪೇಟೆ ಶಾಸಕರು ಹಾಗೂ ಮುಖ್ಯಮಂತ್ರಿಗಳ ಕಾನೂನು ಸಲಹೆಗಾರ ಎ.ಎಸ್. ಪೊನ್ನಣ್ಣ ಇದ್ದರು.

# ಸ್ಥಳೀಯ ರೈತರಿಗೆ 2 ಬೆಳೆಗೆ ನೀರು ಗ್ಯಾರಂಟಿ: ಸಚಿವ ಎಂ.ಬಿ. ಪಾಟೀಲ್

**ಕೊಳ್ಳೇಗಾಲದ ಅಗರ, ಮದ್ದೂರು ಕೆರೆಗಳಿಂದ ಬೆಂಗಳೂರು ಕೈಗಾರಿಕಾ ಪ್ರದೇಶಕ್ಕೆ ನೀರು ಪೂರೈಕೆಯಿಂದ ತೊಂದರೆ ಇಲ್ಲ**



**ಬೆಂಗಳೂರು, ಮೇ 20:** ಬೆಂಗಳೂರು ಸುತ್ತಮುತ್ತಲಿನ ಕೈಗಾರಿಕಾ ಪ್ರದೇಶಗಳಿಗೆ ಕಾವೇರಿ ನದಿ ನೀರು ಒದಗಿಸಲು ಕೊಳ್ಳೇಗಾಲ ತಾಲ್ಲೂಕಿನ ಅಗರ ಮತ್ತು ಮದ್ದೂರು ಕೆರೆಗಳ ಸಾಮರ್ಥ್ಯವನ್ನು ಹೆಚ್ಚು ಮಾಡಿ, ಅಲ್ಲಿಂದ ಪಂಪ್ ಮಾಡಲು ಯೋಜನೆ ರೂಪಿಸಿದ್ದು, ಇದರಿಂದ ಹಾಲಿ ಒಂದು ಬೆಳೆ ಬೆಳೆಯುತ್ತಿರುವ ಅಚ್ಚುಕಟ್ಟು ಪ್ರದೇಶದ ರೈತರು ಮುಂದಿನ ದಿನಗಳಲ್ಲಿ ವರ್ಷಕ್ಕೆ ಎರಡು ಬೆಳೆ ಬೆಳೆಯಲಿದ್ದಾರೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ ಭರವಸೆ ನೀಡಿದ್ದಾರೆ.

ಈ ಸಂಬಂಧವಾಗಿ ಇಲ್ಲಿನ ಖನಿಜ ಭವನದಲ್ಲಿ ಬುಧವಾರ ತಮ್ಮನ್ನು ಭೇಟಿಯಾದ ಕೊಳ್ಳೇಗಾಲ ಶಾಸಕ ಎ.ಆರ್. ಕೃಷ್ಣಮೂರ್ತಿ ಅವರೊಂದಿಗೆ ಸಚಿವರು ವಿಚಾರ ವಿನಿಮಯ ನಡೆಸಿ, ಸಂಶಯ ಬಗೆಹರಿಸಿದ್ದಾರೆ. ಅಲ್ಲದೆ, ಆದಷ್ಟು ಬೇಗನೆ ಈ ಬಗ್ಗೆ ರೈತರ ಸಭೆಯನ್ನೂ ಏರ್ಪಡಿಸುವಂತೆ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಈ ಬಗ್ಗೆ ಮಾತನಾಡಿದ ಸಚಿವರು, 'ಕಾವೇರಿ ನ್ಯಾಯಮಂಡಳಿ ಕೈಗಾರಿಕಾ ಉದ್ದೇಶಕ್ಕೆ 4 ಟಿಎಂಸಿ ಅಡಿ ನೀರು ಮೀಸಲಿಟ್ಟಿದೆ. ಅದರಲ್ಲಿ ಸದ್ಯ 1.37 ಟಿಎಂಸಿ ಅಡಿ ನೀರು ಬಳಕೆ ಮಾಡಲಾಗುತ್ತಿದೆ. ಉಳಿದ 2.63 ಟಿಎಂಸಿ ಅಡಿ ಪೈಕಿ 2.5 ಟಿಎಂಸಿ ಆಡಿ ನೀರನ್ನು ಬೆಂಗಳೂರಿನ ಕೈಗಾರಿಕಾ ಪ್ರದೇಶಗಳಿಗೆ ಪಂಪ್ ಮಾಡಲು ಯೋಜನೆ ರೂಪಿಸಲಾಗಿದೆ ಎಂದು ವಿವರಿಸಿದರು.

ಕೃಷಿಗೆ ಮೀಸಲಿಟ್ಟಿರುವ ಕಾವೇರಿ ನೀರನ್ನು ಬಳಸುತ್ತಿಲ್ಲ. ಬದಲಿಗೆ ಕೈಗಾರಿಕೆ ಸಲುವಾಗಿ ಮೀಸಲಿಟ್ಟಿರುವ ನೀರನ್ನು ಬಳಸುತ್ತಿದ್ದು, ಮಳೆಗಾಲದಲ್ಲಿ 120 ದಿನ ನೇರವಾಗಿ ಕಾವೇರಿ ನದಿಯಿಂದಲೇ ನೀರನ್ನು ಪಂಪ್ ಮಾಡಲಾಗುವುದು. ಉಳಿದ ದಿನಗಳಲ್ಲಿ ಈ ಕೆರೆಗಳಿಂದ ನೀರು ಪಂಪ್ ಮಾಡಲಾಗುವುದು. ಈ ಸಲುವಾಗಿ ಈ ಕೆರೆಗಳ ನೀರಿನ ಸಾಮರ್ಥ್ಯವನ್ನು ಹತ್ತುಪಟ್ಟು ಹೆಚ್ಚಿಸಲಾಗುವುದು. ಇದರಿಂದ ರೈತರಿಗೂ ಅನುಕೂಲವಾಗಲಿದೆ ಎಂದರು.

ಅಗರ ಮತ್ತು ಮದ್ದೂರು ಕೆರೆಗಳ ಸಾಮರ್ಥ್ಯ ಈಗ ಕ್ರಮವಾಗಿ 0.156 ಮತ್ತು 0.111 ಟಿಎಂಸಿ ಅಡಿ ಇದೆ. ಇದನ್ನು 1.156 ಮತ್ತು 1.112 ಟಿಎಂಸಿ ಅಡಿಗೆ ಹೆಚ್ಚಿಸಲಾಗುವುದು. ಇಲ್ಲಿ ಕೆರೆಗಳ ಆಳವನ್ನು ಜಾಸ್ತಿ ಮಾಡಲಾಗುವುದೇ ವಿನಾ ಹೊಸ ಜಮೀನಿನ ಸ್ವಾಧೀನವೇನೂ ಇರುವುದಿಲ್ಲ. ಈ ಯೋಜನೆಯಿಂದ ಕೆರೆಗಳ ಅಚ್ಚುಕಟ್ಟು ವ್ಯಾಪ್ತಿಯಲ್ಲಿನ ರೈತರಿಗೆ ಯಾವ ತೊಂದರೆಯೂ ಇಲ್ಲ. ಈಗ ಅವರಿಗೆಲ್ಲ ವರ್ಷಕ್ಕೆ ಒಂದು ಬೆಳೆಗಷ್ಟೇ ನೀರು ಕೊಡಲಾಗುತ್ತಿದೆ. ಆದರೆ, ಯೋಜನೆ ಮುಗಿದ ನಂತರ ಅಚ್ಚುಕಟ್ಟು ಪ್ರದೇಶ ಹೆಚ್ಚಳದ ಜತೆಗೆ ಎರಡು ಬೆಳೆಗಳಿಗೆ ನೀರು ಕೊಡಲಾಗುವುದು. ಕೃಷ್ಣಮೂರ್ತಿ ಯವರಿಗೂ ಇದನ್ನು ಮನವರಿಕೆ ಮಾಡಿಕೊಡಲಾಗಿದೆ ಎಂದು ಅವರು ವಿವರಿಸಿದ್ದಾರೆ.

ಇದಲ್ಲದೆ, ಈ ಕೆರೆಗಳ ಕೆಳಭಾಗದಲ್ಲಿ ಇರುವ ಚಿಕ್ಕಹೊಳೆ ಮತ್ತು ಸುವರ್ಣಮುಖಿ ಕೆರೆಗಳನ್ನು ಕೂಡ ನಾವು ಅಭಿವೃದ್ಧಿ ಪಡಿಸಲಿದ್ದೇವೆ. ಇಲ್ಲಿಯ ನೀರು ಕೂಡ ರೈತರಿಗೆ ವರ್ಷವಿಡೀ ಲಭ್ಯವಾಗಲಿದೆ. ಈ ಯೋಜನೆಯಿಂದ ಅಂತರ್ಜಲ ವೃದ್ಧಿ, ಮೀನುಗಾರಿಕೆ, ದೋಣಿ ವಿಹಾರ ಮತ್ತು ಪ್ರವಾಸೋದ್ಯಮದ ಬೆಳವಣಿಗೆ ಕೂಡ ಸಿಗಲಿದೆ. ರೈತರು ಗಾಳಿಮಾತುಗಳಿಗೆ ಕಿವಿಗೊಡಬಾರದು ಎಂದು ಪಾಟೀಲ್ ಹೇಳಿದ್ದಾರೆ.

ಕಾವೇರಿ ನೀರಾವರಿ ನಿಗಮದ ವ್ಯವಸ್ಥಾಪಕ ನಿರ್ದೇಶಕ ಮಹೇಶ್ ಮಾತನಾಡಿ, ಕೈಗಾರಿಕಾ ಪ್ರದೇಶಗಳಿಗೆ ಬೇಕಾದ ನೀರು ಪೂರೈಕೆಗೆ ಅಗತ್ಯವಿರುವ ಜಲಸಂಗ್ರಹಾಗಾರಕ್ಕೆ ಅಗರ ಮತ್ತು ಮದ್ದೂರು ಕೆರೆಗಳಿರುವ ಜಾಗವು ಅತ್ಯಂತ ಸೂಕ್ತವಾಗಿದೆ. ಬೇರೆ ಕಡೆಗಳಲ್ಲಿ ಮಾಡಿದರೆ ಉದ್ದೇಶವೇ ಈಡೇರುವುದಿಲ್ಲ. ಜತೆಗೆ ಈಗಿನ ಯೋಜನೆಯಿಂದ ಸ್ಥಳೀಯ ರೈತರಿಗೆ ಮೊದಲಿಗಿಂತ ಹೆಚ್ಚು ನೀರಾವರಿ ಅನುಕೂಲ ಒದಗಿಸುವುದು ಸಾಧ್ಯವಾಗಲಿದೆ ಎಂದು ಶಾಸಕರಿಗೆ ಮನದಟ್ಟು ಮಾಡಿಕೊಟ್ಟರು.

ಈ ಸಂದರ್ಭದಲ್ಲಿ ಕೈಗಾರಿಕಾ ಇಲಾಖೆ ಪ್ರಧಾನ ಕಾರ್ಯದರ್ಶಿ ಸೆಲ್ವಕುಮಾರ್, ಕೈಗಾರಿಕಾ ಇಲಾಖೆ ಆಯುಕ್ತೆ ಖುಷ್ಬು ಗೋಯಲ್, ಕೈಗಾರಿಕಾ ಸಚಿವರ ತಾಂತ್ರಿಕ ಸಲಹೆಗಾರ ಅರವಿಂದ ಗಲಗಲಿ, ಕಾವೇರಿ ನೀರಾವರಿ ನಿಗಮದ ವ್ಯವಸ್ಥಾಪಕ ನಿರ್ದೇಶಕ ಮಹೇಶ್ ಮತ್ತು ಕೆಐಎಡಿಬಿ ಮುಖ್ಯ ಎಂಜಿನಿಯರ್ ವೀರಭದ್ರಯ್ಯ, ನೀರಾವರಿ (ದಕ್ಷಿಣ) ಇಲಾಖೆ ಮುಖ್ಯ ಎಂಜಿನಿಯರ್ ಮಹೇಶ್ ಸೇರಿದಂತೆ ಇತರ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

**ಐಎಎಸ್ ಅಧಿಕಾರಿಗಳ ವರ್ಗಾವಣೆ**

ಕಲಬುರಗಿಯ ಸಾರ್ವಜನಿಕ ಶಿಕ್ಷಣ ಇಲಾಖೆಯ ಹೆಚ್ಚುವರಿ ಆಯುಕ್ತರಾದ ಪಾಂಡವೆ ರಾಹುಲ್ ತುಕಾರಾಂ, ಐಎಎಸ್ ಅವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ವರ್ಗಾವಣೆ ಮಾಡಲಾಗಿದೆ ಮತ್ತು ಮುಂದಿನ ಆದೇಶದವರೆಗೆ ಯಾದಗಿರಿ ಜಿಲ್ಲೆಯ ಉಪ ಆಯುಕ್ತರಾದ. ಭೋಯರ್ ಹರ್ಷಲ್ ನಾರಾಯಣರಾವ್, ಐಎಎಸ್ ಅವರನ್ನು ವರ್ಗಾವಣೆ ಮಾಡಲಾಗಿದೆ. ಯಾದಗಿರಿ ಜಿಲ್ಲೆಯ ಉಪ ಆಯುಕ್ತರಾದ ಭೋಯರ್ ಹರ್ಷಲ್ ನಾರಾಯಣರಾವ್, ಐಎಎಸ್, ಐಎಎಸ್ ಅವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ವರ್ಗಾವಣೆ ಮಾಡಲಾಗಿದೆ ಮತ್ತು ಮುಂದಿನ ಆದೇಶದವರೆಗೆ ಬೆಂಗಳೂರಿನ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ (ಇ–ಆಡಳಿತ)ಯ ಎಲೆಕ್ಟ್ರಾನಿಕ್ ಡೆಲಿವರಿ ಆಫ್ ಸಿಟಿಜನ್ ಸರ್ವೀಸಸ್ (ಇಡಿಸಿಎಸ್) ನಿರ್ದೇಶಕರಾಗಿ ಅಪರ್ಣಾ ರಮೇಶ್, ಐಎಎಸ್ ಅವರನ್ನು ಏಕಕಾಲಿಕ ಪ್ರಭಾರದಿಂದ ಬಿಡುಗಡೆ ಮಾಡಲಾಗಿದೆ."ನಾಗರಿಕ ಸೇವೆಗಳ ಎಲೆಕ್ಟ್ರಾನಿಕ್ ವಿತರಣೆ, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ (ಇ–ಆಡಳಿತ) ಬೆಂಗಳೂರು" ಎಂಬ ಹುದ್ದೆಯನ್ನು 2016 ರ ಐಎಎಸ್ (ವೇತನ) ನಿಯಮಗಳ ನಿಯಮ 12 ರ ಅಡಿಯಲ್ಲಿ ಪುರಸಭೆ ಆಡಳಿತ ನಿರ್ದೇಶಕರ ಕೇಡರ್ ಹುದ್ದೆಗೆ ಸ್ಥಾನಮಾನ ಮತ್ತು ಜವಾಬ್ದಾರಿಗಳಲ್ಲಿ ಸಮಾನವೆಂದು ಘೋಷಿಸಲಾಗಿದೆ.

**2028ರಲ್ಲೂ ಕಾಂಗ್ರೆಸ್ ಜಯ ನಿಶ್ಚಿತ ಎಂದು ಬಿಜೆಪಿಗೆ ಭಯ**

# ಗ್ಯಾಸ್ ಸಿಲಿಂಡರ್ ತಲೆ ಮೇಲೆ ಹೊತ್ತು ಪ್ರತಿಭಟನೆ ಮಾಡಿದೋರು ಎಲ್ಲಿ ಹೋದರು: ಸಚಿವ ಖಂಡ್ರೆ

**ಬೆಂಗಳೂರು, ಮೇ 20:** ಯುಪಿಎ ಕಾಲದಲ್ಲಿ 400 ರೂ. ಇದ್ದ ಅಡುಗೆ ಅನಿಲ ಸಿಲಿಂಡರ್ ದರ ಅಲ್ಪ ಏರಿಕೆ ಮಾಡಿದ್ದಕ್ಕೆ ತಲೆಯ ಮೇಲೆ ಗ್ಯಾಸ್ ಸಿಲಿಂಡರ್ ಹೊತ್ತು ಪ್ರತಿಭಟನೆ ಮಾಡಿದ ಬಿಜೆಪಿ ನಾಯಕರು ಈಗ ಎಲ್ಲಿ ಹೋದರು ಎಂದು ಅರಣ್ಯ ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಖಂಡ್ರೆ ಪ್ರಶ್ನಿಸಿದ್ದಾರೆ.

ನಗರದಲ್ಲಿ ಸುದ್ದಿಗಾರ ರೊಂದಿಗೆ ಮಾತನಾಡಿದ ಅವರು, ಪೆಟ್ರೋಲ್, ಡೀಸೆಲ್ ಹಾಗೂ ಅಡುಗೆ ಅನಿಲ ದರವನ್ನು ಪದೇಪದೆ ಏರಿಸುತ್ತಿರುವ ಕೇಂದ್ರ ಎನ್.ಡಿ.ಎ. ಸರ್ಕಾರದ ವಿರುದ್ಧ ಧ್ವನಿ ಎತ್ತಲಾಗದ ರಾಜ್ಯ ಬಿಜೆಪಿ ನಾಯಕರು ಕಾಂಗ್ರೆಸ್ ಸಾಧನೆ ಸಮಾವೇಶದ ಬಗ್ಗೆ ಮಾತನಾಡುತ್ತಾರೆ. 2028ರಲ್ಲಿ ಕಾಂಗ್ರೆಸ್ ಮತ್ತೆ ಅಧಿಕಾರಕ್ಕೆ ಬರುವುದು ನಿಶ್ಚಿತ ಎಂಬುದು ಅವರಿಗೆ ಮನವರಿಕೆಯಾಗಿದ್ದು, ಅದಕ್ಕಾಗಿ ಹೌಹಾರುತ್ತಿದ್ದಾರೆ ಎಂದರು.



ಕಾಂಗ್ರೆಸ್‌ನಲ್ಲಿ ಯಾವುದೇ ಗೊಂದಲ ಇಲ್ಲ, ತಮ್ಮ ಎಲೆಯಲ್ಲಿ ಹೆಗ್ಗಣ ಸತ್ತು ಬಿದ್ದಿದ್ದರೂ, ಬಿಜೆಪಿಯವರು ಬೇರೆಯವರ ಎಲೆಯಲ್ಲಿ ನೊಣವನ್ನು ಹುಡುಕುತ್ತಿದ್ದಾರೆ ಎಂದು ಸಚಿವ ಈಶ್ವರ ಖಂಡ್ರೆ ತಿರುಗೇಟು ನೀಡಿದ್ದಾರೆ. ರಾಜ್ಯ ಬಿಜೆಪಿಯಲ್ಲಿ ಎಷ್ಟು ಬಣ ಇದೆ, ಅವರಲ್ಲೇ ಒಗ್ಗಟ್ಟಿಲ್ಲ. ಬೇರೆಯವರ ಬಗ್ಗೆ ಮಾತನಾಡಲು ಬಿಜೆಪಿಯವರಿಗೆ ನೈತಿಕತೆಯಿಲ್ಲ. ಸಂಪುಟ ವಿಸ್ತರಣೆ ಬಗ್ಗೆ ಕೇಳಿದ ಪ್ರಶ್ನೆಗೆ ಉತ್ತರಿಸಿದ ಈಶ್ವರ ಖಂಡ್ರೆ,

ಸಚಿವ ಸಂಪುಟ ಪುನಾರಚನೆ, ವಿಸ್ತರಣೆ ವರಿಷ್ಠರ ತೀರ್ಮಾನ ಮತ್ತು ಮುಖ್ಯಮಂತ್ರಿಗಳ ಪರಮಾಧಿಕಾರ ಎಂದು ಉತ್ತರಿಸಿದರು.

ರಾಜ್ಯ ಸರ್ಕಾರ ನುಡಿದಂತೆ ನಡೆದಿದೆ. ಪಂಚ ಗ್ಯಾರಂಟಿಗಳಿಗೆ 1ಕೋಟಿ 25 ಲಕ್ಷ ರೂ.ಗಳನ್ನು ಬಳಕೆ ಮಾಡಿ, ಮಹಿಳಾ ಸಬಲೀಕರಣ, ಬಡವರ ಸಬಲೀಕರಣ ಮಾಡುತ್ತಿದೆ. ಜೊತೆಗೆ ಅಭಿವೃದ್ಧಿಯೂ ಆಗುತ್ತಿದೆ. ಆದರೆ ಬಿಜೆಪಿಯವರು ರಾಜ್ಯದಲ್ಲಿ 4 ವರ್ಷ ಅಧಿಕಾರದಲ್ಲಿದ್ದಾಗ ಜನರಿಗೆ ಏನು ಕೊಟ್ಟರು ಎಂದು ಪ್ರಶ್ನಿಸಿದರು.

ಪ್ರತಿವರ್ಷ 2 ಕೋಟಿ ಯುವ ಜನರಿಗೆ ಉದ್ಯೋಗ ಕೊಡುವುದಾಗಿ ಹೇಳಿದರು ಕೊಟ್ಟರೇ, 2023ರೊಳಗೆ ಸರ್ವರಿಗೂ ಸೂರು ಎಂದರೆ ಎಲ್ಲರಿಗೂ ಮನೆ ಕೊಟ್ಟರಾ, 2022ರ ಹೊತ್ತಿಗೆ ರೈತರ ಆದಾಯ ದುಪ್ಪಟ್ಟು ಮಾಡುತ್ತೇವೆ ಎಂದು ಕೊಚ್ಚಿಕೊಂಡವರು ಏನು ಮಾಡಿದರು. ಕರೋನಾ ಕಾಲದಲ್ಲಿ ಗಂಟೆ ಹೊಡಿಸಿದರು, ರೆಮಿಡಿ ಸಿವೀರ್ 2000ರೂ. ಬದಲು 30–30 ಸಾವಿರಕ್ಕೆ ಕಾಳಸಂತೆಯಲ್ಲಿ ಮಾರಾಟವಾಗುತ್ತಿದ್ದರೂ ಸುಮ್ಮನಿದ್ದರು. ಈಗ ಊಟ ಕಡಿಮೆ ಮಾಡಿ, ನೀರು ಕಡಿಮೆ ಕುಡಿಯಿರಿ, ಚಿನ್ನ ಖರೀದಿಸಬೇಡಿ ಎನ್ನುತ್ತಿದ್ದಾರೆ ಎಂದು ಈಶ್ವರ ಖಂಡ್ರೆ ವ್ಯಂಗ್ಯವಾಡಿದರು.

# ಎಚ್‌ಡಿಕೆ ಅವಧಿಯಲ್ಲೇ ಯೋಜನೆಗೆ ಅಧಿಸೂಚಿತ ಭೂಮಿ ರೆಡ್‌ಜೋನ್ ಆಗಿತ್ತು

**ಬಿಡದಿ ಟೌನ್‌ಶಿಪ್ ಯೋಜನೆ ಸಮರ್ಥಿಸಿಕೊಂಡ ಶಾಸಕ ಎಚ್.ಸಿ. ಬಾಲಕೃಷ್ಣ**



**ಬೆಂಗಳೂರು, ಮೇ 20:** ಎಚ್‌ಡಿಕೆ ಸಿಎಂ ಆಗಿದ್ದಾಗಲೇ ಬಿಡದಿ ಟೌನ್‌ಶಿಪ್ ಯೋಜನೆಗೆ ಅಧಿಸೂಚಿತಗೊಂಡ ಭೂಮಿಯನ್ನು ರೆಡ್‌ಜೋನ್ ಎಂದು ಘೋಷಿಸಲಾಗಿತ್ತು ಎಂದು ಶಾಸಕ ಹೆಚ್.ಸಿ. ಬಾಲಕೃಷ್ಣ ಅವರು ಯೋಜನೆಯನ್ನು ಸಮರ್ಥಿಸಿಕೊಂಡಿದ್ದಾರೆ.

ಸ್ಥಳೀಯ ರೈತರು ವಿಷಕಾರಿ ಪರಿಸ್ಥಿತಿಯ ಕಾರಣದಿಂದ ತಮ್ಮ ಬೆಳೆಗಳನ್ನು ಮಾರುಕಟ್ಟೆಗೆ ತೆಗೆದುಕೊಂಡು ಹೋಗಲು ಸಾಧ್ಯವಾಗುತ್ತಿಲ್ಲ, ಹಾಗೆಯೇ ತಮ್ಮ ಭೂಮಿಯನ್ನು ಮಾರಾಟ ಕೂಡ ಮಾಡಲಾಗುತ್ತಿಲ್ಲ ಎಂದು ಹೇಳುತ್ತಿದ್ದಾರೆ. ಸುಮಾರು ಶೇ.70ರಷ್ಟು ರೈತರು ಭೂಮಿಯನ್ನು ನೀಡಲು ಸಿದ್ಧರಾಗಿದ್ದಾರೆ. ಉಳಿದ ಶೇ.30ರಷ್ಟು ಮಾತ್ರ ವಿರೋಧಿಸುತ್ತಿದ್ದಾರೆ. ಈ ಟೌನ್‌ಶಿಪ್ ಯೋಜನೆಯಿಂದ ಕಾವೇರಿ ನೀರು ದೊರೆಯಲಿದೆ. ಅಲ್ಲದೆ, ಅಲ್ಲಿ ವಿಮಾನ ನಿಲ್ದಾಣವನ್ನೂ ಅಭಿವೃದ್ಧಿಪಡಿಸಲಾಗುತ್ತದೆ ಎಂದು ಹೇಳಿದರು.

ಗ್ರಾಮಗಳಲ್ಲಿ ಸ್ಥಳೀಯರ ಆರೋಗ್ಯಕ್ಕೆ ಅನುಕೂಲಕರ ಪರಿಸ್ಥಿತಿ ಇಲ್ಲ. ಬೈರಮಂಗಲ ಕೆರೆಗೆ ಹರಿದುಬರುವ ಒಳಚರಂಡಿ ನೀರಿನಿಂದ ಕೆರೆ ಸಂಪೂರ್ಣ ಮಾಲಿನ್ಯಗೊಂಡಿದೆ ಎಂದು ಬಾಲಕೃಷ್ಣ ಹೇಳಿದರು. ಕೆಲವು ಗ್ರಾಮಸ್ಥರು ಕ್ಯಾನ್ಸರ್‌ನಂತಹ ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ. ಯೋಜನೆಗೆ ವಿರೋಧ ವ್ಯಕ್ತಪಡಿಸುತ್ತಿರುವ ಕೆಲವು ನಾಯಕರೇ ಬೇನಾಮಿ ಹೆಸರಿನಲ್ಲಿ 60–70 ಎಕರೆ ಜಮೀನು ಹೊಂದಿದ್ದು, ಪರಿಹಾರಕ್ಕಾಗಿ ಮೌನವಾಗಿ ಅರ್ಜಿ ಸಲ್ಲಿಸಿದ್ದಾರೆ ಎಂದು ಆರೋಪಿಸಿದರು.

**ವಿರೋಧ ರಾಜಕೀಯ ಪ್ರೇರಿತ**

ಮೊದಲಿಗೆ ಈ ಟೌನ್‌ಶಿಪ್ ಯೋಜನೆ ಯನ್ನು ಸ್ಮಾರ್ಟ್ ಸಿಟಿಯಾಗಿ ರೂಪಿಸಿದ್ದೇ ಎಚ್.ಡಿ. ಕುಮಾರ ಸ್ವಾಮಿ. ಬೆಂಗಳೂರಿನ ಮೇಲಿನ ಒತ್ತಡವನ್ನು ಕಡಿಮೆ ಮಾಡಲು 10 ಸ್ಮಾರ್ಟ್ ಉಪನಗರಗಳ ವಿಸ್ತೃತ ದೃಷ್ಟಿಕೋನದಡಿ ಈಗ ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಯೋಜನೆಯನ್ನು ಮುನ್ನಡೆಸುತ್ತಿದ್ದಾರೆ. ಈ ಯೋಜನೆಯ ಪ್ರಭಾವ ಮಂಡ್ಯದವರೆಗೂ ವಿಸ್ತರಿಸಲಿದೆ. ಇದಕ್ಕೆ ವಿರೋಧ ವ್ಯಕ್ತಪಡಿಸುವುದು ಸಂಪೂರ್ಣ ರಾಜಕೀಯಪ್ರೇರಿತ ಎಂದು ಕೃಷಿ ಸಚಿವ ಎನ್ ಚಲುವರಾಯಸ್ವಾಮಿ ಹೇಳಿದರು.



# ಬೆಂಗಳೂರು ಜಲಮಂಡಳಿ ಪಂಚಸೂತ್ರಗಳು ವಿಶ್ವಕ್ಕೇ ಮಾದರಿ

**ಮ್ಯಾಡ್ರಿಡ್ ಗ್ಲೋಬಲ್ ವಾಟರ್ ಸಮಿಟ್‌ನಲ್ಲಿ ಪ್ರಶಂಸೆ**

**ಮೂರು ವಿಭಾಗಗಳಲ್ಲಿ ಜಾಗತಿಕ ಅಗ್ರ 5ರಲ್ಲಿ ಸ್ಥಾನ ಪಡೆದ ಸಂಸ್ಥೆ**

**ಮ್ಯಾಡ್ರಿಡ್/ಬೆಂಗಳೂರು, ಮೇ 20:** ವಿಶ್ವದ ಅತಿ ವೇಗವಾಗಿ ಬೆಳೆಯುತ್ತಿರುವ ಮಹಾನಗರಗಳಲ್ಲಿ ಒಂದಾದ ಬೆಂಗಳೂರಿಗೆ ಅತ್ಯುತ್ತಮ ಗುಣಮಟ್ಟದ ಕುಡಿಯುವ ನೀರು ಹಾಗೂ ನೈರ್ಮಲ್ಯವನ್ನು ಒದಗಿಸುವಲ್ಲಿ ಯಶಸ್ವಿಯಾಗಿರುವ ಬೆಂಗಳೂರು ಜಲಮಂಡಳಿಯ ಸಾಧನೆಗಳು ಜಾಗತಿಕ ಮಟ್ಟದಲ್ಲಿ ವ್ಯಾಪಕ ಪ್ರಶಂಸೆಗೆ ಒಳಗಾಗಿವೆ.

ವಿಶೇಷವೆಂದರೆ, 3 ಪ್ರಮುಖ ವಿಭಾಗಗಳಲ್ಲಿ ಜಾಗತಿಕ ಟಾಪ್ 5 ಸ್ಥಾನ ಪಡೆದ ಭಾರತದ ಏಕೈಕ ನೀರು ಸರಬರಾಜು ಸಂಸ್ಥೆ ಎಂಬ ಹೆಗ್ಗಳಿಕೆಗೆ ಬೆಂಗಳೂರು ಜಲಮಂಡಳಿ ಪಾತ್ರವಾಗಿದೆ. ಬೆಂಗಳೂರಿನಲ್ಲಿ ನೀರಿನ ಸದ್ಬಳಕೆ, ಮರುಬಳಕೆ ಹಾಗೂ ಸಮರ್ಥ ನಿರ್ವಹಣೆಗಾಗಿ ಜಲಮಂಡಳಿ ಅಳವಡಿಸಿಕೊಂಡಿರುವ ಪಂಚಸೂತ್ರಗಳು ವಿಶ್ವಕ್ಕೆ ಮಾದರಿಯಾಗಿವೆ ಎಂದು ಸಮ್ಮೇಳನದಲ್ಲಿ ಉತ್ತಮ ಪ್ರಶಂಸೆಗೆ ಪಾತ್ರವಾಯಿತು.

ಎಲ್ಲರಿಗೂ ಶುದ್ಧ ನೀರು ಮತ್ತು ನೈರ್ಮಲ್ಯ ಒದಗಿಸುವ ವಿಶ್ವಸಂಸ್ಥೆಯ ಸುಸ್ಥಿರ ಅಭಿವೃದ್ಧಿ ಗುರಿಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಲ್ಲಿ ಜಲಮಂಡಳಿಯು ಅತ್ಯುತ್ತಮ ಮಾದರಿಯಾಗಿ ಹೊರಹೊಮ್ಮಿದೆ.




ಸ್ಪೇನ್ ದೇಶದ ಮ್ಯಾಡ್ರಿಡ್‌ನಲ್ಲಿ ಆಯೋಜಿಸಲಾಗಿರುವ ಪ್ರತಿಷ್ಠಿತ 'ಗ್ಲೋಬಲ್ ವಾಟರ್ ಸಮಿಟ್‌ನಲ್ಲಿ ಸಮಾವೇಶದಲ್ಲಿ ಬೆಂಗಳೂರು ಜಲಮಂಡಳಿಯು ವಿಶ್ವದ 5 ಅತ್ಯುತ್ತಮ ಸಂಸ್ಥೆಗಳಲ್ಲಿ ಒಂದಾಗಿ ಆಯ್ಕೆಯಾಗುವ ಮೂಲಕ ಐತಿಹಾಸಿಕ ಸಾಧನೆ ಮಾಡಿದೆ. ಈ ವಿಭಾಗದಲ್ಲಿ ಚಿಲಿ ದೇಶದ ಅಗುವಾಸ್ ನ್ಯೂವಾಸ್ ಮಲೇಷ್ಯಾದ ಇಂಡಾ ವಾಟರ್ ಕನ್ಸೋರ್ಷಿಯಮ್ ಬ್ರೆಜಿಲ್‌ನ ಸನಾಸಾ ಮತ್ತು ಪರಾನಾದ ಸನೇಪರ್ ಸಂಸ್ಥೆಗಳ ಜೊತೆಗೆ ಬೆಂಗಳೂರು ಜಲಮಂಡಳಿಯು ವಿಶ್ವದ ಟಾಪ್ 5 ಪಟ್ಟಿಯಲ್ಲಿ ಸ್ಥಾನ ಪಡೆದು ಮಿಂಚಿದೆ. ಕಳೆದ ಮೂರು ವರ್ಷಗಳಲ್ಲಿ ನೀರು ಪೂರೈಕೆ, ನೈರ್ಮಲ್ಯ ಹಾಗೂ ಹೊಸ ತಂತ್ರಜ್ಞಾನಗಳ ಯಶಸ್ವಿ ಅಳವಡಿಕೆಯನ್ನು ಪರಿಗಣಿಸಿ, ಜಲಮಂಡಳಿಯು ವಿಶ್ವದ ಅತ್ಯಂತ ಪ್ರತಿಷ್ಠಿತ 'ಯುಟಿಲಿಟಿ ಆಫ್ ದಿ ಇಯರ್' ಪ್ರಶಸ್ತಿಯ ಅಂತಿಮ 5ರ ಪಟ್ಟಿಯಲ್ಲಿ ಮನ್ನಣೆ ಪಡೆದಿದೆ.

ಜಲಮಂಡಳಿಯೊಂದಿಗೆ ಈ ವಿಭಾಗದಲ್ಲಿ ಸ್ಥಾನ ಪಡೆದ ವಿಶ್ವದ ಇತರ ಪ್ರಮುಖ ಸಂಸ್ಥೆಗಳು ಈ ಬೃಹತ್ ಜಾಗತಿಕ ಸಂಸ್ಥೆಗಳ ಸಾಲಿನಲ್ಲಿ ಬೆಂಗಳೂರು ಜಲಮಂಡಳಿಯು ಟಾಪ್ 5 ಸ್ಥಾನ ಪಡೆದಿರುವುದು ದೇಶಕ್ಕೆ ಹೆಮ್ಮೆಯ ವಿಷಯವಾಗಿದೆ. ಇದರ ಜೊತೆಗೆ, ಬೆಂಗಳೂರಿನ ನೀರಿನ ಬವಣೆ ನೀಗಿಸಲು ಜಾರಿಗೆ ತಂದಿರುವ ಮಹತ್ವಾಕಾಂಕ್ಷೆಯ ಹಾಗೂ ಬೃಹತ್ 'ಕಾವೇರಿ 5ನೇ ಹಂತ'ದ ಕುಡಿಯುವ ನೀರಿನ ಯೋಜನೆಯು ಸಹ ಪ್ರತ್ಯೇಕವಾಗಿ ಜಾಗತಿಕ ಟಾಪ್ 5 ಪಟ್ಟಿಯಲ್ಲಿ ಸ್ಥಾನ ಪಡೆಯುವ ಮೂಲಕ ಜಲ ನಿರ್ವಹಣಾ ತಜ್ಞರ ವಿಶೇಷ ಪ್ರಶಂಸೆಗೆ ಪಾತ್ರವಾಗಿದೆ. 'ವಾಟರ್ ಪ್ರಾಜೆಕ್ಟ್ ಆಫ್ ದಿ ಇಯರ್' ವಿಭಾಗದಲ್ಲಿ ಚೀನಾದ ಹೈಕೋ ಜಿಯಾಂಗ್‌ಡಾಂಗ್ ನ್ಯೂ ಏರಿಯಾ ವಾಟರ್ ಟ್ರೀಟ್‌ಮೆಂಟ್ ಪ್ಲಾಂಟ್, ಸೂರತ್‌ನ ಅಡ್ವಾನ್ಸ್ಡ್ ಅಲ್ಟ್ರಾಫಿಲ್ಟ್ರೇಷನ್ ಪ್ಲಾಂಟ್, ಫಿಲಿಪ್ಪೀನ್ಸ್‌ನ ಅಪ್ಪರ್ ವಾವಾ ಬಲ್ಕ್ ವಾಟರ್ ಪ್ರಾಜೆಕ್ಟ್, ಸರ್ಬಿಯಾದ ಜೆರೆಂಜನಿನ್ ವಾಟರ್ ಟ್ರೀಟ್‌ಮೆಂಟ್ ಪ್ಲಾಂಟ್ ಯೋಜನೆಗಳ ಜೊತೆಯಲ್ಲಿ ಕಾವೇರಿ 5ನೇ ಹಂತದ ಯೋಜನೆಯೂ ಈ ಮನ್ನಣೆಗೆ ಪಾತ್ರವಾಗಿದೆ.

ಒಂದೇ ವೇದಿಕೆಯಲ್ಲಿ ಜಲಮಂಡಳಿಯ ಆಡಳಿತಾತ್ಮಕ ಹಾಗೂ ಮೂಲಸೌಕರ್ಯದ ಭಿನ್ನ ಸಾಧನೆಗಳು ವಿಶ್ವದ ಟಾಪ್ 5ರಲ್ಲಿ ಸ್ಥಾನ ಪಡೆದಿರುವುದು ಮಂಡಳಿಯ ಕಾರ್ಯಕ್ಷಮತೆಗೆ ಹಿಡಿದ ಕೈಗನ್ನಡಿಯಾಗಿದೆ.

**ವಿಶ್ವದರ್ಜೆಯ ಸೇವೆಗೆ ಜಲಮಂಡಳಿ ಬದ್ಧ**



ಈ ಪ್ರತಿಷ್ಠಿತ ಗ್ಲೋಬಲ್ ವಾಟರ್ ಸಮಿಟ್‌ನಲ್ಲಿ ಬೆಂಗಳೂರು ಜಲಮಂಡಳಿ ಅಧ್ಯಕ್ಷ ಡಾ. ರಾಮ್‌ಪ್ರಸಾತ್ ಮನೋಹರ್ ಪ್ರತಿನಿಧಿಸಿದ್ದರು. ಈ ಐತಿಹಾಸಿಕ ಸಾಧನೆ ಕುರಿತು ಹರ್ಷ ವ್ಯಕ್ತಪಡಿಸಿದ ಡಾ. ರಾಮ್ ಪ್ರಸಾತ್, "ಬೆಂಗಳೂರನ್ನು ಅತ್ಯುತ್ತಮ 'ಜಾಗತಿಕ ನಗರ'ವನ್ನಾಗಿ ರೂಪಿಸುವ ಸನ್ಮಾನ್ಯ ಮುಖ್ಯಮಂತ್ರಿ ಹಾಗೂ ಉಪಮುಖ್ಯಮಂತ್ರಿಗಳ ದೂರದೃಷ್ಟಿ ಮಾರ್ಗದರ್ಶನದಲ್ಲಿ ಜಲಮಂಡಳಿ ಇಂತಹ ಸುಸ್ಥಿರ ಜಲ ನಿರ್ವಹಣಾ ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸುತ್ತಿದೆ. ಇದು ಅವರ 'ಬ್ರ್ಯಾಂಡ್ ಬೆಂಗಳೂರು' ಸಂಕಲ್ಪಕ್ಕೆ ಜಾಗತಿಕ ವೇದಿಕೆಯಲ್ಲಿ ಸಿಕ್ಕಿರುವ ಬಹುದೊಡ್ಡ ಮನ್ನಣೆಯಾಗಿದೆ. ನಗರದ ನಾಗರಿಕರಿಗೆ ಸದಾ ವಿಶ್ವದರ್ಜೆಯ ಸೇವೆ ಒದಗಿಸಲು ಜಲಮಂಡಳಿಯು ಬದ್ಧವಾಗಿದೆ," ಎಂದು ತಿಳಿಸಿದರು.

# ಐದು ಭಾಗವಾಯ್ತು ನಾಡಪ್ರಭು ಕೆಂಪೇಗೌಡರ ಕನಸಿನ ಬೆಂಗಳೂರು

## ಕಾಂಗ್ರೆಸ್ ವಿರುದ್ಧ ವಿಧಾನ ಪರಿಷತ್ ಪ್ರತಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಟೀಕೆ



**ಬೆಂಗಳೂರು, ಮೇ 20:** ರಾಮನಗರವನ್ನು ಬೆಂಗಳೂರು ದಕ್ಷಿಣ ಮಾಡಿದರು. ಕೋಲಾರ ಮತ್ತು ಚಿಕ್ಕಬಳ್ಳಾಪುರವನ್ನೂ ಬೆಂಗಳೂರಿಗೆ ಸೇರಿಸುವ ಮಾತು ನಡೆಯುತ್ತಿದೆ. ಈಗ ತುಮಕೂರನ್ನು ಬೆಂಗಳೂರಿಗೆ ಸೇರಿಸಲು ಸರ್ಕಾರ ಹುನ್ನಾರ ನಡೆಸಿದೆ. ಒಟ್ಟಿನಲ್ಲಿ ನಾಡಪ್ರಭು ಕೆಂಪೇಗೌಡ ಅವರು ದೂರದೃಷ್ಟಿಯಿಂದ ನಿರ್ಮಿಸಿದ ಬೆಂಗಳೂರನ್ನು ಐದು ತುಂಡು ಮಾಡಿದ್ದೀರಿ ಎಂದು ವಿಧಾನ ಪರಿಷತ್ ಪ್ರತಿಪಕ್ಷ ನಾಯಕ ಚಲವಾದಿ ನಾರಾಯಣಸ್ವಾಮಿ ದೂರಿದ್ದಾರೆ.

ಮಾಧ್ಯಮಗಳೊಂದಿಗೆ ಇಂದು ಮಾತನಾಡಿದ ಅವರು, ಈ ರೀತಿ ಎಲ್ಲವನ್ನೂ ಬದಲಾಯಿಸುವ ಬದಲು ಇಡೀ ಕರ್ನಾಟಕವನ್ನೇ ಬೆಂಗಳೂರು ಎಂದು ನಾಮಕರಣ ಮಾಡಿದರೆ ಒಳ್ಳೆಯದು. ಆಗ ಯಾವುದನ್ನೂ ಯಾವುದಕ್ಕೆ ಸೇರಿಸುವ ಪ್ರಮೇಯವೇ ಎದುರಾಗುವುದಿಲ್ಲ. ಅಖಂಡ ಕರ್ನಾಟಕ ಎಂಬುದು ನಮ್ಮ ಅಸ್ಮಿತೆ. ಅದರಲ್ಲಿ ಜಿಲ್ಲೆಯ ಹೆಸರುಗಳು, ತಾಲೂಕುಗಳು ಸಹಜವಾಗಿ ಇರುತ್ತವೆ. ಅದನ್ನು ಒಪ್ಪಿಕೊಳ್ಳುವುದನ್ನು ಬಿಟ್ಟು ಅದನ್ನು ಇದನ್ನು ಬೆಂಗಳೂರಿಗೆ ಸೇರಿಸುತ್ತೇವೆ ಎಲ್ಲಾ ಯಾಕೆ. ಇದೆಲ್ಲ ಮೂಗಿಗೆ ತುಪ್ಪ ಸವರುವ ಕೆಲಸ ಎಂದು ಕೇಳಿದರು.

ರಾಜಕೀಯದಲ್ಲಿ ಸೋಲು– ಗೆಲುವು ಸಾಮಾನ್ಯ. ಒಂದು ಸಾರಿ ನಾವು, ಮತ್ತೊಂದು ಬಾರಿ ಬೇರೆಯವರು ಗೆಲ್ಲಬಹುದು. ಆದರೆ ಯಾರು ಕೂಡ ವ್ಯವಸ್ಥೆಯನ್ನು ಕೆಡಿಸುವ ಕೆಲಸ ಮಾಡಬಾರದು. ಆದ್ದರಿಂದ ಕೋರ್ಟ್ ಆದೇಶವನ್ನು ಗೌರವಿಸಬೇಕು. ಇಲ್ಲದೇ ಹೋದರೆ ಕಾಂಗ್ರೆಸ್‌ಗೆ ಮತ್ತಷ್ಟು ಸೋಲುಗಳು ಕಟ್ಟಿಟ್ಟ ಬುತ್ತಿ.
–ಚಲವಾದಿ ನಾರಾಯಣಸ್ವಾಮಿ,
ವಿಧಾನ ಪರಿಷತ್ ವಿಪಕ್ಷ ನಾಯಕ


ಬೆಂಗಳೂರನ್ನು ವಿಸ್ತಾರವಾಗಿ ಬೆಳೆಸುವ ಬದಲು ತುಮಕೂರು, ಕೋಲಾರ ಮೈಸೂರನ್ನು ಬೆಳೆಸಲು ಮೂಲಸೌಕರ್ಯ ಮತ್ತು ಸೌಲಭ್ಯ ನೀಡಿ. ಆನೇಕಲ್‌ನಲ್ಲಿ ರೈತರ ಫಲವತ್ತಾದ ಜಮೀನನ್ನು ಗೃಹ ಮಂಡಳಿ ಹೆಸರಲ್ಲಿ ಕ್ರಿಕೆಟ್ ಸ್ಟೇಡಿಯಂ ಮಾಡ್ತಾ ಇದ್ದಾರೆ.

ಮನೆಗಳನ್ನು ನಿರ್ಮಿಸಲು ರೈತರಿಂದ ಜಮೀನು ಪಡೆದು ಬೇರೆ ಉದ್ದೇಶಕ್ಕೆ ಬಳಸುತ್ತಿದ್ದಾರೆ. ಇದು ಲೂಟಿಗಾಗಿ ಮಾಡುತ್ತಿರುವುದೇ ಹೊರತು ಬೆಂಗಳೂರಿನ ಅಭಿವೃದ್ಧಿಗಾಗಿ ಅಲ್ಲ. ದೂರ ಇರುವ ತುಮಕೂರು ಬೆಳೆಸುವ ಬದಲು ಹತ್ತಿರದ ಪಟ್ಟಣಗಳನ್ನು ಬೆಳೆಸಿ. ಎಲ್ಲಕ್ಕೂ ಬೆಂಗಳೂರು ಹೆಸರು ಕೊಡುವುದು ಹಾಸ್ಯಾಸ್ಪದ ಎಂದು ಚಲವಾದಿ ನಾರಾಯಣಸ್ವಾಮಿ ಗೇಲಿ ಮಾಡಿದರು.

**ಗೆಲ್ಲುವ ಭರವಸೆಯಿಲ್ಲದೆ ಜಿಬಿಎ ಚುನಾವಣೆ ಪದೇಪದೇ ಮುಂದೂಡುವ ಯತ್ನ**

ಗ್ರೇಟರ್ ಬೆಂಗಳೂರು (ಜಿಬಿಎ) ಚುನಾವಣೆಯಲ್ಲಿ ಕಾಂಗ್ರೆಸ್‌ಗೆ ಗೆಲ್ಲುವ ಭರವಸೆ ಇಲ್ಲದ ಕಾರಣ ಪದೇಪದೆ ಚುನಾವಣೆಯನ್ನು ಮುಂದಕ್ಕೆ ಹಾಕುವ ನಾಟಕವಾಡುತ್ತಿದೆ ಎಂದು ವಿಧಾನ ಪರಿಷತ್ತಿನ ವಿರೋಧಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಟೀಕಿಸಿದ್ದಾರೆ. ಜಿಬಿಎ ಚುನಾವಣೆಗೆ 2 ತಿಂಗಳು ಕಾಲಾವಕಾಶವನ್ನು ಸುಪ್ರೀಂ ಕೋರ್ಟ್ ನೀಡಿದೆ.ಆದರೆ ಮೂರು ತಿಂಗಳು ಕಾಲಾವಕಾಶವನ್ನು ಸರ್ಕಾರ ಕೇಳಿತ್ತು. ಆದರೆ ಅವರಿಗೆ ಗೆಲುವಿನ ವರದಿ ಸಿಕ್ಕಿಲ್ಲ. ಹೀಗಾಗಿ ಮಾಡಿ ಚುನಾವಣೆಯನ್ನು ಮುಂದಕ್ಕೆ ಹಾಕಲು ನೋಡಿದ್ದರು ಎಂದು ದೂರಿದರು.

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com
Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363



ಕರ್ನಾಟಕ ವಾಯುಮಾಲಿನ್ಯ ನಿಯಂತ್ರಣ ಮಂಡಳಿ ವತಿಯಿಂದ ಮುಖ್ಯಮಂತ್ರಿಗಳ ಪರಿಹಾರ ನಿಧಿಗೆ ನೀಡಲಾದ 6 ಕೋಟಿ ರೂ.ಗಳ ಚೆಕ್ಕನ್ನು ಮಂಡಳಿಯ ಅಧ್ಯಕ್ಷ ನರೇಂದ್ರ ಸ್ವಾಮಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಬುಧವಾರ ಕಾವೇರಿ ನಿವಾಸದಲ್ಲಿ ಹಸ್ತಾಂತರಿಸಿದರು. ಪರಿಸರ ಮತ್ತು ಅರಣ್ಯ ಸಚಿವ ಈಶ್ವರ ಖಂಡ್ರೆ, ಸದಸ್ಯ ಕಾರ್ಯದರ್ಶಿ ಆರ್.ಗೋಕುಲ, ಅಧಿಕಾರಿಗಳು ಇದ್ದರು.

## ಮೆಡಿಕಲ್ ಸ್ಟೋರ್ ಬಂದ್‌ಗೆ ರಾಜ್ಯದಲ್ಲಿ ಮಿಶ್ರ ಪ್ರತಿಕ್ರಿಯೆ

**ಬೆಂಗಳೂರು, ಮೇ 20:** ದೇಶವ್ಯಾಪಿ ಕರೆಯಲಾಗಿರುವ ಮೆಡಿಕಲ್ ಸ್ಟೋರ್‌ಗಳ ಬಂದ್‌ಗೆ ರಾಜ್ಯದಲ್ಲಿ ಮಿಶ್ರ ಪ್ರತಿಕ್ರಿಯೆ ವ್ಯಕ್ತವಾಗಿದೆ. ರಾಜ್ಯದ 26 ಸಾವಿರಕ್ಕೂ ಅಧಿಕ ಮೆಡಿಕಲ್ ಅಂಗಡಿಗಳು ಹಾಗೂ ಬೆಂಗಳೂರಿನಲ್ಲಿ 6,500ಕ್ಕೂ ಹೆಚ್ಚು ಮೆಡಿಕಲ್ ಸ್ಟೋರ್‌ಗಳಿವೆ. ಆದರೆ ರಾಜ್ಯದ ಮೆಡಿಕಲ್ ಸ್ಟೋರ್ ಮಾಲೀಕರಲ್ಲಿ ಪೂರ್ಣ ಒಮ್ಮತ ಕಾಣಿಸದ ಕಾರಣ ಕೆಲ ಅಂಗಡಿಗಳು ಮಾತ್ರ ಬಂದ್ ಆಗಿದ್ದು, ಇನ್ನೂ ಅನೇಕ ಮೆಡಿಕಲ್‌ಗಳು ಮಾಮೂಲಿನಂತೆ ಕಾರ್ಯನಿರ್ವಹಿಸುತ್ತಿವೆ. ದೇಶಾದ್ಯಂತ ಸುಮಾರು 12 ಲಕ್ಷ ಮೆಡಿಕಲ್ ಶಾಪ್‌ಗಳು ಈ ಪ್ರತಿಭಟನೆಯಲ್ಲಿ ಭಾಗಿಯಾಗಲಿವೆ ಎಂದು ಸಂಘಟನೆ ತಿಳಿಸಿದೆ. ಆನ್‌ಲೈನ್ ಮೂಲಕ ಔಷಧ ಮಾರಾಟ ವೇಗವಾಗಿ ಹೆಚ್ಚುತ್ತಿರುವುದು ಸಾಂಪ್ರದಾಯಿಕ ಮೆಡಿಕಲ್ ಅಂಗಡಿಗಳಿಗೆ ದೊಡ್ಡ ಹೊಡೆತವಾಗಿದೆ. ವಿಶೇಷವಾಗಿ ಆನ್‌ಲೈನಲ್ಲಿ ಹಾಗೂ ಹಲವಾರು ಆಪ್‌ಗಳ ಮೂಲಕ ಔಷಧಿ ವಿತರಣೆ ಹೆಚ್ಚುತ್ತಿರುವುದನ್ನು ಸಂಘಟನೆಗಳು ತೀವ್ರವಾಗಿ ವಿರೋಧಿಸುತ್ತಿವೆ. ಇ-ಫಾರ್ಮಸಿಗಳನ್ನು ಬಂದ್ ಮಾಡಬೇಕು, ಅತಿಯಾದ ಡಿಸ್ಕೌಂಟ್ ನೀತಿಗೆ ಕಡಿವಾಣ ಹಾಕಬೇಕು, ಸಣ್ಣ ಔಷಧ ವ್ಯಾಪಾರಿಗಳನ್ನು ರಕ್ಷಿಸಬೇಕು ಎನ್ನುವುದು ಅವರ ಪ್ರಮುಖ ಬೇಡಿಕೆಯಾಗಿದೆ.

## ಸಫಾರಿಗೆ ಸುರಕ್ಷಿತ ಬಸ್ ಬಳಕೆಗೆ ಈಶ್ವರ ಖಂಡ್ರೆ ಸೂಚನೆ



■ ಪ್ರವಾಸಿಗರ ಸುರಕ್ಷತೆ-ಗೂ ಗಮನ ಹರಿಸುವಂತೆ ನಿರ್ದೇಶನ

**ಬೆಂಗಳೂರು, ಮೇ 20:** ರಾಜ್ಯದ ಐದು ಹುಲಿ ಸಂರಕ್ಷಿತ ಪ್ರದೇಶ ಹಾಗೂ ವನ್ಯಜೀವಿ ಧಾಮಗಳ ಸಫಾರಿಯಲ್ಲಿ ತೆರೆದ ಕ್ಯಾಂಪರ್ ಬದಲಿಗೆ ಸುರಕ್ಷಿತ ಬಸ್ ಬಳಕೆ ಮಾಡುವಂತೆ ಅರಣ್ಯ ಸಚಿವ ಈಶ್ವರ ಖಂಡ್ರೆ ಸೂಚನೆ ನೀಡಿದ್ದಾರೆ.

ದುಬಾರೆ ಆನೆ ಶಿಬಿರದಲ್ಲಿ ಸೋಮವಾರ ಎರಡು ಸಾಕಾನೆಗಳ ಕಾಳಗದ ವೇಳೆ ಪ್ರವಾಸಿ ಮಹಿಳೆ ಮೃತಪಟ್ಟ ಆಘಾತಕಾರಿ ಘಟನೆ ಹಿನ್ನೆಲೆಯಲ್ಲಿ ಸಫಾರಿಗಳಲ್ಲಿ ಪ್ರವಾಸಿಗರ ಸುರಕ್ಷತೆಗೂ ಹೆಚ್ಚಿನ ಗಮನ ಹರಿಸುವಂತೆ ಮುಖ್ಯ ವನ್ಯಜೀವಿ ಪರಿಪಾಲಕರಿಗೆ ಸಚಿವರು ನಿರ್ದೇಶನ ನೀಡಿದ್ದಾರೆ.

ಬಂಡೀಪುರ, ನಾಗರಹೊಳೆ, ಕಾಳಿ, ಬಿಳಿಗಿರಿರಂಗನಬೆಟ್ಟ ಮತ್ತು ಭದ್ರಾ ಹುಲಿ ಸಂರಕ್ಷಿತ ಪ್ರದೇಶ ಹಾಗೂ ಮಲೆ ಮಹದೇಶ್ವರ ಬೆಟ್ಟ, ದಾಂಡೇಲಿ, ಕೆ.ಗುಡಿ ಸೇರಿದಂತೆ ರಾಜ್ಯದ ವಿವಿಧ ವನ್ಯಜೀವಿಧಾಮ ಮತ್ತು ಕಾನನಗಳಲ್ಲಿ ಸಫಾರಿ ನಡೆಯುತ್ತಿದ್ದು, ರಾಜ್ಯದ ಮೂಲೆಮೂಲೆಗಳಿಂದ ಅಷ್ಟೇ ಅಲ್ಲದೆ ದೇಶ ವಿದೇಶಗಳಿಂದಲೂ ಪ್ರವಾಸಿಗರು, ವನ್ಯಜೀವಿ ಪ್ರಿಯರು ಇಲ್ಲಿಗೆ ಆಗಮಿಸುತ್ತಾರೆ. ಅದೃಷ್ಟವಶಾತ್ ಈವರೆಗೆ ಸಫಾರಿ ಪ್ರದೇಶಗಳಲ್ಲಿ ಆನೆ, ಹುಲಿ ಸೇರಿದಂತೆ ಯಾವುದೇ ವನ್ಯಮೃಗಗಳು ಸಫಾರಿ ವಾಹನಗಳ ಮೇಲೆ ದಾಳಿ ಮಾಡಿ ಜೀವಹಾನಿ ಮಾಡಿದ ಘಟನೆಗಳು ಸಂಭವಿಸಿಲ್ಲ. ಆದಾಗ್ಯೂ ಅನಾಹುತ ಸಂಭವಿಸುವ ಮೊದಲೇ ಎಚ್ಚೆತ್ತುಕೊಳ್ಳುವ ಅಗತ್ಯವಿದೆ ಎಂದು ಸೂಚನೆಯಲ್ಲಿ ತಿಳಿಸಿದ್ದಾರೆ.

ಸಫಾರಿಗೆ ಬರುವ ಪ್ರವಾಸಿಗರ ಸುರಕ್ಷತೆಯ ದೃಷ್ಟಿಯಿಂದ ಹಾಲಿ ಬಳಕೆಯಲ್ಲಿರುವ ಕ್ಯಾಂಪರ್‌ಗಳಿಗೆ ಕಬ್ಬಿಣದ ಸರಳುಗಳಿಂದ ಕೂಡಿದ ಜಾಲರಿಗಳನ್ನು ಅಥವಾ ಒಡೆಯಲಾಗದ ಗಾಜು ಅಳವಡಿಸಿ ಬಳಸುವ ಬಗ್ಗೆ ಕ್ರಮವಹಿಸಲು, ಯಾವುದೇ ಪ್ರವಾಸಿಗರು ಅರಣ್ಯದೊಳಗೆ ಇಳಿಯಲು ಅವಕಾಶ ನೀಡದಂತೆ ಮತ್ತು ಪ್ರತಿ ಸಫಾರಿ ವಾಹನದಲ್ಲಿ ಪ್ರಥಮ ಚಿಕಿತ್ಸೆಯ ಕಿಟ್ ಹಾಗೂ ಸಫಾರಿ ಕೇಂದ್ರಗಳಿಗೆ ಸಮೀಪದಲ್ಲಿ ಆಂಬ್ಯುಲೆನ್ಸ್ ವಾಹನ ಇರುವುದನ್ನು ಖಾತ್ರಿಪಡಿಸಿಕೊಳ್ಳುವಂತೆಯೂ ಸಚಿವರು ಸೂಚಿಸಿದ್ದಾರೆ.

ಇತ್ತೀಚೆಗೆ ದುಬಾರೆ ಆನೆ ಶಿಬಿರದಲ್ಲಿ ಸಾಕಾನೆಗಳ ಕಾದಾಟದ ನಡುವೆ ಸಿಲುಕಿ ಮಹಿಳೆ ಮೃತಪಟ್ಟ ಘಟನೆ ಬೆನ್ನಲ್ಲೇ ಎಚ್ಚೆತ್ತಿರುವ ಅರಣ್ಯ ಸಚಿವ ಈಶ್ವರ ಖಂಡ್ರೆ ಅವರು, ರಾಜ್ಯದ ಎಲ್ಲ ಸಾಕಾನೆ ಶಿಬಿರಗಳಲ್ಲಿ ಪ್ರವಾಸಿಗರ ಸುರಕ್ಷತೆಗಾಗಿ ಪ್ರಮಾಣಿತ ಕಾರ್ಯಾಚರಣೆ ವಿಧಾನ (ಎಸ್.ಒ.ಪಿ.) ರೂಪಿಸುವಂತೆ ಆದೇಶಿಸಿದ್ದರು. ಪ್ರವಾಸಿಗರ ಸುರಕ್ಷತೆಗಾಗಿ ಎಸ್‌ಒಪಿ ಮತ್ತು 100 ಅಡಿ ದೂರದಲ್ಲಿ ನಿಂತು ಆನೆಗಳ ಸ್ನಾನ ವೀಕ್ಷಿಸಲು ಅವಕಾಶ ನೀಡುವಂತೆ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಮತ್ತು ಮುಖ್ಯ ವನ್ಯಜೀವಿ ಪರಿಪಾಲಕರಿಗೆ ಸೂಚನೆ ನೀಡಿರುವ ಖಂಡ್ರೆ, ಪ್ರವಾಸಿಗರ ಸುರಕ್ಷತೆಗೆ ಹೆಚ್ಚಿನ ಆದ್ಯತೆ ನೀಡುವ

## ಅಡುಗೆ ಎಣ್ಣೆಯಿಲ್ಲದ ಆಹಾರ ಬಳಸುವುದಾದರೆ ಅಭ್ಯಂತರವಿಲ್ಲ

### ಪ್ರತಿನಿತ್ಯ ಮೆಟ್ರೋ, ಬಸ್‌ನಲ್ಲಿ ಓಡಾಡುತ್ತಾರಾ: ಬಿಜೆಪಿ ನಾಯಕರಿಗೆ ಡಿಸಿಎಂ ಡಿ.ಕೆ. ಶಿವಕುಮಾರ್ ಪ್ರಶ್ನೆ



**ಬೆಂಗಳೂರು, ಮೇ 20:** ಬಿಜೆಪಿ ನಾಯಕರು ಕೇವಲ ಒಂದು ದಿನದ ಫೋಟೋ ಶೂಟ್‌ಗಾಗಿ ಸಾರ್ವಜನಿಕ ಸಾರಿಗೆ ಬಳಸುವುದನ್ನು ಬಿಟ್ಟು, ಪ್ರತಿನಿತ್ಯ ಮೆಟ್ರೋ ಹಾಗೂ ಬಸ್‌ಗಳಲ್ಲಿ ಓಡಾಡುತ್ತಾರಾ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಪ್ರಶ್ನಿಸಿದ್ದಾರೆ.

ಕುಮಾರಪಾರ್ಕ್‌ನಲ್ಲಿರುವ ಸರ್ಕಾರಿ ಗೃಹಕಚೇರಿಯಲ್ಲಿ ಬುಧವಾರ ಆಯೋಜಿಸಿದ್ದ ಜಂಟಿ ಮಾಧ್ಯಮಗೋಷ್ಠಿಯಲ್ಲಿ ಮಾತನಾಡಿದ ಅವರು, ಕೇಂದ್ರ ಸಚಿವ ವಿ. ಸೋಮಣ್ಣ ಸೇರಿದಂತೆ ಇತರೆ ಬಿಜೆಪಿ ನಾಯಕರ ಇತ್ತೀಚಿನ ಸಾರ್ವಜನಿಕ ಸಾರಿಗೆ ಪ್ರಯಾಣದ ಪ್ರಹಸನವನ್ನು ಲೇವಡಿ ಮಾಡಿದರು. ಬೆಲೆ ಏರಿಕೆ ನಿಯಂತ್ರಿಸಲು ಸಾಧ್ಯವಾಗದ ಬಿಜೆಪಿ, ಇಂಧನ ಉಳಿಸಿ ಎಂದು ನಾಟಕವಾಡುತ್ತಿದೆ. ಬಿಜೆಪಿ ನಾಯಕರು ಪೆಟ್ರೋಲ್, ಡೀಸೆಲ್ ಉಳಿಸುವುದಾದರೆ ಅಥವಾ ಅಡುಗೆಎಣ್ಣೆ ಇಲ್ಲದ ಆಹಾರ ತಿನ್ನುವುದಾದರೆ ನಮ್ಮದೇನೂ ಅಭ್ಯಂತರವಿಲ್ಲ ಎಂದರು.

### ಸಿಎಂ ಬದಲಾವಣೆ ಬಗ್ಗೆ ನಾನೆಲ್ಲೂ ಮಾತನಾಡಿಲ್ಲ

ಸಿದ್ದರಾಮಯ್ಯನವರೇ ಸಿಎಂ ಆಗಿ ಮುಂದುವರಿಯಲಿ ಎನ್ನುವುದರಲ್ಲಿ ತಪ್ಪೇನಿಲ್ಲ. ಪರಮೇಶ್ವರ್ ಅವರನ್ನು ಸಿಎಂ ಮಾಡಬೇಕು ಎಂದರೆ ಸದ್ಯದ ಮುಖ್ಯಮಂತ್ರಿಗಳು ಕೆಳಗಿಳಿಯಬೇಕು ಎಂದರ್ಥವೇ? ನಾನು ಎಲ್ಲೂ ಸಿಎಂ ಬದಲಾವಣೆ ಬಗ್ಗೆ ಮಾತನಾಡಿಲ್ಲ. ಈ ಬಗ್ಗೆ ರಾಜಣ್ಣ ಅವರನ್ನೇ ಕೇಳಬೇಕು ಎಂದರು. ಇದೇ ವೇಳೆ, ತಾವು ಹೈಕಮಾಂಡ್ ಬಳಿ ಯಾವುದೇ ಕೂಲಿ (ಮುಖ್ಯಮಂತ್ರಿ ಹುದ್ದೆ) ಕೇಳಿಲ್ಲ ಎಂದ ಡಿಕೆಶಿ, ಯುವ ಕಾಂಗ್ರೆಸ್‌ನಲ್ಲಿ ಅಶಿಸ್ತು ತೋರುವವರನ್ನು ಪಕ್ಷದಿಂದ ಕಿತ್ತು ಬಿಸಾಡುವುದಾಗಿ ಎಚ್ಚರಿಕೆ ನೀಡಿದರು.

## ಸೋಲುವ ಭಯದಿಂದ ಜಿಬಿಎ ಚುನಾವಣೆ ಮುಂದೂಡಿಕೆಗೆ ಯತ್ನ



**ಬೆಂಗಳೂರು, ಮೇ 20:** ಗ್ರೇಟರ್ ಬೆಂಗಳೂರು ವ್ಯಾಪ್ತಿಯಲ್ಲಿನ 5 ಪಾಲಿಕೆಗಳಲ್ಲೂ ಸೋಲುವ ಭಯದಿಂದಾಗಿ ಚುನಾವಣೆಯನ್ನು ಪದೇಪದೆ ಮುಂದೂಡಲಾಗುತ್ತಿದೆ ಎಂದು ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಆರೋಪಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜನಗಣತಿ ಮತ್ತು ಮತದಾರರ ಪಟ್ಟಿ ತೀವ್ರ ಪರಿಷ್ಕರಣೆ ಕಾರಣದಿಂದ, ಸಿಬ್ಬಂದಿ ಕೊರತೆ ಇದೆ ಎಂಬ ನೆಪ ಹೇಳಿ, ಚುನಾವಣೆ ಮುಂದೂಡಲಾಗುತ್ತಿದೆ. ಪಕ್ಷದಲ್ಲಿ ಆಂತರಿಕವಾಗಿ ನಡೆದ ಸಮೀಕ್ಷೆಯಿಂದ ಕಾಂಗ್ರೆಸ್ ಸೋಲಲಿದೆ ಎಂದು ವರದಿಯಿದೆ. ಆ ಭಯದಿಂದಲೇ ಇಲ್ಲದ ಕಾರಣ ಹೇಳಿ, ಚುನಾವಣೆ ಮುಂದೂಡುತ್ತಿದ್ದಾರೆ. ಇದು ಜನರಿಗೆ ಮಾಡಿದ ಅನ್ಯಾಯ ಎಂದು ಟೀಕಿಸಿದರು.

**ಎಸ್‌ಐಆರ್, ಸರ್ವೇ ಎಲ್ಲವೂ ನೆಪವಷ್ಟೇ:** ಎಸ್‌ಐಆರ್ ಹಾಗೂ ಸರ್ವೇ ನೆಪ ಹೇಳಿ ಚುನಾವಣೆ ಮುಂದೂಡುವುದು ಕೇವಲ ರಾಜಕೀಯ ತಂತ್ರ. ಚುನಾವಣೆ ನಡೆಸುವ ಮನಸ್ಸಿದ್ದರೆ ಯಾವುದೂ ದೊಡ್ಡ ಸಮಸ್ಯೆಯಲ್ಲ. ಮೊದಲೇ ನಿಗದಿಪಡಿಸಿದ ವೇಳಾಪಟ್ಟಿಯಂತೆ ಚುನಾವಣೆ ನಡೆಸಿದ್ದರೆ ಇಂತಹ ಪರಿಸ್ಥಿತಿ ಬರುತ್ತಿರಲಿಲ್ಲ. ಹಾಲಿನ ದರ ಏರಿಕೆ, ಆಲ್ಕೋಹಾಲ್ ತೆರಿಗೆ ಹೆಚ್ಚಳ, ವಿದ್ಯುತ್ ದರ ಏರಿಕೆ, ಮನೆ ತೆರಿಗೆ ಹೆಚ್ಚಳ, ಹೊಸ ಖಾತಾ ವ್ಯವಸ್ಥೆ ಸೇರಿದಂತೆ ಜನರ ಮೇಲೆ ನಿರಂತರ ಹೊರೆ ಹಾಕಿರುವುದರಿಂದ ಬೆಂಗಳೂರು ಜನರು ಕಾಂಗ್ರೆಸ್ ವಿರುದ್ಧ ತಿರುಗಿಬಿದ್ದಿದ್ದಾರೆ. ಇದೇ ಕಾರಣಕ್ಕೆ ಚುನಾವಣೆಯನ್ನು ಮುಂದೂಡಲಾಗುತ್ತಿದೆ ಎಂದು ಟೀಕಿಸಿದರು.

### 3 ಸಾವಿರ ಎಕರೆ ಕಬಳಿಸಲು ಹುನ್ನಾರ

ಬಿಡದಿಯ ಬಳಿ, ಸಂಪತ್ಭರಿತ ಕೃಷಿ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಲು ಮುಂದಾಗಿರುವುದು ಸರಿಯಲ್ಲ. ನೈಜವಾದ ರೈತರು ಭೂಮಿ ನೀಡಲು ನಿರಾಕರಿಸಿದ್ದಾರೆ. ಬೆಂಗಳೂರಿನಲ್ಲಿ ಶಿವರಾಮ ಕಾರಂತ ಮತ್ತು ಕೆಂಪೇಗೌಡ ಬಡಾವಣೆಗಳಲ್ಲಿ ನಿವೇಶನ ಹಾಗೂ ಬಿಡಿಎ ಅಪಾರ್ಟ್‌ಮೆಂಟ್‌ಗಳಲ್ಲಿ, ಫ್ಲಾಟ್‌ಗಳು ಖಾಲಿಯಿವೆ. ಬಿಡದಿ ಬಳಿ ಉಪನಗರ ನಿರ್ಮಿಸಲು ಯಾರು ಕೇಳಿರಲಿಲ್ಲ. ಸರ್ಕಾರ ಆರ್ಥಿಕವಾಗಿ ದಿವಾಳಿಯಾಗಿದ್ದು, ಬಿಡದಿ ಬಳಿಯಿರುವ ಮೂರು ಸಾವಿರ ಎಕರೆ ಸರ್ಕಾರಿ ಭೂಮಿಯನ್ನು, ಕಬಳಿಸುವ ಹಾಗೂ ಉಪನಗರ ನಿರ್ಮಾಣ ಯೋಜನೆಯಲ್ಲಿ ಕಮಿಷನ್ ಪಡೆಯುವ ಸಲುವಾಗಿ, ಬಲವಂತದ ಭೂ ಸ್ವಾಧೀನ ಮಾಡಲಾಗುತ್ತಿದೆ ಎಂದು ದೂರಿದರು.

### ಇಡೀ ರಾಜ್ಯಕ್ಕೆ ಬೆಂಗಳೂರು ಹೆಸರನ್ನೇ ಇಡಲಿ

ಬೆಂಗಳೂರಿನ ಹೆಸರನ್ನು ಸೇರಿಸಿ ಕೊಳ್ಳಲು ವಿವಿಧ ಜಿಲ್ಲೆಗಳ ಸಚಿವರಲ್ಲಿ ಪೈಪೋಟಿ ನಡೆಯುತ್ತಿದೆ. ಬೆಂಗಳೂರು ದಕ್ಷಿಣ ಜಿಲ್ಲೆಯ ಬಳಿಕ ಈಗ ತುಮಕೂರಿಗೆ ಬೆಂಗಳೂರಿನ ಉತ್ತರ ಜಿಲ್ಲೆ ಎಂದು ನಾಮಕರಣ ಮಾಡಲು ಒತ್ತಾಯ ಕೇಳಿ ಬರುತ್ತಿವೆ. ಇದರ ಬದಲು ಇಡೀ ರಾಜ್ಯಕ್ಕೆ ಬೆಂಗಳೂರಿನ ಹೆಸರನ್ನೇ ಮರು ನಾಮಕರಣ ಮಾಡಲಿ ಎಂದು ಅಶೋಕ್ ಅಸಮಾಧಾನ ವ್ಯಕ್ತಪಡಿಸಿದರು. ತಮ್ಮ ಪಕ್ಷದ ಸರ್ಕಾರ ಅಧಿಕಾರಕ್ಕೆ ಬಂದರೆ ಮತ್ತೆ ಮೂಲಹೆಸರನ್ನೇ ನಾಮಕರಣ ಮಾಡುವುದಾಗಿ ಹೇಳಿದರು.

## ಮುಂದಿನ 7 ದಿನ ರಾಜ್ಯಾದ್ಯಂತ ಗುಡುಗು, ಮಿಂಚು ಸಹಿತ ಮಳೆ

■ ಹವಾಮಾನ ಇಲಾಖೆ ಮುನ್ಸೂಚನೆ

**ಬೆಂಗಳೂರು, ಮೇ.20:** ಮುಂದಿನ 7 ದಿನಗಳವರೆಗೆ ರಾಜ್ಯಾದ್ಯಂತ ಗುಡುಗು, ಮಿಂಚು ಮತ್ತು ಗುಡುಗು ಸಹಿತ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ಎಚ್ಚರಿಕೆ ನೀಡಿದೆ.

ಮೇ 20 ರಿಂದ 26 ರವರೆಗೆ ರಾಜ್ಯದ ಹೆಚ್ಚಿನ ಜಿಲ್ಲೆಗಳಲ್ಲಿ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ಉತ್ತರ ಒಳನಾಡಿನ ಜಿಲ್ಲೆಗಳಾದ ಧಾರವಾಡ, ಬೆಳಗಾವಿ, ಗದಗ, ಹಾವೇರಿ ಮತ್ತು ಬಾಗಲಕೋಟೆಯ ಕೆಲವು ಸ್ಥಳಗಳಲ್ಲಿ ಗಂಟೆಗೆ 40 ರಿಂದ 50 ಕಿ.ಮೀ ವೇಗದಲ್ಲಿ ಗಾಳಿ ಬೀಸುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ದಕ್ಷಿಣ ಒಳನಾಡಿನ ಜಿಲ್ಲೆಗಳಾದ ಚಿಕ್ಕಮಗಳೂರು, ಹಾಸನ, ಕೊಡಗು, ಮಂಡ್ಯ ಮತ್ತು ಮೈಸೂರಿನ ಕೆಲವು ಸ್ಥಳಗಳಲ್ಲಿ ಭಾರೀ ಮಳೆಯಾಗುವ ಸಾಧ್ಯತೆ ಇದೆ ಎಂದು ಇಲಾಖೆ ಮುನ್ಸೂಚನೆ ನೀಡಿದೆ. ಯಾದಗಿರಿ, ವಿಜಯಪುರ, ಕಲಬುರಗಿ ಮತ್ತು ಬೀದರ್ ಜಿಲ್ಲೆಗಳನ್ನು ಹೊರತುಪಡಿಸಿ, ರಾಜ್ಯದ ಉಳಿದ ಎಲ್ಲಾ ಜಿಲ್ಲೆಗಳಿಗೆ ಬುಧವಾರ ಹಳದಿ ಎಚ್ಚರಿಕೆ ನೀಡಲಾಗಿದೆ. ಅದೇ ರೀತಿ, ಉತ್ತರ ಒಳನಾಡಿನ ಜಿಲ್ಲೆಗಳಾದ ಧಾರವಾಡ, ಬೆಳಗಾವಿ, ಗದಗ, ಹಾವೇರಿ ಮತ್ತು ಬಾಗಲಕೋಟೆಯಲ್ಲಿ ಗಂಟೆಗೆ 40 ರಿಂದ 50 ಕಿ.ಮೀ ವೇಗದಲ್ಲಿ ಗಾಳಿ ಬೀಸುವ ಸಾಧ್ಯತೆ ಇದೆ ಮತ್ತು ಕೆಲವು ಸ್ಥಳಗಳಲ್ಲಿ ಮಧ್ಯಮ ಮಳೆಯಾಗುವ ಸಾಧ್ಯತೆ ಇದೆ.

ರಾಯಚೂರು ಮತ್ತು ಕೊಪ್ಪಳ ಜಿಲ್ಲೆಗಳ ಕೆಲವು ಸ್ಥಳಗಳಲ್ಲಿ ಗಂಟೆಗೆ 30 ರಿಂದ 40 ಕಿ.ಮೀ ವೇಗದಲ್ಲಿ ಗಾಳಿ ಬೀಸುವ ಸಾಧ್ಯತೆ ಇದ್ದು, ಗುಡುಗು ಸಹಿತ ಮಳೆಯಾಗುವ ಸಾಧ್ಯತೆ ಇದೆ. ದಕ್ಷಿಣ ಒಳನಾಡಿನ ಕೊಡಗು, ಹಾಸನ, ಚಿಕ್ಕಮಗಳೂರು, ಮೈಸೂರು ಮತ್ತು ಮಂಡ್ಯ ಜಿಲ್ಲೆಗಳಲ್ಲಿ ಕೆಲವು ಸ್ಥಳಗಳಲ್ಲಿ ಗಂಟೆಗೆ 30 ರಿಂದ 40 ಕಿ.ಮೀ ವೇಗದಲ್ಲಿ ಗಾಳಿ ಬೀಸುವ ಸಾಧ್ಯತೆ ಇದ್ದು, ಕೆಲವು ಸ್ಥಳಗಳಲ್ಲಿ ಗುಡುಗು ಸಹಿತ ಮಳೆಯಾಗುವ ಸಾಧ್ಯತೆ ಇದೆ ಎಂದು ಹೇಳಲಾಗುತ್ತಿದೆ.

## 3 ವರ್ಷದಲ್ಲಿ ವೈಮಾಂತರಿಕ್ಷ, ರಕ್ಷಣೆ ತಯಾರಿಕಾ ಕ್ಲಸ್ಟರ್ ಅಭಿವೃದ್ಧಿ



■ ಆಕ್ಸಿಸ್‌ಕೇಡ್ಸ್ ಏರೋಸ್ಪೇಸ್ ಸಂಸ್ಥೆಯಿಂದ 6000 ಕೋಟಿ ರೂ. ಹೂಡಿಕೆಗೆ ಒಲವು: ಎಂ.ಬಿ. ಪಾಟೀಲ್ ಮಾಹಿತಿ

**ಬೆಂಗಳೂರು, ಮೇ 20:** ರಾಜ್ಯದಲ್ಲಿ ಮುಂದಿನ ಮೂರು ವರ್ಷಗಳಲ್ಲಿ ವೈಮಾಂತರಿಕ್ಷ, ರಕ್ಷಣೆ, ಎಂಆರ್‌ಒ, ತಯಾರಿಕಾ ಕ್ಲಸ್ಟರ್ ಅಭಿವೃದ್ಧಿಗೊಳಿಸಲಾಗುವುದು ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವ ಎಂ.ಬಿ. ಪಾಟೀಲ್ ಹೇಳಿದರು.

ಖನಿಜ ಭವನದಲ್ಲಿ ಕಂಪನಿಯ ಉನ್ನತಾಧಿಕಾರಿಗಳ ಜತೆ ಬುಧವಾರ ನಡೆದ ವಿಸ್ತೃತ ಸಮಾಲೋಚನೆಯ ನಂತರ ಸಚಿವರು ಈ ಮಾಹಿತಿ ನೀಡಿದರು. ವೈಮಾಂತರಿಕ್ಷ ಹಾಗೂ ರಕ್ಷಣಾ ವಲಯದ ಬೆಂಗಳೂರು ಮೂಲದ ಆಕ್ಸಿಸ್‌ಕೇಡ್ಸ್ ಏರೋಸ್ಪೇಸ್ ಇನ್‌ಫ್ರಾಸ್ಟ್ರಕ್ಚರ್ ಸಂಸ್ಥೆ ರಾಜ್ಯದಲ್ಲಿ ಬರೋಬ್ಬರಿ 6,000 ಕೋಟಿ ಮೊತ್ತದ ಬಂಡವಾಳ ಹೂಡಿಕೆಗೆ ಒಲವು ತೋರಿದೆ. 200 ಎಕರೆ ಪ್ರದೇಶದಲ್ಲಿ ವೈಮಾಂತರಿಕ್ಷ, ರಕ್ಷಣೆ, ಸೆಮಿಕಂಡಕ್ಟರ್ ಹಾಗೂ ಕೃತಕ ಬುದ್ಧಿಮತ್ತೆ (ಎಐ) ನಾವೀನ್ಯತೆ ಕ್ಷೇತ್ರಗಳಲ್ಲಿ ಉತ್ಪಾದನೆ, ಪರೀಕ್ಷೆ ಮತ್ತು ನಿರ್ವಹಣೆಯ ಸಮಗ್ರ ಕೇಂದ್ರ ಸ್ಥಾಪಿಸಲಾಗುತ್ತದೆ. ಇದು ಆಕ್ಸಿಸ್‌ಕೇಡ್ಸ್ ಏರೊಸ್ಪೇಸ್‌ನ ಮುಖ್ಯ ಉದ್ದೇಶವಾಗಿದೆ. ಜಾಗತಿಕ ಪಾಲುದಾರಿಕೆಯಡಿ ದೇಶೀಯವಾಗಿ ಸಂಶೋಧನೆ ಹಾಗೂ ಅಭಿವೃದ್ಧಿ ಕೇಂದ್ರವನ್ನೂ ಸ್ಥಾಪಿಸಲಿದೆ ಎಂದರು.

ಹಂತ ಹಂತವಾಗಿ ಸಂಸ್ಥೆ ಒಟ್ಟು 6,000 ಕೋಟಿ ರೂಪಾಯಿ ಬಂಡವಾಳ ಹೂಡಿಕೆ ಮಾಡಲಿದ್ದು, ಇದರಿಂದ ರಾಜ್ಯದಲ್ಲಿ ಪ್ರತ್ಯಕ್ಷವಾಗಿ 20 ಸಾವಿರ ಹಾಗೂ ಪರೋಕ್ಷವಾಗಿ 54 ಸಾವಿರ ಉದ್ಯೋಗಗಳು ಸೃಷ್ಟಿಯಾಗಲಿವೆ. ಕ್ಷಿಪಣಿ ತಯಾರಿಕೆಯ ಪೂರಕ ಸೌಲಭ್ಯ , ರೇಡಾರ್- ಸಂವೇದಕ, ಯುದ್ಧ ವಿಮಾನಗಳ ದುರಸ್ತಿ - ನಿರ್ವಹಣೆ ಸೌಲಭ್ಯ (ಎಂಆರ್‌ಒ) ಸೇರಿದಂತೆ ವೈಮಾಂತರಿಕ್ಷ ಹಾಗೂ ರಕ್ಷಣಾ ವಲಯದ ಮೂಲ ಸೌಕರ್ಯಗಳನ್ನು ಅಭಿವೃದ್ಧಿಪಡಿಸಲು ಕಂಪನಿ ಉದ್ದೇಶಿಸಿದೆ. ಮೊದಲ ಹಂತದಲ್ಲಿ 1,290 ಕೋಟಿ ರೂಪಾಯಿ, 2ನೆ ಹಂತದಲ್ಲಿ 2,898 ಕೋಟಿ ರೂಪಾಯಿ ಮತ್ತು 3ನೇ ಹಂತದಲ್ಲಿ 1,512 ಕೋಟಿ ರೂಪಾಯಿ ಬಂಡವಾಳ ಹೂಡಿಕೆ ಮಾಡಲಿದೆ. ನಂತರ ಹಂತ ಹಂತವಾಗಿ ಹೂಡಿಕೆ ಪೂರ್ಣಗೊಳ್ಳಲಿದೆ.ಈ ಯೋಜನೆ ಕಾರ್ಯಗತಗೊಳಿಸಲು ಕಂಪನಿಯು ದೇವನಹಳ್ಳಿ ಬಳಿ ಭೂಮಿ ಒದಗಿಸಲು ಮನವಿ ಮಾಡಿಕೊಂಡಿದೆ. 1.8 ಕಿ.ಮೀ ಉದ್ದದ ರನ್‌ವೇ ನಿರ್ಮಾಣದ ಉದ್ದೇಶ ಕೂಡ ಇದೆ ಎಂದು ಕಂಪನಿ ಹೇಳಿದೆ. ಹಾಗಾದರೆ ಹಾಸನ, ವಿಜಯಪುರ ಹಾಗೂ ಶಿವಮೊಗ್ಗ ವಿಮಾನ ನಿಲ್ದಾಣಗಳನ್ನು ಬೇಕಾದರೂ ಪರಿಗಣಿಸಬಹುದು ಎಂದು ಸಲಹೆ ನೀಡಿದ್ದಾರೆ.

ಹಾಲಿ ಇರುವ ದೇವನಹಳ್ಳಿ ಘಟಕದ ಸನಿಹದಲ್ಲೇ ಈ ಉದ್ದೇಶಿತ ಘಟಕ ಇರಬೇಕು ಎನ್ನುವ ಬೇಡಿಕೆಯನ್ನು ಸಂಸ್ಥೆ ಪ್ರತಿನಿಧಿಗಳು ಇಟ್ಟಿದ್ದಾರೆ. ನಂತರ ಸಚಿವರು ರನ್‌ವೇ ನಿರ್ಮಾಣಕ್ಕೂ ಅನುಕೂಲ ಇರುವ ಕಡೆ ಜಾಗ ಗುರುತಿಸಲು ಅಧಿಕಾರಿಗಳಿಗೆ ಸೂಚಿಸಿದರು. ಇಂದಿನ ಹೂಡಿಕೆ ಮಾತುಕತೆ, ಕೈಗಾರಿಕೆ ಸಂಬಂಧಿಸಿದ ಚರ್ಚೆಗಳಿಗೆ ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆಯ ಪ್ರಧಾನ ಕಾರ್ಯದರ್ಶಿ ಡಾ. ಎಸ್. ಸೆಲ್ವಕುಮಾರ್, ಕೈಗಾರಿಕಾ ಇಲಾಖೆ ಆಯುಕ್ತೆ ಖುಷ್ಬೂ ಗೋಯಲ್, ಮೂಲಸೌಕರ್ಯ ಇಲಾಖೆ ಅಧಕಾರಿಳು ಹಾಗೂ ಆಯಕ್ಸಿಸ್‌ಕೇಡ್ಸ್ ಕಂಪನಿ ವ್ಯವಸ್ಥಾಪಕ ನಿರ್ದೇಶಕ ಶಾರಧಿ ಚಂದ್ರ ಬಾಬು, ನಿರ್ದೇಶಕರು ಸಾಕ್ಷಿಯಾದರು.

## ಮೋದಿಯಿಂದ ಜಾಗತಿಕವಾಗಿ ದೇಶದ ಪ್ರತಿಷ್ಠೆ ಹೆಚ್ಚಿಸುವ ಕೆಲಸ




■ ಕುತೂಹಲ ಮೂಡಿಸಿದ ಶರದ್ ಪವಾರ್ ಹೇಳಿಕೆ

**ಮುಂಬೈ, ಮೇ 12:** ಚಿನ್ನ ಖರೀದಿಸದೇ ಇರುವುದು ಸೇರಿ ದೇಶದ ಜನತೆಗೆ ಮಿತವ್ಯಯಕ್ಕೆ ಕರೆ ನೀಡಿದ್ದ ಪ್ರಧಾನಿ ನರೇಂದ್ರ ಮೋದಿ ಈಗ ವಿದೇಶ ಪ್ರವಾಸ ಕೈಗೊಂಡಿರುವುದು ವಿಪಕ್ಷಗಳಿಂದ ಭಾರೀ ಟೀಕೆಗೆ ಒಳಗಾಗಿತ್ತು. ಆದರೆ ಈಗ ಶರದ್ ಪವಾರ್ ನೀಡಿರುವ ಹೇಳಿಕೆ ವಿಪಕ್ಷಗಳ ಮೈತ್ರಿಕೂಟದಲ್ಲಿ ಭಿನ್ನಾಭಿಪ್ರಾಯ ಮೂಡಿಸುವಂತಿದೆ. ಮೋದಿ ವಿದೇಶದ ಪ್ರವಾಸದ ಬಗ್ಗೆ ಪ್ರತಿಕ್ರಿಯೆ ನೀಡಿರುವ ಎನ್ ಸಿಪಿ ನಾಯಕ ಶರದ್ ಪವಾರ್, ಪ್ರಧಾನಿ ಮೋದಿ ಜಾಗತಿಕ ಮಟ್ಟದಲ್ಲಿ ದೇಶದ ಪ್ರತಿಷ್ಠೆಯನ್ನು ಹೆಚ್ಚು ಮಾಡುವತ್ತ ಕೆಲಸ ಮಾಡುತ್ತಿದ್ದಾರೆ. ಪ್ರಧಾನಿ ಮೋದಿ ಜೊತೆ ಭಿನ್ನಾಭಿಪ್ರಾಯ ಇದೆಯಾದರೂ ಅವರು ವಿದೇಶಗಳಲ್ಲಿ ದೇಶದ ಮರ್ಯಾದೆಯನ್ನು ಎತ್ತಿ ಹಿಡಿಯುವ ಜವಾಬ್ದಾರಿ ಹೊಂದಿದ್ದಾರೆ ಎನ್ನುವುದನ್ನು ಗುರುತಿಸುವುದು ಬಹಳ ಮುಖ್ಯ ಎಂದು ಪವಾರ್ ಅಭಿಪ್ರಾಯಪಟ್ಟಿದ್ದಾರೆ. ದೇಶದ ಗೌರವವನ್ನು ಕಾಪಾಡುವ ವಿಷಯದಲ್ಲಿ ರಾಜಕೀಯ ಭಿನ್ನಾಭಿಪ್ರಾಯ ಅಡ್ಡಿಯಾಗ ಬಾರದು, ದೇಶದ ಮಾನವನ್ನು ಜಾಗತಿಕವಾಗಿ ಉಳಿಸಲು ಪ್ರಧಾನಮಂತ್ರಿ ಮೋದಿ ಶ್ರಮಿಸುತ್ತಿದ್ದಾರೆ ಎಂದು ಪವಾರ್ ಹೇಳಿದರು. ದೇಶದ ಗೌರವವು ರಾಜಕೀಯ ಪೈಪೋಟಿಗಳಿಗಿಂತ ಮೇಲಿರಬೇಕು ಮತ್ತು ಯಾವತ್ತೂ ಪಕ್ಷಪಾತಿ ರಾಜಕೀಯದ ವಿಷಯವಾಗಬಾರದು ಎಂದು ಶರದ್‌ಪವಾರ್ ಹೇಳಿದ್ದಾರೆ.

## ಸ್ಯಾಟಲೈಟ್ ಇಮೇಜಿಂಗ್ ಟೆಕ್ನಾಲಜಿ ಮೂಲಕ ಲಕ್ಕುಂಡಿ ಸ್ಮಾರಕಗಳ ಪತ್ತೆಹಚ್ಚಿ ಅನಾವರಣ

### ರಾಷ್ಟ್ರೀಯ ಉನ್ನತ ಅಧ್ಯಯನ ಸಂಸ್ಥೆ ವಿಜ್ಞಾನಿಗಳೊಂದಿಗಿನ ಸಭೆಯಲ್ಲಿ ಪ್ರವಾಸೋದ್ಯಮ ಸಚಿವ ಎಚ್.ಕೆ.ಪಾಟೀಲ್



**ಬೆಂಗಳೂರು, ಮೇ 20:** ಐತಿಹಾಸಿಕ ಲಕ್ಕುಂಡಿಯಲ್ಲಿರುವ ನೂರೊಂದು ಬಾವಿ, ನೂರೊಂದು ದೇವಾಲಯಗಳನ್ನು ಶೀಘ್ರದಲ್ಲಿಯೇ ಸ್ಯಾಟಲೈಟ್ ಇಮೇಜಿಂಗ್ ಟೆಕ್ನಾಲಜಿಯ ಮೂಲಕ ಓಖಂಖ ಸಂಸ್ಥೆ (ರಾಷ್ಟ್ರೀಯ ಉನ್ನತ ಅಧ್ಯಯನ ಸಂಸ್ಥೆ) ಸಹಕಾರದೊಂದಿಗೆ ಪತ್ತೆ ಹಚ್ಚಿ ದೇಶಕ್ಕೆ ಅನಾವರಣಗೊಳಿಸಲಾಗುವುದು ಎಂದು ಪ್ರವಾಸೋದ್ಯಮ ಸಚಿವರಾದ ಎಚ್.ಕೆ.ಪಾಟೀಲ್ ತಿಳಿಸಿದರು.

ಬೆಂಗಳೂರಿನ ವಿಧಾನಸೌಧದಲ್ಲಿ ಲಕ್ಕುಂಡಿಯಲ್ಲಿರುವ ನೂರೊಂದು ಬಾವಿ ನೂರೊಂದು ದೇವಾಲಯಗಳನ್ನು ಹೊರತರುವ ಸಲುವಾಗಿ NIAS ಸಂಸ್ಥೆ ವಿಜ್ಞಾನಿಗಳೊಂದಿಗೆ ನಡೆದ ಸಭೆಯಲ್ಲಿ ಮಾತನಾಡುತ್ತಾ ಈಗಾಗಲೇ 2023 ರಿಂದ ಲಕ್ಕುಂಡಿಯಲ್ಲಿ 32 ದೇವಾಲಯಗಳು, 28 ಬಾವಿಗಳು ಹಾಗೂ 07 ಇತರ ಸ್ಮಾರಕಗಳನ್ನು ಒಳಗೊಂಡಂತೆ ಒಟ್ಟು 70ಕ್ಕೂ ಹೆಚ್ಚು ಸ್ಮಾರಕಗಳನ್ನು ಗುರುತಿಸಲಾಗಿದೆ. ಮುಂಬರುವ ಡಿಸೆಂಬರ್ 31, 2026 ರೊಳಗೆ ಲಕ್ಕುಂಡಿಯಲ್ಲಿ 101 ಬಾವಿ 101 ದೇವಾಲಯಗಳನ್ನು ಓಖಂಖ ಸಂಸ್ಥೆ ಹಾಗೂ ಸ್ಥಳೀಯರ ಸಹಭಾಗಿತ್ವದೊಂದಿಗೆ ಅನಾವರಣಗೊಳಿಸಲು ಎಲ್ಲ ಪ್ರಯತ್ನಗಳನ್ನು ಮಾಡಲಾಗುವುದು ಎಂದರು.


ಲಕ್ಕುಂಡಿಯಲ್ಲಿರುವ ದೇವಸ್ಥಾನಗಳಿಗೆ ಹೊಸ ರೂಪ ನೀಡಲು ಈಗಾಗಲೇ ಫೆಬ್ರವರಿ ಮಾಹೆಯಲ್ಲಿ ಪಂಚ ದೇವಾಲಯ ಮತ್ತು ಪಂಚ ಬಾವಿಗಳ ಅನಾವರಣ ಕೈಗೊಂಡಿದ್ದು, ಮೇ-2 ರಿಂದ ದಶ ಬಾವಿ ದಶ ದೇವಾಲಯಗಳ ಅನಾವರಣ ಕಾರ್ಯವೂ ಸಹ ನಡೆಯುತ್ತಿದ್ದು 10 ಕೋಟಿ ವೆಚ್ಚದಲ್ಲಿ 06 ಸ್ಮಾರಕಗಳನ್ನು ಸಂಪೂರ್ಣವಾಗಿ ಸಂರಕ್ಷಣೆ ಮಾಡಿ ಅಭಿವೃದ್ಧಿಗೊಳಿಸುವ ಕಾಮಗಾರಿಗೆ ಚಾಲನೆ ನೀಡಲಾಗಿದೆ. 2026-27ನೇ ಸಾಲಿನ ಕ್ರಿಯಾಯೋಜನೆಯಲ್ಲಿ 10ಕ್ಕಿಂತಹೆಚ್ಚು ಸ್ಮಾರಕಗಳನ್ನು ಸಂರಕ್ಷಣೆ ಮಾಡಿ ಅಭಿವೃದ್ಧಿಗೊಳಿಸಲಾಗುವುದು. ಒಟ್ಟಾರೆಯಾಗಿ ಲಕ್ಕುಂಡಿಯನ್ನು ವಿಶ್ವಮಟ್ಟದಲ್ಲಿ ಗುರುತಿಸುವ ಕಾರ್ಯಕ್ಕೆ (ಯುನೆಸ್ಕೋ ಪಟ್ಟಿಗೆ ಸೇರಿಸಲು) ಮತ್ತಷ್ಟು ಉಪಕ್ರಮಗಳನ್ನು ಕೈಗೊಳ್ಳುವುದಾಗಿ ತಿಳಿಸಿದರು.

ಸಭೆಯಲ್ಲಿ 2023 ರಿಂದ ಇಲ್ಲಿಯವರೆಗೆ ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಕಾರ್ಯಚಟುವಟಿಕೆಗಳ ಕುರಿತು ಪ್ರಾಧಿಕಾರದ ಆಯುಕ್ತ ಡಾ: ಶರಣು ಗೋಗೇರಿ ಪ್ರಾತ್ಯಕ್ಷಿಕೆ ಪ್ರಸ್ತುತಪಡಿಸಿದರು. 101 ಬಾವಿ 101 ದೇವಾಲಯಗಳನ್ನು ಪತ್ತೆಹಚ್ಚುವಲ್ಲಿ ಸ್ಯಾಟಲೈಟ್ ತಂತ್ರಜ್ಞಾನದ ಬಳಕೆ ಕುರಿತು NIAS ಸಂಸ್ಥೆಯ ಪ್ರೊಫೆಸರ್ ಎಂ.ಬಿ. ರಜನಿ ಪ್ರಾತ್ಯಕ್ಷಿಕೆ ನೀಡಿದರು.

ಸಭೆಯಲ್ಲಿ ಪ್ರವಾಸೋದ್ಯಮ ಇಲಾಖೆಯ ಕಾರ್ಯದರ್ಶಿ ಡಾ: ಕೆ.ವಿ. ತ್ರಿಲೋಕಚಂದ್ರ, ಪ್ರವಾಸೋದ್ಯಮ ಇಲಾಖೆ ಆಯುಕ್ತ ಅಕ್ರಂ ಪಾಷಾ, ಇಸ್ರೋದ ವಿಜ್ಞಾನಿ ಹಾಗೂ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ವಿಜೇತ ಪ್ರೊ. ರಾಮನಗೌಡ ನಾಡಗೌಡರ, ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ರಾಜ್ಯಮಟ್ಟದ ಸಲಹಾ ಸಮಿತಿ ಸದಸ್ಯರಾದ ಸಿದ್ಧಲಿಂಗೇಶ್ವರ ಪಾಟೀಲ ಹಾಗೂ ಅ.ಧ. ಕಟ್ಟಿಮನಿ. ಪುರಾತತ್ತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ ನಿರ್ದೇಶಕರಾದ ಡಾ: ಆರ್. ಶೇಜೇಶ್ವರ, ಸ್ಮಿತಾ ರೆಡ್ಡಿ, ಇಸ್ರೋ ಹಾಗೂ NIAS ಸಂಸ್ಥೆಯ ವಿಜ್ಞಾನಿಗಳು, ಸಂಶೋಧಕರು ಸೇರಿದಂತೆ ಮೊದಲಾದವರು ಪಾಲ್ಗೊಂಡಿದ್ದರು.

**ಯುನೆಸ್ಕೋ ಪಟ್ಟಿಗೆ ಸೇರಿಸುವ ಪ್ರಸ್ತಾವನೆ ಕಾರ್ಯ ಪ್ರಗತಿ:** ಲಕ್ಕುಂಡಿಯನ್ನು ವಿಶ್ವಪಾರಂಪರಿಕ ತಾಣಗಳ ಪಟ್ಟಿಗೆ (ಯುನೆಸ್ಕೋ) ಸೇರಿಸಲು ಪ್ರಸ್ತಾವನೆ ಸಿದ್ಧಪಡಿಸುವ ಕಾರ್ಯ ಪ್ರಗತಿಯಲ್ಲಿದ್ದು ಯುನೆಸ್ಕೋ ಪಟ್ಟಿಗೆ ಸೇರಿಸಲು ನವಂಬರ್-2024 ರಲ್ಲಿ ಪ್ರಾಚ್ಯಾವಶೇಷಗಳ ಅನ್ವೇಷಣೆ ಭಾಗ-1ನ್ನು ನಡೆಸಿ 1500ಕ್ಕೂ ಹೆಚ್ಚು ಪ್ರಾಚ್ಯಾವಶೇಷಗಳನ್ನು ಅನ್ವೇಷಿಸಲಾಗಿದೆ. ಜೊತೆಗೆ 2026 ರ ಮೇ-02 ರಿಂದ ಪ್ರಾಚ್ಯಾವಶೇಷಗಳ ಅನ್ವೇಷಣೆ ಭಾಗ-2 ನ್ನು ನಡೆಸುತ್ತಿದ್ದು, ಈಗಾಗಲೇ ಎರಡನೇ ಹಂತದಲ್ಲಿ 1800ಕ್ಕೂ ಹೆಚ್ಚು ಪ್ರಾಚ್ಯಾವಶೇಷಗಳು ದೊರೆತಿವೆ. ಮೊದಲ ಹಂತ ಮತ್ತು ಎರಡನೇ ಹಂತದ ಪ್ರಾಚ್ಯಾವಶೇಷಗಳನ್ನು ಸೇರಿಸಿ ಜೂನ್-30 ರ ಒಳಗಾಗಿ ದಾಖಲೆಯ ರೀತಿಯ 5000ಕ್ಕೂ ಹೆಚ್ಚು ಪ್ರಾಚ್ಯಾವಶೇಷಗಳನ್ನು ಅನ್ವೇಷಿಸಿ ಅವುಗಳನ್ನು ಬಯಲು ವಸ್ತು ಸಂಗ್ರಹಾಲಯದಲ್ಲಿ ಪ್ರದರ್ಶಿಸಲು ಸಹ ಅಗತ್ಯ ಕ್ರಮ ವಹಿಸಲಾಗಿದೆ ಎಂದು ಎಚ್.ಕೆ. ಪಾಟೀಲ್ ತಿಳಿಸಿದರು.

### ಪಾರಂಪರಿಕ ಪಟ್ಟಿಗೆ ಸೇರುವುದು ಅಗತ್ಯ



ಸಭೆಯಲ್ಲಿ ಇಸ್ರೋ ನಿವೃತ್ತ ಅಧ್ಯಕ್ಷ ಡಾ. ಕಿರಣ ಕುಮಾರ್ ಮಾತನಾಡಿ, ಲಕ್ಕುಂಡಿ ವಿಶ್ವ ಪಾರಂಪರಿಕ ತಾಣಗಳ ಪಟ್ಟಿಗೆ ಸೇರ್ಪಡೆಯಾಗುವುದು ಅಗತ್ಯವಾಗಿದೆ. ಆ ದಿಸೆಯಲ್ಲೆ ಪ್ರಯತ್ನ ಸ್ವಾಗತಾರ್ಹ. ಸ್ಯಾಟಲೈಟ್ ತಂತ್ರಜ್ಞಾನ ಬಳಸಿ ಲಕ್ಕುಂಡಿಯಲ್ಲಿರುವ 101 ಭಾವಿ ಹಾಗೂ 101 ದೇವಾಲಯಗಳನ್ನು ಅನಾವರಣಗೊಳಿಸುವ ಪ್ರಯತ್ನಕ್ಕೆ ಕೈಜೊಡಿಸುವುದಾಗಿ ಇಸ್ರೋದ ಮಾಜಿ ಅಧ್ಯಕ್ಷರು ತಿಳಿಸಿದರು. ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ರಾಜ್ಯ ಸಲಹಾ ಸಮಿತಿ ಸದಸ್ಯ ಸಿದ್ದಲಿಂಗೇಶ್ವರ ಪಾಟೀಲ ಮಾತನಾಡಿ, ಲಕ್ಕುಂಡಿ ಯುನೆಸ್ಕೋ ಪಟ್ಟಿಗೆ ಸೇರಿಸಲು ಪ್ರವಾಸೋದ್ಯಮ ಸಚಿವರಾದ ಎಚ್.ಕೆ.ಪಾಟೀಲ ಕೈಗೊಂಡಿರುವ ಎಲ್ಲಾ ಕಾರ್ಯಗಳಿಗೆ ಸ್ಥಳೀಯರ ಸಂಪೂರ್ಣ ಸಹಕಾರವಿದೆ ಎಂದರು.

# ನಾರ್ವೆಯ ಪ್ರಮುಖ ದಿನಪತ್ರಿಕೆಯಲ್ಲಿ ಪ್ರಧಾನಿ ಮೋದಿ ಅವರಿಗೆ ಅವಮಾನ

## ವಿವಾದತ್ಮಾಕ ವ್ಯಂಗ್ಯಚಿತ್ರಕ್ಕೆ ಭಾರತೀಯರ ಖಂಡನೆ

**ನವದೆಹಲಿ, ಮೇ 20:** ಭಾರತ–ನಾರ್ಡಿಕ್ ಶೃಂಗಸಭೆಯ ಸಂದರ್ಭದಲ್ಲಿ ನಾರ್ವೆಯ ಪ್ರಮುಖ ದಿನಪತ್ರಿಕೆ ಆಫ್ಟೆನ್ಪೋಸ್ಟನ್ ಪ್ರಧಾನಿ ನರೇಂದ್ರ ಮೋದಿ ಅವರನ್ನು ಹಾವಾಡಿಗನಂತೆ ಚಿತ್ರಿಸುವ ವಿವಾದಾತ್ಮಕ ವ್ಯಂಗ್ಯಚಿತ್ರವನ್ನು ಪ್ರಕಟಿಸಿದ್ದು, ಭಾರತದಲ್ಲಿ ತೀವ್ರ ವಿರೋಧಕ್ಕೆ ಕಾರಣವಾಗಿದೆ. ಸಾಮಾಜಿಕ ಜಾಲತಾಣಗಳಲ್ಲಿ ಈ ಕ್ರಮವನ್ನು ವಸಾಹತುಶಾಹಿ ಮನೋಭಾವದ ಜನಾಂಗೀಯ ನಿಂದನೆ ಎಂದು ಖಂಡಿಸಲಾಗುತ್ತಿದೆ.

ನಾರ್ವೆಯಲ್ಲಿ ನಡೆದ ಭಾರತ–ನಾರ್ಡಿಕ್ ಶೃಂಗಸಭೆಯ ನಂತರದ ಸುದ್ದಿಗೋಷ್ಠಿಯಲ್ಲಿ ಒಬ್ಬ ಪತ್ರಕರ್ತೆಯ ಪ್ರಶ್ನೆಗಳಿಗೆ ಪ್ರಧಾನಿ ಮೋದಿ ಉತ್ತರಿಸದೆ ಹೊರಟುಹೋದ ಘಟನೆಯ ಹಿನ್ನೆಲೆಯಲ್ಲಿ ಈ ವ್ಯಂಗ್ಯಚಿತ್ರ ಪ್ರಕಟವಾಗಿದೆ.

ಪತ್ರಿಕೆಯಲ್ಲಿ ಪ್ರಕಟವಾದ ಚಿತ್ರದಲ್ಲಿ ಪ್ರಧಾನಿ ಮೋದಿ ಅವರು ಹಾವಾಡಿಗರಂತೆ ಕಾಣುವಂತೆ ಚಿತ್ರಿಸಲಾಗಿದ್ದು, ಅವರ ಕೈಯಲ್ಲಿ ಇಂಧನ ಪೈಪ್



ಅನ್ನು ಹಾವಿನಂತೆ ಬಿಂಬಿಸಲಾಗಿದೆ. ಲೇಖನಕ್ಕೆ 'ಚೋರ ಮತ್ತು ಸ್ವಲ್ಪ ಕಿರಿಕಿರಿ ವ್ಯಕ್ತಿ' ಎಂಬ ಅವಹೇಳನಕಾರಿ ಶೀರ್ಷಿಕೆ ನೀಡಲಾಗಿದೆ.

ಈ ವ್ಯಂಗ್ಯಚಿತ್ರ ಭಾರತೀಯದಲ್ಲಿ ಆಕ್ರೋಶಕ್ಕೆ ಕಾರಣವಾಗಿದೆ. ಸಾಮಾಜಿಕ ಮಾಧ್ಯಮಗಳಲ್ಲಿ ನೆಟ್ಟಿಗರು ಇದನ್ನು ವೃತ್ತಿಪರವಲ್ಲದ ಪತ್ರಿಕೋದ್ಯಮ, ಆಘಾತಕಾರಿ ಮತ್ತು ವಸಾಹತುಶಾಹಿ ಕಾಲದ ಜನಾಂಗೀಯ ದ್ವೇಷ ಎಂದು ತೀವ್ರವಾಗಿ ಟೀಕಿಸಿದ್ದಾರೆ. ಪಶ್ಚಿಮ ಮಾಧ್ಯಮಗಳಲ್ಲಿ ಭಾರತ ಮತ್ತು ಅದರ ನಾಯಕರನ್ನು ಚಿತ್ರಿಸುವ ರೀತಿಯಲ್ಲಿ ಇನ್ನೂ ವಸಾಹತುಶಾಹಿ ಮನೋಭಾವ ಉಳಿದಿದೆ ಎಂಬ ವಿಮರ್ಶೆಗಳು ಹೆಚ್ಚಾಗುತ್ತಿವೆ. ಪ್ರಧಾನಿ ಮೋದಿ ಅವರ ಪ್ರವಾಸದ ಸಂದರ್ಭದಲ್ಲಿ ಪತ್ರಕರ್ತೆಯೊಬ್ಬರು ಭಾರತದಲ್ಲಿ ಪ್ರಶ್ನೆ ಕೇಳಲು ಅವಕಾಶವಿಲ್ಲವೇಕೆ ಎಂದು ಪ್ರಶ್ನಿಸಿದ್ದರು. ಈ ಹಿನ್ನೆಲೆಯಲ್ಲಿ ಪತ್ರಿಕೆಯ ಕ್ರಮವು ಹೆಚ್ಚು ವಿವಾದಕ್ಕೆ ಎಡೆ ಮಾಡಿಕೊಟ್ಟಿದೆ. ಭಾರತೀಯರು ಈ ವ್ಯಂಗ್ಯಚಿತ್ರವನ್ನು ಖಂಡಿಸುತ್ತಾ, ಪತ್ರಿಕೆಯು ಮಾಧ್ಯಮ ಸ್ವಾತಂತ್ರ್ಯದ ಹೆಸರಲ್ಲಿ ವಿದೇಶಿ ನಾಯಕನನ್ನು ಅಪಮಾನಿಸುವ ಕೆಲಸ ಮಾಡಿದೆ ಎಂದು ಅಭಿಪ್ರಾಯ ವ್ಯಕ್ತಪಡಿಸುತ್ತಿದ್ದಾರೆ. ಈ ವಿಷಯದಲ್ಲಿ ನಾರ್ವೆ ಪತ್ರಿಕೆಯಿಂದ ಇನ್ನೂ ಯಾವುದೇ ಪ್ರತಿಕ್ರಿಯೆ ಬಂದಿಲ್ಲ.




ದಕ್ಷಿಣ ಕೊರಿಯಾದ ಸಿಯೋಲ್‌ನಲ್ಲಿ ಬುಧವಾರ ನಡೆದ ಭಾರತ–ರಿಪಬ್ಲಿಕ್ ಆಫ್ ಕೊರಿಯಾ ರಕ್ಷಣಾ ಉದ್ಯಮ ವ್ಯವಹಾರ ದುಂಡುಮೇಜಿನ ಸಂದರ್ಭದಲ್ಲಿ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಸಮೂಹ ಛಾಯಾಚಿತ್ರದಲ್ಲಿ ಪಾಲ್ಗೊಂಡರು.

## ನಾರ್ವೆ ಪತ್ರಕರ್ತೆ ಹೆಲ್ಲೆ ಲೈಂಗ್ ಇನ್ಸ್ಟಾಗ್ರಾಮ್ ಮತ್ತು ಫೇಸ್ಬುಕ್ ಅಮಾನತು

**ನವದೆಹಲಿ, ಮೇ 20:** ಭಾರತ ಪ್ರಧಾನಿ ನರೇಂದ್ರ ಮೋದಿ ನಾರ್ವೆಗೆ ಭೇಟಿ ನೀಡಿದ ವೇಳೆ ಅವರನ್ನು ಪ್ರಶ್ನಿಸಿದ್ದಕ್ಕಾಗಿ ವೈರಲ್ ಆಗಿದ್ದ ನಾರ್ವೇಜಿಯನ್ ಪತ್ರಕರ್ತೆ ಹೆಲ್ಲೆ ಲೈಂಗ್ ಅವರ ಇನ್ಸ್ಟಾಗ್ರಾಮ್ ಮತ್ತು ಫೇಸ್ಬುಕ್ ಖಾತೆಗಳನ್ನು ಅಮಾನತು ಮಾಡಲಾಗಿದೆ. ಈ ವಿಷಯವನ್ನು ಸ್ವತಃ ಹೆಲ್ಲೆ ಲೈಂಗ್ ತಮ್ಮ ಎಕ್ಸ್ ಖಾತೆಯಲ್ಲಿ ಬರೆದುಕೊಂಡಿದ್ದಾರೆ. ಡಾಗ್ಸಾವಿಸೆನ್ ಪತ್ರಿಕೆಯ ಪತ್ರಕರ್ತೆಯಾದ ಹೆಲ್ಲೆ ಲೈಂಗ್ ಅವರು ಮೋದಿ ಮತ್ತು ನಾರ್ವೆ ಪ್ರಧಾನಿ ಜೋನಾಸ್ ಗಾರ್ ಸ್ಟೋರ್ ಅವರ ಜಂಟಿ ಮಾಧ್ಯಮ ಸಭೆಯ ನಂತರ ಮೋದಿ ಅವರನ್ನು ಪ್ರೆಸ್‌ಗೆ ಪ್ರಶ್ನೆ ಕೇಳಲು ಅವಕಾಶ ನೀಡುವುದಿಲ್ಲವೇ ಎಂದು ಪ್ರಶ್ನಿಸಿದ್ದರು. ಈ ಘಟನೆ ವೈರಲ್ ಆಗಿ ಭಾರತೀಯ ಸಾಮಾಜಿಕ ಮಾಧ್ಯಮಗಳಲ್ಲಿ ಭಾರೀ ಚರ್ಚೆಗೆ ಕಾರಣವಾಗಿತ್ತು. ಈ ಘಟನೆಯ ನಂತರ ತಮ್ಮ ಇನ್ಸ್ಟಾಗ್ರಾಮ್ ಮತ್ತು ಫೇಸ್ಬುಕ್ ಖಾತೆಗಳಿಗೆ ಲಾಗಿನ್ ಆಗಲು ಸಾಧ್ಯವಾಗುತ್ತಿಲ್ಲ ಎಂದು ಹೆಲ್ಲೆ ಲೈಂಗ್ ತಮ್ಮ ಎಕ್ಸ್ (ಟ್ವಿಟ್ಟರ್) ಖಾತೆಯಲ್ಲಿ



ಪೋಸ್ಟ್ ಮಾಡಿದ್ದಾರೆ. ಸ್ಕ್ರೀನ್‌ಶಾಟ್‌ಗಳನ್ನು ಹಂಚಿಕೊಂಡ ಅವರು, ಪ್ರೆಸ್ ಸ್ವಾತಂತ್ರ್ಯಕ್ಕಾಗಿ ಸಣ್ಣ ಬೆಲೆ ಇದು ಎಂದು ಬರೆದಿದ್ದಾರೆ. ಇದುವರೆಗೆ ಮೆಟಾ ಕಂಪನಿಯಿಂದ ಯಾವುದೇ ಅಧಿಕೃತ ಪ್ರತಿಕ್ರಿಯೆ ಬಂದಿಲ್ಲ. ಹೆಲ್ಲೆ ಅವರು ಎಕ್ಸ್‌ನಲ್ಲಿ ಸಕ್ರಿಯರಾಗಿದ್ದು, ತಮ್ಮ ಖಾತೆಗಳನ್ನು ಮರಳಿ ಪಡೆಯುವ ಪ್ರಯತ್ನ ಮಾಡುತ್ತಿದ್ದಾರೆ ಎಂದು ಹೇಳಿದ್ದಾರೆ. ಈ ವಿಷಯವು ಭಾರತ– ನಾರ್ವೆ ಸಂಬಂಧಗಳ ನಡುವೆ ಮತ್ತು ಮಾಧ್ಯಮ ಸ್ವಾತಂತ್ರ್ಯದ ಬಗ್ಗೆ ಚರ್ಚೆಗೆ ಕಾರಣವಾಗಿದೆ.

# ಪತ್ರಿಕಾ ಸ್ವಾತಂತ್ರ್ಯ ಸೂಚ್ಯಂಕ: ನಾರ್ವೆ ನಂ.1, ಭಾರತ 157

**ನವದೆಹಲಿ, ಮೇ 20:** ಪ್ರಧಾನಿ ಮೋದಿ ಅವರು ನಾರ್ವೆ ಪ್ರವಾಸದಲ್ಲಿದ್ದ ಸಮಯದಲ್ಲಿ ಅವರಿಗೆ ನಾರ್ವೇಜಿಯನ್ ಪತ್ರಕರ್ತೆ ಹೆಲ್ಲೆ ಲಿಂಗ್ ಕೇಳಿದ ಪ್ರಶ್ನೆಗಳು ಮತ್ತು ಮೋದಿ ಅವರ ನಿರುತ್ತರ ಜಾಗತಿಕ ಮಟ್ಟದಲ್ಲಿ ಭಾರೀ ಸದ್ದು ಮಾಡುತ್ತಿದೆ. ಹೆಲ್ಲೆ ಲಿಂಗ್ ಅವರು ಪತ್ರಿಕಾ ಸ್ವಾತಂತ್ರ್ಯದ ಶ್ರೇಯಾಂಕದಲ್ಲಿ ನಾರ್ವೆ ದೇಶ ಹೊಂದಿರುವ ಅಗ್ರಸ್ಥಾನವನ್ನು ಉಲ್ಲೇಖಿಸಿದ ಪ್ರಶ್ನೆಯು ವಿಶ್ವ ಪತ್ರಿಕಾ ಸ್ವಾತಂತ್ರ್ಯ ಸೂಚ್ಯಂಕ ಮತ್ತು ಅದನ್ನು ಜಾಗತಿಕವಾಗಿ ಹೇಗೆ ಅರ್ಥೈಸಲಾಗುತ್ತದೆ ಹಾಗೂ ಪ್ರಜಾಪ್ರಭುತ್ವ ರಾಷ್ಟ್ರಗಳಲ್ಲಿ ಪತ್ರಿಕಾ ಸ್ವಾತಂತ್ರ್ಯವನ್ನು ಹೇಗೆ ರೂಪಿಸಲಾಗುತ್ತದೆ ಎಂಬುದರ ಕುರಿತೂ ಚರ್ಚೆಯನ್ನು ಮುನ್ನೆಲೆಗೆ ತಂದಿದೆ.

ಅಂದಹಾಗೆ, ಜಾಗತಿಕ ಮಟ್ಟದಲ್ಲಿ ಪ್ರಜಾಪ್ರಭುತ್ವದ ನಾಲ್ಕನೇ ಸ್ತಂಭ ಎಂದೇ ಕರೆಯಲ್ಪಡುವ ಪತ್ರಿಕಾ ಸ್ವಾತಂತ್ರ್ಯದ ಸ್ಥಿತಿಗತಿಯನ್ನು ಅಳೆಯುವ ವಿಶ್ವ ಪತ್ರಿಕಾ ಸ್ವಾತಂತ್ರ್ಯ ಸೂಚ್ಯಂಕ ಪ್ರತಿವರ್ಷ ಜಾಗತಿಕ ಮಾಧ್ಯಮಗಳ ಪರಿಸ್ಥಿತಿಯನ್ನು ವಿವರಿಸುತ್ತದೆ. ಇದನ್ನು ಮಾಧ್ಯಮಗಳ ಸ್ವಾತಂತ್ರ್ಯ ಮತ್ತು ಪತ್ರಕರ್ತರ ಸುರಕ್ಷತೆಯ ಮೇಲೆ ಕೇಂದ್ರೀಕರಿಸುವ ಅಂತಾರಾಷ್ಟ್ರೀಯ ಸರ್ಕಾರೇತರ ಸಂಸ್ಥೆಯಾದ ರಿಪೋರ್ಟರ್ಸ್ ವಿತೌಟ್ ಬಾರ್ಡರ್ಸ್ (ಖಖಈ) ಪ್ರಕಟಿಸುತ್ತದೆ. ಆರ್‌ಎಸ್‌ಎಫ್ ಸಂಸ್ಥೆಯು 2002ರಿಂದಲೂ ಈ ಸೂಚ್ಯಂಕವು ಜಗತ್ತಿನ 180 ದೇಶಗಳಲ್ಲಿ ಪತ್ರಕರ್ತರು ಮತ್ತು ಮಾಧ್ಯಮ ಸಂಸ್ಥೆಗಳು ಕಾರ್ಯನಿರ್ವಹಿಸುವ ವಾತಾವರಣವನ್ನು ಆಧರಿಸಿ ಅವುಗಳಿಗೆ ಶ್ರೇಯಾಂಕವನ್ನು ನೀಡುತ್ತಾ ಬಂದಿದೆ.

ಈ ಪಟ್ಟಿಯಲ್ಲಿ ದೇಶಗಳಿಗೆ 0ಯಿಂದ 100ರವರೆಗಿನ ಅಂಕಗಳನ್ನು ನೀಡಲಾಗುತ್ತದೆ. ಇದರಲ್ಲಿ ಹೆಚ್ಚಿನ ಅಂಕಗಳನ್ನು ಪಡೆಯುವ ದೇಶಗಳು ಪತ್ರಿಕಾ ಸ್ವಾತಂತ್ರ್ಯಕ್ಕೆ ಬಲವಾದ ಮತ್ತು ಪೂರಕವಾದ ವಾತಾವರಣವನ್ನು ಹೊಂದಿವೆ ಎಂಬುದನ್ನು ಸೂಚಿಸುತ್ತದೆ. ಈ ಶ್ರೇಯಾಂಕಗಳನ್ನು ಮಾಧ್ಯಮದ ವರದಿಗಾರಿಕೆಯ ಗುಣಮಟ್ಟ ಅಥವಾ ಅವುಗಳ ಸೈದ್ಧಾಂತಿಕ ಒಲವನ್ನು ಅಳೆಯಲು ಬಳಸದೆ, ಕೇವಲ ಪತ್ರಕರ್ತರಿಗೆ ಅಲ್ಲಿ ಸಿಗುವ ಸ್ವಾತಂತ್ರ್ಯದ ಮಟ್ಟವನ್ನು ಮೌಲ್ಯಮಾಪನ ಮಾಡಲು ವಿನ್ಯಾಸಗೊಳಿಸಲಾಗಿದೆ. ಈ ಪತ್ರಿಕಾ ಸ್ವಾತಂತ್ರ್ಯದ ಪಟ್ಟಿಯಲ್ಲಿ ನಾರ್ವೆ ದೇಶವು ಸತತವಾಗಿ ಮೊದಲ ಸ್ಥಾನವನ್ನು ಕಾಯ್ದುಕೊಂಡಿದೆ. ಜಗತ್ತಿನ ಅತೀ ದೊಡ್ಡ ಪ್ರಜಾಪ್ರಭುತ್ವ ರಾಷ್ಟ್ರವಾದ ಭಾರತವು ವರ್ಷದಿಂದ ವರ್ಷಕ್ಕೆ ಕೆಳ ಹಂತಕ್ಕೆ ಕುಸಿಯುತ್ತಿದೆ. ಕಳೆದ ವರ್ಷ 153ನೇ ಸ್ಥಾನದಲ್ಲಿದ್ದ ಭಾರತ, ಈಗ 157 ಸ್ಥಾನಕ್ಕೆ ಇಳಿದಿದೆ.

ಪತ್ರಿಕಾ ಸ್ವಾತಂತ್ರ್ಯ ಸೂಚ್ಯಂಕದಲ್ಲಿ ನಾರ್ವೆ 92.72 ಅಂಕಗಳೊಂದಿಗೆ ಅಗ್ರಸ್ಥಾನದಲ್ಲಿದೆ. ಆ ರಾಷ್ಟ್ರದಲ್ಲಿ ಮಾಧ್ಯಮಗಳು ಮತ್ತು ಪತ್ರಕರ್ತರು ಸಂಪೂರ್ಣ ಸ್ವಾತಂತ್ರ್ಯ ಮತ್ತು ನಿಷ್ಪಕ್ಷಪಾತವಾಗಿ ಕಾರ್ಯನಿರ್ವಹಿಸುತ್ತಿದ್ದಾರೆ ಎಂಬುದನ್ನು ಆರ್‌ಎಸ್‌ಎಫ್ ಒತ್ತಿಹೇಳಿದೆ. ನಂತರ ಸ್ಥಾನಗಳಲ್ಲಿ ನೆದರ್ಲ್ಯಾಂಡ್ಸ್ (88.92), ಎಸ್ಟೋನಿಯಾ (88.54), ಡೆನ್ಮಾರ್ಕ್ (88.47), ಸ್ವೀಡನ್ (87.61), ಫಿನ್‌ಲ್ಯಾಂಡ್ (86.22), ಐರ್ಲೆಂಡ್ (85.93), ಸ್ವಿಟ್ಜರ್ಲ್ಯಾಂಡ್ (84.83), ಲಕ್ಸೆಂಬರ್ಗ್ (84.14) ಹಾಗೂ ಪೋರ್ಚುಗಲ್ (83.71) ರಾಷ್ಟ್ರಗಳಿವೆ. ಜಗತ್ತಿನ ಅತೀ ದೊಡ್ಡ ಪ್ರಜಾಪ್ರಭುತ್ವ ರಾಷ್ಟ್ರವಾದ ಭಾರತವು 31.28 ಅಂಕಗಳೊಂದಿಗೆ 157ನೇ ಸ್ಥಾನಕ್ಕೆ ಕುಸಿದಿದೆ.

ಅಭಿವ್ಯಕ್ತಿ ಸ್ವಾತಂತ್ರ್ಯ ಮತ್ತು ಮಾಧ್ಯಮಗಳ ಸ್ವಾಯತ್ತತೆಗೆ ಸಂಬಂಧಿಸಿದಂತೆ ನಾರ್ವೆ ಮತ್ತು ಭಾರತದ ನಡುವೆ ಇರುವ ಬೃಹತ್ ವ್ಯತ್ಯಾಸ ಮತ್ತು ಅದಕ್ಕೆ ಕಾರಣವಾಗಿರುವ ರಾಜಕೀಯ, ಸಾಮಾಜಿಕ ಹಾಗೂ ಕಾನೂನಿನ ಚೌಕಟ್ಟುಗಳನ್ನು ನೋಡುವ ಅಗತ್ಯವೂ ಇದೆ.




ದೆಹಲಿ ಮುಖ್ಯಮಂತ್ರಿ ರೇಖಾ ಗುಪ್ತಾ, ಸಂಪುಟ ಸಚಿವ ಕಪಿಲ್ ಮಿಶ್ರಾ ಅವರೊಂದಿಗೆ ಬುಧವಾರ ನವದೆಹಲಿಯ ಸಿವಿಲ್ ಲೈನ್ಸ್‌ನ ಮುಖ್ಯಮಂತ್ರಿ ಜನಸೇವಾ ಸದನದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಸರ್ಕಾರದ 'ದೆಹಲಿ ಪ್ರತಿಭಾನ್ವೇಷಣೆ'ಯನ್ನು ಘೋಷಿಸಿದರು.

## ರೋಮ್‌ನಲ್ಲಿ ರೀಲ್ಸ್ ಮಾಡುತ್ತಿರುವ ಮೋದಿ: ರಾಹುಲ್ ಗಾಂಧಿ ಟೀಕೆ



**ನವದೆಹಲಿ, ಮೇ 20:** ಇಟಲಿ ಪ್ರಧಾನಿ ಜಾರ್ಜಿಯಾ ಮೆಲೋನಿ ಅವರಿಗೆ ಪ್ರಧಾನಿ ನರೇಂದ್ರ ಮೋದಿ ಅವರು ಮೆಲೋಡಿ ಚಾಕೊಲೇಟ್ ನೀಡಿ ಮಾಡಿರುವ ರೀಲ್ಸ್ ಸದ್ಯ ಸಾಮಾಜಿಕ ಜಾಲತಾಣದಲ್ಲಿ ಭಾರೀ ವೈರಲ್ ಆಗುತ್ತಿದೆ. ಈ ವಿಡಿಯೋವನ್ನು ಉಲ್ಲೇಖಿಸಿ ಲೋಕಸಭೆ ವಿಪಕ್ಷ ನಾಯಕ ರಾಹುಲ್ ಗಾಂಧಿ ಪ್ರಧಾನಿ ಮೋದಿಯನ್ನು ತರಾಟೆಗೆ ತೆಗೆದುಕೊಂಡಿದ್ದಾರೆ. ದೇಶದಲ್ಲಿ ತೀವ್ರ ಆರ್ಥಿಕ ಸಂಕಷ್ಟ ಎದುರಾಗಿದ್ದರೂ ಪ್ರಧಾನಿ ವಿದೇಶದಲ್ಲಿ ರೀಲ್ಸ್ ಮಾಡುತ್ತಾ ಕಾಲ ಕಳೆಯುತ್ತಿದ್ದಾರೆ ಎಂದು ಟೀಕಿಸಿದ್ದಾರೆ.

ಪ್ರಧಾನಿ ಮೋದಿ ಮತ್ತು ಮೆಲೋನಿ ಇವರಿಬ್ಬರ ಸ್ನೇಹವನ್ನು ಮೆಲೋಡಿ ಎಂದು ಬಿಜೆಪಿಗರು ಹೇಳುತ್ತಿದ್ದರು.

ಈ ನಡುವೆ ಪ್ರಧಾನಿ ಮೋದಿ ಅವರು ಮೆಲೋನಿ ಅವರಿಗೆ ಮೆಲೋಡಿ ಚಾಕೊಲೇಟ್ ಅನ್ನು ಉಡುಗೊರೆಯಾಗಿ ನೀಡಿದ್ದಾರೆ. ಈ ವಿಡಿಯೋವನ್ನು ಮೆಲೋನಿ ತಮ್ಮ ಅಧಿಕೃತ ಸಾಮಾಜಿಕ ಜಾಲತಾಣ ಖಾತೆಯಲ್ಲಿ ಹಂಚಿಕೊಂಡಿದ್ದಾರೆ.

ವಿಡಿಯೋದಲ್ಲಿ ಮೆಲೋನಿ ಅವರು, ಪ್ರಧಾನಿ ಮೋದಿ ಅವರು ನನಗೆ ತುಂಬಾ ರುಚಿಕರವಾದ ಭಾರತೀಯ ಟಾಫಿ ಮೆಲೋಡಿಯನ್ನು ಉಡುಗೊರೆಯಾಗಿ ತಂದಿದ್ದಾರೆ ಎಂದು ಹೇಳುತ್ತಾ ನಗುವುದು ಕಾಣಬಹುದು. ಇದಕ್ಕೆ ಮೋದಿ ಅವರು ಕೂಡ ನಗುವಿನ ಮೂಲಕ ಪ್ರತಿಕ್ರಿಯಿಸಿದ್ದಾರೆ. ಈ ವಿಡಿಯೋ ವೈರಲ್ ಆಗುತ್ತಿದ್ದಂತೆ ವಿಪಕ್ಷಗಳು ಪ್ರಧಾನಿ ಮೋದಿ ಅವರನ್ನು ಟೀಕಿಸಿದೆ.

ದೇಶದ ರೈತರು, ಯುವಕರು, ಮಹಿಳೆಯರು, ಕಾರ್ಮಿಕರು ಹಾಗೂ ಸಣ್ಣ ವ್ಯಾಪಾರಿಗಳು ಬೆಲೆ ಏರಿಕೆ ಮತ್ತು ಆರ್ಥಿಕ ಚಂಡಮಾರುತದಿಂದಾಗಿ ಕಣ್ಣೀರು ಹಾಕುತ್ತಿದ್ದಾರೆ. ದೇಶ ಇಂತಹ ಕಠಿಣ ಪರಿಸ್ಥಿತಿಯಲ್ಲಿದ್ದರೂ, ಪ್ರಧಾನಿ ಮೋದಿ ಇಟಲಿಯಲ್ಲಿ ನಗುತ್ತಾ ರೀಲ್ಸ್ ಮಾಡುತ್ತಿದ್ದಾರೆ, ಸಿಹಿತಿಂಡಿ ಹಂಚುತ್ತಿದ್ದಾರೆ. ಇದು ಕೇವಲ ಗಿಮಿಕ್ (ನೌಟಂಕಿ), ನಾಯಕತ್ವವಲ್ಲ ಎಂದು ಹೇಳಿದ್ದಾರೆ.

ಸಾರ್ವಜನಿಕರಿಗೆ ವಿದೇಶಿ ಪ್ರವಾಸ ಮಾಡಬೇಡಿ, ಪೆಟ್ರೋಲ್–ಡೀಸೆಲ್ ಕಡಿಮೆ ಬಳಸಿ ಎಂದು ಪ್ರಧಾನಿ ಕರೆ ನೀಡಿದ್ದರು. ಆದರೆ ತಾವೇ ಕೋಟ್ಯಂತರ ರೂಪಾಯಿ ವೆಚ್ಚದ ವಿಮಾನದಲ್ಲಿ ವಿದೇಶ ಪ್ರವಾಸ ಮಾಡುತ್ತಿದ್ದಾರೆ ಎಂದು ರಾಹುಲ್ ಆಕ್ರೋಶ ವ್ಯಕ್ತಪಡಿಸಿದ್ದಾರೆ.

## ಮೋದಿ ಅಮಿತ್ ಶಾ ದೇಶದ್ರೋಹಿಗಳು ಎಂದ ರಾಹುಲ್ ಗಾಂಧಿಗೆ ಬಿಜೆಪಿ ತಿರುಗೇಟು

ರಾಯಬರೇಲಿ, ಮೇ 20: ಪ್ರಧಾನಿ ನರೇಂದ್ರ ಮೋದಿ, ಗೃಹ ಸಚಿವ ಅಮಿತ್ ಶಾ ದೇಶದ್ರೋಹಿಗಳು, ಬಿಜೆಪಿ–ಆರ್‌ಎಸ್‌ಎಸ್ ನವರು ನಿಮ್ಮ ಮುಂದೆ ಬಂದು ನರೇಂದ್ರ ಮೋದಿ–ಅಮಿತ್ ಶಾ ಬಗ್ಗೆ ಮಾತನಾಡಿದರೆ, ಅವರು ಗದ್ದಾರ್ ಎಂದು ಸ್ಪಷ್ಟವಾಗಿ ಹೇಳಿ ಎಂದು ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ವಾಗ್ದಾಳಿ ನಡೆಸಿದ್ದಾರೆ.

ಉತ್ತರ ಪ್ರದೇಶದ ರಾಯ್ ಬರೇಲಿಯಲ್ಲಿ ಪೆಟ್ರೋಲ್ ಡಿಸೇಲ್ ಬೆಲೆ ಏರಿಕೆಗೆ ಸಂಬಂಧಿಸಿದಂತೆ ಮಾತನಾಡಿದ ಅವರು, ನರೇಂದ್ರ ಮೋದಿ, ಅಮಿತ್ ಶಾ ದೇಶವನ್ನು ಮಾರಾಟ ಮಾಡುವ ಕೆಲಸ ಮಾಡಿದ್ದಾರೆ. ಸಂವಿಧಾನಕ್ಕೆ ದಕ್ಕೆ ತಂದಿದ್ದಾರೆ ಎಂದು ಆರೋಪಿಸಿದರು.

ರಾಹುಲ್ ಗಾಂಧಿ ಅವರು ಪೆಟ್ರೋಲ್, ಡೀಸಲ್ ಸೇರಿದಂತೆ ಅಗತ್ಯ ವಸ್ತುಗಳ ಬೆಲೆ ಏರಿಕೆಯಿಂದ ಜನಸಾಮಾನ್ಯರು ತುಂಬಾ ಆರ್ಥಿಕ ಒತ್ತಡದಲ್ಲಿದ್ದಾರೆ, ಆದರೆ ಸರ್ಕಾರ ಜನರ ಸಮಸ್ಯೆಗಳನ್ನು ಗಂಭೀರವಾಗಿ ಪರಿಗಣಿಸುತ್ತಿಲ್ಲ, ಮುಂದಿನ 3–4 ತಿಂಗಳಲ್ಲಿ ದೇಶ ಭಾರಿ ಆರ್ಥಿಕ ಬಿಕ್ಕಟ್ಟನ್ನು ಎದುರಿಸಲಿದೆ ಎಂದು ಎಚ್ಚರಿಸಿದ ಅವರು, ಗ್ಯಾಸ್, ಅಕ್ಕಿ ಮತ್ತು ಎಣ್ಣೆ ಬೆಲೆಗಳು ಇನ್ನೂ ಹೆಚ್ಚಾಗುತ್ತವೆ. ಇದಕ್ಕೂ ಮುಂಚೆ ನೋಡಿರದ ರೀತಿಯ ಹಣದುಬ್ಬರವನ್ನು ನೋಡುತ್ತೀರಿ ಎಂದು ಹೇಳಿದರು.

ಸಂವಿಧಾನವನ್ನು ರಕ್ಷಿಸುವುದು ಅಗತ್ಯ ಎಂದು ಒತ್ತಾಯಿಸಿದ ರಾಹುಲ್, ಪ್ರಧಾನಿ ಮೋದಿ ಅವರು ದೇಶದ ಆರ್ಥಿಕ ವ್ಯವಸ್ಥೆಯನ್ನು ಕಾರ್ಪೊರೇಟ್‌ಗಳು ಮತ್ತು ಅಮೆರಿಕಕ್ಕೆ ಹಸ್ತಾಂತರಿಸಿದ್ದಾರೆ ಎಂದು ಆರೋಪಿಸಿದರು. ರಾಹುಲ್ ಗಾಂಧಿ ಅವರ ಹೇಳಿಕೆಗಳಿಗೆ ಬಿಜೆಪಿ ತೀವ್ರವಾಗಿ ಪ್ರತಿಕ್ರಿಯಿಸಿದ್ದು, ರಾಹುಲ್ ಗಾಂಧಿ ದೇಶದ ಜನರನ್ನು ಅವಮಾನಿಸಿದ್ದಾರೆ. ಅವರು ಪಾಕಿಸ್ತಾನದ ಭಾಷೆ ಮಾತನಾಡುತ್ತಿದ್ದಾರೆ. 140 ಕೋಟಿ ಭಾರತೀಯರನ್ನು ದೇಶದ್ರೋಹಿ ಎಂದು ಕರೆದಿದ್ದಾರೆ. ಇದು ಅವರ ವಂಶ ರಾಜಕಾರಣದ ಮನೋಭಾವವನ್ನು ಪ್ರತಿಬಿಂಬಿಸುತ್ತದೆ. ಅವರ ಮನಸ್ಸು ನಗರ ನಕ್ಸಲ್ಗಳಂತಿದೆ ಎಂದು ಬಿಜೆಪಿ ತಿರುಗೇಟು ನೀಡಿದೆ.

## ಎಡಿಎಂಕೆಗೆ ಸಚಿವ ಸ್ಥಾನವಿಲ್ಲ: ವಿಸಿಕೆ, ಸಿಪಿಎಂ ಎಚ್ಚರಿಕೆ ಬೆನ್ನಲ್ಲೇ ಸಿಎಂ ವಿಜಯ್ ನಿರ್ಧಾರ

ಚೆನ್ನೈ, ಮೇ 20: ತಮಿಳುನಾಡಿನಲ್ಲಿ ನೂತನವಾಗಿ ಅಸ್ತಿತ್ವಕ್ಕೆ ಬಂದಿರುವ ತಮಿಳಗ ವೆಟ್ರಿ ಕಳಗಂ (ಟಿವಿಕೆ) ನೇತೃತ್ವದ ಸರ್ಕಾರದಲ್ಲಿ, ಎಐಎಡಿಎಂಕೆ ಬಂಡಾಯ ಶಾಸಕರಿಗೆ ಸಚಿವ ಸ್ಥಾನ ನೀಡದಿರಲು ಮುಖ್ಯಮಂತ್ರಿ ಸಿ. ಜೋಸೆಫ್ ವಿಜಯ್ ನಿರ್ಧರಿಸಿದ್ದಾರೆ. ಸರ್ಕಾರಕ್ಕೆ ಬೆಂಬಲ ನೀಡಿರುವ ಎಡಪಕ್ಷಗಳು (ಸಿಪಿಎಂ) ಹಾಗೂ ವಿಸಿಕೆ (ವಿಡುದಲೈ ಚಿರುತೈಗಳ್ ಕಚ್ಚಿ) ನೀಡಿದ ಕಟ್ಟುನಿಟ್ಟಿನ ಎಚ್ಚರಿಕೆಯ ಬೆನ್ನಲ್ಲೇ ಈ ಮಹತ್ವದ ಬೆಳವಣಿಗೆ ನಡೆದಿದೆ.

ಗುರುವಾರ ನಡೆಯಲಿರುವ ಸಂಪುಟ ವಿಸ್ತರಣೆಯಲ್ಲಿ ಇಬ್ಬರು ಕಾಂಗ್ರೆಸ್ ಶಾಸಕರಿಗೆ (ಕೆ. ರಾಜೇಶ್ ಕುಮಾರ್ ಮತ್ತು ಪಿ. ವಿಶ್ವನಾಥನ್) ಸಂಪುಟದಲ್ಲಿ ಸ್ಥಾನ ನೀಡಲಾಗುತ್ತಿದೆ. ಆದರೆ, ಮಾಜಿ ಸಚಿವರಾದ ಎಸ್.ಪಿ. ವೇಲುಮಣಿ ಹಾಗೂ ಸಿ.ವಿ. ಷಣ್ಮುಗಂ ನೇತೃತ್ವದ 25 ಎಐಎಡಿಎಂಕೆ ಬಂಡಾಯ ಶಾಸಕರ ಬಣವು ಸಂಪುಟದಲ್ಲಿ ಸ್ಥಾನಕ್ಕಾಗಿ ತೀವ್ರ ಲಾಬಿ ನಡೆಸಿದ್ದರೂ, ಪ್ರಸ್ತುತ ಈ ಬಣವನ್ನು ಸಂಪುಟದಿಂದ ಹೊರಗಿಡಲಾಗಿದೆ ಎಂದು ಉನ್ನತ ಮೂಲಗಳು ಖಚಿತಪಡಿಸಿವೆ.

ಟಿವಿಕೆ ಸರ್ಕಾರಕ್ಕೆ ಹೊರಗಿನಿಂದ ಬೆಂಬಲ ನೀಡಿರುವ ಸಿಪಿಎಂ ಮತ್ತು ವಿಸಿಕೆ, ಎಐಎಡಿಎಂಕೆ ಬಂಡಾಯಗಾರರನ್ನು ಸರ್ಕಾರದಲ್ಲಿ ಸೇರಿಸಿಕೊಳ್ಳುವುದನ್ನು ಬಹಿರಂಗವಾಗಿಯೇ ವಿರೋಧಿಸಿವೆ. ಸಿಪಿಎಂ ರಾಜ್ಯ ಕಾರ್ಯದರ್ಶಿ ಪಿ. ಷಣ್ಮುಗಂ ಅವರು ಮಂಗಳವಾರ ತಿರುವಾರೂರಿನಲ್ಲಿ ಪತ್ರಿಕಾಗೋಷ್ಠಿ ನಡೆಸಿ, ಒಂದು ವೇಳೆ ಎಐಎಡಿಎಂಕೆ ಶಾಸಕರನ್ನು ಸಂಪುಟಕ್ಕೆ ಸೇರಿಸಿಕೊಂಡರೆ, ಟಿವಿಕೆ ಸರ್ಕಾರಕ್ಕೆ ನೀಡಿರುವ ಬೆಂಬಲವನ್ನು ಸಿಪಿಎಂ ಮರುಪರಿಶೀಲಿಸಬೇಕಾಗುತ್ತದೆ ಎಂದು ನೇರ ಎಚ್ಚರಿಕೆ ನೀಡಿದ್ದರು.

ರಾಷ್ಟ್ರಪತಿ ಆಡಳಿತ ಹೇರಿಕೆ ಹಾಗೂ ಬಿಜೆಪಿಯ ಹಿಂಬಾಗಿಲ ಪ್ರವೇಶವನ್ನು ತಡೆಯುವ ಏಕೈಕ ಉದ್ದೇಶದಿಂದ ಮಾತ್ರವೇ ನಾವು ಟಿವಿಕೆಗೆ ಬೆಂಬಲ ನೀಡಿದ್ದೇವೆ. ಇತ್ತೀಚಿನ ಚುನಾವಣೆಯ ಜನಾದೇಶವು ಡಿಎಂಕೆ ಹಾಗೂ ಎಐಎಡಿಎಂಕೆ ಎರಡೂ ಪಕ್ಷಗಳ ವಿರುದ್ಧವಾಗಿದೆ. ಹೀಗಿರುವಾಗ ಎಐಎಡಿಎಂಕೆ ಬಂಡಾಯಗಾರರಿಗೆ ಮಣೆ ಹಾಕುವುದು ಟಿವಿಕೆ ನೀಡಿದ್ದ ಸ್ವಚ್ಛ ಆಡಳಿತದ ಭರವಸೆ ಹಾಗೂ ಜನಾದೇಶಕ್ಕೆ ಮಾಡಿದ ದೊಡ್ಡ ದ್ರೋಹವಾಗುತ್ತದೆ ಎಂದು ಅವರು ಸ್ಪಷ್ಟಪಡಿಸಿದ್ದಾರೆ.



ಕೇಂದ್ರ ಹಣಕಾಸು ಮತ್ತು ಕಾರ್ಪೊರೇಟ್ ವ್ಯವಹಾರಗಳ ಸಚಿವೆ ನಿರ್ಮಲಾ ಸೀತಾರಾಮನ್ ಅವರು ಬುಧವಾರ ನವದೆಹಲಿಯಲ್ಲಿ ಭಾರತಕ್ಕೆ ಅಮೆರಿಕದ ರಾಯಭಾರಿ ಸೆರ್ಗಿಯೊ ಗೋರ್ ಅವರನ್ನು ಭೇಟಿ ಮಾಡಿದರು




ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯದ ಆರೋಗ್ಯ ಸಂಶೋಧನಾ ಇಲಾಖೆ, ಭಾರತೀಯ ವೈದ್ಯಕೀಯ ಸಂಶೋಧನಾ ಮಂಡಳಿಯು ಬುಧವಾರ ನವದೆಹಲಿಯಲ್ಲಿ ಆಯೋಜಿಸಿದ್ದ 1 ನೇ ICMR ವಾರ್ಷಿಕ ಕ್ಲಿನಿಕಲ್ ಟ್ರಯಲ್ ಮೀಟ್ 2026 ರಲ್ಲಿ ಆಯುಷ್ ಸಚಿವಾಲಯದ ಕಾರ್ಯದರ್ಶಿ ವೈದ್ಯ ರಾಜೇಶ್ ಕೋಟೆಚಾ. ಆರೋಗ್ಯ ಸಂಶೋಧನಾ ಇಲಾಖೆಯ ಕಾರ್ಯದರ್ಶಿ ಮತ್ತು ಭಾರತೀಯ ವೈದ್ಯಕೀಯ ಸಂಶೋಧನಾ ಮಂಡಳಿಯ ಮಹಾನಿರ್ದೇಶಕ ಡಾ. ರಾಜೀವ್ ಬಹ್ಲ್ ಸಹ ಇದ್ದರು

## ಮಾಧ್ಯಮದ ವಿರುದ್ಧ ಹೈಕೋರ್ಟ್ ಮೆಟ್ಟಿಲೇರಿದ ಅನಿಲ್ ಅಂಬಾನಿ

**ನವದೆಹಲಿ, ಮೇ 20:** ಖಾಸಗಿ ಸುದ್ದಿ ವಾಹಿನಿ ಎನ್‌ಡಿಟಿವಿ ವಿರುದ್ಧ ಮಾನನಷ್ಟ ಮೊಕದ್ದಮೆ ಹೂಡಿದ್ದ ಉದ್ಯಮಿ ಅನಿಲ್ ಅಂಬಾನಿ, ಇದೀಗ ಟೈಮ್ಸ್ ಆಫ್ ಇಂಡಿಯಾ, ಎಕನಾಮಿಕ್ ಟೈಮ್ಸ್ ಮತ್ತು ಪ್ರೆಸ್ ಟ್ರಸ್ಟ್ ಆಫ್ ಇಂಡಿಯಾ ಸುದ್ದಿ ಸಂಸ್ಥೆಗಳ ವಿರುದ್ಧವೂ ದೆಹಲಿ ಹೈಕೋರ್ಟ್ ಮೆಟ್ಟಿಲೇರಿದ್ದಾರೆ. ತಮ್ಮ ಒಡೆತನದ ಕಂಪನಿಗಳ



ಮೇಲಿನ ಸಿಬಿಐ ಮತ್ತು ಇ.ಡಿ ತನಿಖೆಗಳ ಕುರಿತು ದಾರಿತಪ್ಪಿಸುವ ಹಾಗೂ ಮಾನಹಾನಿಕರ ವರದಿಗಳನ್ನು ಪ್ರಕಟಿಸಲಾಗಿದೆ ಎಂದು ಆರೋಪಿಸಿ ಅವರು 2 ಕೋಟಿ ರೂ. ಮೊತ್ತದ ಮಾನನಷ್ಟ ಮೊಕದ್ದಮೆ ದಾಖಲಿಸಿದ್ದಾರೆ.

ಇಂದು (ಮೇ.20) ಈ ಅರ್ಜಿಯ ವಿಚಾರಣೆ ನಡೆಸಿದ ದೆಹಲಿ ಹೈಕೋರ್ಟ್‌ನ ನ್ಯಾಯಮೂರ್ತಿ ಸುಬ್ರಮೋಣಿಯಂ ಪ್ರಸಾದ್ ಅವರಿದ್ದ ಪೀಠವು, ಬೆನೆಟ್ ಕೋಲ್ಮನ್ ಅಂಡ್ ಕಂಪನಿ ಲಿಮಿಟೆಡ್ (ಃಅಅಐ) ಹಾಗೂ ಟೈಮ್ಸ್ ಆಫ್ ಇಂಡಿಯಾ, ಎಕನಾಮಿಕ್ ಟೈಮ್ಸ್ ಮತ್ತು ಪಿಟಿಐ ಸಂಪಾದಕರಿಗೆ ನೋಟಿಸ್ ಜಾರಿ ಮಾಡಿ, ಪ್ರತಿಕ್ರಿಯೆ ನೀಡುವಂತೆ ಸೂಚಿಸಿದೆ. ವಿಚಾರಣೆಯನ್ನು ಆಗಸ್ಟ್ 24ಕ್ಕೆ ಮುಂದೂಡಲಾಗಿದೆ.

ತಮ್ಮ ಒಡೆತನದ ರಿಲಯನ್ಸ್ ಕಮ್ಯುನಿಕೇಷನ್ಸ್ ಲಿಮಿಟೆಡ್, ರಿಲಯನ್ಸ್ ಹೋಮ್ ಫೈನಾನ್ಸ್ ಲಿಮಿಟೆಡ್ ಮತ್ತು ರಿಲಯನ್ಸ್ ಕಮರ್ಷಿಯಲ್ ಫೈನಾನ್ಸ್ ಲಿಮಿಟೆಡ್ ಕಂಪನಿಗಳ ಸಾಲದ ವಂಚನೆ ಪ್ರಕರಣಗಳಿಗೆ ಸಂಬಂಧಿಸಿದಂತೆ ಸಿಬಿಐ ಮತ್ತು ಜಾರಿ ನಿರ್ದೇಶನಾಲಯ ತನಿಖೆ ನಡೆಸುತ್ತಿವೆ. ಆದರೆ, ಈ ತನಿಖೆಗಳ ಕುರಿತು ಆಧಾರರಹಿತ ಮೂಲಗಳು ಮತ್ತು ಊಹಾಪೋಹಗಳ ಆಧಾರದ ಮೇಲೆ ವರದಿಗಳನ್ನು ಪ್ರಕಟಿಸಲಾಗುತ್ತಿದೆ. ಇದು ತಮ್ಮ ಪ್ರತಿಷ್ಠೆ ಹಾಗೂ ವರ್ಚಸ್ಸಿಗೆ ಧಕ್ಕೆ ತಂದಿದೆ ಎಂದು ಅನಿಲ್ ಅಂಬಾನಿ ದೂರಿದ್ದಾರೆ.

ತನಿಖೆಗಳು ಕಂಪನಿಗಳಿಗೆ ಸೀಮಿತವಾಗಿದ್ದರೂ, ನನ್ನನ್ನು ವೈಯಕ್ತಿಕವಾಗಿ ಗುರಿಯಾಗಿಸಲಾಗುತ್ತಿದೆ. ತನಿಖೆಯ ಅವಧಿಯಲ್ಲಿ ಈ ಕಂಪನಿಗಳ ದೈನಂದಿನ ವ್ಯವಹಾರಗಳಲ್ಲಿ ನಾನು ಯಾವುದೇ ರೀತಿಯಲ್ಲಿ ತೊಡಗಿಸಿಕೊಂಡಿರಲಿಲ್ಲ ಎಂದು ಅವರು ಸ್ಪಷ್ಟಪಡಿಸಿದ್ದಾರೆ. ಅಲ್ಲದೆ, 2025ರ ನವೆಂಬರ್ 28 ಹಾಗೂ ಡಿಸೆಂಬರ್ 5ರಂದು ಈ ಸುದ್ದಿ ಸಂಸ್ಥೆಗಳಿಗೆ ವರದಿಗಳನ್ನು ಹಿಂಪಡೆದು, ಬೇಷರತ್ ಕ್ಷಮೆಯಾಚಿಸುವಂತೆ ಕೋರಿ ಕಾನೂನು ನೋಟಿಸ್ ನೀಡಿದ್ದರೂ ಯಾವುದೇ ಪ್ರತಿಕ್ರಿಯೆ ಬಂದಿರಲಿಲ್ಲ. ಹೀಗಾಗಿ ನ್ಯಾಯಾಲಯದ ಮೊರೆ ಹೋಗಿರುವುದಾಗಿ ತಿಳಿಸಿದ್ದಾರೆ.

# ಪಿಎಂ ಸೂರ್ಯಘರ್ ಯೋಜನೆ ಪ್ರಚಾರ ವಾಹನಕ್ಕೆ ಗೌರವ್‌ಗುಪ್ತ ಚಾಲನೆ



**ಬೆಂಗಳೂರು, ಮೇ 20:** ಪಿಎಂ ಸೂರ್ಯ ಘರ್ – ಮುಫ್ತ್ ಬಿಜ್ಲಿ ಯೋಜನೆಯ ರಾಜ್ಯವ್ಯಾಪಿ ಪ್ರಚಾರಕ್ಕಾಗಿ ಎಲ್‌ಇಡಿ ಮೊಬೈಲ್ ವ್ಯಾನ್ ಅಭಿಯಾನಕ್ಕೆ ಇಂಧನ ಇಲಾಖೆ ಅಪರ ಮುಖ್ಯ ಕಾರ್ಯದರ್ಶಿ ಗೌರವ್ ಗುಪ್ತ ಅವರು ಬೆಸ್ಕಾಂ ಕಾರ್ಪೋರೇಟ್ ಕಚೇರಿಯಲ್ಲಿ ಅಧಿಕೃತ ಚಾಲನೆ ನೀಡಿದರು.

ಸೌರ ಮಾಸ– ಮೇ 2026' ಉಪಕ್ರಮದ ಭಾಗವಾಗಿ, ಪ್ರಧಾನ ಮಂತ್ರಿ ಸೂರ್ಯ ಘರ್ ಯೋಜನೆಯಡಿ ಮೇಲ್ಛಾವಣಿ ಸೌರ ಘಟಕ ವ್ಯವಸ್ಥೆ ಬಗ್ಗೆ ಮಾಹಿತಿ ಒದಗಿಸುವ ಜತೆಗೆ ಸೌರ ಫಲಕಗಳ ಅಳವಡಿಕೆಯನ್ನು ತ್ವರಿತಗೊಳಿಸಲು ರಾಜ್ಯದ ಎಲ್ಲಾ ವಿದ್ಯುತ್ ಸರಬರಾಜು ಕಂಪನಿಗಳ ವ್ಯಾಪ್ತಿಗಳಲ್ಲಿ ಈ ಎಲ್‌ಇಡಿ ಮೊಬೈಲ್ ವ್ಯಾನ್ ಅಭಿಯಾನ ನಡೆಯಲಿದೆ.

ಈ ವೇಳೆ ಮಾತನಾಡಿದ ಗೌರವ್ ಗುಪ್ತ ಅವರು, "15 ದಿನಗಳ ಎಲ್‌ಇಡಿ ಮೊಬೈಲ್ ವ್ಯಾನ್ ಪ್ರಚಾರ ಅಭಿಯಾನವು ಬೆಂಗಳೂರು, ಮೈಸೂರು, ಮಂಗಳೂರು, ಹುಬ್ಬಳ್ಳಿ–ಧಾರವಾಡ ಮತ್ತು ಕಲಬುರಗಿ ಸೇರಿದಂತೆ ರಾಜ್ಯದ ಪ್ರಮುಖ ನಗರಗಳಲ್ಲಿ ನಡೆಯಲಿದೆ ಎಂದು ತಿಳಿಸಿದರು.

ಗೃಹ ಬಳಕೆದಾರರ ಮನೆಯ ಮೇಲ್ಛಾವಣಿಯಲ್ಲಿ ಸೌರ ಫಲಕಗಳ ವಿದ್ಯುತ್ ಉತ್ಪಾದನಾ ಘಟಕ ಸ್ಥಾಪನೆಯನ್ನು ಉತ್ತೇಜಿಸಲು ದೇಶಾದ್ಯಂತ ಪಿಎಂ ಸೂರ್ಯ ಘರ್: ಮುಫ್ತ್ ಬಿಜ್ಲಿ ಯೋಜನೆಯನ್ನು ಕೇಂದ್ರದ ನವ ಮತ್ತು ನವೀಕರಿಸಬಹುದಾದ ಇಂಧನ ಸಚಿವಾಲಯ (ಎಂಎನ್ ಆರ್‌ಇ) ಜಾರಿಗೊಳಿಸಿದೆ. ರಾಜ್ಯದಲ್ಲಿ ಈ ಯೋಜನೆಯ ಅನುಷ್ಠಾನಕ್ಕೆ ನೋಡಲ್ ಏಜೆನ್ಸಿಯಾಗಿರುವ ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿಯು ಎಲ್ಲ ಎಸ್ಕಾಂ ವ್ಯಾಪ್ತಿಗಳಲ್ಲಿ ಯೋಜನೆಯ ಪ್ರಚಾರ, ಜನಸಂಪರ್ಕ ಚಟುವಟಿಕೆಗಳ ಸಮನ್ವಯ, ಮೇಲ್ವಿಚಾರಣೆ ಮತ್ತು ಯೋಜನೆಯನ್ನು ಕಾರ್ಯಗತ ಗೊಳಿಸುವ ಜವಾಬ್ದಾರಿ ಹೊಂದಿದೆ ಎಂದು ಹೇಳಿದರು.

## 19293 ಸೌರ ಘಟಕ ಸ್ಥಾಪನೆ

ಈ ಯೋಜನೆಯಡಿ ರಾಜ್ಯದಲ್ಲಿ ಇದುವರೆಗೆ ಒಟ್ಟು 19,293 ಸೌರ ಘಟಕಗಳನ್ನು ಸ್ಥಾಪಿಸಲಾಗಿದ್ದು, 77.5 ಮೆಗಾವ್ಯಾಟ್ ವಿದ್ಯುತ್ ಉತ್ಪಾದನೆಯಾಗುತ್ತಿದೆ. ಬೆಸ್ಕಾಂ ವ್ಯಾಪ್ತಿಯಲ್ಲಿ 7992 ಸೌರ ಘಟಕಗಳನ್ನು ಸ್ಥಾಪಿಸಿ, 35.57 ಮೆಗಾವ್ಯಾಟ್ ವಿದ್ಯುತ್ ಉತ್ಪಾದನೆ ಮಾಡಲಾಗುತ್ತಿದೆ. ಸೂರ್ಯಘರ್ ಯೋಜನೆ ದೀರ್ಘಾವಧಿಗೆ ಹೆಚ್ಚು ಅನುಕೂಲವಾಗುತ್ತದೆ. ಹೆಚ್ಚುವರಿ ವಿದ್ಯುತ್ತನ್ನು ಗ್ರಿಡ್ ಗೆ ನೀಡಲು ಅವಕಾಶವಿದ್ದು, ಈ ವಿದ್ಯುತ್ತಿಗೆ ಎಸ್ಕಾಂಗಳ ವತಿಯಿಂದ ಹಣ ಪಾವತಿಸಲಾಗುತ್ತದೆ ಎಂಬುದನ್ನು ಜನರಿಗೆ ಮನವರಿಕೆ ಮಾಡಿಕೊಡಲು ಪ್ರಚಾರ ಅಭಿಯಾನ ನಡೆಸಲಾಗುತ್ತಿದೆ ಎಂದು ಗೌರವ್‌ಗುಪ್ತ ತಿಳಿಸಿದರು.

ಬೆಸ್ಕಾಂನ ಪ್ರಭಾರ ವ್ಯವಸ್ಥಾಪಕ ನಿರ್ದೇಶಕಿ ವೈಶಾಲಿ ಎಂ.ಎಲ್., ತಾಂತ್ರಿಕ ನಿರ್ದೇಶಕ ರಮೇಶ್ ಎಚ್.ಜೆ., ಡಿಎಸ್‌ಎಂ ವಿಭಾಗದ ಮುಖ್ಯ ಪ್ರಧಾನ ವ್ಯವಸ್ಥಾಪಕರಾದ ಸೈಯದ್ ಮಂಜೂರ್ ಹುಸೇನ್, ಪ್ರಧಾನ ವ್ಯವಸ್ಥಾಪಕಿ ಉಮಾ ಎಚ್.ಎಂ ಹಾಗೂ ಬೆಸ್ಕಾಂನ ಅಧಿಕಾರಿಗಳು ಉಪಸ್ಥಿತರಿದ್ದರು.

**ಅರ್ಜಿ ಸಲ್ಲಿಕೆ, ಸಬ್ಸಿಡಿ ವಿವರ**

ಕೇಂದ್ರ ಸರಕಾರದ https://pmsuryaghar.gov.in ವೆಬ್‌ಸೈಟ್‌ನಲ್ಲಿ ರೂಫ್ ಟಾಪ್ ಸೋಲಾರ್ ವ್ಯವಸ್ಥೆಗೆ ಗೃಹ ಬಳಕೆದಾರರು ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಬೆಸ್ಕಾಂನ ಸೋಲಾರ್ ಸಹಾಯವಾಣಿ ಸಂಖ್ಯೆ 080–22340816 ಸಂಪರ್ಕಿಸ ಬಹುದು. ಮನೆಯ ರೂಫ್ ಟಾಪ್ ಸೋಲಾರ್ ವ್ಯವಸ್ಥೆಯನ್ನು ಗ್ರಿಡ್ ಜತೆಗೆ ಸಂಪರ್ಕಿಸುವುದರಿಂದ 25 ವರ್ಷಗಳ ಕಾಲ ವಿದ್ಯುತ್ ಬಿಲ್ ಪಾವತಿಸಬೇಕಿಲ್ಲ. ಮನೆಗಳ ಮೇಲ್ಛಾವಣೆಯಲ್ಲಿ ಅಳವಡಿಸುವುದರಿಂದ ಹೆಚ್ಚುವರಿ ಜಾಗದ ಅಗತ್ಯ ಇಲ್ಲ. ನಿರ್ವಹಣೆ ವೆಚ್ಚ ತೀರಾ ಕಡಿಮೆ. ಸಬ್ಸಿಡಿ:–1 ಕಿಲೋವ್ಯಾಟ್ ಸಾಮರ್ಥ್ಯದ ವ್ಯವಸ್ಥೆಗೆ 30,000 ರೂ., 2 ಕಿಲೋವ್ಯಾಟ್ ಸಾಮರ್ಥ್ಯದ ವ್ಯವಸ್ಥೆಗೆ 60,000 ರೂ., 3 ಕಿಲೋವ್ಯಾಟ್ ಮೇಲ್ಪಟ್ಟ ವ್ಯವಸ್ಥೆಗೆ ಗರಿಷ್ಠ ಸಬ್ಸಿಡಿ ಮಿತಿ 78,000 ರೂ.

**ಸೂರ್ಯಘರ್ ಯೋಜನೆ ದೀರ್ಘಕಾಲ ಬಾಳಿಕೆ:**

ಹಣ ಉಳಿತಾಯದ ಜತೆಗೆ ಹೆಚ್ಚುವರಿ ವಿದ್ಯುತ್ ಉತ್ಪಾದಿಸಿ ಎಸ್ಕಾಂಗಳಿಗೆ ಮಾರಾಟ ಮಾಡಲು ಅವಕಾಶವಿರುವುದರಿಂದ ನಗರ ಪ್ರದೇಶಗಳಲ್ಲಿ ಜನರು ಒಲವು ತೋರುತ್ತಿದ್ದಾರೆ.

–ಕೆ.ಜೆ. ಜಾರ್ಜ್, ಇಂಧನ ಸಚಿವ



ಬಿಡದಿ ಪಟ್ಟಣದ ಸಮಸ್ಯೆಗಳ ಕುರಿತು ಚರ್ಚಿಸಲು ಉಪಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಅವರು ಮೇ 20 ರಂದು ಬೆಂಗಳೂರಿನಲ್ಲಿ ಸಭೆಯನ್ನು ಆಯೋಜಿಸಿದ್ದರು. ಈ ಸಂದರ್ಭದಲ್ಲಿ ಮಾಜಿ ತಾಲ್ಲೂಕು ಪಂಚಾಯತ್ ಸದಸ್ಯರು ಮತ್ತು ಶಾಸಕ ಎಚ್.ಸಿ.ರಾಜಣ್ಣ ಇದ್ದರು.

### ಗಡ್ಡೆ ಗೆಣಸು ಬೆಳೆಗಳ ಸಂಶೋಧನೆ: ನಾಳೆಯಿಂದ 26ನೇ ಬೆಂಗಳೂರಿನಲ್ಲಿ ವಾರ್ಷಿಕ ಸಾಮಾನ್ಯಸಭೆ



**ಬೆಂಗಳೂರು, ಮೇ 20:** ಬಾಗಲಕೋಟೆ ತೋಟಗಾರಿಕಾ ವಿಜ್ಞಾನಗಳ ವಿಶ್ವವಿದ್ಯಾಲಯ ಮತ್ತು ಅಖಿಲ ಭಾರತ ಸಮನ್ವಯ ಸಂಶೋಧನಾ ಯೋಜನೆ (ಗಡ್ಡೆ ಗೆಣಸು ಬೆಳೆಗಳು) ಇವರ ಜಂಟಿ ಆಶ್ರಯದಲ್ಲಿ 26ನೇ ವಾರ್ಷಿಕ ಸಾಮಾನ್ಯ ಸಭೆಯನ್ನು ಮೇ 21 ರಿಂದ 23 ರವರೆಗೆ ಬೆಂಗಳೂರಿನ ಜಿಕೆವಿಕೆ ಆವರಣದಲ್ಲಿರುವ ತೋಟಗಾರಿಕಾ ಮಹಾವಿದ್ಯಾಲಯದಲ್ಲಿ ಆಯೋಜಿಸಲಾಗಿದೆ.

ತೋಟಗಾರಿಕಾ ವಿಜ್ಞಾನಗಳ ವಿಶ್ವವಿದ್ಯಾಲಯದ ಕುಲಪತಿಗಳಾದ ಡಾ. ವಿಷ್ಣುವರ್ಧನ ಅವರ ಅಧ್ಯಕ್ಷತೆಯಲ್ಲಿ ಈ ಕಾರ್ಯಕ್ರಮದ ಉದ್ಘಾಟನೆ ನೆರವೇರಲಿದೆ. ನವದೆಹಲಿಯ ಭಾರತೀಯ ಕೃಷಿ ಅನುಸಂದಾನ ಪರಿಷತ್ತಿನ ಉಪ ಮಹಾನಿರ್ದೇಶಕರು (ತೋಟಗಾರಿಕೆ ವಿಜ್ಞಾನ) ಆದ ಡಾ. ಸಂಜಯ್ ಕುಮಾರ್ ಸಿಂಗ್ ಅವರು ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ. ಬಾಗಲಕೋಟೆ ತೋ.ವಿ.ವಿ. ಸಂಶೋಧನಾ ನಿರ್ದೇಶಕರಾದ ಡಾ. ಬಿ. ಫಕ್ರುದ್ದೀನ್, ಬೆಂಗಳೂರಿನ ಕೃಷಿ ತಂತ್ರಜ್ಞಾನ ಅನ್ವಯಿಕ ಸಂಶೋಧನಾ ಸಂಸ್ಥೆ ಎಟಿಎಆರ್‌ಐ ನಿರ್ದೇಶಕರಾದ ಡಾ. ಎಂ. ಪ್ರಭಾಕರ್, ಐಸಿಎಆರ್ ಸಹಾಯಕ ಮಹಾನಿರ್ದೇಶಕರಾದ ಡಾ. ಸುಧಾಕರ್ ಪಾಂಡೆ ಹಾಗೂ ಬೆಂಗಳೂರಿನ ಐಸಿಎಆರ್–ಭಾರತೀಯ ತೋಟಗಾರಿಕೆ ಸಂಶೋಧನಾ ಸಂಸ್ಥೆ –ಐಐಎಚ್‌ಆರ್ ನಿರ್ದೇಶಕರಾದ ಡಾ. ಟಿ. ಕೆ. ಬೆಹೆರಾ ಉಪಸ್ಥಿತರಿರಲಿದ್ದಾರೆ.

ಚರ್ಚೆಯ ಪ್ರಮುಖ ವಿಷಯಗಳು ಮೂರು ದಿನಗಳ ಕಾಲ ನಡೆಯಲಿರುವ ಈ ಉನ್ನತ ಮಟ್ಟದ ಸಭೆಯಲ್ಲಿ ಭಾರತದ ವಿವಿಧ ಕೃಷಿ–ಹವಾಮಾನ ವಲಯಗಳಿಗೆ ಸೂಕ್ತವಾದ ಗಡ್ಡೆ ಗೆಣಸು ಬೆಳೆಗಳ ಬಗ್ಗೆ ವ್ಯಾಪಕ ಸಮಾಲೋಚನೆ ನಡೆಯಲಿದೆ.

ಪ್ರಮುಖವಾಗಿ ಗಡ್ಡೆ ಗೆಣಸು ಬೆಳೆಗಳ ತಂತ್ರಜ್ಞಾನ ಮತ್ತು ಮೌಲ್ಯವರ್ಧನೆ, ತಳಿಯ ಸಂಪನ್ಮೂಲಗಳು ಹಾಗೂ ತಳಿ ಅಭಿವೃದ್ಧಿ, ಸುಧಾರಿತ ಬೆಳೆ ನಿರ್ವಹಣಾ ಪದ್ಧತಿಗಳು, 60ಕ್ಕೂ ಹೆಚ್ಚು ವಿಜ್ಞಾನಿಗಳು ಭಾಗಿದೇಶದ ವಿವಿಧ ಭಾಗಗಳಲ್ಲಿರುವ ಎಐಸಿಆರ್‌ಪಿ ಕೇಂದ್ರಗಳಿಂದ ಸುಮಾರು 60 ವಿಜ್ಞಾನಿಗಳು ಈ ವಾರ್ಷಿಕ ಸಾಮಾನ್ಯ ಸಭೆಯಲ್ಲಿ ಭಾಗವಹಿಸಿ ತಮ್ಮ ಸಂಶೋಧನೆಗಳನ್ನು ಹಂಚಿಕೊಳ್ಳಲಿದ್ದಾರೆ.

## ಪ್ರಯಾಣ ದರ ಏರಿಸುವ ಬಿಎಂಆರ್‌ಸಿಎಲ್ ಪ್ರಸ್ತಾವನೆಗೆ ಬ್ರೇಕ್

**ಬೆಂಗಳೂರು, ಮೇ 20:** ಬೆಲೆ ಏರಿಕೆಯಿಂದ ಕಂಗೆಟ್ಟಿರುವ ಬೆಂಗಳೂರಿನ 'ನಮ್ಮ ಮೆಟ್ರೋ' ಪ್ರಯಾಣಿಕರಿಗೆ ಒಂದು ಸಿಹಿ ಸುದ್ದಿ ಸಿಕ್ಕಿದೆ.

ಮೆಟ್ರೋ ಟಿಕೆಟ್ ದರವನ್ನು ಏರಿಕೆ ಮಾಡುವ ಬಿಎಂಆರ್‌ಸಿಎಲ್ ಪ್ರಸ್ತಾವನೆಗೆ ಬ್ರೇಕ್ ಹಾಕಲಾಗಿದ್ದು, ಸದ್ಯಕ್ಕೆ ದರ ಏರಿಕೆ ಮಾಡದಿರಲು ನಿರ್ಧರಿಸಲಾಗಿದೆ.

ಪ್ರಯಾಣಿಕರ ಜೇಬಿಗೆ ಕತ್ತರಿ ಹಾಕುವ ಭೀತಿಯಲ್ಲಿದ್ದವರಿಗೆ ಈ ನಿರ್ಧಾರ ಕೊಂಚ ನಿರಾಳತೆ ನೀಡಿದೆ.

ಬೆಲೆ ಏರಿಕೆಯ ಬಿಸಿಯಲ್ಲಿ ತತ್ತರಿಸಿರುವ ಸಾಮಾನ್ಯ ಜನರಿಗೆ ಬಿಎಂಟಿಸಿ ಮತ್ತು ಮೆಟ್ರೋ ಆಡಳಿತ ಮಂಡಳಿ ಕೊಂಚ ನಿರಾಳದ ಸುದ್ದಿ ನೀಡಿದೆ. ಸದ್ಯಕ್ಕೆ ನಮ್ಮ ಮೆಟ್ರೋ ಟಿಕೆಟ್ ದರ ಏರಿಕೆ ಮಾಡದಿರಲು ಬಿಎಂಆರ್‌ಸಿಎಲ್ ನಿರ್ಧರಿಸಿದೆ.

ಬಿಎಂಆರ್‌ಸಿಎಲ್ ಟಿಕೆಟ್ ದರ ಏರಿಕೆ ಮಾಡಲು ಪ್ರಸ್ತಾವನೆ ಸಲ್ಲಿಸಿತ್ತು. ಆದರೆ, ಕೇಂದ್ರ ಮತ್ತು ರಾಜ್ಯ ಸರ್ಕಾರದ ಉನ್ನತ ಅಧಿಕಾರಿಗಳು ಸದ್ಯಕ್ಕೆ ದರ ಏರಿಕೆ ಬೇಡ ಎಂದು ನಿರ್ದೇಶನ ನೀಡಿದ್ದಾರೆ.

ಬೋರ್ಡ್ ಸಭೆಯಲ್ಲಿ ಈ ವಿಷಯ ಚರ್ಚೆಯಾಗಿದ್ದು, ಸದ್ಯಕ್ಕೆ ಟಿಕೆಟ್ ದರ ಏರಿಕೆಯನ್ನು ಕೈಬಿಡಲಾಗಿದೆ. ಮುಂದಿನ ಸಭೆಯಲ್ಲಿ ಈ ಬಗ್ಗೆ ಮತ್ತೊಮ್ಮೆ ಚರ್ಚೆ ನಡೆಸಲು ನಿರ್ಧರಿಸಲಾಗಿದೆ.ಈಗಾಗಲೇ ನಿತ್ಯದ ಖರ್ಚು–ವೆಚ್ಚಗಳಿಂದ ತೊಂದರೆಗೀಡಾಗಿರುವ ಮೆಟ್ರೋ ಪ್ರಯಾಣಿಕರಿಗೆ, ಸದ್ಯಕ್ಕೆ ಟಿಕೆಟ್ ದರ ಏರಿಕೆ ಬಿಸಿ ತಟ್ಟದಿರುವುದು ಕೊಂಚ ನೆಮ್ಮದಿ ತಂದಿದೆ.

ಕಳೆದ ಫೆಬ್ರವರಿಯಲ್ಲಿ ಟಿಕೆಟ್ ದರ ಏರಿಕೆಗೆ ಪ್ರಯತ್ನ ನಡೆದಾಗ ಸಾರ್ವಜನಿಕರಿಂದ ತೀವ್ರ ವಿರೋಧ ವ್ಯಕ್ತವಾಗಿತ್ತು. ಇದೀಗ ಮತ್ತೆ ದರ ಏರಿಕೆಯ ಮಾತುಗಳು ಕೇಳಿಬಂದ ಬೆನ್ನಲ್ಲೇ, ಸದ್ಯಕ್ಕೆ ದರ ಏರಿಕೆ ಇಲ್ಲ ಎಂಬ ನಿರ್ಧಾರ ಪ್ರಯಾಣಿಕರ ಪಾಲಿಗೆ ಸಿಹಿ ಸುದ್ದಿಯಾಗಿದೆ.

**ಮೆಲೋನಿಗೆ ಚಾಕೊಲೇಟ್ ಉಡುಗೊರೆ ನೀಡಿದ್ದಕ್ಕೆ ವ್ಯಂಗ್ಯ**

## ಪ್ರಧಾನಿ ಮೋದಿ ಪ್ರಚಾರದ ಗೀಳಿರುವ ಇನ್‌ಫ್ಲುಯೆನ್ಸರ್: ಪ್ರಿಯಾಂಕ್ ಖರ್ಗೆ ಟೀಕೆ



**ಬೆಂಗಳೂರು, ಮೇ 20:** ಪ್ರಧಾನಿ ನರೇಂದ್ರ ಮೋದಿ ಅವರು ಇಟಲಿ ಪ್ರಧಾನಿ ಜಾರ್ಜಿಯಾ ಮೆಲೋನಿ ಅವರಿಗೆ ಮೆಲೋಡಿ ಚಾಕೊಲೇಟ್ ಉಡುಗೊರೆ ನೀಡಿರುವ ವಿಡಿಯೋ ಸಾಮಾಜಿಕ ಮಾಧ್ಯಮದಲ್ಲಿ ಭಾರೀ ವೈರಲ್ ಆಗಿದ್ದು, ಪ್ರತಿಪಕ್ಷಗಳಿಂದ ತೀವ್ರ ಟೀಕೆ ವ್ಯಕ್ತವಾಗುತ್ತಿದೆ.

ಎಕ್ಸ್‌ನಲ್ಲಿ ಮೋದಿ ಹಾಗೂ ಮೆಲೋನಿ ಅವರ ವಿಡಿಯೋ ಹಂಚಿಕೊಂಡು ತೀವ್ರ ವಾಗ್ದಾಳಿ ನಡೆಸಿದ ಸಚಿವ ಪ್ರಿಯಾಂಕ್ ಖರ್ಗೆ ಅವರು, ಪ್ರಮುಖವಾಗಿ, ಇಂಧನ ಹಾಗೂ ಆರ್ಥಿಕ ಬಿಕ್ಕಟ್ಟು ಪರಿಹಾರ ಎಕ್ಕುಟ್ಟಿ ಹೋಗಲಿ. ಆದರೆ ಮೆಲೋನಿ ಅವರಿಗೆ ಮೆಲೋಡಿ ನೀಡುವುದು ತಡವಾಗಬಾರದು ಎಂದು ವ್ಯಂಗ್ಯವಾಡಿದ್ದಾರೆ.

ಪ್ರಧಾನಿ ಮೋದಿ 'ಸ್ವಯಂ ಪ್ರಚಾರದ ಗೀಳಿರುವ ಇನ್‌ಫ್ಲುಯೆನ್ಸರ್' ಎಂದು ಟೀಕಿಸಿದ ಖರ್ಗೆ, ಜ್ವಲಂತ ಸಮಸ್ಯೆಗಳಿಂದ ಜನರ ಗಮನವನ್ನು ಬೇರೆಡೆ ಸೆಳೆಯಲು ಪ್ರಧಾನಿ ಇಂತಹ 'ಸಿಲ್ಲಿ ರೀಲ್ಸ್' ಮೊರೆ ಹೋಗುತ್ತಿದ್ದಾರೆ ಎಂದು ಕಿಡಿಕಾರಿದ್ದಾರೆ.ಈ ಕುರಿತು ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ಪ್ರಿಯಾಂಕ್ ಖರ್ಗೆ, ಪ್ರಧಾನಿಯವರ ಇತ್ತೀಚಿನ ವಿದೇಶಿ ಪ್ರವಾಸದ ನಡೆಯನ್ನು ಲೇವಡಿ ಮಾಡಿದ್ದಾರೆ.

"ಇಂಧನ ಮತ್ತು ಆರ್ಥಿಕ ಬಿಕ್ಕಟ್ಟಿಗೆ ಪರಿಹಾರ ಒದಗಿಸುವ ಕಾರ್ಯ ಬೇಕಿದ್ದರೆ ಕಾಯಬಹುದು. ಆದರೆ ಮೆಲೋನಿ ಅವರಿಗೆ 'ಮೆಲೋಡಿ' ತಡವಾಗಬಾರದು! ಇದನ್ನೊಮ್ಮೆ ಊಹಿಸಿಕೊಳ್ಳಿ.

ಪ್ರಮುಖ ದ್ವಿಪಕ್ಷೀಯ ವಿಷಯಗಳು ಮತ್ತು ವಿದೇಶಾಂಗ ನೀತಿಯ ಚರ್ಚೆಯ ಮಧ್ಯೆ, ಪ್ರಧಾನಿ ಮೋದಿಯವರು ನನ್ನ ಅಧಿಕೃತ ಭೇಟಿಯಲ್ಲಿ ಒಂದು ಪ್ಯಾಕ್ ಮೆಲೋಡಿ ಚಾಕೊಲೇಟ್ ಅನ್ನು ನನ್ನೊಂದಿಗೆ ತೆಗೆದುಕೊಂಡು ಹೋಗುತ್ತೇನೆ, ಇದು ವಿಡಿಯೋಗೆ ಉತ್ತಮ ಕಂಟೆಂಟ್ ಆಗಲಿದೆ' ಎಂದು ಯೋಚಿಸಿರಬೇಕು.

ಈ ರೀತಿಯ ಸಿಲ್ಲಿ ರೀಲ್' ಜನರ ಗಮನವನ್ನು ದೇಶದ ನೈಜ ಸಮಸ್ಯೆಗಳಿಂದ ಬೇರೆಡೆ ಸೆಳೆಯುತ್ತದೆ ಎಂದು ಅವರು ಭಾವಿಸಿದ್ದಾರೆ. ಆದರೆ ನಿಜವಾದ ಜೋಕ್ ಆಗುತ್ತಿರುವುದು ನಮ್ಮೆಲ್ಲರ ಮೇಲೆಯೇ ಎಂದು ಖರ್ಗೆ ಪೋಸ್ಟ್ ಮಾಡಿದ್ದಾರೆ.

**ಶಾಲಾ ಶಿಕ್ಷಣ ಇಲಾಖೆಗೆ ಹೈಕೋರ್ಟ್ ಆದೇಶ: ಆರು ಅಪ್ರಾಪ್ತ ವಯಸ್ಸಿನ ವಿದ್ಯಾರ್ಥಿಗಳ ಮನವಿಗೆ ಸ್ಪಂದಿಸಿದ ಕೋರ್ಟ್**

## 1ನೇ ತರಗತಿ ಪ್ರವೇಶ: ವಯೋಮಿತಿ ಸಡಿಲಿಕೆ ಕುರಿತು ಅಭಿಪ್ರಾಯ ತಿಳಿಸಲು ವಾರದ ಗಡುವು

**ಬೆಂಗಳೂರು,ಮೇ.20:** ಬರುವ 2026–27ನೇ ಶೈಕ್ಷಣಿಕ ಸಾಲಿಗೆ ಒಂದನೇ ತರಗತಿಗೆ ದಾಖಲಾಗಲು ವಯೋಮಿತಿ ಸಡಿಲಿಕೆ ವಿಚಾರವನ್ನು ಮರು ಪರಿಶೀಲಿಸಿ ಒಂದು ವಾರದೊಳಗೆಅಭಿಪ್ರಾಯ, ಶಿಫಾರಸ್ಸನ್ನು ಒಂದು ವಾರದೊಳಗೆ ಸಲ್ಲಿಸುವಂತೆ ರಾಜ್ಯ ಹೈಕೋರ್ಟ್ ಶಾಲಾ ಶಿಕ್ಷಣ ಇಲಾಖೆಗೆ ಆದೇಶಿಸಿದೆ.

ವಯೋಮಿತಿ ವಿಚಾರದಲ್ಲಿ ವಿದ್ಯಾರ್ಥಿಗಳು ಹಾಗೂ ಪೋಷಕರು ತೊಂದರೆ ಎದುರಿಸುತ್ತಿದ್ದು, ಈ ಸಂಬಂಧ ಒಂದು ವಾರದೊಳಗೆ ಎಲ್ಲಾ ಆಯಾಮಗಳಲ್ಲೂ ಪರಿಶೀಲಿಸಿ ಆದೇಶ ಹೊರಡಿಸುವಂತೆ ನ್ಯಾಯಮೂರ್ತಿ ಎಸ್. ಆರ್. ಕೃಷ್ಣಕುಮಾರ್ ನೇತೃತ್ವದ ನ್ಯಾಯಪೀಠ ಆದೇಶ ನೀಡಿದೆ.

6 ಮಂದಿ ಅಪ್ರಾಪ್ತ ವಿದ್ಯಾರ್ಥಿಗಳು ಹಾಗೂ ಅವರ ಪರವಾಗಿ ಸಲ್ಲಿಸಿರುವ ಅರ್ಜಿ ವಿಚಾರಣೆ ನಡೆಸಿದ ನ್ಯಾಯಪೀಠ, ಅಪ್ರಾಪ್ತರ ಮನವಿಗೆ ಸ್ಪಂದಿಸಿದೆ. ವಯೋಮಿತಿ ನಿಗದಿಪಡಿಸಿ ಶಾಲಾ ಶಿಕ್ಷಣ ಇಲಾಖೆ ಇದೇ ವರ್ಷದ ಮಾರ್ಚ್ 28 ರಂದು ಹೊರಡಿಸಿರುವ ಆದೇಶ ಪ್ರಶ್ನಿಸಿ ಇವರು ಹೈಕೋರ್ಟ್ ಗೆ ರಿಟ್ ಅರ್ಜಿ ಸಲ್ಲಿಸಿದ್ದರು.




**ಹೈಕೋರ್ಟ್ ಆದೇಶದಂತೆ ನಮ್ಮ ಮಕ್ಕಳ ಮುಂದಿನ ವರ್ಷದ ಶಾಲಾ ದಾಖಲಾತಿಗೆ ಧಕ್ಕೆಯಾಗದಂತೆ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಅಪ್ರಾಪ್ತ ವಿದ್ಯಾರ್ಥಿಗಳ ಪಾಲಕರು ಮುಖ್ಯಕಾರ್ಯದರ್ಶಿ, ಪ್ರಾಥಮಿಕ ಶಾಲಾ ಶಿಕ್ಷಣ ಇಲಾಖೆಯ ಉನ್ನತಾಧಿಕಾರಿಗಳಿಗೆ ಮನವಿ ಸಲ್ಲಿಸಿದ್ದಾರೆ. ಈ ಕುರಿತು ಪತ್ರ ಬರೆದಿರುವ ಪೋಷಕರು, ಹಿಂದಿನ ಶೈಕ್ಷಣಿಕ ವರ್ಷದಲ್ಲಿ ಸರ್ಕಾರವು 5 ವರ್ಷ 5 ತಿಂಗಳು ವಯೋಮಿತಿವರೆಗೆ ಸಡಿಲಿಕೆ ನೀಡಿದ್ದನ್ನು ಪರಿಗಣಿಸಿ, 2026–27ನೇ ಶೈಕ್ಷಣಿಕ ವರ್ಷದ ಪ್ರಥಮ ತರಗತಿ ಪ್ರವೇಶಕ್ಕೂ ಇದೇ ರೀತಿಯ ಒಮ್ಮೆಯ ಸಡಿಲಿಕೆಯನ್ನು ನೀಡುವಂತೆ ವಿನಮ್ರವಾಗಿ ಮನವಿ ಮಾಡುತ್ತೇವೆ. ಇದರಿಂದ ಮಕ್ಕಳ ಶೈಕ್ಷಣಿಕ ನಿರಂತರತೆಯನ್ನು ಕಾಪಾಡುತ್ತದೆ. ಅನಗತ್ಯ ಭಾವನಾತ್ಮಕ ಮತ್ತು ಶೈಕ್ಷಣಿಕ ವ್ಯತ್ಯಯವನ್ನು ತಪ್ಪಿಸುತ್ತದೆ. ಪೋಷಕರು ಹಾಗೂ ಶಾಲೆಗಳಿಗೆ ಸ್ಪಷ್ಟತೆ ಮತ್ತು ನೆಮ್ಮದಿಯನ್ನು ಒದಗಿಸುತ್ತದೆ. ಭವಿಷ್ಯದಲ್ಲಿ ಪರಿಷ್ಕೃತ ನಿಯಮಗಳ ಸುಗಮ ಜಾರಿಗೆ ಸಹಕಾರಿಯಾಗುತ್ತದೆ ಎಂದು ಕೋರಿದ್ದಾರೆ.**

ಅರ್ಜಿದಾರರು 6 ವರ್ಷ ಪೂರ್ಣಗೊಂಡಿಲ್ಲ. ಆದರೆ 2025–26 ನೇ ಸಾಲಿನ ಪೂರ್ವ ಪ್ರಾಥಮಿಕ ಶಿಕ್ಷಣ ಪೂರೈಸಿದ್ದಾರೆ. ಸರ್ಕಾರದ ಆದೇಶದಿಂದ ಸುಮಾರು ಐದು ಲಕ್ಷ ವಿದ್ಯಾರ್ಥಿಗಳಿಗೆ ತೊಂದರೆಯಾಗಲಿದೆ. ಐದು ಲಕ್ಷ ವಿದ್ಯಾರ್ಥಿಗಳು ಮತ್ತೆ ಯುಕೆಜಿ ಅಧ್ಯಯನ ಮಾಡುವ ಪರಿಸ್ಥಿತಿ ನಿರ್ಮಾಣವಾಗಲಿದೆ. ಹೀಗಾಗಿ ಮುಂದಿನ ಶೈಕ್ಷಣಿಕ ವರ್ಷಕ್ಕೆ ವಯೋಮಿತಿ ಸಡಿಲಿಸಿ ಶಾಲಾ ದಾಖಲಾತಿಗೆ ಅವಕಾಶ ಕಲ್ಪಿಸಬೇಕೆಂದು ನ್ಯಾಯಪೀಠದ ಗಮನ ಸೆಳೆದಿದ್ದರು. ಅರ್ಜಿ ವಿಚಾರಣೆ ನಡೆಸಿದ ನ್ಯಾಯಪೀಠಕ್ಕೆ ಪ್ರತಿವಾದಿಗಳ ಪರ ವಕೀಲರು, ನ್ಯಾಯಸಮ್ಮತ ಸಮಯ ನೀಡಿದಲ್ಲಿ ಪ್ರತಿವಾದಿಗಳು ಆ ಮನವಿಯನ್ನು ಪರಿಗಣಿಸಿ ಅಗತ್ಯ ಆದೇಶವನ್ನು ಹೊರಡಿಸುವುದಾಗಿ ನ್ಯಾಯಾಲಯಕ್ಕೆ ತಿಳಿಸಿದರು.

2026?27ನೇ ಶೈಕ್ಷಣಿಕ ವರ್ಷದ ಪ್ರಥಮ ತರಗತಿ ಪ್ರವೇಶಕ್ಕಾಗಿ ಕಳೆದ ಶೈಕ್ಷಣಿಕ ವರ್ಷದಲ್ಲಿ ನೀಡಿದ ಮಾದರಿಯಲ್ಲಿ ಕನಿಷ್ಠ ವಯೋಮಿತಿಯಲ್ಲಿ ಒಮ್ಮೆ ಸಡಿಲಿಕೆ ನೀಡಿ 5 ವರ್ಷ 5 ತಿಂಗಳು ವಯಸ್ಸಿನ ಮಕ್ಕಳಿಗೂ ಪ್ರವೇಶ ಅವಕಾಶ ಕಲ್ಪಿಸಬೇಕೆಂದು ನ್ಯಾಯಪೀಠವನ್ನು ಕೋರಿದ್ದರು.

ಕಳೆದ ಹಲವಾರು ವರ್ಷಗಳಿಂದ ಶಾಲೆಗಳು ಅನುಸರಿಸುತ್ತಿದ್ದ ಪ್ರವೇಶ ಪದ್ಧತಿ ಮತ್ತು ಅರ್ಹತಾ ಮಾನದಂಡಗಳ ಆಧಾರದ ಮೇಲೆ ಶಾಲಾ ಶಿಕ್ಷಣ ವ್ಯವಸ್ಥೆಗೆ ಸೇರ್ಪಡೆಯಾಗಿದ್ದಾರೆ. ಪೋಷಕರು ತಮ್ಮ ಮಕ್ಕಳನ್ನು ಉತ್ತಮ ನಂಬಿಕೆಯಿಂದ ಹಾಗೂ 2026?27ನೇ ಶೈಕ್ಷಣಿಕ ವರ್ಷದಲ್ಲಿ ಅವರು ಪ್ರಥಮ ತರಗತಿಗೆ ಮುಂದುವರಿಯುತ್ತಾರೆ ಎಂಬ ನಿರೀಕ್ಷೆಯೊಂದಿಗೆ ಪೂರ್ವ ಪ್ರಾಥಮಿಕ ಶಾಲೆಗೆ ದಾಖಲಿಸಿದ್ದರು. ಪ್ರೀ–ಸ್ಕೂಲ್ ಶಿಕ್ಷಣವನ್ನು ಯಶಸ್ವಿಯಾಗಿ ಪೂರ್ಣಗೊಳಿಸಿ, ಶೈಕ್ಷಣಿಕವಾಗಿ, ಸಾಮಾಜಿಕವಾಗಿ ಮತ್ತು ಮಾನಸಿಕವಾಗಿ ಪ್ರಥಮ ತರಗತಿಗೆ ಸಿದ್ಧರಾಗಿರುವ ಅನೇಕ ಮಕ್ಕಳು ಈಗ ಒಂದು ಸಂಪೂರ್ಣ ಶೈಕ್ಷಣಿಕ ವರ್ಷ ಕಳೆದುಕೊಳ್ಳುವ ಆತಂಕ ಎದುರಿಸುತ್ತಿದ್ದಾರೆ ಎಂದು ಅರ್ಜಿದಾರರು ನ್ಯಾಯಪೀಠದ ಗಮನ ಸೆಳದಿದ್ದರು.

**35 ಕೋಟಿ ರೂ. ಮೌಲ್ಯದ 17.4 ಕೆ.ಜಿ. ಎಂಡಿಎಂಎ ಜಪ್ತಿ**

## ಹೆಬ್ಬಾಳ ಪೋಲೀಸರಿಂದ ವಿದೇಶಿ ಪ್ರಜೆಗಳು ಸೇರಿ 8 ಮಂದಿ ಬಂಧನ



**ಬೆಂಗಳೂರು, ಮೇ 20:** ಅಂತಾರಾಜ್ಯ ಮಟ್ಟದ ಬೃಹತ್ ಮಾದಕ ಜಾಲವನ್ನು ಭೇದಿಸಿರುವ ಹೆಬ್ಬಾಳ ಪೊಲೀಸರು ದೆಹಲಿಯಿಂದ ಬೆಂಗಳೂರಿಗೆ ಮಾದಕ ಪದಾರ್ಥ ತಂದು ಮಾರಾಟ ಮಾಡುತ್ತಿದ್ದ ಆರೋಪದಡಿ ಸೆನೆಗಲ್ ಮೂಲದ ಡನ್ಫಾ ಗೆರಾಲ್ಡ್, ತಾಂಜೇನಿಯಾ ಮೂಲದ ಮೆಗ್ರಾತ್, ನೈಜೀರಿಯಾ ಮೂಲದ ಒಬಿಯಾನಿಜ್ ರೀಟಾ, ದೆಹಲಿ ಮೂಲದ ರೀನಾ ಯಾದವ್, ದೆಬಾಶಿಶ್ ಬ್ಯಾನರ್ಜಿ ಮತ್ತು ಬೆಂಗಳೂರಿನ ಪೆಡ್ಲರ್‌ಗಳಾದ ಧೀರಜ್, ಮೊಹಮ್ಮದ್ ಮನ್ಸೂರ್ ಹಾಗೂ ಅಬ್ದುಲ್ ಸಮದ್ ಎಂಬುವರನ್ನು ಬಂಧಿಸಿ, 35 ಕೋಟಿ ರೂ. ಮೌಲ್ಯದ 17.4 ಕೆ.ಜಿ. ಎಂಡಿಎಂಎ ಜಪ್ತಿ ಮಾಡಿದ್ದಾರೆ.

ಆರೋಪಿಗಳು ಸಂಶಯ ಬಾರದಂತೆ ಸೀರೆಗಳು, ಇಸ್ತ್ರಿ ಮಾಡಲು ಬಳಸುವ ಟೇಬಲ್‌ಗಳು ಮತ್ತು ಕುರ್ಚಿಗಳ ಒಳಭಾಗದಲ್ಲಿ ಎಂಡಿಎಂಎ ಕ್ರಿಸ್ಟಲ್‌ಗಳನ್ನು ಅಡಗಿಸಿ, ಸುಂದರವಾದ ಉಡುಗೊರೆಗಳಂತೆ ಪ್ಯಾಕ್ ಮಾಡುತ್ತಿದ್ದರು. ನಂತರ ಅವುಗಳನ್ನು ಚಾಣಾಕ್ಷತನದಿಂದ ದೆಹಲಿಯಿಂದ ರೈಲಿನ ಮೂಲಕ ಬೆಂಗಳೂರಿಗೆ ತರುತ್ತಿದ್ದರು. ಹೀಗೆ ಬೆಂಗಳೂರು ತಲುಪುವ ಮಾದಕವನ್ನು ನಿರ್ಜನ ಪ್ರದೇಶಗಳಲ್ಲಿ ಕಾರಿನಲ್ಲಿಟ್ಟು ಕೊಂಡು ಮಾರಾಟ ಮಾಡುತ್ತಿದ್ದರು. ಇದೇ ರೀತಿ ಹೆಬ್ಬಾಳದ ಆನಂದನಗರದ ಸಮೀಪ ದಂಧೆಯಲ್ಲಿ ತೊಡಗಿದ್ದ ಮೂವರನ್ನು ವಶಕ್ಕೆ ಪಡೆದಿದ್ದ ಪೊಲೀಸರು 4 ಕೆ.ಜಿ. 300 ಗ್ರಾಂ ಎಂಡಿಎಂಎ ವಶಪಡಿಸಿಕೊಂಡಿದ್ದರು. ಬಳಿಕ ಸರ್ಜಾಪುರದ ಚೂಡಸಂದ್ರದಲ್ಲಿರುವ ಸ್ಥಳೀಯ ಪೆಡ್ಲರ್ ಮೊಹಮ್ಮದ್ ಮನ್ಸೂರ್ ನಿವಾಸದ ಮೇಲೆ ದಾಳಿ ಮಾಡಿದಾಗ 10 ಕೆ.ಜಿ ಎಂಡಿಎಂಎ ಪತ್ತೆಯಾಗಿತ್ತು. ಇದರ ಬೆನ್ನಲ್ಲೇ ಅಬ್ದುಲ್ ಸಮದ್ ಎಂಬಾತನ ಹೆಣ್ಣೂರಿನ ನಿವಾಸದ ಮೇಲೆಯೂ ದಾಳಿ ನಡೆಸಿ 3.5 ಕೆ.ಜಿ ಮಾದಕ ವಸ್ತುವನ್ನು ಜಪ್ತಿ ಮಾಡಲಾಯಿತು.

ವಿಚಾರಣೆ ವೇಳೆ, ದೆಹಲಿ ಮತ್ತು ಹರಿಯಾಣದವರೆಗೂ ಆರೋಪಿಗಳ ಜಾಲ ವಿಸ್ತರಿಸಿರುವುದು ಬಯಲಾಗಿತ್ತು. ಸುಮಾರು 40 ಪೊಲೀಸ್ ಸಿಬ್ಬಂದಿ ವಿಶೇಷ ತಂಡ ದೆಹಲಿಯಲ್ಲಿ ಒಂದು ವಾರಕ್ಕೂ ಹೆಚ್ಚು ಕಾಲ ಕಾರ್ಯಾಚರಣೆ ನಡೆಸಿ ಆರೋಪಿಗಳನ್ನು ಹೆಡೆಮುರಿ ಕಟ್ಟಿದೆ. ಬೆಂಗಳೂರು ಉತ್ತರ ವಿಭಾಗದ ಡಿಸಿಪಿ ಬಿ.ಎಸ್. ನೇಮಗೌಡ ಹಾಗೂ ಜೆ.ಸಿ.ನಗರ ಎಸಿಪಿ ಕೆ.ಎಸ್. ತನ್ವಿರ್ ಅವರ ನೇರ ಮಾರ್ಗದರ್ಶನದಲ್ಲಿ ನಡೆದಿರುವ ಈ ಬೃಹತ್ ಕಾರ್ಯಾಚರಣೆಯನ್ನು ನಗರ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ಶ್ಲಾಘಿಸಿದ್ದಾರೆ.

ಈ ತಿಂಗಳ ಆರಂಭದಲ್ಲಿ ಮುಂಬೈನಲ್ಲಿ ಸಕ್ರಿಯವಾಗಿದ್ದ ಅಂತಾರಾಷ್ಟ್ರೀಯ ಮಾದಕ ದ್ರವ್ಯ ಮಾರಾಟ ಜಾಲವನ್ನು ಮಾದಕ ವಸ್ತು ನಿಯಂತ್ರಣ ಬ್ಯೂರೋ(ಎನ್ಸಿಬಿ) ಭೇದಿಸಿತ್ತು. ಪ್ರಕರಣದಲ್ಲಿ 1,745 ಕೋಟಿ ರೂ. ಮೌಲ್ಯದ 349 ಕಿಲೋಗ್ರಾಂ ಹೈಗ್ರೇಡ್ ಕೊಕೇನ್ ವಶಪಡಿಸಿಕೊಳ್ಳಲಾಗಿತ್ತು. ಈ ಬಗ್ಗೆ ಅಧಿಕೃತವಾಗಿ ಕೇಂದ್ರ ಗೃಹ ಸಚಿವ ಅಮಿತ್ ಶಾ ತಿಳಿಸಿದ್ದರು.

## ಶಿಕ್ಷಣದ ಮೂಲಕ ಜಾಗತಿಕ ಸಹಕಾರ ಬಲಪಡಿಸುವ ಗುರಿ: ಪ್ರೊ: ವಿಶ್ವನಾಥ್

**ಬೆಂಗಳೂರು,ಮೇ.20:** ನಗರದ ಪ್ರತಿಷ್ಠಿತ ಡಾ. ಬಿ. ಆರ್. ಅಂಬೇಡ್ಕರ್ ಅರ್ಥಶಾಸ್ತ್ರ ವಿದ್ಯಾಲಯ (ಬೇಸ್) ವಿಶ್ವವಿದ್ಯಾಲಯದಲ್ಲಿ ಮಂಗಳವಾರ ನಡೆದ ಅಕಾಡೆಮಿಯಾ ಉದ್ಯಮ ಸಂವಾದ ಕಾರ್ಯಕ್ರಮದಲ್ಲಿ ಜಾಗತಿಕ ಮಟ್ಟದ ಶಿಕ್ಷಣ ಮತ್ತು ಕೈಗಾರಿಕಾ ಸಹಭಾಗಿತ್ವದ ಮಹತ್ವಕ್ಕೆ ವಿಶೇಷ ಒತ್ತು ನೀಡಲಾಯಿತು. ಬ್ರಿಟಿಷ್ ಸರ್ಕಾರದ ದಕ್ಷಿಣ ಏಷ್ಯಾ ವ್ಯಾಪಾರ ಉಪ ಆಯುಕ್ತರು ಹಾಗೂ ಉಪ ಹೈ ಕಮಿಷನರ್ ಚಂದ್ರು ಅಯ್ಯರ್ ಉದ್ಘಾಟನಾ ಮಾಡಿ ನಂತರ ಮಾತನಾಡುತ್ತ ಶಿಕ್ಷಣ ಸಂಸ್ಥೆಗಳು ಮತ್ತು ಕೈಗಾರಿಕೆಗಳ ನಡುವೆ ಬಲವಾದ ಸಂಪರ್ಕ ಅಗತ್ಯವಿದೆ ಎಂದು ಹೇಳಿದರು.

ಗ್ಲೋಬಲ್ ವೇಲ್ಸ್ ಕರ್ನಾಟಕ ಪಾಲುದಾರಿಕೆ 2026 ಅಂಗವಾಗಿ ಆಯೋಜಿಸಲಾದ ಈ ಕಾರ್ಯಕ್ರಮವನ್ನು ಅಬೆರಿಸ್ಟ್ವಿತ್ ಬಿಸಿನೆಸ್ ಶಾಲೆ ಮತ್ತು ಅಬೆರಿಸ್ಟ್ವಿತ್ ವಿಶ್ವವಿದ್ಯಾಲಯದ ಸಹಯೋಗದಲ್ಲಿ ನಡೆಸಲಾಯಿತು. ಕಾರ್ಯಕ್ರಮದಲ್ಲಿ ಮಾತನಾಡಿದ ಬೇಸ್ ವಿಶ್ವವಿದ್ಯಾಲಯದ ಕುಲಪತಿ ಪ್ರೊ.ಕೆ.ವಿಶ್ವನಾಥ ಅವರು ಅಂತರರಾಷ್ಟ್ರೀಯ ಸಂಶೋಧನಾ ಸಹಭಾಗಿತ್ವ ಮತ್ತು ಶೈಕ್ಷಣಿಕ ತೊಡಗಿಸಿಕೊಳ್ಳುವಿಕೆಯ ಮೂಲಕ ಜಾಗತಿಕ ಸಹಕಾರವನ್ನು ಮತ್ತಷ್ಟು ಬಲಪಡಿಸುವುದು ವಿಶ್ವವಿದ್ಯಾಲಯದ ದೀರ್ಘಕಾಲಿಕ ಗುರಿಯಾಗಿದೆ ಎಂದು ತಿಳಿಸಿದರು.

ಪ್ರೊ. ವಿಶ್ವನಾಥ ಅವರು ಅಂತರರಾಷ್ಟ್ರೀಯ ಸಂಶೋಧನಾ ಸಹಭಾಗಿತ್ವ, ಜಾಗತಿಕ ಶೈಕ್ಷಣಿಕ ಸಂಪರ್ಕ ಹಾಗೂ ಕೈಗಾರಿಕಾ ಸಹಯೋಗವನ್ನು ಬಲಪಡಿಸುವ ದೀರ್ಘಕಾಲಿಕ ದೃಷ್ಟಿಕೋನವನ್ನು ಹಂಚಿಕೊಂಡರು. ಕುಲಸಚಿವೆ ಮಮತಾ ಮೋಹನ್ ಹಾಗೂ ಹಣಕಾಸು ಅಧಿಕಾರಿ ಪ್ರಶಾಂತ್ ಕುಮಾರ್ ಅವರು ವಿದ್ಯಾರ್ಥಿ ಕೈಗಾರಿಕಾ ಸಂಪರ್ಕ, ಜಾಗತಿಕ ಸಂಶೋಧನಾ ಅವಕಾಶಗಳು ಹಾಗೂ ಉದ್ಯಮಾಧಾರಿತ ಶಿಕ್ಷಣದ ಅಗತ್ಯತೆಯ ಬಗ್ಗೆ ಅಭಿಪ್ರಾಯ ಹಂಚಿಕೊಂಡರು.

ಅಬೆರಿಸ್ಟ್ವಿತ್ ವಿಶ್ವವಿದ್ಯಾಲಯದ ಪ್ರತಿನಿಧಿ ಮಂಡಳಿಗೆ ನೇತೃತ್ವ ವಹಿಸಿದ್ದ ಪ್ರೊ. ಹೊಮಾಗ್ನಿ ಚೌಧುರಿ ಅವರು ಕರ್ನಾಟಕ ಮತ್ತು ವೇಲ್ಸ್ ನಡುವಿನ ಶೈಕ್ಷಣಿಕ ಹಾಗೂ ಸಂಶೋಧನಾ ಸಹಭಾಗಿತ್ವವನ್ನು ಇನ್ನಷ್ಟು ಬಲಪಡಿಸುವ ಉತ್ಸಾಹ ವ್ಯಕ್ತಪಡಿಸಿದರು. ಬೇಸ್ ಮತ್ತು ಅಬೆರಿಸ್ಟ್ವಿತ್ ವಿಶ್ವವಿದ್ಯಾಲಯಗಳ ಸಂಯುಕ್ತ ಯೋಜನೆ ಹವಾಮಾನ ಸಂಬಂಧಿತ ಲಿಂಗ ಅಪಾಯಗಳು ಹಾಗೂ ಸಂಸ್ಥೆಗಳ ಅಧ್ಯಯನದ ಮೇಲೆ ಕೇಂದ್ರೀಕರಿಸಲಿದೆ ಎಂದು ಹೇಳಿದರು. ಸೆಂಥಿಲ್ ವಿನಾಯಗಂ, ಡಾ. ಅಮೀರ್ ಬಜಾರ್ಘ್, ಪ್ರೊ. ಎಸ್. ಕೆ. ಪ್ರಸಾದ್, ಡಾ. ಭಾವನಾ ಕುಮಾರ್, ಲೆಫ್ಟಿನೆಂಟ್ ಕರ್ನಲ್ ಆರ್. ಕೆ. ಸಿಂಗ್, ಪ್ರೊ. ಅಭಿಷೇಕ್ ರಂಜನ್, ಡಾ. ಬ್ರೂಸ್ ವೈಟ್, ಶ್ರೀಮತಿ ಅನೆಟ್ ಸೆಬಾಸ್ಟಿಯನ್ ಹಾಗೂ ಡಾ. ಮೌಸೂಮಿ ಭಟ್ಟಾಚಾರ್ಯ ಭಾಗವಹಿಸಿದ್ದರು.

ಅವೇಕ್, ಟೇರಿ, ಎಫ್ಕೆಸಿಸಿಐ, ಎಫ್‌ಎಎಸ್ ಮತ್ತು ಸಿಎಮ್‌ಎಫ್‌ಆರ್‌ಐ ಮಂಗಳೂರು ಸಂಸ್ಥೆಗಳ ಪ್ರತಿನಿಧಿಗಳೂ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದು, ಕರ್ನಾಟಕದ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳ ಹವಾಮಾನ ಅಪಾಯಗಳು, ಲಿಂಗ ಸಮಾನತೆ ಹಾಗೂ ಸ್ಥಿರ ಪ್ರಾದೇಶಿಕ ಆರ್ಥಿಕ ಅಭಿವೃದ್ಧಿ ಕುರಿತು ಮಹತ್ವದ ಚರ್ಚೆಗಳು ನಡೆದವು.

**ಉಗ್ರ ಸಂಘಟನೆಗೆ ಯುವಕರ ನೇಮಕ: ಮಹಾರಾಷ್ಟ್ರ ಮೂಲದ ವ್ಯಕ್ತಿಗೆ 7 ವರ್ಷ ಜೈಲು**

## 63 ಸಾವಿರ ರೂ. ದಂಡ ವಿಧಿಸಿ ಎನ್‌ಐಎ ವಿಶೇಷ ನ್ಯಾಯಾಲಯ ಆದೇಶ ನಿಷೇಧಿತ



**ಬೆಂಗಳೂರು,ಮೇ.20:** ನಿಷೇಧಿತ ತಾಲಿಬಾನ್ ಹಾಗೂ ತೆಹ್ರಿಕ್–ಇ–ತಾಲಿಬಾನ್ ಪಾಕಿಸ್ತಾನ (ಟಿಟಿಪಿ) ಸಂಘಟನೆಯ ಅಂತಾರಾಷ್ಟ್ರೀಯ ಸದಸ್ಯರ ಜೊತೆ ಸಂಪರ್ಕ ಹೊಂದಿ ಯುವಕರ ನೇಮಕಾತಿ ಮಾಡುತ್ತಿದ್ದ ಮಹಾರಾಷ್ಟ್ರ ಮೂಲದ ಹವ್ರಾಜ್ ವೋರ್ಷಿದ್ ಶೇಖ್‌ಗೆ 7 ವರ್ಷ ಕಠಿಣ ಕಾರಾಗೃಹ ಶಿಕ್ಷೆ ಹಾಗೂ 63 ಸಾವಿರ ರೂ. ದಂಡ ವಿಧಿಸಿ ನಗರದ ಎನ್‌ಐಎ ವಿಶೇಷ ನ್ಯಾಯಾಲಯ ಆದೇಶಿಸಿದೆ.

2023ರ ಏಪ್ರಿಲ್‌ನಲ್ಲಿ ಹವ್ರಾಜ್ ವೋರ್ಷಿದ್ ಶೇಖ್ ಮತ್ತು ಮೊಹಮ್ಮದ್ ಆರೀಫ್ ಎಂಬ ಆರೋಪಿಗಳ ವಿರುದ್ಧ ಯುಎಪಿಎ ಕಾಯ್ದೆಯಡಿಯಲ್ಲಿ ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸಿದ್ದ ಎನ್‌ಐಎ, ಅದೇ ವರ್ಷ ಅಕ್ಟೋಬರ್‌ನಲ್ಲಿ ಆರೋಪಪಟ್ಟಿ ಸಲ್ಲಿಸಿತ್ತು.

ಈ ಹಿನ್ನೆಲೆಯಲ್ಲಿ ವಿಚಾರಣೆ ನಡೆಸಿದ ಎನ್‌ಐಎ ವಿಶೇಷ ನ್ಯಾಯಾಲಯ ಆರೋಪಿಗಳ ಪೈಕಿ ಹವ್ರಾಜ್‌ಗೆ 7 ವರ್ಷ ಜೈಲು ಶಿಕ್ಷೆ ಮತ್ತು 63 ಸಾವಿರ ರೂ. ದಂಡ ವಿಧಿಸಿದೆ. ವಿಚಾರಣೆ ಮುಂದುವರೆದಿದೆ.

2019 ರಿಂದ 2022ರವರೆಗೂ ಸೌದಿ ಅರೇಬಿಯಾದಲ್ಲಿದ್ದ ಹವ್ರಾಜ್, ಪಾಕಿಸ್ತಾನ ಮತ್ತು ಅಫ್ಘಾನಿಸ್ತಾನ ಮೂಲದ ಕೆಲವರ ಸಂಪರ್ಕದಿಂದ ತಾಲಿಬಾನ್ ಮತ್ತು ಟಿಟಿಪಿ ಸಿದ್ಧಾಂತದಿಂದ ಪ್ರಚೋದನೆಗೊಂಡಿದ್ದ. ಈತನ ವಿಚಾರಣೆಯಲ್ಲಿ ಉಗ್ರ ಸಂಘಟನೆಗಳ ಹಂಝುಲಾ ಎಂಬ ಆನ್‌ಲೈನ್ ಹ್ಯಾಂಡ್ಲರ್ ಸಂಪರ್ಕದಲ್ಲಿರುವುದು ಪತ್ತೆಯಾಗಿದೆ.

ಈ ಹಂಝುಲಾ ಎಂಬಾತ ಕಾಶ್ಮೀರ ಪೇಜ್ ಎಂಬ ಇನ್‌ಸ್ಟಾಗ್ರಾಂ ಖಾತೆ ಮೂಲಕ ಯುವಕರನ್ನು ಪ್ರಚೋದಿಸಿ ಮೂಲಭೂತವಾದಿ ಗಳನ್ನಾಗಿ ಮಾಡುತ್ತಿದ್ದ ಎಂಬುದು ತನಿಖೆಯಲ್ಲಿ ಬೆಳಕಿಗೆ ಬಂದಿದೆ.

ಭಾರತಕ್ಕೆ ವಾಪಸ್ ಬಂದ ಬಳಿಕ ಹವ್ರಾಜ್, ತನ್ನ ಸ್ನೇಹಿತ ಹಾಗೂ ಮೊಹಮ್ಮದ್ ಆರೀಫ್ ಜತೆ ಸೇರಿ ತಾಲಿಬಾನ್ ಮತ್ತು ಟಿಟಿಪಿ ಉಗ್ರ ಸಂಘಟನೆ ಸಿದ್ಧಾಂತವನ್ನು ಪ್ರಚಾರ ಮಾಡುತ್ತಿದ್ದರು. ಆರ್ಥಿಕ ಮತ್ತು ಇತರೆ ಸಂಕಷ್ಟದಲ್ಲಿ ಸಿಲುಕಿದ್ದ ಯುವಕರನ್ನು ಸಂಘಟನೆ ಪರವಾಗಿ ಕೆಲಸ ಮಾಡಲು ಪ್ರಚೋದಿಸಿ ಸಂಘಟನೆಗೆ ನೇಮಕ ಮಾಡಿಕೊಳ್ಳುತ್ತಿದ್ದರು.

ಪ್ರಮುಖ ವಿಚಾರವೆಂದರೆ, ಇಬ್ಬರು ಭಾರತದ ವಿರುದ್ಧ ಜಿಹಾದ್ ಯುದ್ಧ ನಡೆಸಲು ಟಿಟಿಪಿ ಸೇರುವ ಉದ್ದೇಶದಿಂದ ತಮ್ಮದೇ ತಂಡ ಕಟ್ಟುವ ಸಿದ್ಧತೆಯಲ್ಲಿದ್ದರು ಎಂಬುದು ತನಿಖೆಯಲ್ಲಿ ಬೆಳಕಿಗೆ ಬಂದಿದೆ ಎನ್‌ಐಎ ಪ್ರಕಟಣೆಯಲ್ಲಿ ತಿಳಿಸಿದೆ.



ಬಕ್ರೀದ್ (ಈದ್ ಉಲ್-ಅಧಾ) ಹತ್ತಿರ ಬರುತ್ತಿದ್ದು, ಬುಧವಾರ ಬೆಂಗಳೂರಿನ ಚಾಮರಾಜಪೇಟೆಯಲ್ಲಿ ಮೇಕೆ ಮತ್ತು ಕುರಿ ವ್ಯಾಪಾರ ಆರಂಭವಾಗಿದೆ.

# ಹುಬ್ಬಳ್ಳಿಯಲ್ಲಿ ರುದ್ರಾಭಿಷೇಕಂ ಚಿತ್ರದ ಹಾಡುಗಳ ಬಿಡುಗಡೆ

ಹುಬ್ಬಳ್ಳಿ : ಪ್ಯಾನ್ ಇಂಡಿಯಾ ಕ್ರಿಯೇಷನ್ಸ್' ಬೆಂಗಳೂರ ಅವರ ರುದ್ರಾಭಿಷೇಕಂ ಚಲನಚಿತ್ರದ ಇಂದಲ್ಲ ನಾಳೆ ಮತ್ತು ಹೃದಯದ ಬಾಗಿಲ ತೆರೆದರೆ? ಎರಡು ಹಾಡುಗಳ ಬಿಡುಗಡೆ ಸಮಾರಂಭ ಹುಬ್ಬಳ್ಳಿಯ ಶ್ರೀ ಸಿದ್ಧಾರೂಢ ಸ್ವಾಮಿಗಳ ಮಠದ ಆವರಣದಲ್ಲಿ ನೆರವೇರಿತು.

ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಜಗದೀಶ್ ಶೆಟ್ಟರ್ ದೀಪ ಬೆಳಗಿಸಿ ಉದ್ಘಾಟಿಸಿ ಇಂದಲ್ಲ ನಾಳೆ' ಹಾಡಿಗೆ ಚಾಲನೆ ನೀಡಿ ಮಾತನಾಡಿದ ಅವರು, ಕನ್ನಡ ಚಿತ್ರರಂಗ ಇಂದು ದೊಡ್ಡ ಮಟ್ಟಕ್ಕೆ ಬೆಳೆದಿದ್ದು, ಹಿಂದಿ ಹಾಗೂ ಇಂಗ್ಲಿಷ್ ಚಿತ್ರಗಳಿಗೆ ಸ್ಪರ್ಧೆ ನೀಡುವ ಮಟ್ಟದ ಸಿನಿಮಾಗಳು ನಿರ್ಮಾಣವಾಗುತ್ತಿವೆ. ಪ್ರೇಕ್ಷಕರು ಕನ್ನಡ ಚಿತ್ರಗಳನ್ನು ಚಿತ್ರಮಂದಿರಗಳಲ್ಲೇ ನೋಡಿ ಎಂದರು.

ನಟ ವಿಜಯ ರಾಘವೇಂದ್ರ ಮಾತನಾಡಿ ಸಿದ್ಧಾರೂಢ ಮಠ ನಮ್ಮ ಕುಟುಂಬಕ್ಕೆ ಹೊಸದೇನಲ್ಲ. ಇದು ರಾಜ್‌ಕುಮಾರ್ ಮಾಮನ ಹೃದಯಕ್ಕೆ ತುಂಬ ಹತ್ತಿರವಾದ ಸ್ಥಳ, ಶಿವಣ್ಣ, ಅಪ್ಪು ಮಾಮ ಎಲ್ಲರಿಗೂ ಅತ್ಯಂತ ಪ್ರಿಯವಾದ ಜಾಗ" ಎಂದ ಅವರು ಚಿತ್ರದಲ್ಲಿ ಮೊದಲ ಬಾರಿಗೆ ವೀರಗಾಸೆ ಕಲಾವಿದನ ಪಾತ್ರ ನಿರ್ವಹಿಸಿದ್ದು, ತಂದೆ-ಮಗನ ಪಾತ್ರದಲ್ಲಿ ಅಭಿನಯಿಸಿರುವೆ ಎಂದರು. ನಿರ್ದೇಶಕ ವಸಂತ್‌ಕುಮಾರ್ ಮಾತನಾಡಿ, ದೈವಪರ ಹಿನ್ನೆಲೆಯ ಜನಪದ ಕಲೆಯನ್ನು ಮನೆಮನೆಗೂ ತಲುಪಿಸುವ ಉದ್ದೇಶದಿಂದ ಚಿತ್ರ ನಿರ್ಮಿಸಲಾಗಿದೆ. ದೇವನಹಳ್ಳಿ, ಗೋಕರ್ಣ, ಹೊನ್ನಾವರ, ಕುಮಟಾ, ಅಬ್ಬಕ್ಕ ಫೋರ್ಟ್ ಹಾಗೂ ಅಘನಾಶಿನಿ ಹಿನ್ನೀರು ಪ್ರದೇಶಗಳಲ್ಲಿ 50ಕ್ಕೂ ಹೆಚ್ಚು ದಿನಗಳ ಕಾಲ ಚಿತ್ರೀಕರಣ ನಡೆಸಲಾಗಿದ್ದು ಚಿತ್ರವು ಜೂನ 16ರಂದು ತೆರೆಗೆ ಬರಲಿದೆ ಎಂದರು. ಚಿತ್ರದ ಸಂಗೀತ ನಿರ್ದೇಶಕ ವಿ. ಮನೋಹರ್, ನಿರ್ಮಾಪಕ ಚಿದಾನಂದಮೂರ್ತಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಬಾಳು ಮುಗಜಿಕೊಂಡಿ, ವಿನಾಯಕ ಘೋಡಕೆ, ಪತ್ರಕರ್ತ ಗಣಪತಿ ಗಂಗೊಳ್ಳಿ, ಸಂಭಾಜಿ ಕಲಾಲ್ ಭರಮರೆಡ್ಡಿ ಪೂಜಾರ್, ವಿನಯ್ ಪಾಟೀಲ, ಹಳೆಹುಬ್ಬಳ್ಳಿ ಪೋಲೀಸ್ ಇನ್ಸ್‌ಪೆಕ್ಟರ್ ಎಂ.ಎಸ್.ಸಿಂಧೂರ, ನಾಯಕಿ ಪ್ರಿಯಾಂಕ ತಿಮ್ಮೇಶ, ಮಮತಾಮನು, ಮನು, ಮುತ್ತುರಾಜ್ ಟಿ ಸೇರಿದಂತೆ ಚಿತ್ರತಂಡದ ಕಲಾವಿದರು, ತಂತ್ರಜ್ಞರು ಪಾಲ್ಗೊಂಡಿದ್ದರು. ಖ್ಯಾತ ಗಾಯಕ ವಿಷ್ಣು, ಹುಬ್ಬಳ್ಳಿಯ ಗಾಯಕ ರವೀಂದ್ರ ರಾಮದುರ್ಗಕರ ಹಾಡುಗಳ ಮೂಲಕ ರಂಜಿಸಿದರು. ಇದೆ ಸಂದರ್ಭದಲ್ಲಿ ವಿಜಯ ರಾಘವೇಂದ್ರರಿಗೆ ಚಿತ್ರ ತಂಡದಿಂದ ನ್ಯಾಚರಲ್ ಸ್ಟಾರ್ ಬಿರುದು ನೀಡಿ ಗೌರವಿಸಲಾಯಿತು.

ಚಿತ್ರದಲ್ಲಿ ನಾಯಕರಾಗಿ ವಿಜಯ ರಾಘವೇಂದ್ರ, ನಾಯಕಿಯಾಗಿ ಪ್ರಿಯಾಂಕ ತಿಮ್ಮೇಶ, ಬಲರಾಜ್ ವಾಡಿ, ಶಂಕರ ನಾರಾಯಣ್, ಮೈಸೂರು ಬಸವರಾಜ್, ಬ್ಯಾಂಕ್‌ಪ್ರಸಾದ, ಮನು, ಬುಲೆಟ್ ವಿನು, ವಿನಯ್, ಸನತ್, ಸಂದೀಪ್, ಮಹಾಲಿಂಗ್ ಹೂಗಾರ್, ಸೌಂದರ್ಯ, ನವನೀತ, ಮಮತಾ ಮನು, ಮಂಜುಳಾ, ಧನಲಕ್ಷ್ಮಿ, ಸ್ವಾತಿ ಮೊದಲಾದವರಿದ್ದಾರೆ.

ತಾಂತ್ರಿಕ ವರ್ಗದಲ್ಲಿ ಛಾಯಾಗ್ರಹಣ ಮುತ್ತುರಾಜ್, ವಿ.ಮನೋಹರ್ ಸಂಗೀತ, ಭಜರಂಗಿ ಮೋಹನ್ ನೃತ್ಯ ಸಂಯೋಜನೆ, ಥ್ರಿಲ್ಲರ್‌ಮಂಜು ಸಾಹಸ, ಬಾಬುಖಾನ್ ಕಲಾ ನಿರ್ದೇಶನ, ನೊಣವಿನಕೆರೆ ಕುಮಾರ ಪ್ರಸಾಧನ, ಮುತ್ತುರಾಜ್.ಟಿ ಸಂಕಲನ, ನಾಗೇಂದ್ರ, ಡಾ. ಪ್ರಭು.ಗಂಜಿಹಾಳ, ಡಾ.ವೀರೇಶ್ ಹಂಡಿಗಿ ಪಿ.ಆರ್.ಓ., ಸಹ ನಿರ್ದೇಶನ ಮನು ಮತ್ತು ಧೀರಜ್ ಅವರದಿದ್ದು, ಕೆ ವಸಂತ್‌ಕುಮಾರ್ ಕಥೆ-ಚಿತ್ರಕಥೆ ಬರೆದು ನಿರ್ದೇಶನ ಜೊತೆಗೆ ಚಿತ್ರಕ್ಕೆ ಹಾಡುಗಳನ್ನು ಬರೆದು ತತ್ವಜ್ಞಾನಿಯಾಗಿ ಅಭಿನಯಿಸಿದ್ದಾರೆ. ಕೆ.ಎನ್. ಮಂಜುನಾಥ, ಎನ್. ಜಯರಾಮಪ್ಪ, ಕೆ. ವೆಂಕಟೇಶ್, ಬಿ. ಚಿದಾನಂದಮೂರ್ತಿ, ಸುರೇಶ್‌ಬಾಬು, ಅಶ್ವಥ್‌ನಾರಾಯಣ, ಶಿವಕುಮಾರ್. ಕೆ.ಎಸ್. ರವಿಕುಮಾರ್ ಹಾಗೂ ಕುಸುಮ ವಸಂತ್‌ಕುಮಾರ ಚಿತ್ರ ನಿರ್ಮಿಸಿದ್ದಾರೆ.

# ಹಣಕಾಸು ವಿಚಾರ: ಎಂಎಲ್‌ಸಿ ಎಚ್.ವಿಶ್ವನಾಥ್ ವಿರುದ್ಧ ದೂರು ದಾಖಲು



**ಮೈಸೂರು, ಮೇ 20:** ಹಣಕಾಸಿನ ವಿಚಾರಕ್ಕೆ ಸಂಬಂಧಿಸಿದಂತೆ ಬಿಜೆಪಿ ವಿಧಾನಪರಿಷತ್ ಸದಸ್ಯ ಎಚ್ ವಿಶ್ವನಾಥ್ ವಿರುದ್ಧ ಎಫ್‌ಐಆರ್ ದಾಖಲಾಗಿದೆ. ಮಹದೇವ್ ಎನ್ನುವ ವ್ಯಕ್ತಿ ಎಂಟಿಬಿ ನಾಗರಾಜ್ ಅವರ ಮೂಲಕ ವಿಶ್ವನಾಥ್ ಅವರಿಗೆ ಸಾಲ ಕೊಡಿಸಿದ್ದರು. ಬಳಿಕ ಆ ಹಣವನ್ನು ವಾಪಸ್ ಕೇಳಿದ್ದಕ್ಕೆ ಹಲ್ಲೆ ಮಾಡಿದಾರೆಂದು ಆರೋಪಿಸಿದ್ದು, ಈ ಸಂಬಂಧ ನ್ಯಾಯಾಲಯದ ಮೊರೆ ಹೋಗಿದ್ದರು. ಇದೀಗ ಕೋರ್ಟ್ ಆದೇಶದ ಮೇರೆಗೆ ವಿಶ್ವನಾಥ್ ವಿರುದ್ಧ ಮೈಸೂರಿನ ದೇವರಾಜ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಇನ್ನು ಈ ಬಗ್ಗೆ ಸ್ವತಃ ದೂರುದಾರ ಮಾಧ್ಯಮಗಳಿಗೆ ಪ್ರತಿಕ್ರಿಯಿಸಿದ್ದು, ಪ್ರಕರಣದ ಪಿನ್ ಟು ಪಿನ್ ಮಾಹಿತಿ ಬಿಚ್ಚಿಟ್ಟಿದ್ದಾರೆ. ಮಾಧ್ಯಮಗಳ ಜತೆ ಮಾತನಾಡಿದ ಕಾಂಗ್ರೆಸ್ ಮುಖಂಡ ಕೋಟೆಹುಂಡಿ ಮಹದೇವ್, ಎಂ.ಎಲ್.ಸಿ ವಿಶ್ವನಾಥ್ ನನಗೆ ಅನ್ಯಾಯ ಮಾಡಿದ್ದಾರೆ. ಈ ಹಿಂದೆ ವಿಶ್ವನಾಥ್ ಎಂಪಿ ಆಗಿದ್ದಾಗ ಎಂ.ಟಿ.ಬಿ ನಾಗರಾಜ್ ಬಳಿ 35 ಲಕ್ಷ ಕೊಡಿಸಿದ್ದೆ. ನಾನು 12 ಲಕ್ಷ ಪಡೆದಿದ್ದೆ. ಆ ಸಮಯದಲ್ಲಿ ವಿಶ್ವನಾಥ್ ಮಗ ಕೂಡ ಇದ್ದರು. ವಿಶ್ವನಾಥ್ ಚಾಮುಂಡೇಶ್ವರಿ ತಾಯಿ ಸನ್ನಿಧಿಯಲ್ಲಿ ಆಣೆ ಮಾಡಲಿ ಎಂದು ಸವಾಲು ಹಾಕಿದ್ದಾರೆ.

ದುಡ್ಡಿಗಾಗಿ ನನ್ನ ಆಸ್ತಿಯನ್ನು ಅಡ ಇಟ್ಟಿದ್ದೇನೆ. ಇದೀಗ ಬಡ್ಡಿಯೂ ಬೆಳೆದಿದೆ. ನನ್ನ ಆಸ್ತಿ ಬಗ್ಗೆ ಅಕ್ಕ ತಂಗಿಯರು ಕೇಸ್ ಹಾಕಿದ್ದಾರೆ. ಇದೀಗ ಸಾಲ ವಾಪಸ್ಸು ಕೊಡಿ ನಾನು ಎಂಟಿ.ಬಿ ಹತ್ರ ಪತ್ರ ಪಡೆದುಕೊಳ್ಳಬೇಕು ಎಂದು ಕೇಳಿದ್ದೆ. ಜಲದರ್ಶಿನಿಯಲ್ಲಿ ಹಣ ಕೇಳಲು ಹೋದಾಗ ನನಗೆ ಬೈದು ಹಲ್ಲೆ ಮಾಡಿದ್ರು. ಈ ಬಗ್ಗೆ ಮೈಸೂರಿನಲ್ಲಿ ದೂರು ಆಗಲಿಲ್ಲ. ಕೋರ್ಟ್ ಮೊರೆ ಹೋಗಿ ಎಫ್‌ಐಆರ್ ಹಾಕಿಸಿದ್ದೇನೆ. ಇವರಿಗಾಗಿ ನಾನು ಸಾಕಷ್ಟು ಕೆಲಸ ಮಾಡಿದ್ದೇನೆ. ಇದೀಗ ನೀನು ಸಿದ್ದರಾಮಯ್ಯ ಚೇಲಾ ಅಂತಾರೆ. ಈ ಪ್ರಕರಣಕ್ಕೂ ಸಿದ್ದರಾಮಯ್ಯಗೂ ಯತೀಂದ್ರಗೂ ಸಂಬಂಧವಿಲ್ಲ. ವಿಶ್ವನಾಥ್ 35 ಲಕ್ಷ ಹಣ ಎಂ.ಟಿ.ಬಿ ನಾಗರಾಜ್‌ಗೆ ಕೊಡಬೇಕು. ಬಡ್ಡಿ ಬೆಳೆದು ಕೋಟ್ಯಂತರ ಹಣ ಆಗಿದೆ. ಅದನ್ನು ಕೊಡಬೇಕು. ವಿಶ್ವನಾಥ್ ಸತ್ಯವಂತರಾಗಿದ್ದಾರೆ ಚಾಮುಂಡೇಶ್ವರಿ ಸನ್ನಿಧಿಯಲ್ಲಿ ಪ್ರಮಾಣ ಮಾಡಲಿ ಎಂದಿದ್ದಾರೆ. ನಿನಗೆ ಸಾಲ ಕೊಡಲು 55 ಲಕ್ಷ ರೂಪಾಯಿ ಎಲ್ಲಿಂದ ಬಂತು. ನಾನು 50 ವರ್ಷದಿಂದ ರಾಜಕಾರಣ ಮಾಡಿಕೊಂಡು ಬಂದಿದ್ದೇನೆ. ನಾನು ಸದನದಲ್ಲೇ ಸತ್ಯವಂತ ಎಂದು ಪ್ರಮಾಣ ಮಾಡಿದ್ದೇನೆ. ಕೋಟೆಹುಂಡಿ ಮಹದೇವ ನಮ್ಮ ಮನೆ ಮುಂದೆ ಬಂದು ನಿಲ್ಲುತ್ತಿದ್ದ. ಸಿದ್ದರಾಮಯ್ಯ ಮಗನನ್ನು ನಾನು ಎಚ್‌ಎಂ ಎಂದು ಹೇಳಿದ್ದೆ. ಈಗ ಅದನ್ನು ತೀರಿಸಿಕೊಳ್ಳುವ ಕೆಲಸ ಮಾಡುತ್ತಿದ್ದಾರೆ. ಎಫ್‌ಐಆರ್ ವಿರುದ್ಧ ಹೈಕೋರ್ಟ್ ಮೆಟ್ಟಿಲೇರುತ್ತೇನೆ ಎಂದು ಎಂದಿದ್ದಾರೆ.

## ಯತೀಂದ್ರ ಕೈವಾಡ: ವಿಶ್ವನಾಥ್ ಆರೋಪ

ಸಾಲ ಕೇಳಲು ಬಂದ ವ್ಯಕ್ತಿಯ ಮೇಲೆ ಹಲ್ಲೆ ಆರೋಪ ಸಂಬಂಧ ನನ್ನ ವಿರುದ್ಧ ನಗರದ ದೇವರಾಜ ಠಾಣೆಯಲ್ಲಿ ಎಫ್‌ಐಆರ್ ದಾಖಲು ಮಾಡಿರುವುದರ ಹಿಂದೆ ಸಿಎಂ ಪುತ್ರ ಯತೀಂದ್ರ ಸಿದ್ದರಾಮಯ್ಯನವರ ಕೈವಾಡವಿದೆ ಎಂದು ಎಂಎಲ್‌ಸಿ ಎಚ್. ವಿಶ್ವನಾಥ್ ಆರೋಪಿಸಿದ್ದಾರೆ. ಈ ಬಗ್ಗೆ ಹೈಕೋರ್ಟ್‌ಗೆ ಹೋಗುತ್ತೇನೆ. ಮೈಸೂರು ಜಿಲ್ಲೆಯ ಉಸ್ತುವಾರಿ ಸಚಿವ ಮಹದೇವಪ್ಪ ಹಾಗೂ ಸಿಎಂ ಮಗ ಬೇರೆ ಅಭಿವೃದ್ಧಿ ಕೆಲಸ ಮಾಡುತ್ತಿಲ್ಲ. ಬರೀ ದ್ವೇಷ ರಾಜಕಾರಣ ಮಾಡುತ್ತಿದ್ದಾರೆ. ಇದೇ ಹೆಸರಿನಲ್ಲಿ ಕೀಟಲೆ ಕೆಲಸ ಮಾತ್ರ ನಡೆಯುತ್ತಿದೆ. ಈಗಾಗಲೇ ಎಫ್‌ಐಆರ್ ವಿರುದ್ಧ ಹೈಕೋರ್ಟ್‌ಗೆ ಹೋಗಿದ್ದೇನೆ ಎಂದರು.

ಹೈಕಮಾಂಡ್‌ಗೆ ಎಸ್.ಎಂ. ಕೃಷ್ಣ ಹೇಳಿದ ಮಾತು ಸಿದ್ದರಾಮಯ್ಯ ಕಾಂಗ್ರೆಸ್ ಸೇರಲು ಕಾರಣವಾಯಿತು: ಎಸ್.ಎಂ.ಕೃಷ್ಣ ಅವರು ಹೈಕಮಾಂಡ್‌ಗೆ ಹೇಳಿದ ಆ ಒಂದು ಮಾತು, ಸಿದ್ದರಾಮಯ್ಯ ಅವರು ಕಾಂಗ್ರೆಸ್ ಪಕ್ಷ ಸೇರ್ಪಡೆಯಾಗಲು ಕಾರಣವಾಯಿತು ಎಂದು ವಿಧಾನ ಪರಿಷತ್ ಸದಸ್ಯ ಎಚ್.ವಿಶ್ವನಾಥ್ ಹೇಳಿದ್ದರು. ಗೋಕುಲಂನ 2ನೇ ಹಂತದಲ್ಲಿರುವ ಇಂಟರ್‌ನಾಷನಲ್ ಯೂತ್ ಹಾಸ್ಟೆಲ್ ಸಭಾಂಗಣದಲ್ಲಿ ಹೆಬ್ಬಾಳು ಫೌಂಡೇಶನ್ ಹಾಗೂ ಎಸ್.ಎಂ.ಕೃಷ್ಣ ಅಭಿಮಾನಿ ಬಳಗದ ವತಿಯಿಂದ ಆಯೋಜಿಸಲಾಗಿದ್ದ ಎಸ್.ಎಂ.ಕೃಷ್ಣ 94ನೇ ಜನ್ಮ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದ್ದರು. ಎಸ್.ಎಂ.ಕೃಷ್ಣ ಅವರೊಂದಿಗೆ ದೆಹಲಿಗೆ ಹೋಗಿದ್ದೆ. ಸಿದ್ದರಾಮಯ್ಯ ಅವರು ಕುರುಬ ಸಮುದಾಯದವರು, ಒಳ್ಳೆಯ ವ್ಯಕ್ತಿ ಎಂದು ಸೋನಿಯಾ ಗಾಂಧಿಯವರಿಗೆ ಹೇಳಿದೆ. ಆ ವೇಳೆ ಅಲ್ಲೇ ಇದ್ದ ಎಸ್.ಎಂ.ಕೃಷ್ಣ ಅವರು ಸಿದ್ದರಾಮಯ್ಯ ಡೈಮಂಡ್ ರೀತಿ, ಅವರನ್ನು ಪಕ್ಷಕ್ಕೆ ತೆಗೆದುಕೊಳ್ಳಬಹುದು ಎಂದು ಹೇಳಿದರು. ಹಾಗಾಗಿ, ಸೋನಿಯಾ ಗಾಂಧಿಯವರು ಸಿದ್ದರಾಮಯ್ಯ ಅವರನ್ನು ಪಕ್ಷಕ್ಕೆ ಸೇರಿಸಿಕೊಳ್ಳಲು ಒಪ್ಪಿದರು ಎಂದು ಸ್ಮರಿಸಿದ್ದರು.

# ಸಮುದ್ರದಲ್ಲಿ ಅಸ್ಥಿರ ವಾತಾವರಣ: ಕಡಲಿಗೆ ಇಳಿಯದಂತೆ ಮೀನುಗಾರರಿಗೆ ಎಚ್ಚರಿಕೆ

**ಉಡುಪಿ, ಮೇ.20:** ರಾಜ್ಯ ಕರಾವಳಿಯಲ್ಲಿ ಪೂರ್ವ ಮುಂಗಾರು ಆರಂಭದ ಲಕ್ಷಣಗಳು ಕಾಣಿಸಿ ಕೊಂಡಿವೆ. ಬಂಗಾಳಕೊಲ್ಲಿ ಹಾಗೂ ಅರಬ್ಬಿ ಸಮುದ್ರದ ವಿವಿಧ ಭಾಗಗಳಲ್ಲಿ ವಾತಾವರಣ ಅಸ್ಥಿರಗೊಂಡಿದ್ದು, ಕರಾವಳಿ ಮೀನುಗಾರರಿಗೆ ಹವಾಮಾನ ಇಲಾಖೆ ಬಿರುಗಾಳಿಯ ಮುನ್ನೆಚ್ಚರಿಕೆ ನೀಡಿದೆ. ಕಡಲಿಗೆ ಇಳಿದಿರುವ ಯಾಂತ್ರೀಕೃತ ಬೋಟುಗಳು ಜಾಗರೂಕತೆ ವಹಿಸಬೇಕು ಅಥವಾ ತಕ್ಷಣ ತೀರ ಪ್ರದೇಶ ಸೇರುವಂತೆ ಸೂಚನೆ ನೀಡಲಾಗಿದೆ.

ಈ ಹಿನ್ನೆಲೆಯಲ್ಲಿ ಮಲ್ಪೆ ಸೇರಿದಂತೆ ಕರಾವಳಿ ಭಾಗಗಳಲ್ಲಿ ಮೀನುಗಾರಿಕೆ ದೋಣಿಗಳು ಆತಂಕದ ನಡುವೆ ವಾಪಸ್ ಆಗುತ್ತಿವೆ. ಬಂಗಾಳಕೊಲ್ಲಿ ಹಾಗೂ ಅರಬ್ಬಿ ಸಮುದ್ರದ ವಿವಿಧ ಭಾಗಗಳಲ್ಲಿ ವಾತಾವರಣ ಅಸ್ಥಿರಗೊಂಡಿದ್ದು, ಬಿರುಗಾಳಿಯ ಮುನ್ನೆಚ್ಚರಿಕೆ ನೀಡಲಾಗಿದೆ. ಮೇ 19ರಿಂದ ಮೇ.23ರವರೆಗೆ ಕರಾವಳಿ ಪ್ರದೇಶಗಳಲ್ಲಿ ಬಲವಾದ ಗಾಳಿ ಬೀಸುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ಎಚ್ಚರಿಸಿದೆ. ಗಂಟೆಗೆ 40 ರಿಂದ 50 ಕಿಲೋಮೀಟರ್ ವೇಗದಲ್ಲಿ ಗಾಳಿ ಬೀಸುವ ಸಾಧ್ಯತೆ ಇದ್ದು, ಕೆಲವೆಡೆ ಇದು 60 ಕಿಲೋಮೀಟರ್ ವೇಗ ತಲುಪುವ ಸಾಧ್ಯತೆಯೂ ಇದೆ. ಈ ಹಿನ್ನೆಲೆಯಲ್ಲಿ ಮೀನುಗಾರರು ಕಡಲಿಗೆ ಇಳಿಯಬಾರದು ಎಂದು ಇಲಾಖೆ ಸೂಚಿಸಿದೆ. ಈಗಾಗಲೇ ಸಮುದ್ರಕ್ಕೆ ತೆರಳಿರುವ ಯಾಂತ್ರಿಕೃತ ಬೋಟುಗಳು ತಕ್ಷಣ ತೀರ ಪ್ರದೇಶ ಸೇರಬೇಕೆಂದು ಎಚ್ಚರಿಕೆ ನೀಡಲಾಗಿದೆ.

ಉಡುಪಿ ಜಿಲ್ಲೆಯ ಮಲ್ಪೆ ಬಂದರು ಹಾಗೂ ಹಿನ್ನೀರು ಪ್ರದೇಶ ಗಳಲ್ಲಿ ಮೀನುಗಾರಿಕಾ ಬೋಟುಗಳು ವಾಪಸ್ ಬರುತ್ತಿರುವ ದೃಶ್ಯಗಳು ಕಂಡುಬಂದಿವೆ. ಬಿರುಗಾಳಿಯ ಮುನ್ನೆಚ್ಚರಿಕೆಯಿಂದ ಮೀನುಗಾರಿಕೆ ಚಟುವಟಿಕೆಗಳು ಅವಧಿಗೂ ಮುನ್ನ ಸ್ಥಗಿತಗೊಳ್ಳುವ ಲಕ್ಷಣಗಳು ಗೋಚರಿಸುತ್ತಿವೆ.

ಕೇರಳ-ಲಕ್ಷದ್ವೀಪ ಪ್ರದೇಶ ಹಾಗೂ ಕನ್ಯಾಕುಮಾರಿ ಸಮೀಪ ಗಾಳಿ ವೇಗ ಪಡೆದುಕೊಳ್ಳುತ್ತಿರುವ ಹಿನ್ನೆಲೆಯಲ್ಲಿ, ಕರಾವಳಿ ಜಿಲ್ಲೆಗಳಲ್ಲಿ ಆತಂಕದ ವಾತಾವರಣ ನಿರ್ಮಾಣವಾಗಿದೆ. ಅವಧಿಗೂ ಮುನ್ನ ಮುಂಗಾರು ಕರಾವಳಿಗೆ ಅಪ್ಪಳಿಸಿದರೂ ಆಶ್ಚರ್ಯವಿಲ್ಲ ಎನ್ನುವ ಅಭಿಪ್ರಾಯಗಳು ಕೇಳಿಬರುತ್ತಿವೆ. ಅದೂ ಅಲ್ಲದೇ ಯಾಂತ್ರೀಕೃತ ಮತ್ತು ಆಳಸಮುದ್ರ ಮೀನುಗಾರಿಕೆಗೆ ಮಳೆಗಾಲದಲ್ಲಿ ರಜೆ ಇದೆ. ಮಳೆಗಾಲದ ಎರಡೂವರೆ ತಿಂಗಳು ಮೀನುಗಾರಿಕೆಗೆ ನಿಷೇಧ ಇದೆ. ಈ ಹಿನ್ನೆಲೆಯಲ್ಲಿ ಆಳಸಮುದ್ರ ಬೋಟುಗಳು ಮಲ್ಪೆಯತ್ತ ವಾಪಸಾಗುತ್ತಿವೆ.



ಮೀನುಗಾರಿಕೆ ಉಪ ನಿರ್ದೇಶಕ ಕುಮಾರಸ್ವಾಮಿ ಮಾತನಾಡಿ, ಪೂರ್ವ ಮುಂಗಾರು ಮೇ.26ನೇ ತಾರೀಕಿನಿಂದ ಶುರುವಾಗುತ್ತೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಈ ಬಗ್ಗೆ ಹವಾಮಾನ ಇಲಾಖೆ, ಜಿಲ್ಲಾಡಳಿತ, ಕಂಟ್ರೋಲ್ ರೂಮ್ಗಳಿಂದ ನಮಗೆ ಹವಾಮಾನ ವರದಿ ಬಗ್ಗೆ ಮುನ್ಸೂಚನೆಗಳು ಬರುತ್ತವೆ. ಅದರಂತೆ ನಾವು ಯಾವ ರೀತಿ ಮೀನುಗಾರರು ಅದನ್ನ ಪಾಲನೆ ಮಾಡಬೇಕು ಅನ್ನೋ ಬಗ್ಗೆ ನಮ್ಮ ಡೀಸೆಲ್ ಬಂಕ್ ಮುಖಾಂತರ, ಯೂನಿಯನ್ಗಳ ಮುಖಾಂತರ ಮುನ್ಸೂಚನೆಗಳನ್ನು ಅವರಿಗೆ ತಲುಪಿಸುವಂತ ವ್ಯವಸ್ಥೆ ಮಾಡ್ತೇವೆ ಎಂದರು.

# ವಿವಿಧ ಕಾಮಗಾರಿಗಳಿಗೆ ಭೂಮಿ ಪೂಜೆ

**ರಾಯಚೂರು, ಮೇ. 20:** ನಗರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಸಣ್ಣ ನೀರಾವರಿ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಎನ್. ಎಸ್.ಬೋಸರಾಜು ಭಾನು ವಾರ ಭೂಮಿ ಪೂಜೆ ನೆರವೇರಿಸಿದರು.



ನಗರದ ನ್ಯೂ ಎಜುಕೇಶನ್ ಸೊಸೈಟಿ ಯ ಹೊಸ ಉರ್ದು ಮದರಸದ ನೂತನ ಕೊಠಡಿಗಳ ನಿರ್ಮಾಣ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿದರು.

ನಂತರ ನಗರದ ಲಿಂಗಸುಗೂರು ರಸ್ತೆಯ ಜಾಮಿಯಾ ರಜಾ ಎ ಮುಸ್ತಫ ಗುಲಶನೆ ರುಜ್ವಿ ಮದರಸದ ನೂತನ ಕೊಠಡಿಗಳಿಗೆ ರೂ.50 ಲಕ್ಷ ವೆಚ್ಚದ ಕಾಮಗಾರಿ ಹಾಗೂ ಮದರಸ ಎ ಅರಬ್ಬಿಯಾ-ಸಿರಾಜುಲ ಉಲುಮಾ ಮದರಸದ ನೂತನ ಕೊಠಡಿಗಳ ನಿರ್ಮಾಣದ ರೂ.50 ಲಕ್ಷ ವೆಚ್ಚದ ಕಾಮಗಾರಿಗೆ ಶಂಕುಸ್ಥಾಪನೆ ನೆರವೇರಿಸಿದರು.

ಬಳಿಕ ಸಚಿವ ಎನ್. ಎಸ್.ಬೋಸರಾಜು ಮಾತನಾಡಿ, ಕಟ್ಟಡ ಸಂಪೂರ್ಣವಾಗಿ ಗುಣ ಮಟ್ಟದಿಂದ ಕೂಡಿರಬೇಕು. ಆದಷ್ಟು ಬೇಗ ಕೆಲಸ ಪ್ರಾರಂಭಿಸಿ, ಮಕ್ಕಳಿಗೆ ಅನುಕೂಲವಾಗುವ ರೀತಿಯಲ್ಲಿ ಕೆಲಸ ಮುಗಿಸಬೇಕು ಎಂದು ಕಟ್ಟುನಿಟ್ಟಿನ ಸೂಚನೆ ನೀಡಿದರು.

ಮದರಸದಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಅನುಕೂಲವಾಗಲಿ ಎಂಬ ಸದುದ್ದೇಶದಿಂದ ಮೂರು ತರಗತಿ, ಎರಡು ವಸತಿ ನಿಲಯದ ಕಟ್ಟಡ, ಡಿಮೆಟ್ರ ಸ್ನಾನಗೃಹ ಹಾಗೂ ಶೌಚಾಲಯಗಳ ನಿರ್ಮಾಣಕ್ಕೆ ಮುಂದಾಗಿದ್ದು, ಗುತ್ತೇ ದಾರರು ಉತ್ತಮವಾದ ರೀತಿಯಲ್ಲಿ ಕಟ್ಟಡ ನಿರ್ಮಿಸಬೇಕು. ವಿದ್ಯಾರ್ಥಿಗಳು ಇದರ ಸದುಪಯೋಗ ಪಡೆದು ಕೊಂಡು ಉತ್ತಮ ಶಿಕ್ಷಣ ಪಡೆದುಕೊಳ್ಳಲಿ ಎಂದರು.

# ವಿಶೇಷ ಚೇತನರ ಸಬಲೀಕರಣಕ್ಕಾಗಿ ರಾಷ್ಟ್ರ ಪ್ರಶಸ್ತಿಗೆ ಅರ್ಜಿ ಆಹ್ವಾನ

**ವಿಜಯಪುರ, ಮೇ.20** ವಿಕಲಚೇತನರ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ವ್ಯಕ್ತಿ ಹಾಗೂ ಸಂಸ್ಥೆಗಳಿಗೆ 2026ನೇ ಸಾಲಿನಲ್ಲಿ ರಾಷ್ಟ್ರ ಪ್ರಶಸ್ತಿ ನೀಡಲು ನಾಮನಿರ್ದೇಶನ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿಗಳನ್ನು ರಾಷ್ಟ್ರೀಯ ಪುರಸ್ಕಾರ ಪೋರ್ಟಲ್ www.awards.gov.in ಮೂಲಕ ಆನ್‌ಲೈನ್‌ನಲ್ಲಿ ಸಲ್ಲಿಸುವುದು ಕಡ್ಡಾಯ ವಾಗಿದೆ. ನಾಮನಿರ್ದೇಶನವು ಪೋರ್ಟಲ್‌ನಲ್ಲಿ ಲಭ್ಯವಿರುವ ನಮೂನೆಯಲ್ಲಿ ನಿರ್ದಿಷ್ಟಪಡಿಸಿದಂತೆ ಎಲ್ಲ ವಿವರಗಳನ್ನು ಒಳಗೊಂಡಿಬೇಕು ಮತ್ತು ಗಮನಾರ್ಹ ಹಾಗೂ ಸ್ಫೂರ್ತಿದಾಯಕ ಸಾಧನೆಗಳನ್ನು ನಿರೂಪಣಾ ರೂಪದಲ್ಲಿ ಸ್ಪಷ್ಟವಾಗಿ ಹೈಲೈಟ್ ಮಾಡಬೇಕು.

ಸಾಧನೆಗಳಿಗೆ ಸಂಬಂಧಿಸಿದ ದಾಖಲೆಗಳನ್ನು ಸಹ ಪೋರ್ಟಲ್‌ನಲ್ಲಿ ಅಪ್ಲೋಡ್ ಮಾಡಬೇಕು. ಪುರಸ್ಕಾರದ ವಿಭಾಗಗಳಾದ ಸರ್ವಶ್ರೇಷ್ಠ ದಿವ್ಯಾಂಜನ (ಅತ್ಯುತ್ತಮ ವಿಕಲಚೇತನ ವ್ಯಕ್ತಿ) ಶ್ರೇಷ್ಠ ದಿವ್ಯಾಂಜನ್ (ಉತ್ತಮ ವಿಕಲಚೇತನ ವ್ಯಕ್ತಿ) ಮತ್ತು ಶ್ರೇಷ್ಠ ಸೃಜನಶೀಲ ದಿವ್ಯಾಂಗ ಬಾಲ/ಬಾಲಿಕಾ (ಅತ್ಯುತ್ತಮ ಸೃಜನಶೀಲ ವಿಶೇಷಚೇತನ ಮಗು)ಗಳಿಗೆ ಯುಡಿಐಡಿ ಕಾರ್ಡ್/ ವಿಕಲಾಂಗತೆಯ ಪ್ರಮಾಣ ಪತ್ರಗಳನ್ನು ಅಪ್ಲೋಡ್ ಮಾಡುವುದು ಕಡ್ಡಾಯ ವಾಗಿದೆ. ನಾಮನಿರ್ದೇಶನ ಅರ್ಜಿ ಗಳನ್ನು ರಾಷ್ಟ್ರೀಯ ಪುರಸ್ಕಾರ ಪೋರ್ಟಲ್ www.awards.gov.in ದಲ್ಲಿ 2026ರ ಜುಲೈ 31 ರೊಳಗಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬೇಕು. ಭೌತಿಕ ರೂಪದಲ್ಲಿ ಅಥವಾ ಯಾವುದೇ ಇತರ ಮಾಧ್ಯಮದ ಮೂಲಕ ಸಲ್ಲಿಸುವ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ.

ಹೆಚ್ಚಿನ ಮಾಹಿತಿಗಾಗಿ ಇಲಾಖೆ ವೆಬ್‌ಸೈಟ್ www.depwd.gov.in ಸಂಪರ್ಕಿಸಬಹುದಾಗಿದೆ.

# ಮುಂಗಾರು ಹಂಗಾಮಿನ ಬಿತ್ತನೆ ಬೀಜಕ್ಕಾಗಿ ಮುಗಿಬಿದ್ದ ರೈತರು

**ಬಳ್ಳಾರಿ, ಮೇ.20:** ನಿನ್ನೆ ಬಿದ್ದ ಭಾರಿ ಮಳೆಗೆ ಇಳೆ ತಂಪಾಗಿದ್ದು ಮುಂಗಾರು ಹಂಗಾಮಿನ ಬಿತ್ತನೆ ಬೀಜಕ್ಕಾಗಿ ರೈತರು ಮುಗಿ ಬಿದ್ದಿದ್ದಾರೆ. ಕಳೆದ ಈ ವೇಳೆಗೆ ಮೂರು ಬಾರಿ ಮಳೆ ಬಿದ್ದತ್ತು. ಈ ಬಾರಿ ಕೊಂಚ ತಡವಾದರೂ ನಿನ್ನೆ ಬಿತ್ತನೆಗೆ ಸಹಕಾರಿಯಾಗುವ ಹದವಾದ ಮಳೆಯಾಗಿದೆ.





ಕಳೆದ ಬಾರಿ ಮುಂಗಾರಿಯಲ್ಲಿ ತೊಗರಿ ಬಿತ್ತನೆ ಮಾಡಿ ಉತ್ತಮ ಇಳುವರಿ ಮತ್ತು ಬೆಲೆ ಪಡೆದ ರೈತರು ಈ ಬಾರಿಯೂ ಅದೇ ಬಿಜಕ್ಕಾಗಿ ಮುಗಿ ಬಿದ್ದಿದ್ದಾರೆ. ತೊಗರಿಯಲ್ಲಿ ನಾನಾ ರೀತಿ, ಕಂಪನಿಗಳ ಬೀಜ ಗಳಿದ್ದರೂ. ನಗರದ ಕೆ.ಸಿ. ರಸ್ತೆಯ ಕಾರ್ತಿಕ್ ಆಗ್ರೋ ಸೀಡ್ಸ್ ನವರು ನೀಡುವ ಧನಲಕ್ಷ್ಮಿ ಬೀಜಕ್ಕೆ ಎಲ್ಲಿಲ್ಲದ ಬೇಡಿಕೆ. ಅದೂ ನೆರೆಯ ಆಂಧ್ರಪ್ರದೇಶದ ಉರವಕೊಂಡ, ಕಣೇಕಲ್, ಗುಂತಕಲ್ಲು ಭಾಗದ ರೈತರದ್ದೇ ಹೆಚ್ಚಿನ ಬೇಡಿಕೆ. ಮಳೆಯಾಶ್ರಿತ ಜಮೀನಿನಲ್ಲಿ ಈ ತಳಿಯ ಬೀಜ ಕೊಂಚ ಮಳೆ ಕಡಿಮೆಯಾದರೂ ತಡೆದುಕೊಳ್ಳುವ ಶಕ್ತಿಯನ್ನು ಹೊಂದಿದೆಂಬುದು ಎರ ಗುಂಟ್ಲ ರೈತ ವೆಂಕಟರೆಡ್ಡಿ ಅನಿಸಿಕೆ.

ಐದು ಕೆ.ಜಿ ಬೀಜವನ್ನು 720 ರಂತೆ ಮಾರಾಟ ಮಾಡುತ್ತಿದೆ. ಬೆಳಕರಿಯುವುದರೊಳಗೆ ಅಂಗಡಿ ಮುಂದೆ ರೈತರು ಜಮಾಯಿಸಿದ್ದರು ಬೀಜಕ್ಕಾಗಿ.

ಕಾರ್ತಿಕ್ ಅಂಗಡಿಯವರು ಸ್ವತಃ ಬಾಗಲಕೋಟೆ ಪ್ರದೇಶದಲ್ಲಿ ಬೀಜ ನೀಡಿ. ಅಲ್ಲಿ ಬೆಳೆದ ತೊಗರಿಯನ್ನು ತಂದು ಬಳ್ಳಾರಿಯಲ್ಲಿಯೇ ಸಂಸ್ಕರಣೆ ಮಾಡಿ ಮಾರಾಟ ಮಾಡುತ್ತಾರೆ. ಬೀಜದ ಬೇಡಿಕೆ ಹೆಚ್ಚಾದಂತೆ ಬೆಲೆ ಹೆಚ್ಚಿದರೂ ಅಚ್ಚರಿ ಪಡಬೇಕಿಲ್ಲ.

# ಕನ್ನಡ ಮಾಧ್ಯಮ ಪ್ರಶಸ್ತಿ: ಶಿಷ್ಯವೇತನ ಮರುಜಾರಿಗೆ ಒತ್ತಾಯ

ಬೀದರ್, ಮೇ. 20: ಗಡಿನಾಡು ಹಾಗೂ ಹೊರನಾಡು ಕನ್ನಡಿಗರ ಜ್ವಲಂತ ಸಮಸ್ಯೆಗಳಿಗೆ ಸರ್ಕಾರ ಶಾಶ್ವತ ಪರಿಹಾರ ಕಲ್ಪಿಸಬೇಕು ಮತ್ತು ಗಡಿನಾಡು ಕನ್ನಡ ವಿದ್ಯಾರ್ಥಿಗಳ "ಕನ್ನಡ ಮಾಧ್ಯಮ ಪ್ರಶಸ್ತಿ" ಹಾಗೂ ಶಿಷ್ಯವೇತನ ಯೋಜನೆಯನ್ನು ತಕ್ಷಣ ಮರುಜಾರಿಗೆ ತರಬೇಕು ಎಂದು ಹೊರನಾಡು ಕನ್ನಡಿಗರ ಹೋರಾಟ ಸಮಿತಿ ಅಧ್ಯಕ್ಷ ಧರ್ಮೇಂದ್ರ ಪೂಜಾರಿ ಬಗ್ದೂರಿ ಅವರು ಒತ್ತಾಯಿಸಿದ್ದಾರೆ.



ಬೀದರನಲ್ಲಿ ಗಡಿನಾಡು ಹಾಗೂ ಹೊರನಾಡು ಕನ್ನಡಿಗರ ಜ್ವಲಂತ ಸಮಸ್ಯೆಗಳಿಗೆ ಸರ್ಕಾರ ಶಾಶ್ವತ ಪರಿಹಾರ ಕಲ್ಪಿಸಬೇಕು ಮತ್ತು ಗಡಿನಾಡು ಕನ್ನಡ ವಿದ್ಯಾರ್ಥಿಗಳ ಕನ್ನಡ ಮಾಧ್ಯಮ ಪ್ರಶಸ್ತಿ ಹಾಗೂ ಶಿಷ್ಯವೇತನ ಯೋಜನೆ ತಕ್ಷಣ ಮರುಜಾರಿಗೊಳಿಸಬೇಕೆಂದು ಆಗ್ರಹಿಸಿ ಹೊರನಾಡು ಕನ್ನಡಿಗರ ಹೋರಾಟ ಸಮಿತಿ ಅಧ್ಯಕ್ಷ ಧರ್ಮೇಂದ್ರ ಪೂಜರಿ ಬಗ್ದೂರಿ ಅವರು ಮುಖ್ಯಮಂತ್ರಿಗಳಿಗೆ ಬರೆದ ಮನವಿಯನ್ನು ಜಿಲ್ಲಾಧಿಕಾರಿಗಳ ಮೂಲಕ ಸಲ್ಲಿಸಿದರು.

ಈ ಕುರಿತು ಜಿಲ್ಲಾಧಿಕಾರಿಗಳ ಮುಖಾಂತರ ಮುಖ್ಯಮಂತ್ರಿಗಳಿಗೆ ಮನವಿ ಪತ್ರ ಸಲ್ಲಿಸಿದ ಅವರು, ಸರ್ಕಾರ ಈ ಕುರಿತು ತಕ್ಷಣ ಕ್ರಮ ಕೈಗೊಳ್ಳದಿದ್ದರೆ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಕಚೇರಿಗೆ ಮುತ್ತಿಗೆ ಹಾಕಲಾಗುವುದು ಎಂದು ಅವರು ಎಚ್ಚರಿಕೆ ನೀಡಿದ್ದಾರೆ.

2011-12ರಲ್ಲಿ ಆರಂಭವಾಗಿದ್ದ ಕನ್ನಡ ಅಭಿವೃದ್ಧಿ ಪ್ರಾಧಿಕಾರದ "ಗಡಿ ನಾಡು ಕನ್ನಡ ವಿದ್ಯಾರ್ಥಿಗಳ ಕನ್ನಡ ಮಾಧ್ಯಮ ಪ್ರಶಸ್ತಿ ಹಾಗೂ ಶಿಷ್ಯವೇತನ" ಯೋಜನೆಯನ್ನು 2022-23ರಿಂದ ಸ್ಥಗಿತಗೊಳಿಸಿರುವುದನ್ನು ಖಂಡಿಸಿದ ಅವರು, ಈ ಯೋಜನೆ ಬಡ ಹಾಗೂ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಉನ್ನತ ಶಿಕ್ಷಣ ಪಡೆಯಲು ನೆರವಾಗುತ್ತಿತ್ತು ಎಂದು ತಿಳಿಸಿದ್ದಾರೆ.

ಗಡಿಭಾಗಗಳಲ್ಲಿ ಕನ್ನಡ ಮಾಧ್ಯಮದ ಮೇಲಿನ ಆಸಕ್ತಿ ಹೆಚ್ಚಿಸಲು ಈ ಯೋಜನೆ ಪರಿಣಾಮಕಾರಿಯಾಗಿತ್ತು ಎಂದು ಅವರು ತಿಳಿಸಿದ್ದಾರೆ.

ಆಂಧ್ರಪ್ರದೇಶ, ತೆಲಂಗಾಣ, ಮಹಾರಾಷ್ಟ್ರ, ಕೇರಳ, ತಮಿಳುನಾಡು ಹಾಗೂ ಗೋವಾ ಸೇರಿದಂತೆ ಹಲವು ರಾಜ್ಯಗಳಲ್ಲಿ ಲಕ್ಷಾಂತರ ಕನ್ನಡಿಗರು ನೆಲೆಸಿದ್ದು, ಅವರ ಮಕ್ಕಳಿಗೆ ಶಿಕ್ಷಣ ಹಾಗೂ ಉದ್ಯೋಗ ಕ್ಷೇತ್ರದಲ್ಲಿ ಕರ್ನಾಟಕ ಸರ್ಕಾರದಿಂದ ಸಮರ್ಪಕ ಸೌಲಭ್ಯಗಳು ದೊರೆಯುತ್ತಿಲ್ಲ ಎಂದು ಅವರು ಅಸಮಾಧಾನ ವ್ಯಕ್ತಪಡಿಸಿದರು.

ತೆಲಂಗಾಣ ರಾಜ್ಯದ ಸಂಗಾರೆಡ್ಡಿ ಜಿಲ್ಲೆಯ ನಾರಾಯಣಖೇಡ ತಾಲೂಕಿನ ಕಾರಾಮುಂಗಿ, ಶಿಖರ ಖಾನ, ಗಡಿಗಾಂವ, ಔಧತಪುರ, ಎಸಗಿ, ಶಾಹಾಪುರ, ಮೋರಗಿ, ಗೊಂದೆಗಾಂವ, ರತ್ನಾಪುರ ಸೇರಿದಂತೆ ಅನೇಕ ಗ್ರಾಮಗಳಲ್ಲಿ ಸುಮಾರು 485 ವಿದ್ಯಾರ್ಥಿಗಳು ಕನ್ನಡ ಮಾಧ್ಯ ಮದಲ್ಲಿ ವ್ಯಾಸಂಗ ಮಾಡುತ್ತಿದ್ದಾರೆ. ಈ ಕುರಿತು ಜಿಲ್ಲಾಡಳಿತ ಸರ್ಕಾರಕ್ಕೆ ವರದಿ ಸಲ್ಲಿಸಿ ವಿದ್ಯಾರ್ಥಿಗಳಿಗೆ ನೆರವು ಒದಗಿಸಬೇಕು ಎಂದು ಅವರು ಒತ್ತಾಯಿಸಿದರು.

ಹೊರನಾಡಿನ ಕನ್ನಡ ವಿದ್ಯಾರ್ಥಿಗಳಿಗೆ ಕರ್ನಾಟಕದ ಉನ್ನತ ಶಿಕ್ಷಣ ಹಾಗೂ ಸರ್ಕಾರಿ ಉದ್ಯೋಗಗಳಲ್ಲಿ ಒಳನಾಡಿನ ಅಭ್ಯರ್ಥಿಗಳ ಮಾದರಿಂಯಲ್ಲಿ ಮೀ ಸಲು ಮತ್ತು ಸೌಲಭ್ಯಗಳನ್ನು ಕಲ್ಪಿಸಬೇಕು. ಇದೇ ವೇಳೆ, ಡಾ. ಸರೋಜಿನಿ ಮಹಿಷಿ ಪರಿಷ್ಕೃತ ವರದಿ-2017, ಪ್ರೊ. ಬರಗೂರು ರಾಮಚಂದ್ರಪ್ಪ ಗಡಿನಾಡು ಅಧ್ಯಯನ ವರದಿ, ವಾಟಾಳ ನಾಗರಾಜ ಅವರ ಗಡಿಕನ್ನಡಿಗರ ಸಮಸ್ಯೆಗಳ ಅಧ್ಯಯನ ವರದಿ, ರಾಜ್ಯ ಸಾಂಸ್ಕೃತಿಕ ನೀತಿ ವರದಿ ಸೇರಿದಂತೆ ಹಲವು ಸಮಿತಿ ವರದಿಗಳನ್ನು ಸರ್ಕಾರ ತಕ್ಷಣ ಜಾರಿಗೆ ತರಬೇಕು ಎಂದು ಅವರು ಆಗ್ರಹಿಸಿದರು.

ಆರು ರಾಜ್ಯಗಳಲ್ಲಿ ಕರ್ನಾಟಕ ಸರ್ಕಾರದಿಂದ ಕನ್ನಡ ಭವನ ನಿರ್ಮಾಣಕ್ಕೆ ಅನುಮೋದನೆ ನೀಡಬೇಕು ಹಾಗೂ ಕರ್ನಾಟಕ ಗಡಿ ಪ್ರದೇಶಅಭಿವೃದ್ಧಿ ಪ್ರಾಧಿಕಾರಕ್ಕೆ ಹೊರರಾಜ್ಯಗಳಿಂದ ನಾಮ ನಿರ್ದೇಶಿತ ಸದಸ್ಯರನ್ನು ನೇಮಕ ಮಾಡ ಬೇಕು. ಮಹಾರಾಷ್ಟ್ರದ ಅಕ್ಕಲ ಕೋಟ, ದಕ್ಷಿಣ ಸೋಲ್ಲಾಪುರ, ಜತ್ತ ಹಾಗೂ ಗಡಹಿಂಗ್ಲಜ್ ಭಾಗಗಳಲ್ಲಿ ಇಂದಿಗೂ ಹೆಚ್ಚಿನ ಸಂಖ್ಯೆಯಲ್ಲಿ ಕನ್ನಡಿಗರು ವಾಸಿಸುತಿದ್ದರೂ, ಭಾಷಾ ಮತ್ತು ಸಾಂಸ್ಕೃತಿಕ ಭದ್ರತೆ ಕೊರತೆಯಿಂದ ಆತಂಕ ಎದುರಿಸುತ್ತಿದ್ದಾರೆ ಎಂದು ಅವರು ಕಳವಳ ವ್ಯಕ್ತಪಡಿಸಿದರು.

ತೆಲಂಗಾಣದಲ್ಲಿ ಈ ಹಿಂದೆ ಇದ್ದ 140 ಕನ್ನಡ ಶಾಲೆಗಳ ಪೈಕಿ ಅನೇಕ ಶಾಲೆಗಳು ಮುಚ್ಚಲ್ಪಟ್ಟಿದ್ದು, 135 ಕನ್ನಡ ಶಿಕ್ಷಕರನ್ನು ಇಂಗ್ಲಿಷ್ ಶಿಕ್ಷಕರನ್ನಾಗಿ ಪರಿವರ್ತಿಸಲಾಗಿದೆ ಎಂದು ಅವರು ಆರೋಪಿಸಿದರು. ಹೈದರಾಬಾದ್‌ನಲ್ಲಿ ಸುಮಾರು 12 ಲಕ್ಷ ಕನ್ನಡಿಗರು ಹಾಗೂ 6 ಲಕ್ಷ ಮತದಾರರಿದ್ದರೂ ಕರ್ನಾಟಕ ಸರ್ಕಾರದಿಂದ ಸಮರ್ಪಕ ನೆರವು ಸಿಕ್ಕಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಗಡಿನಾಡು ವಿದ್ಯಾರ್ಥಿಗಳ ಪ್ರಶಸ್ತಿ ಹಾಗೂ ಶಿಷ್ಯವೇತನ ಯೋಜನೆಯನ್ನು ಸರ್ಕಾರ ಮರುಜಾರಿಗೆ ತರದಿದ್ದರೆ ರಾಜ್ಯಾದ್ಯಂತ ಹೋರಾಟ ತೀವ್ರಗೊಳಿಸಲಾಗ


# ಯುವತಿ ಮದುವೆ ನಿರಾಕರಿಸಿದ್ದಕ್ಕೆ ವಿದ್ಯುತ್ ಕಂಬ ಏರಿ ಯುವಕನ ಹೈಡ್ರಾಮಾ

**ಆನೇಕಲ್, ಮೇ 20:** ಪ್ರೇಮಿಯೊಬ್ಬಳು ಮದುವೆಗೆ ನಿರಾಕರಿಸಿದ ಹಿನ್ನೆಲೆಯಲ್ಲಿ ಯುವಕನೊಬ್ಬ ಹೈಟೆನ್ಷನ್ ವಿದ್ಯುತ್ ಟವರ್ ಏರಿ ಹೈಡ್ರಾಮಾ ನಡೆಸಿದ ಘಟನೆ ತಾಲೂಕಿನ ಚಿನ್ನಯ್ಯನಪಾಳ್ಯದಲ್ಲಿ ನಡೆದಿದೆ. ವಿಚಾರ ತಿಳಿದು ಸ್ಥಳಕ್ಕೆ ಧಾವಿಸಿದ ಆನೇಕಲ್ ಪೊಲೀಸರು, ಅಗ್ನಿಶಾಮಕ ಸಿಬ್ಬಂದಿ ಕಸರತ್ತು ನಡೆಸಿ ಆತನನ್ನು ಕೆಳಗಿಳಿಸುವಲ್ಲಿ ಯಶಸ್ವಿಯಾಗಿದ್ದಾರೆ. ಆನೇಕಲ್ ತಾಲೂಕಿನ ಚಿನ್ನಯ್ಯನಪಾಳ್ಯದ ಸೋಮಶೇಖರ್ ಎಂಬಾತನೇ ವಿದ್ಯುತ್ ಕಂಬದ ಮೇಲೇರಿದ ಯುವಕ.

ಕಳೆದ 3 ವರ್ಷಗಳಿಂದ ಯುವತಿಯನ್ನು ಪ್ರೀತಿಸುತ್ತಿದ್ದ ಸೋಮಶೇಖರ್ ಮದುವೆ ನಿರಾಕರಿಸಿದ ಲವ್ ಬ್ರೇಕಪ್ ಮಾಡಿಕೊಂಡಿದ್ದಕ್ಕೆ ಮನನೊಂದು ಟವರ್ ಏರಿದ್ದನು. ತಕ್ಷಣವೇ ವಿದ್ಯುತ್ ಸಂಪರ್ಕ ಕಡಿತಗೊಳಿಸಿ, ಪೊಲೀಸರು ಹಾಗೂ ಅಗ್ನಿಶಾಮಕ ಸಿಬ್ಬಂದಿ ರಕ್ಷಣಾ ಕಾರ್ಯಾಚರಣೆ ಆರಂಭಿಸಿದರು. ಎಷ್ಟೇ ಮನವೊಲಿಸಲು ಪ್ರಯತ್ನಿಸಿದರೂ ಪ್ರೀತಿಸಿದ ಹುಡುಗಿ ಸ್ಥಳಕ್ಕೆ ಬರುವವರೆಗೂ ತಾನು ಯಾವುದೇ ಕಾರಣಕ್ಕೂ ಕೆಳಗೆ ಇಳಿಯುವುದಿಲ್ಲ ಎಂದು ಕಿರುಚಾಡಿದ್ದಾನೆ. ಬಳಿಕ ಪ್ರೀತಿಸಿದ ಹುಡುಗಿಯನ್ನು ತಾಳಿ, ಅರಿಶಿಣ, ಕುಂಕುಮ ಹಿಡಿದು ಸ್ಥಳಕ್ಕೆ ಕರೆಸಿದ ಆನೇಕಲ್ ಪೊಲೀಸರು ಪೋಷಕರು ಮತ್ತು ಹುಡುಗನ ಹೈಡ್ರಾಮ ಸುಖಾಂತ್ಯಗೊಳಿಸಲು ಇನ್ನಿಲ್ಲದ ಪ್ರಯತ್ನ ನಡೆಸಿದರು.

ವಿಷಯ ತಿಳಿಯುತ್ತಿದ್ದಂತೆಯೇ ನೂರಾರು ಗ್ರಾಮಸ್ಥರು ಜಮಾಯಿಸಿದ್ದು, ಯುವಕನಿಗೆ ತಿಳಿಹೇಳಿ ಕೆಳಗಿಳಿಸಲು ಯತ್ನಿಸಿದರು. ಕೊನೆಗೆ ಪೊಲೀಸರು 'ನಿನಗೆ ಇದೇ ಹುಡುಗಿ ಜತೆ ಮದುವೆ ಮಾಡಿಸುವ ಜವಬ್ದಾರಿ ನಮ್ಮದು' ಎಂದು ಹೇಳಿ ಭರವಸೆ ನೀಡಿದರು.

ಬಳಿಕ ಯುವಕ ಕೆಳಗೆ ಇಳಿದಿದ್ದು, ಸುಸ್ತಾಗಿರುವ ಆತನನ್ನು ಆಸ್ಪತ್ರೆಗೆ ಸಾಗಿಸಿದ್ದಾರೆ. ಸ್ಥಳೀಯ ಮೂಲಗಳ ಪ್ರಕಾರ, ಸೋಮಶೇಖರ್ ಕಳೆದ ಮೂರು ವರ್ಷಗಳಿಂದ ಯುವತಿಯೊಬ್ಬಳನ್ನು ಪ್ರೀತಿಸುತ್ತಿದ್ದ. ಆದರೆ, ಇತ್ತೀಚೆಗೆ ಯುವತಿಯು ಮದುವೆಗೆ ನಿರಾಕರಿಸಿ, ಪ್ರೇಮ ಸಂಬಂಧಕ್ಕೆ ಅಂತ್ಯ ಹಾಡಿದ್ದಳು. ಇದರಿಂದ ತೀವ್ರ ಆಕ್ರೋಶಗೊಂಡ ಸೋಮಶೇಖರ್, ಮೊದಲು ತನ್ನ ಮನೆಯ ಮೇಲ್ಛಾವಣಿಯ ಶೀಟ್‌ಗಳನ್ನು ಒಡೆದು ದಾಂಧಲೆ ನಡೆಸಿದ್ದ.



ಬಳಿಕ ಅದೇ ಆಕ್ರೋಶದಲ್ಲಿ ಮನೆ ಸಮೀಪದ ಇದ್ದ ಹೈಟೆನ್ಷನ್ ವಿದ್ಯುತ್ ಟವರ್ ಮೇಲೇರಿದ್ದಾನೆ. ಆರಂಭದಲ್ಲಿ ಪೊಲೀಸರು ಮತ್ತು ಅಗ್ನಿಶಾಮಕ ಸಿಬ್ಬಂದಿ ಎಷ್ಟೇ ಮನವೊಲಿಸಿದರೂ ಯುವಕ ಮಾತ್ರ ಕೆಳಗಿಳಿಯಲು ಒಪ್ಪದೆ ಹಠ ಹಿಡಿದಿದ್ದ. ಕಂಬದಲ್ಲಿ ಹೈವೋಲ್ಟೇಜ್ ವಿದ್ಯುತ್ ಪ್ರವಹಿಸುವ ಅಪಾಯವಿದ್ದ ಹಿನ್ನೆಲೆಯಲ್ಲಿ ಮುನ್ನೆಚ್ಚರಿಕಾ ಕ್ರಮವಾಗಿ ವಿದ್ಯುತ್ ಸಂಪರ್ಕವನ್ನು ಕಡಿತಗೊಳಿಸಲಾಗಿತ್ತು.

# ಕಾಂಗ್ರೆಸ್ ಮಾಡುತ್ತಿರುವುದು ರಾಜ್ಯದ ದಿವಾಳಿತನದ ಸಮಾವೇಶ : ಭಗವಂತ ಖೂಬಾ

**ಬೀದರ್, ಮೇ.20–**ಜ್ಯದಕಾಂಗ್ರೆಸ್ ಸರ್ಕಾರತನ್ನ 3 ವರ್ಷಅವಧಿ ಮುಗಿಸಿ, ಸಾಧನಾ ಸಮಾವೇಶ ಮಾಡುತ್ತಿರುವುದು ನಿಜಕ್ಕೂ ಹಾಸ್ಯಾಸ್ಪದವಾಗಿದೆ, ಈಗಾಗಲೆ ರಾಜ್ಯದಲ್ಲಿ ಅಭಿವೃದ್ಧಿ ಇಲ್ಲದೆ, ಸರ್ಕಾರಿ ನೌಕರರಿಗೆ ಸಂಬಳ ನೀಡದೆ, ರೈತರ ಸಂಕಷ್ಟ ಅರಿಯದೆ, ಹಿಂದೆಂದೂಕಾಣದಷ್ಟುರಾಜ್ಯವು ದಿವಾಳಿಯಾಗಿದ್ದು, ಭ್ರಷ್ಟಾಚಾರ ಮೀತಿ ಮಿರಿದ್ದು, ರಾಜ್ಯವನ್ನು ದಿವಾಳಿ ಮಾಡಿರುವುದೇ ಇವರ ಸರ್ಕಾರ ಸಾಧನೆಯಾಗಿದೆ. ಇವರು ಸಾಧನಾ ಸಮಾವೇಶದ ಬದಲು ದಿವಾಳಿ ಸಮಾವೇಶ ಮಾಡಬೇಕು ಎಂದು ಕೇಂದ್ರದ ಮಾಜಿ ಸಚಿವ ಭಗವಂತ ಖೂಬಾ ವ್ಯಂಗವಾಡಿದ್ದಾರೆ.

ರಾಜ್ಯದಲ್ಲಿ 2809, ಬೀದರ ಜಿಲ್ಲೆಯಲ್ಲಿ 181 ರೈತರ ಆತ್ಮಹತ್ಯೆಯಾಗಿದ್ದು, ಈ ರೈತರ ಆತ್ಮಹತ್ಯೆಗಳು ಇವರ ಸರ್ಕಾರದ ಸಾಧನೆಯಾಗಿದೆ, ಗ್ಯಾರಂಟಿ ಹೆಸರಲ್ಲಿ ದಲಿತರ ಹಣ ದುರ್ಬಳಕೆ, 2.5 ಲಕ್ಷಕ್ಕು ಅಧಿಕ ಹುದ್ದೆ ಖಾಲಿ, ಇಡಿ ರಾಜ್ಯದಲ್ಲಿ ಜೂಜುಧಂಧೆ, ಡಗ್ಸ್‌ಧಂದೆ, ಸುಲಿಗೆ, ಕೊಲೆ ಪ್ರಕರಣಗಳು ಹೆಚ್ಚಾಗಿವೆ, ನೀರಾವರಿ ಯೋಜನೆಗಳಿಗೆ ಅನುದಾನವಿಲ್ಲಾ, ಕೇಂದ್ರದ ಯೋಜನೆಗಳಿಗೆ ಅನುದಾನವಿಲ್ಲಾ, ಆಸ್ಪತ್ರೆಗಳಲ್ಲಿ ಮೂಲಭೂತ ಸೌಕರ್ಯವಿಲ್ಲಾ, ವಿದ್ಯುತದರ ಹೆಚ್ಚಳ, ಸ್ಟ್ಯಾಂಪಡ್ಯೂಟಿ ಹೆಚ್ಚಳ, ಎಲ್ಲಾ ವಸ್ತುಗಳ ಬೆಲೆ ಏರಿಕೆ ಮತ್ತುಅನ್ನದಾತರ ಕಷ್ಟಗಳಿಗೆ ಸ್ಪಂದನೆ ಇಲ್ಲಾ, ಇಂತಹ ಸರ್ಕಾರಕ್ಕೆ ಸಾಧನಾ ಸಮಾವೇಶ ಏತಕೆ ಎಂದು ಪ್ರಶ್ನಿಸಿದ್ದಾರೆ.

ತನ್ನ ವಿಫಲತೆ ಮುಚ್ಚಿಕೊಳ್ಳಲು ಮೋದಿ ಸರ್ಕಾರದ ಮೇಲೆ ಬೊಟ್ಟು ಮಾಡೊದು ಬಿಡಬೇಕು, ಮೋದಿಯವರು ಏನೆ ಮಾಡಿದರು. ಅದರಲ್ಲಿಂ ಯಾವ ಸ್ವಾರ್ಥವು ಇರುವುದಿಲ್ಲಾ, ಕೇವಲ ದೇಶದ ಹಿತಇರುತ್ತದೆಅದನ್ನುಅರ್ಥ ಮಾಡಿಕೊಳ್ಳಬೇಕು, ರಾಜ್ಯದಲ್ಲಿ ಕಳೆದ 3 ವರ್ಷದಿಂದ ಜನರು ಕೇವಲ ಸಂಕಷ್ಟದಲ್ಲಿದ್ದಾರೆ, ಆದರೆ ಮುಖ್ಯಮಂತ್ರಿ ಮತ್ತು ಉಪಮುಖ್ಯಮಂತ್ರಿ ಇಬ್ಬರೂ ಮುಖ್ಯಮಂತ್ರಿಕುರ್ಚಿಗಾಗಿ ಜಗಳ ಆಡುತ್ತಾ ಕಾಲಹರಣ ಮಾಡುತ್ತಿದ್ದಾರೆ.

ಕಳೆದ 3 ವರ್ಷದಿಂದ ಬೀದರಜಿಲ್ಲೆಯ ಉಸ್ತುವಾರಿ ಈಶ್ವರಖಂಡ್ರೆ ಅವರ ಸಾಧನೆಯೂ ಶೂನ್ಯ, ಕೇವಲ ಮಾತಾಡುವುದು, ಸುಳ್ಳು ಆಶ್ವಾಸನೆಕೊಡುವುದು, ಅನ್ಯಾಯದ ವಿರುದ್ದಧ್ವನಿ ಎತ್ತುವವರ ಮೇಲೆ ಸುಳ್ಳು ಪ್ರಕರಣಗಳು ಹಾಕಿಸುವುದು ಮಾಡುವುದು ಬಿಟ್ಟರೆ ಏನು ಸಾಧನೆ ಮಾಡಿಲ್ಲಾ, ಬಿ.ಎಸ್.ಎಸ್.ಕೆಇಲ್ಲಿಯವರೆಗೆ ಪ್ರಾರಂಭಿಸಿಲ್ಲಾ, ಒಂದು ನಯಾ ಪೈಸೆ ಅನುದಾನ ಬಿ.ಎಸ್.ಎಸ್.ಕೆಗೆ ಕೊಡಿಸಿಲ್ಲಾ, ನಾನು ಕೇಂದ್ರದಲ್ಲಿ ಮಂತ್ರಿಯಿದ್ದಾಗ ಮಂಜೂರಿ ಮಾಡಿಸಿದ್ದ ಸಿಪೇಟ್ ಕಾಲೇಜಿಗೆ, ಬೀದರ ನಾಂದೇಡ್ ರೈಲಿಗೆ ರಾಜ್ಯದಿಂದ ಅನುದಾನ ಕೊಟ್ಟಿಲ್ಲಾ, ಜಿಲ್ಲಾಡಳಿತ ಇವರಕೈಯಲ್ಲಿಇಲ್ಲಾ, ಇವರ ಮಾತು ಯಾವ ಅಧಿಕಾರಿಗಳು ಕೇಳ್ತಾ ಇಲ್ಲಾ, ಜನ ಸಾಮಾನ್ಯರ ಒಂದು ಕೆಲಸವು ಆಗ್ತಿಲ್ಲಾ, ಕಳೆದ 3 ವರ್ಷದಿಂದ ಬೀದರ ಜಿಲ್ಲೆಯ ಜನರು ಹೈರಾಣದಲ್ಲಿದ್ದಾರೆ. ಎ.ಟಿ.ಎಮ್ ಲೂಟಿಯಾಗಿದ್ದು ಇಲ್ಲಿಯವರೆಗೆ ಕಳ್ಳರು ಸಿಕ್ಕಿಲ್ಲಾ, ಜಿಲ್ಲೆಯಲ್ಲಿ ಇಸ್ಪಿಟ್, ಮಟಕಾ ಕ್ಲಬ್‌ಗಳು ನಡೆಯುತ್ತಿದ್ದು, ಉಸ್ತುವಾರಿ ಸಚಿವರ ಆಪ್ತರೆ ಅಕ್ಕಿ ಕಳ್ಳ ಸಾಗಾಣೆಯಲ್ಲಿ ತೊಡಗಿದ್ದು ಇವುಗಳನ್ನು ಉಸ್ತುವಾರಿ ಮಂತ್ರಿಯಿಂದ ನಿಯಂತ್ರಿಸಲು ಆಗುತ್ತಿಲ್ಲಾ, ಬೇಸಿಗೆಯಲ್ಲಿ 60% ಹಳ್ಳಿಗಳಲ್ಲಿ ಕುಡಿಯುವ ನೀರಿನ ಸಮಸ್ಯೆಯಾಗಿತ್ತು, ಆದರೆ ಖಂಡ್ರೆ ಕೇವಲ ಸಭೆ ತೆಗೆದುಕೊಂಡು ಕೈ ತೊಳೆದುಕೊಂಡರು, ಇವರೊಬ್ಬ ನಿಷ್ಕ್ರೀಯಂಉಸ್ತುವಾರಿ ಸಚಿವಎಂದರೆ



ತಪ್ಪಾಗಲಾರದು ಎಂದಿದ್ದಾರೆ.

ರಾಜ್ಯದಲ್ಲಿ ಮತ್ತು ಜಿಲ್ಲೆಯಲ್ಲಿ ಕಾಂಗ್ರೆಸ್ ಸರ್ಕಾರದಿಂದ ಜನರು ಬೇಸತ್ತಿದ್ದಾರೆ, ಈ ಸರ್ಕಾರದಿಂದಯಾವಾಗ ಮುಕ್ತಿ ಸಿಗುತ್ತದೆ ಎಂದು ಕಾಯುತ್ತಿದ್ದಾರೆ. ಯಾವಾಗ ಚುನಾವಣೆ ಬರುತ್ತೊ, ಹೊಸ ಸರ್ಕಾರ ತರಲು ಕಾಯುತ್ತಿದ್ದಾಂ. ಅಷ್ಟೊಂದು ಬೇಜಾರಾಗಿದ್ದಾರೆ. ನಮ್ಮ ಜನರು ಎಂದು ಮಾಜಿ ಸಚಿವ ಭಗವಂತ ಖೂಬಾ ಕಾಂಗ್ರೆಸ್ ಸರ್ಕಾರದ ವಿರುದ್ದ ಹರಿಹಾಯ್ದಿದ್ದಾರೆ.





ಬುಧವಾರ ಬೆಂಗಳೂರಿನಲ್ಲಿ ಪತ್ರಿಕಾಗೋಷ್ಠಿಯಲ್ಲಿ ನಗರ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ಮಾತನಾಡಿದರು.

# ಕೊಪ್ಪಳಕ್ಕೆ ವೆಂಕಟೇಶ್ ಹೆಗಡೆ ನೇಮಕ

**ಬಳ್ಳಾರಿ, ಮೇ 20–** ಕರ್ನಾಟಕ ಪ್ರದೇಶ ಕಾಂಗ್ರೆಸ್ ಪ್ರಚಾರ ಸಮಿತಿಯ ಕೊಪ್ಪಳ ಜಿಲ್ಲಾ ಉಸ್ತುವಾರಿಯನ್ನಾಗಿ ನಗರದ ಕಾಂಗ್ರೆಸ್ ಮುಖಂಡ ವೆಂಕಟೇಶ್ ಹೆಗಡೆ ಅವರನ್ನು ಪ್ರಚಾರ ಸಮಿತಿಯ ರಾಜ್ಯಾಧ್ಯಕ್ಷ ವಿನಯ್ ಕುಮಾರ್ ಸೊರಕೆ ನಿಯೋಜಿ ಸಿದ್ದಾರೆ. ಇದೇ ರೀತಿ ಸೊರಕೆ ಅವರು ರಾಜ್ಯದ ವಿವಿಧ 25 ಜಿಲ್ಲೆಗಳಿಗೆ ಉಸ್ತುವಾರಿಯನ್ನು ನಿಯೋಜಿಸಿ ಆದೇಶ ಹೊರಡಿಸಿದ್ದಾರೆ. ಈ ಮೊದಲು ರಾಯಚೂರು ಜಿಲ್ಲಾ ಉಸ್ತುವಾರಿಯಾಗಿದ್ದ ವೆಂಕಟೇಶ್ ಹೆಗಡೆ ಅವರಿಗೆ ಕೊಪ್ಪಳ ಜಿಲ್ಲೆಯ ಉಸ್ತುವಾರಿ ಜವಾಬ್ದಾರಿ ನೀಡಲಾಗಿದೆ.



# ಶೃಂಗೇರಿ ಕ್ಷೇತ್ರ ಫಲಿತಾಂಶ ಗೊಂದಲ ನಿವಾರಣೆಗೆ ನ್ಯಾಯಾಂಗ ತನಿಖೆ ಸೂಕ್ತ: ಜೆಡಿಎಸ್ ವಕ್ತಾರ ಸುಧಾಕರ್ ಶೆಟ್ಟಿ

**ಕೊಪ್ಪ, ಮೇ 20:** ಶೃಂಗೇರಿ ವಿಧಾನಸಭಾ ಚುನಾವಣೆಗೆ ಸಂಬಂಧಿಸಿದಂತೆ ಫಲಿತಾಂಶ ಗೊಂದಲ ನಿವಾರಿಸುವ ನಿಟ್ಟಿನಲ್ಲಿ ರಾಜ್ಯ ಸರ್ಕಾರ ನ್ಯಾಯಾಂಗ ತನಿಖೆಗೆ ವಹಿಸುವುದು ಸೂಕ್ತ ಎಂದು ಜೆಡಿಎಸ್‌ನ ರಾಷ್ಟ್ರೀಯ ವಕ್ತಾರ ಸುಧಾಕರ್ ಎಸ್. ಶೆಟ್ಟಿ ತಿಳಿಸಿದ್ದಾರೆ.

ಕಳೆದ ವಿಧಾನಸಭಾ ಚುನಾವಣೆ ಎಣಿಕೆ ದಿನದ ಅಂತ್ಯದಲ್ಲಿ ಬಿಜೆಪಿ ಅಭ್ಯರ್ಥಿಯಾಗಿದ್ದ ಡಿ.ಎನ್. ಜೀವರಾಜ್ ಮರುಎಣಿಕೆಗೆ ಒತ್ತಾಯಿಸಿ ಪತ್ರ ನೀಡಿದ್ದರು. ಆಗ ಶಾಸಕ ಟಿ.ಡಿ. ರಾಜೇಗೌಡ ಮರು ಎಣಿಕೆಗೆ ವಿರೋಧ ವ್ಯಕ್ತಪಡಿಸಿದ್ದರು. ನಂತರ ಜೀವರಾಜ್ ನ್ಯಾಯಾಲಯಕ್ಕೆ ತೆರಳಿದ್ದರು.

ನ್ಯಾಯಾಲಯ ಮರುಎಣಿಕೆಗೆ



ಆದೇಶ ಮಾಡಿತ್ತು. ಅದರಂತೆ ಜೀವರಾಜ್ ಜಯ ಗಳಿಸಿದ್ದರು. ಈಗ ರಾಜೇಗೌಡರು ಸುಪ್ರೀಂಕೋರ್ಟ್ ಮೂಲಕ 21ರವರೆಗೆ ಸ್ಟೇ ತಂದಿದ್ದಾರೆ. 21ರ ಕೋರ್ಟ್‌ನಲ್ಲಿ ಭಾಗವಹಿಸುವಂತೆ ನಮಗೆ ಕೋರ್ಟ್‌ನಿಂದ ನೋಟಿಸ್ ಬಂದಿದೆ. ನಾನು ಈ ಬಗ್ಗೆ ವಕೀಲರನ್ನು ನೇಮಕ ಮಾಡಿದ್ದೇನೆ ಎಂದರು.

ಟ್ಯಾಂಪರಿಂಗ್ ಆಗಿದೆಯೋ, ಆಗಿಲ್ಲ ಎಂದು ಈಗ ಹೇಳಲು ಸಾಧ್ಯವಿಲ್ಲ. ಒಂದು ಕಡೆಯಿಂದ ತಪ್ಪು ನಡೆದಿದೆ. ಅಧಿಕಾರಿಗಳು ಭಾಗಿಯಾಗಿರುವ ಸಾಧ್ಯತೆಯಿದೆ. ಈ ಕಾರಣಕ್ಕಾಗಿ ಸರ್ಕಾರ ನ್ಯಾಯಾಂಗ ತನಿಖೆಗೆ ವಹಿಸಲಿ ಎಂದರು.

ಮೇ 21ರಂದು ನ್ಯಾಯಾಲಯ ಯಾವ ನಿರ್ಧಾರ ತೆಗೆದುಕೊಳ್ಳುತ್ತದೆ ಎಂದು ಕಾದು ನೋಡಬೇಕಿದೆ. ಮೈತ್ರಿ ಪಕ್ಷದ ಶಾಸಕರೊಬ್ಬರು ವಿಧಾನಸೌಧಕ್ಕೆ ತೆರಳಿದ ಕ್ಷೇತ್ರದಲ್ಲಿ ಇನ್ನಷ್ಟು ಅಭಿವೃದ್ಧಿ ಕಾರ್ಯ ಮಾಡಲು ಸಹಕಾರಿಯಾಗುತ್ತದೆ ಎಂದರು.

# ಹುಬ್ಬಳ್ಳಿ ವಿಮಾನನಿಲ್ದಾಣಕ್ಕೆ ಎಂಸಿಪಿ ವಾಹನ ಆಗಮನ

## ಅಪಘಾತ, ಅಪಹರಣ ಸಂದರ್ಭದಲ್ಲಿ ಪರಿಸ್ಥಿತಿ ನಿರ್ವಹಣಾ ಕಾರ್ಯಾಚರಣೆಗೆ ಅನುಕೂಲ

**ಹುಬ್ಬಳ್ಳಿ, ಮೇ 20:** ವಿಮಾನ ಅಪಘಾತ, ಅಪಹರಣಗಳಂತಹ ಘಟನೆಗಳು ನಡೆದಾಗ ಪರಿಸ್ಥಿತಿ ನಿರ್ವಹಣೆ, ರಕ್ಷಣಾ ಕಾರ್ಯಾಚರಣೆಗೆ ಅನುಕೂಲವಾಗಲೆಂಬ ಉದ್ದೇಶದಿಂದ ಹುಬ್ಬಳ್ಳಿ ವಿಮಾನ ನಿಲ್ದಾಣಕ್ಕೆ ಎಂಸಿಪಿ (ಮೊಬೈಲ್ ಕಮಾಂಡ್ ಪೋಸ್ಟ್) ವಾಹನ ಬಂದಿದೆ. ಭಾರತೀಯ ವಿಮಾನ ನಿಲ್ದಾಣಗಳ ಪ್ರಾಧಿಕಾರದಡಿ (ಎಎಐ) ಬರುವ ರಾಜ್ಯದ ನಿಲ್ದಾಣಗಳ ಪೈಕಿ ಎಂಸಿಪಿ ಹೊಂದಿರುವ ಮೊಟ್ಟ ಮೊದಲ ವಿಮಾನ ನಿಲ್ದಾಣ ಇದಾಗಿದೆ.





ಬೆಂಗಳೂರು ಮತ್ತು ಮಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಗಳು ಇದಕ್ಕಿಂತ ದೊಡ್ಡದಾಗಿವೆ. ಅತೀ ಹೆಚ್ಚು ದಟ್ಟಣೆ ಹಾಗೂ ವಿಮಾನ ಹಾರಾಟ ಹೊಂದಿವೆ. ಈ ಎರಡು ವಿಮಾನ ನಿಲ್ದಾಣಗಳು ಎಎಐ ವ್ಯಾಪ್ತಿಗೆ ಒಳಪಟ್ಟಿಲ್ಲ. ಬೆಂಗಳೂರು ವಿಮಾನ ನಿಲ್ದಾಣ ಖಾಸಗಿ ಸಂಸ್ಥೆಯಾದ ಜಿವಿಕೆ ಹಿಡಿತದಲ್ಲಿದೆ. ಹೀಗಾಗಿ ಹುಬ್ಬಳ್ಳಿ ವಿಮಾನ ನಿಲ್ದಾಣದಲ್ಲಿ ಮೊಬೈಲ್ ಕಮಾಂಡ್ ಪೋಸ್ಟ್ ವಾಹನ ಲಭ್ಯವಾಗಿದ್ದು, ಒಳಗಡೆ ಅತ್ಯಾಧುನಿಕ ಸೌಲಭ್ಯಗಳನ್ನು ಒಳಗೊಂಡಿದೆ. ವಾಹನದ ಒಳಗಡೆ ಮಿನಿ ಮೀಟಿಂಗ್ ಹಾಲ್ ಇದೆ. 8–10 ಅಧಿಕಾರಿಗಳು ಕುಳಿತುಕೊಳ್ಳಲು ಆಸನ ವ್ಯವಸ್ಥೆ ಇದೆ. ವಿಮಾನ ಅಪಘಾತ, ಅಪಹರಣವಾದಾಗ ಅಥವಾ ಇನ್ನಿತರ ತುರ್ತು ಸಂದರ್ಭಗಳಲ್ಲಿ ಅಧಿಕಾರಿಗಳು ಕಚೇರಿಗಳಲ್ಲೇ ಕುಳಿತು ಸಭೆ ನಡೆಸುವುದು, ತ್ವರಿತ ನಿರ್ಧಾರ ಕೈಗೊಳ್ಳುವುದು ಕಷ್ಟಸಾಧ್ಯವಾಗುತ್ತದೆ. ಘಟನಾ ಸ್ಥಳಕ್ಕೆ ಭೇಟಿ ನೀಡಿ ಸಭೆ ನಡೆಸಬೇಕೆಂದರೆ ಸಂವಹನ, ಮಾನಿಟರ್ ಹಾಗೂ ಇನ್ನಿತರ ಸಮಸ್ಯೆಗಳು ಕಾಡುತ್ತವೆ. ಇದಕ್ಕಾಗಿ ಭಾರತೀಯ ವಿಮಾನ ನಿಲ್ದಾಣಗಳ ಪ್ರಾಧಿಕಾರವೂ ತುರ್ತು ಸಂದರ್ಭಗಳಲ್ಲಿ ನಿರ್ವಹಿಸಲು ಅತ್ಯಾಧುನಿಕ ತಂತ್ರಜ್ಞಾನದ ಈ ಎಂಸಿಪಿಯನ್ನು ಸಿದ್ಧಪಡಿಸಿದೆ.

ರಾಜ್ಯದಲ್ಲಿ ವಿಮಾನಯಾನ ಪ್ರಾಧಿಕಾರದ ಅಡಿಯಲ್ಲಿ ನಾಲ್ಕು ವಿಮಾನ ನಿಲ್ದಾಣಗಳು ಬರುತ್ತವೆ. ಕಲಬುರಗಿ, ಮೈಸೂರು, ಬೆಳಗಾವಿ ಹಾಗೂ ಹುಬ್ಬಳ್ಳಿ, ಈ ಪೈಕಿ ಹೆಚ್ಚು ಪ್ರಯಾಣಿಕರ ಆಗಮನ–ನಿರ್ಗಮನ ಹೆಚ್ಚಾಗಿ ಇರುವುದು ಹುಬ್ಬಳ್ಳಿಯಲ್ಲಿ. ಹೀಗಾಗಿ ಮೊದಲ ಹಂತವಾಗಿ ಹುಬ್ಬಳ್ಳಿ ನಿಲ್ದಾಣಕ್ಕೆ ಪ್ರಾಧಿಕಾರವೂ ಈ ವಾಹನವನ್ನು ಕಳುಹಿಸಿದೆ. ವಿಹೆಚ್‌ಎಫ್ (ವೆರಿ ಹೈ ಫ್ರೀಕ್ವೆನ್ಸಿ, ಯುಹೆಚ್ಚ್ (ಅಲ್ಟ್ರಾ ಹೈ ಫ್ರೀಕ್ವೆನ್ಸಿ) ವ್ಯವಸ್ಥೆಯೂ ಇಲ್ಲಿದೆ. ಏರ್‌ಟ್ರಾಫಿಕ್ ಕಂಟ್ರೋಲ್ (ಎಟಿಸಿ), ಅಗ್ನಿಶಾಮಕ ದಳ, ವಿಮಾನ ನಿಲ್ದಾಣದ ಭದ್ರತಾ ಸಿಬ್ಬಂದಿಯೊಂದಿಗೆ ನಿರಂತರ ಸಂಪರ್ಕ ಸಾಧಿಸಬಹುದು. ಇಂಟರ್‌ನೆಟ್ ಸಂಪರ್ಕಕ್ಕಾಗಿ ಇದರಲ್ಲಿ ಸ್ಯಾಟ್‌ಲೈಟ್ ಲಿಂಕ್‌ಗಳು ಮತ್ತು ಇದು ನೆಟ್‌ವರ್ಕ್ ಇಲ್ಲದ ಪ್ರದೇಶಗಳಲ್ಲೂ ಸಂವಹನ, ಹೈ–ಸ್ಪೀಡ್ ವೈ–ಫೈ ವ್ಯವಸ್ಥೆ ಅಳವಡಿಸಲಾಗಿದೆ, ಸಂವಹನಕ್ಕೆ ನೆರವಾಗುತ್ತದೆ. ವಾಹನದ ಒಳಭಾಗದಲ್ಲಿ ಬೃಹತ್ ವಿಡಿಯೋ ವಾಲ್‌ಗಳು ಮತ್ತು ಮಲ್ಟಿಪಲ್ ಮಾನಿಟರ್‌ಗಳಿವೆ. ಇವು ಸಿಸಿಟಿವಿ ಫೀಡ್‌ಗಳನ್ನು ಮತ್ತು ಡ್ರೋನ್ ಚಿತ್ರಣಗಳನ್ನು ನೇರವಾಗಿ ಪ್ರಸಾರ ಮಾಡುತ್ತವೆ. ಇದರಿಂದಾಗಿ ಘಟನಾ ಸ್ಥಳದ 360–ಡಿಗ್ರಿ ಚಿತ್ರಣ ಅಧಿಕಾರಿಗಳಿಗೆ ಲಭ್ಯವಾಗುತ್ತದೆ. ಈ ವಾಹನ ರಾತ್ರಿ ವೇಳೆಯಲ್ಲೂ ಕೂಡ ಕಾರ್ಯನಿರ್ವಹಣೆ ಮಾಡುತ್ತದೆ. ಪ್ರತಿ ತಿಂಗಳು ವಿಮಾನ ನಿಲ್ದಾಣದಲ್ಲಿ ನಡೆಸುವ ಡ್ರಿಲ್ ಸಂದರ್ಭದಲ್ಲಿ ಇದನ್ನು ಉಪಯೋಗಿಸಲಾಗುವುದು. ಇದರಲ್ಲಿ ಕುಳಿತುಕೊಂಡು ಎಲ್ಲಾ ಮಾರ್ಗದರ್ಶನ ಹಾಗೂ ನಿರ್ದೇಶನ ನೀಡಲಾಗುತ್ತದೆ.

# ಜಿಲ್ಲೆಯಲ್ಲಿ ಐತಿಹಾಸಿಕ ತೀರ್ಮಾನ: ವರದಕ್ಷಿಣೆ ಮುಕ್ತ ಸಮಾಜದತ್ತ ಲಂಬಾಣಿ ತಾಂಡಾಗಳ ಹೆಜ್ಜೆ!


**ಕಲಬುರಗಿ, ಮೇ. 20:** ನಮ್ಮ ಸಮಾಜಕ್ಕೆ ಬಹುದೊಡ್ಡ ಸಾಮಾಜಿಕ ಪಿಡುಗಾಗಿ ಕಾಡುತ್ತಿರುವ ವರದಕ್ಷಿಣೆ ಪದ್ಧತಿಯನ್ನು ಬೇರುಸಹಿತ ಕಿತ್ತೆಸೆಯಲು ಜಿಲ್ಲೆಯ ಲಂಬಾಣಿ ತಾಂಡಾಗಳ ನಿವಾಸಿಗಳು ಅತ್ಯಂತ ಮಹತ್ವದ ಹಾಗೂ ಐತಿಹಾಸಿಕ ನಿರ್ಧಾರ ಕೈಗೊಂಡಿದ್ದಾರೆ.

ಜಿಲ್ಲೆಯ ಚಿಂಚೋಳಿ ತಾಲೂಕಿನ ವಿವಿಧ ತಾಂಡಾಗಳ ಮುಖಂಡರು ಮತ್ತು ಗ್ರಾಮಸ್ಥರು ಒಟ್ಟಾಗಿ ಸೇರಿ, ಇನ್ಮುಂದೆ ತಮ್ಮ ಸಮುದಾಯದಲ್ಲಿ ವರದಕ್ಷಿಣೆ ಕೊಡುವುದು ಮತ್ತು ಕೊಳ್ಳುವುದನ್ನು ಸಂಪೂರ್ಣವಾಗಿ ನಿಷೇಧಿಸಲು ಒಮ್ಮತದ ತೀರ್ಮಾನಕ್ಕೆ ಬಂದಿದ್ದಾರೆ. ಚಿಂಚೋಳಿ ತಾಲ್ಲೂಕಿನಲ್ಲಿ ಸುಮಾರು 120ಕ್ಕೂ ಹೆಚ್ಚು ತಾಂಡಾಗಳಿವೆ. ಸೇ.80ರಷ್ಟು ತಾಂಡಾಗಳು ಅರಣ್ಯ ಪ್ರದೇಶದಲ್ಲಿದ್ದು, ಎಲ್ಲರೂ ಬಡತನ ರೇಖೆಗಿಂತ ಕೆಳಗಿದ್ದಾರೆ.

ಈ ನಿರ್ಧಾರವು ಸಮಾಜದಲ್ಲಿ ಹೊಸ ಕ್ರಾಂತಿಗೆ ಮುನ್ನುಡಿ ಬರೆದಿದೆ. ಬಂಜಾರ ಮಹಾಪಂಚಾಯಿತಿಯಲ್ಲಿ ಮಹತ್ವದ ಠರಾವು: ಚಿಂಚೋಳಿ ತಾಲೂಕಿನಲ್ಲಿ ಇತ್ತೀಚೆಗೆ ನಡೆದ ಪ್ರತಿಷ್ಠಿತ 'ಬಂಜಾರ ಮಹಾ ಪಂಚಾಯಿತಿ'ಯಲ್ಲಿ ಈ ಕ್ರಾಂತಿಕಾರಿ ನಿರ್ಣಯವನ್ನು ಅಂಗೀಕರಿಸಲಾಗಿದೆ.

ತಾಂಡಾಗಳ ಹಿರಿಯರು, ಧರ್ಮಗುರುಗಳು ಮತ್ತು ಯುವ ಮುಖಂಡರು ಸುಮಾರು ಗಂಟೆಗಳ ಕಾಲ ಸುದೀರ್ಘ ಚರ್ಚೆ ನಡೆಸಿ, ಬಡ ಮತ್ತು ಮಧ್ಯಮ ವರ್ಗದ ಕುಟುಂಬಗಳನ್ನು ಸಾಲದ ಸುಳಿಗೆ ದೂಡುತ್ತಿರುವ ವರದಕ್ಷಿಣೆ ಪದ್ಧತಿಗೆ ಬ್ರೇಕ್ ಹಾಕಲೇಬೇಕು ಎಂದು ನಿರ್ಧರಿಸಿದರು. ಈ ಮಹಾಪಂಚಾ ಯಿತಿಯಲ್ಲಿ ತಾಂಡಾದ ಪ್ರತಿಯೊಬ್ಬ ನಾಗರಿಕನೂ ಈ ಪಂಚಾಯತ್ ನಿಯಮಕ್ಕೆ ಬದ್ಧರಾಗಿರಬೇಕು ಎಂದು ಕಟ್ಟುನಿಟ್ಟಿನ ಠರಾವು ಪಾಸ್ ಮಾಡಲಾಗಿದೆ.

ಮದುವೆ ಸಂದರ್ಭದಲ್ಲಿ ನಗದು, ಕಾರು, ಬೈಕ್ ಕೊಡುವಂತಿಲ್ಲ: ಈ ನೂತನ ನಿಯಮದ ಪ್ರಕಾರ, ಮದುವೆ ಸಂಪ್ರದಾಯದ ಹೆಸರಿನಲ್ಲಿ ವರನ ಕಡೆಯವರು ವಧುವಿನ ಕಡೆಯವರಿಂದ ಯಾವುದೇ ರೂಪದಲ್ಲಿ ವರದಕ್ಷಿಣೆ ಬೇಡುವಂತಿಲ್ಲ. ನಗದು ಹಣ ಮಾತ್ರವಲ್ಲದೆ, ಇತ್ತೀಚಿನ ದಿನಗಳಲ್ಲಿ ಟ್ರೆಂಡ್ ಆಗಿರುವ ಐಷಾರಾಮಿ ಕಾರು, ಬೈಕ್ ಅಥವಾ ಇನ್ಯಾವುದೇ ಬೆಲೆಬಾಳುವ ವಸ್ತುಗಳನ್ನು ಉಡುಗೊರೆಯಾಗಿ ನೀಡಲು ಅಥವಾ ಪಡೆಯಲು ಕಟ್ಟುನಿಟ್ಟಿನ ನಿಷೇಧ ಹೇರಲಾಗಿದೆ. ಸರಳ ವಿವಾಹಕ್ಕೆ ಆದ್ಯತೆ ನೀಡಿ, ಹೆಣ್ಣು ಹೆತ್ತವರ ಮೇಲಿನ ಆರ್ಥಿಕ ಹೊರೆಯನ್ನು ತಗ್ಗಿಸುವುದು ಈ ನಿರ್ಧಾರದ ಮುಖ್ಯ ಉದ್ದೇಶವಾಗಿದೆ ಎಂದು ತಾಂಡಾ ಮುಖಂಡರು ತಿಳಿಸಿದರು.



ಉಲ್ಲಂಘಿಸಿದರೆ ತಾಂಡಾದಿಂದ ಬಹಿಷ್ಕಾರ! : ಕೇವಲ ನಿಯಮ ರೂಪಿಸುವುದಷ್ಟೇ ಅಲ್ಲದೇ, ಅದನ್ನು ಜಾರಿಗೊಳಿಸಲು ಕಠಿಣ ಕಾನೂನನ್ನೂ ಸಮುದಾಯ ರೂಪಿಸಿದೆ. ಒಂದು ವೇಳೆ ಯಾರಾದರೂ ಈ ಐತಿಹಾಸಿಕ ನಿರ್ಣಯವನ್ನು ಉಲ್ಲಂಘಿಸಿ, ಕದ್ದುಮುಚ್ಚಿ ವರದಕ್ಷಿಣೆ ವ್ಯವಹಾರ ನಡೆಸಿದ್ದು ಕಂಡು ಬಂದರೆ, ಅಂಥವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಲಾಗಿದೆ.

ಪಂಚಾಯತ್ ನಿಯಮ ಮುರಿದ ಕುಟುಂಬಗಳನ್ನು ತಾಂಡಾದಿಂದ ಹಾಗೂ ಸಮುದಾಯದಿಂದ ಸಂಪೂರ್ಣವಾಗಿ ಬಹಿಷ್ಕರಿಸಲು (ಸಾಮಾಜಿಕ ಬಹಿಷ್ಕಾರ) ನಿರ್ಧರಿಸಲಾಗಿದ್ದು, ಈ ಕಠಿಣ ನಿಯಮವು ಸದ್ಯ ಜಿಲ್ಲಾದ್ಯಂತ ಭಾರಿ ಚರ್ಚೆಗೆ ಗ್ರಾಸವಾಗಿದೆ ಮತ್ತು ಸಾರ್ವಜನಿಕ ವಲಯದಲ್ಲಿ ವ್ಯಾಪಕ ಶ್ಲಾಘನೆ ವ್ಯಕ್ತವಾಗುತ್ತಿದೆ.

# ಪಂಚ ಗ್ಯಾರಂಟಿ ಪರಿಶೀಲನಾ ಸಭೆ

## ಪಡಿತರ ವಿತರಣೆ ಸಮಯ ಬದಲಿಸಲು ಅಮೃತರಾವ್ ಸೂಚನೆ

**ಬೀದರ್, ಮೇ. 20:** ಬೇಸಿಗೆ ಕಾಲ ಇರುವುದರಿಂದ ಜಿಲ್ಲೆಯ ಎಲ್ಲ ಪಡಿತರ ವಿತರಿಸುವ ಅಂಗಡಿಗಳ ಸಮಯ ಬದಲಾವಣೆಗೆ ಸಂಬಂಧಪಟ್ಟ ಅಧಿಕಾರಿಗಳು ಕ್ರಮ ವಹಿಸಬೇಕು ಎಂದು ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಅಮೃತರಾವ್ ಚಿಮಕೋಡೆ ಸೂಚಿಸಿದರು.

ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ನಡೆದ ಗ್ಯಾರಂಟಿ ಯೋಜನೆಗಳ ಜಿಲ್ಲಾ ಮಟ್ಟದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ, ಜಿಲ್ಲೆಯ ಎಲ್ಲಾ ಬಸ್ ನಿಲ್ದಾಣಗಳಲ್ಲಿ ಕುಡಿಯುವ ನೀರು ಮತ್ತು ಸ್ವಚ್ಛತೆ ಬಗ್ಗೆ ಅನೇಕ ದೂರುಗಳು ಬರುತ್ತಿವೆ. ವಿಭಾಗೀಯ ನಿಯಂತ್ರಣಾಧಿಕಾರಿ ಕ್ರಮ ವಹಿಸಬೇಕು. ಆಹಾರ ಇಲಾಖೆಯಲ್ಲಿ ಪಡಿತರ ವಿತರಿಸುವ ಅಂಗಡಿಗಳಲ್ಲಿ ಬೇಸಿಗೆ ಕಾಲ ಇರುವುದರಿಂದ ಕುಡಿಯುವ ನೀರು ಹಾಗೂ ನೆರಳಿನ ವ್ಯವಸ್ಥೆ ಕೂಡ ಮಾಡಬೇಕು ಎಂದು ತಿಳಿಸಿದರು.

ರಾಜ್ಯ ಸರ್ಕಾರದ ಮಹತ್ವಕಾಂಕ್ಷಿ ಕಾರ್ಯಕ್ರಮಗಳಾದ ಪಂಚ ಗ್ಯಾರಂಟಿ ಯೋಜನೆಗಳಿಂದ ಜಿಲ್ಲೆಯ ಯಾವೊಬ್ಬ ಫಲಾನುಭವಿಯೂ ಹೊರಗುಳಿಯದಂತೆ ಎಚ್ಚರ ವಹಿಸಬೇಕು. ಗೃಹಲಕ್ಷ್ಮಿ ಯೋಜನೆಯಡಿ ಜಿಲ್ಲೆಯಲ್ಲಿ 3,45,132 ಫಲಾನುಭವಿಗಳು ಯೋಜನೆಯ ಲಾಭ ಪಡೆಯುತ್ತಿದ್ದಾರೆ. ಜನವರಿ ವರೆಗೆ ?189 ಕೋಟಿ ಡಿಬಿಟಿ ಮೂಲಕ ಖಾತೆಗೆ ಜಮೆ ಮಾಡಲಾಗಿದೆ. ಮಾರ್ಚ್ ತಿಂಗಳ ಹಣ ಒಂದು ವಾರದೊಳಗೆ





ಫಲಾನುಭವಿಗಳ ಖಾತೆಗೆ ಜಮೆ ಆಗಲಿದೆ ಎಂದರು.

ಜಿಲ್ಲೆಯಲ್ಲಿ ಮರಣ ಹೊಂದಿರುವ ಫಲಾನುಭವಿಗಳ ಸಂಖ್ಯೆ 5,339 ಇದ್ದು, 4,917 ಮರಣ ಹೊಂದಿರುವ ಫಲಾನುಭವಿಗಳ ವಿವರ ಸೇವಾ ಸಿಂಧೂ ವೆಬ್‌ಸೈಟ್‌ನಲ್ಲಿ ಲಾಗಿನ್‌ನಲ್ಲಿ ಅಪ್‌ಡೇಟ್ ಮಾಡಲಾಗಿದೆ. ಬಾಕಿ 422 ಫಲಾನುಭವಿಗಳು ಸೇವ್ ಲಾಗಿನ್‌ನಲ್ಲಿ ಅಪ್‌ಡೇಟ್ ಮಾಡಬೇಕಾಗಿದೆ. ಗೃಹಜ್ಯೋತಿ ಯೋಜನೆಯಡಿ ಜಿಲ್ಲೆಯಲ್ಲಿ 3,75,344 ಗ್ರಾಹಕರಿದ್ದು, 3,59,301 ಫಲಾನುಭವಿಗಳು ಗೃಹಜ್ಯೋತಿ ಯೋಜನೆ ಲಾಭ ಪಡೆಯುತ್ತಿದ್ದು, 513 ಕೋಟಿ ಸಂದಾಯವಾಗಿದೆ.

ಶಕ್ತಿ ಯೋಜನೆಯ ಅಡಿಯಲ್ಲಿ ಜಿಲ್ಲೆಯಲ್ಲಿ 2023ರ ಜೂನ್ 11ರಿಂದ 2025ರ ಮೇ 8ರ ವರೆಗೆ ಮಹಿಳೆಯರು ಮತ್ತು ಬಾಲಕಿಯರು ಒಟ್ಟು ಸೇರಿ 12.36 ಕೋಟಿ ಜನರು ಸೌಲಭ್ಯವನ್ನು ಪಡೆದಿರುತ್ತಾರೆ. ಪ್ರತಿದಿನ ಸರಾಸರಿ 1.16 ಲಕ್ಷ ಮಹಿಳೆಯರು ಪ್ರಯಾಣಿಸುತ್ತಿದ್ದು ಇದುವರೆಗೆ ರೂ.367.99 ಕೋಟಿ ಸಂದಾಯವಾಗಿರುತ್ತದೆ ಎಂದರು.

# ಕಲಬುರಗಿಯಲ್ಲಿ ವಿಐಪಿ ಪಕ್ಷದ ಶಕ್ತಿ ಪ್ರದರ್ಶನ

## ಅತಿಹಿಂದುಳಿದ ಸಮುದಾಯಗಳ ಏಳಿಗೆಗೆ ಮಠಾಧೀಶರು, ಮುಖಂಡರ ಬೆಂಬಲ



**ಕಲಬುರಗಿ, ಮೇ. 20:** ಪಂಚ ರಾಜ್ಯಗಳ ಚುನಾವಣೆಯ ಬಳಿಕ ರಾಜ್ಯ ರಾಜಕಾರಣದಲ್ಲಿ ಮತ್ತೊಂದು ರಾಷ್ಟ್ರೀಯ ಪಕ್ಷ ತನ್ನ ಅಸ್ತಿತ್ವ ಬಲಪಡಿಸಲು ಮುಂದಾಗಿದ್ದು, ರಾಷ್ಟ್ರೀಯ ವಿಕಾಸಶೀಲ್ ಇನ್ಸಾನ್ ಪಾರ್ಟಿ (ವಿಐಪಿ) ಕರ್ನಾಟಕದಲ್ಲಿ ಸಂಘಟನೆ ವಿಸ್ತರಣೆಗೆ ಚಾಲನೆ ನೀಡಿದೆ.

ನಗರದ ಖಾಸಗಿ ಹೋಟೆಲ್ ಸಭಾಂಗಣದಲ್ಲಿ ನಡೆದ ಸಭೆಯಲ್ಲಿ ವಿವಿಧ ಮಠಾಧೀಶರು, ಹಿಂದುಳಿದ ಸಮುದಾಯಗಳ ಮುಖಂಡರು ಹಾಗೂ ಪ್ರತಿನಿಧಿಗಳು ಭಾಗವಹಿಸಿ ಹೊಸ ವಿಕಾಸ ಪಕ್ಷಕ್ಕೆ ಬೆಂಬಲ ಸೂಚಿಸಿದರು. ರಾಷ್ಟ್ರೀಯ ಕೋಲಿ, ಬೆಸ್ತ, ನಿಶಾದ್ ಹಾಗೂ ಹಿಂದುಳಿದ ವರ್ಗಗಳ ಮಠಾಧೀಶರ ಮಹಾಸಭಾ ವತಿಯಿಂದ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಮಾತನಾಡಿದ ಮುಖಂಡರು, ರಾಜ್ಯದಲ್ಲಿ ಅತಿಹಿಂದುಳಿದ ಸಮುದಾಯಗಳಿಗೆ ಸಮರ್ಪಕ ರಾಜಕೀಯ ಪ್ರಾತಿನಿಧ್ಯ ದೊರೆಯುತ್ತಿಲ್ಲ ಎಂದು ಆತಂಕ ವ್ಯಕ್ತಪಡಿಸಿದರು. ಈ ಹಿನ್ನೆಲೆಯಲ್ಲಿ ವಿಐಪಿ ಪಕ್ಷವು ಹಿಂದುಳಿದ ವರ್ಗಗಳ ಧ್ವನಿಯಾಗಿ ಕೆಲಸ ಮಾಡಬೇಕೆಂದು ಅಭಿಪ್ರಾಯಪಟ್ಟರು.


ವಿಐಪಿ ಪಕ್ಷದ ರಾಷ್ಟ್ರೀಯ ಉಪಾಧ್ಯಕ್ಷ ಬಿ.ಕೆ. ಮೋಹನಕುಮಾರ್ ಮಾತನಾಡಿ, ಪಕ್ಷವು ರಾಷ್ಟ್ರೀಯ ಅಧ್ಯಕ್ಷ ಮುಖೇಶ್ ಸುಹಾನಿ ಅವರ ನೇತೃತ್ವದಲ್ಲಿ ದೇಶದ ವಿವಿಧ ರಾಜ್ಯಗಳಲ್ಲಿ ಜನಸಾಮಾನ್ಯರ ಪರವಾಗಿ ಕಾರ್ಯನಿರ್ವಹಿಸುತ್ತಿದೆ ಎಂದರು. ಕರ್ನಾಟಕದಲ್ಲಿಯೂ ಪಕ್ಷ ಸಂಘಟನೆಗೆ ಹೈಕಮಾಂಡ್ ವಿಶೇಷ ಆದ್ಯತೆ ನೀಡಿದ್ದು, ಹಿಂದುಳಿದ ಸಮುದಾಯಗಳ ರಾಜಕೀಯ ಶಕ್ತಿಕರಣವೇ ಪಕ್ಷದ ಮುಖ್ಯ ಉದ್ದೇಶವಾಗಿದೆ. ರಾಜ್ಯದಲ್ಲಿ ಕೋಲಿ, ಬೆಸ್ತ, ನಿಶಾದ್ ಸೇರಿದಂತೆ ಅನೇಕ ಸಮುದಾಯಗಳಿಗೆ ರಾಜಕೀಯ ಅವಕಾಶಗಳು ಕಡಿಮೆಯಾಗಿವೆ. ಅವರ ಹಕ್ಕು, ಪ್ರಾತಿನಿಧ್ಯ ಹಾಗೂ ಸಾಮಾಜಿಕ ನ್ಯಾಯಕ್ಕಾಗಿ ವಿಐಪಿ ಪಕ್ಷ ಹೋರಾಟ ನಡೆಸಲಿದೆ ಎಂದು ತಿಳಿಸಿದರು. ಪ್ರಾದೇಶಿಕ ಪಕ್ಷಗಳ ಅಗತ್ಯ ಹೆಚ್ಚುತ್ತಿರುವ ಈ ಸಂದರ್ಭದಲ್ಲಿ ಅವಕಾಶ ವಂಚಿತ ಸಮುದಾಯಗಳ ಸೇವೆಗೆ ಪಕ್ಷ ಬದ್ಧವಾಗಿದೆ ಎಂದು ಹೇಳಿದರು.

ಈಗಾಗಲೇ ಕಲ್ಯಾಣ ಕರ್ನಾಟಕ ಭಾಗದಲ್ಲಿ ಪ್ರವಾಸ ಕೈಗೊಂಡಿರುವ ವಿಐಪಿ ನಾಯಕರು, ಕಲಬುರಗಿಯಲ್ಲಿ ಸಭೆ ನಡೆಸುವ ಮೂಲಕ ರಾಜ್ಯ ರಾಜಕಾರಣದಲ್ಲಿ ಮೊದಲ ಹೆಜ್ಜೆ ಇಟ್ಟಿದ್ದಾರೆ. ಮುಂದಿನ ದಿನಗಳಲ್ಲಿ ರಾಜ್ಯಾದ್ಯಂತ ಪ್ರವಾಸ ನಡೆಸಿ ಪಕ್ಷ ಸಂಘಟನೆ ಬಲಪಡಿಸಿ, ಮುಂಬರುವ ವಿಧಾನಸಭೆ ಚುನಾವಣೆಗೆ ಸಜ್ಜಾಗುವ ಗುರಿ ಹೊಂದಿದ್ದಾರೆ.

# ಬಾಗಲಕೋಟೆಯಲ್ಲಿನ ಅವ್ಯವಾಹತ ಮರಳು ದಂಧೆಗೆ ಲೋಕಾ ಶಾಕ್

## ದಿಢೀರ್ ದಾಳಿ, ಅಕ್ರಮ ಮರಳುಗಾರಿಕೆಗೆ ಬಳಸುತ್ತಿದ್ದ ದೋಣಿ, ಟಿಪ್ಪರ್‌ಗಳು ಜಪ್ತಿ

**ಬಾಗಲಕೋಟೆ, ಮೇ 20:** ಜಿಲ್ಲೆಯಲ್ಲಿ ದೀರ್ಘಕಾಲದಿಂದ ಅವಿರತವಾಗಿ ನಡೆಯುತ್ತಿದ್ದ ಅಕ್ರಮ ಮರಳು ದಂಧೆಗೆ ಲೋಕಾಯುಕ್ತ ಅಧಿಕಾರಿಗಳು ದಿಢೀರ್ ದಾಳಿ ನಡೆಸುವ ಮೂಲಕ ಶಾಕ್ ನೀಡಿದ್ದಾರೆ. ಜಿಲ್ಲೆಯ ವಿವಿಧ ತಾಲೂಕುಗಳಲ್ಲಿ ನದಿಯ ಒಡಲನ್ನು ಕೊರೆದು ಮರಳು ಲೂಟಿ ಮಾಡುತ್ತಿದ್ದ ಅಡ್ಡೆಗಳ ಮೇಲೆ ಇಂದು ಏಕಕಾಲದಲ್ಲಿ ದಾಳಿ ನಡೆಸಿ, ಕಾನೂನು ಕ್ರಮ ಜರುಗಿಸಲಾಗಿದೆ.





ಲೋಕಾಯುಕ್ತ ಅಧಿಕಾರಿಗಳ ತಂಡವು ಬಾಗಲಕೋಟೆ ಜಿಲ್ಲೆಯ ಮುಧೋಳ್, ಇಳಕಲ್, ಹುನಗುಂದ ಸೇರಿದಂತೆ ಜಿಲ್ಲೆಯ ವಿವಿಧ ತಾಲೂಕುಗಳ ಪ್ರಮುಖ ಕೇಂದ್ರಗಳ ಮೇಲೆ ಈ ಕಾರ್ಯಾಚರಣೆ ಕೈಗೊಂಡಿದೆ. ಮರಳು ಮಾಫಿಯಾ ಸಕ್ರಿಯವಾಗಿದ್ದ ಜಾಗಗಳ ಬಗ್ಗೆ ನಿಖರ ಮಾಹಿತಿ ಸಂಗ್ರಹಿಸಿದ್ದ ಅಧಿಕಾರಿಗಳು, ಯಾವುದೇ ಸುಳಿವು ಸಿಗದಂತೆ ಅತ್ಯಂತ ಗೌಪ್ಯವಾಗಿ ಈ ದಾಳಿಯನ್ನು ಸಂಘಟಿಸಿದ್ದರು.

ವಿಶೇಷವಾಗಿ ಮುಧೋಳ ತಾಲೂಕಿನ ಜೀರಾಗಳ ಗ್ರಾಮದ ಬಳಿ ಹರಿಯುವ ಘಟಪ್ರಭಾ ನದಿ ವ್ಯಾಪ್ತಿಯಲ್ಲಿ ಅಕ್ರಮ ಮರಳುಗಾರಿಕೆ ಅವಿಶ್ರಾಂತವಾಗಿ ನಡೆಯುತ್ತಿತ್ತು. ನಿಯಮಗಳನ್ನು ಗಾಳಿಗೆ ತೂರಿ, ನದಿಯ ಪಾತ್ರದಿಂದ ಯಂತ್ರೋಪಕರಣಗಳ ಸಹಾಯದಿಂದ ರಾಜಾರೋಷವಾಗಿ ಮರಳನ್ನು ಎತ್ತಲಾಗುತ್ತಿತ್ತು. ಜೀರಾಗಳ ಗ್ರಾಮವನ್ನೇ ಕೇಂದ್ರವಾಗಿಸಿಕೊಂಡು ಈ ಬೃಹತ್ ದಂಧೆ ಕಾರ್ಯಾಚರಿಸುತ್ತಿತ್ತು ಎಂಬುದು ದಾಳಿಯ ವೇಳೆ ಪತ್ತೆಯಾಗಿದೆ.

ದಾಳಿಯ ಸಂದರ್ಭದಲ್ಲಿ ಅಕ್ರಮ ಮರಳುಗಾರಿಕೆಗೆ ಬಳಸಲಾಗುತ್ತಿದ್ದ ದೋಣಿಗಳು (ಬೋಟ್ಸ್) ಹಾಗೂ ಮರಳು ಸಾಗಾಟಕ್ಕೆ ಸಿದ್ಧವಾಗಿ ನಿಂತಿದ್ದ ಟಿಪ್ಪರ್‌ಗಳನ್ನು ಲೋಕಾಯುಕ್ತ ಪೊಲೀಸರು ಜಪ್ತಿ ಮಾಡಿದ್ದಾರೆ. ಕಾನೂನುಬಾಹಿರವಾಗಿ ನದಿಯಿಂದ ಮರಳು ತೆಗೆಯಲು ಬಳಸುತ್ತಿದ್ದ ಯಾಂತ್ರೀಕೃತ ಬೋಟ್‌ಗಳು ಹಾಗೂ ಸಾಗಾಣಿಕೆ ವಾಹನಗಳನ್ನು ವಶಕ್ಕೆ ಪಡೆಯುವ ಮೂಲಕ ದಂಧೆಕೋರರಿಗೆ ತಕ್ಕ ಪಾಠ ಕಲಿಸಿದ್ದಾರೆ.

ಈ ಇಡೀ ಕಾರ್ಯಾಚರಣೆಯು ಬಾಗಲಕೋಟೆ ಲೋಕಾಯುಕ್ತ ಎಸ್ಪಿ ಮಾನಿಂಗ ದೇಸಾಯಿ ಅವರ ಖುದ್ದು ನೇತೃತ್ವ ಹಾಗೂ ಮಾರ್ಗದರ್ಶನದಲ್ಲಿ ಯಶಸ್ವಿಯಾಗಿ ನಡೆದಿದೆ.

ದಾಳಿಯ ಬೆನ್ನಲ್ಲೇ ಪ್ರಕರಣ ದಾಖಲಿಸಿಕೊಂಡಿರುವ ಲೋಕಾಯುಕ್ತ ಪೊಲೀಸರು, ಈ ಅಕ್ರಮ ದಂಧೆಯ ಹಿಂದೆ ಯಾರಿದ್ದಾರೆ ಮತ್ತು ಇದಕ್ಕೆ ಸ್ಥಳೀಯ ಅಧಿಕಾರಿಗಳ ಕೃಪಾಕಟಾಕ್ಷವೇನಾದರೂ ಇದೆಯೇ ಎಂಬ ನಿಟ್ಟಿನಲ್ಲಿ ತನಿಖೆಯನ್ನು ತೀವ್ರಗೊಳಿಸಿದ್ದಾರೆ.

# ಪೋಕ್ಸೋ ಪ್ರಕರಣ: ವಚನಾನಂದ ಶ್ರೀಗಳಿಗೆ ನಿರೀಕ್ಷಣಾ ಜಾಮೀನು

**ಹರಿಹರ, ಮೇ 20:** ವೀರಶೈವ ಲಿಂಗಾಯತ ಪಂಚಮಸಾಲಿ ಗುರುಪೀಠದ ವಚನಾನಂದ ಸ್ವಾಮೀಜಿ ಅವರಿಗೆ ಎದುರಾಗಿದ್ದ ಸಂಭವನೀಯ ಪೋಕ್ಸೊ ಕಾಯ್ದೆಯಡಿ ಬಂಧನದ ಭೀತಿಗೆ ದಾವಣಗೆರೆ ಜಿಲ್ಲಾ ನ್ಯಾಯಾ ಲಯವು ಬ್ರೇಕ್ ಹಾಕಿದೆ. ಶ್ರೀಗಳು ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಾಲಯವು ಅವರಿಗೆ ಷರತ್ತುಬದ್ಧ ನಿರೀಕ್ಷಣಾ ಜಾಮೀನು ಮಂಜೂರು ಮಾಡಿ ಆದೇಶ ಹೊರಡಿಸಿದೆ.

ಮಠದ ವಸತಿ ನಿಲಯದಲ್ಲಿದ್ದ ಅಪ್ರಾಪ್ತ ವಿದ್ಯಾರ್ಥಿಗಳ ಮೇಲೆ ದೌರ್ಜನ್ಯ ಎಸಗಲಾಗಿದೆ ಹಾಗೂ ಮಕ್ಕಳನ್ನು ದುರ್ಬಳಕೆ ಮಾಡಿಕೊಳ್ಳಲಾಗಿದೆ ಎಂಬ ಗಂಭೀರ ಆರೋಪಗಳು ಕೇಳಿಬಂದಿದ್ದವು.ಈ ಹಿನ್ನೆಲೆಯಲ್ಲಿ ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿಯ ತಂಡವು ಹರಿಹರದ ಮಠಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ, ಸ್ವಾಮೀಜಿಯವರನ್ನು ವಿಚಾರಣೆಗೊಳಪಡಿಸಿ ಮೇಲಾಧಿಕಾರಿಗಳಿಗೆ ವರದಿಯನ್ನೂ ಸಲ್ಲಿಸಿತ್ತು.

ಮಠದ ಆಡಳಿತಾತ್ಮಕ ಭಿನ್ನಾಭಿಪ್ರಾಯ, ಉಚ್ಚಾಟನೆ ಹಾಗೂ ಹಣಕಾಸಿನ ಲೆಕ್ಕಪತ್ರಗಳ ವಿವಾದದ ಬೆನ್ನಲ್ಲೇ ಈ ಬೆಳವಣಿಗೆಗಳು ನಡೆದಿದ್ದರಿಂದ, ಸ್ವಾಮೀಜಿ ಅವರಿಗೆ ಲೈಂಗಿಕ ಅಪರಾಧಗಳಿಂದ ಮಕ್ಕಳ ರಕ್ಷಣೆ ಕಾಯ್ದೆಯಡಿ ಪ್ರಕರಣ ದಾಖಲಾಗಿ ಬಂಧನ ಕ್ಕೊಳಗಾಗುವ ಬಲವಾದ ಆತಂಕ ಎದುರಾಗಿತ್ತು. ಹೀಗಾಗಿ ಅವರು ಮುಂಜಾಗ್ರತಾ ಕ್ರಮವಾಗಿ ನ್ಯಾಯಾಲಯಕ್ಕೆ ನಿರೀಕ್ಷಣಾ ಜಾಮೀನು ಕೋರಿ ಅರ್ಜಿ ಸಲ್ಲಿಸಿದ್ದರು. ಸ್ವಾಮೀಜಿ ಅವರ ಪರ ಮತ್ತು



ಪ್ರತಿವಾದಿಗಳ ಪರ ವಕೀಲರ ವಾದ–ಪ್ರತಿವಾದಗಳನ್ನು ಆಲಿಸಿದ ದಾವಣಗೆರೆ ಜಿಲ್ಲಾ ನ್ಯಾಯಾಲಯವು, ಶ್ರೀಗಳ ಬಂಧನಕ್ಕೆ ತಡೆ ನೀಡಿ ನಿರೀಕ್ಷಣಾ ಜಾಮೀನು ಮಂಜೂರು ಮಾಡಿದೆ. ಆದರೆ, ತನಿಖೆಗೆ ಸಂಪೂರ್ಣವಾಗಿ ಸಹಕರಿಸ ಬೇಕು ಸೇರಿದಂತೆ ಹಲವು ಕಟ್ಟುನಿಟ್ಟಿನ ಷರತ್ತುಗಳನ್ನು ನ್ಯಾಯಾಲಯವು ವಿಧಿಸಿದೆ.

# ಡಾ. ಎ. ರಮ್ಯಾ ರಮೇಶ್ ಅವರಿಗೆ ಅಭಿನಂದನೆಗಳು

## ಮಹಾರಾಣಿ ಕ್ಲಸ್ಟರ್ ವಿ.ವಿ. ಸಿಂಡಿಕೇಟ್ ಸದಸ್ಯರಾಗಿ ಡಾ. ಎ. ರಮ್ಯಾ ರಮೇಶ್ ನೇಮಕ

## ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋತ್ ಅವರಿಗೆ ಧನ್ಯವಾದಗಳು



ಬೆಂಗಳೂರಿನ ಪ್ರತಿಷ್ಠಿತ ಶಿಕ್ಷಣ ಸಂಸ್ಥೆಗಳಲ್ಲಿ ಒಂದಾದ ಎಚ್ ಎಂ ಆರ್ ಸಮೂಹ ಸಂಸ್ಥೆಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ (ಸಿಇಓ) ಆಗಿರುವ ಡಾ. ಎ.ರಮ್ಯಾ ರಮೇಶ್ ಅವರನ್ನು ಬೆಂಗಳೂರಿನ ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯರನ್ನಾಗಿ ಕರ್ನಾಟಕದ ರಾಜ್ಯಪಾಲರು ನೇಮಕ ಮಾಡಿದ್ದಾರೆ.

ಈ ಬಗ್ಗೆ ರಾಜ್ಯದ ರಾಜ್ಯಪಾಲರ ಸಚಿವಾಲಯವು ಅಧಿಕೃತ ಪ್ರಕಟಣೆ ಹೊರಡಿಸಿದ್ದು, ಈ ನೇಮಕಾತಿಯು ಜುಲೈ 7ರಿಂದ ಜಾರಿಗೆ ಬರಲಿದ್ದು, ಮೂರು ವರ್ಷಗಳ ಅವಧಿ ಹೊಂದಿರುತ್ತದೆ ಎಂದು ವಿಶ್ವವಿದ್ಯಾಲಯದ ಕುಲಾಧಿಪತಿಗಳೂ ಆಗಿರುವ ರಾಜ್ಯಪಾಲರ ಆದೇಶದಲ್ಲಿ ತಿಳಿಸಲಾಗಿದೆ.

ಡಾ. ರಮ್ಯಾ ರಮೇಶ್ ಅವರು ಶಿಕ್ಷಣ ಸಂಸ್ಥೆಗಳ ನೇತೃತ್ವದ ಜೊತೆಗೆ ಸಾಮಾಜಿಕ ಸೇವಾ ಚಟುವಟಿಕೆಗಳಲ್ಲಿಯೂ ಸಕ್ರಿಯವಾಗಿ ತೊಡಗಿಸಿಕೊಂಡಿದ್ದಾರೆ. ಆರೋಗ್ಯ, ನೈರ್ಮಲ್ಯ ಮುಂತಾದ ವಿಭಾಗಗಳಲ್ಲಿ ಅವರು ತಮ್ಮದೇ ಆದ ಕೊಡುಗೆ ನೀಡಿದ್ದಾರೆ. ಮಹಿಳಾ ಸಬಲೀಕರಣ, ಬಡಮಕ್ಕಳ ಶಿಕ್ಷಣಕ್ಕೆ ಒತ್ತು ಕೊಡುವ ನಿಟ್ಟಿನಲ್ಲಿ ಡಾ.ರಮ್ಯಾ ಅವರು ಹೆಚ್ಚು ಪ್ರಾಮುಖ್ಯ ನೀಡಿ ಕೆಲಸ ಮಾಡುತ್ತಿದ್ದಾರೆ. ಅಲ್ಲದೆ ಸರ್ಕಾರಿ ಶಾಲೆಗಳನ್ನು ದತ್ತು ತೆಗೆದುಕೊಂಡು ಅವುಗಳ ಅಭಿವೃದ್ಧಿಗಾಗಿ ಅಹರ್ನಿಶಿ ಶ್ರಮಿಸುತ್ತಿದ್ದಾರೆ.

ಈಗಾಗಲೇ ಹೆಣ್ಣೂರು ಭಾಗ ಸೇರಿದಂತೆ ಹಲವಾರು ಕಡೆ ಸರ್ಕಾರಿ ಶಾಲೆಗಳಿಗೆ ನಿವೇಶನ ಸೇರಿ ಹಲವಾರು ಮೂಲಭೂತ ಸೌಕರ್ಯಗಳನ್ನು ಎಚ್‌ಎಂಆರ್ ಸಮೂಹದಿಂದ ಒದಗಿಸಲಾಗಿದೆ ಎಂದು ಸಂಸ್ಥೆಯ ಪ್ರಕಟಣೆ ತಿಳಿಸಿದೆ.

OOOOOO

**ಶುಭಾಶಯಗಳೊಂದಿಗೆ**
**ಎಚ್‌ಎಂಆರ್ ಸಮೂಹ ಸಂಸ್ಥೆಗಳು**



ಜೆಡಿಎಸ್ ನಾಯಕ ಎಚ್.ಎಂ. ರಮೇಶ್ ಗೌಡ ಮತ್ತು ಅವರ ಪತ್ನಿ ಬುಧವಾರ ಲೋಕಭವನದಲ್ಲಿ ಕರ್ನಾಟಕದ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋತ್ ಅವರನ್ನು ಭೇಟಿ ಮಾಡಿ, ಡಾ. ಎ. ರಮ್ಯಾ ರಮೇಶ್ ಅವರನ್ನು ಬೆಂಗಳೂರಿನ ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯರನ್ನಾಗಿ ನೇಮಿಸಿದ್ದಕ್ಕಾಗಿ ಧನ್ಯವಾದ ಅರ್ಪಿಸಿದರು.

# ರಷ್ಯಾ, ಚೀನಾ ಸಾರ್ವಭೌಮ ಆಸ್ತಿಗಳ ನಿರ್ಬಂಧಕ್ಕೆ ಖಂಡನೆ, ಏಕಪಕ್ಷೀಯ ಕ್ರಮಗಳಿಗೆ ಅಂತ್ಯ ಹಾಡಲು ಕರೆ



**ಬೀಜಿಂಗ್, ಮೇ 20:** ರಷ್ಯಾ ಮತ್ತು ಚೀನಾ ಬುಧವಾರ ಬಿಡುಗಡೆ ಮಾಡಿದ ಜಂಟಿ ಹೇಳಿಕೆಯ ಪ್ರಕಾರ, ವಿದೇಶಿ ರಾಜ್ಯಗಳ ಆಸ್ತಿಗಳು ಮತ್ತು ಆಸ್ತಿಯನ್ನು ನಿರ್ಬಂಧಿಸುವುದು, ಸ್ಥಗಿತಗೊಳಿಸುವುದು ಅಥವಾ ವಶಪಡಿಸಿಕೊಳ್ಳುವುದನ್ನು ಒಳಗೊಂಡ ಉಪಕ್ರಮಗಳನ್ನು ಖಂಡಿಸುತ್ತವೆ. "ವಿದೇಶಿ ರಾಜ್ಯಗಳ ಆಸ್ತಿಗಳು ಮತ್ತು ಆಸ್ತಿಯನ್ನು ನಿರ್ಬಂಧಿಸುವುದು, ಸ್ಥಗಿತಗೊಳಿಸುವುದು ಅಥವಾ ವಶಪಡಿಸಿಕೊಳ್ಳುವುದಕ್ಕೆ ಸಂಬಂಧಿಸಿದ ಉಪಕ್ರಮಗಳನ್ನು ಪಕ್ಷಗಳು ಖಂಡಿಸುತ್ತವೆ ಮತ್ತು ಅಂತರರಾಷ್ಟ್ರೀಯ ಕಾನೂನು ಮಾನದಂಡಗಳಿಗೆ ಅನುಗುಣವಾಗಿ ಪ್ರತೀಕಾರದ ಕ್ರಮಗಳನ್ನು ತೆಗೆದುಕೊಳ್ಳುವ ಹಕ್ಕನ್ನು ಒತ್ತಿಹೇಳುತ್ತವೆ" ಎಂದು ರಷ್ಯಾ ಮತ್ತು ಚೀನಾ ನಡುವಿನ ಸಮಗ್ರ ಪಾಲುದಾರಿಕೆ ಮತ್ತು ಕಾರ್ಯತಂತ್ರದ ಸಹಕಾರವನ್ನು ಮತ್ತಷ್ಟು ಬಲಪಡಿಸುವ ಕುರಿತಾದ ಹೇಳಿಕೆಯಲ್ಲಿ ಹೇಳಲಾಗಿದೆ. ಅಂತರರಾಷ್ಟ್ರೀಯ ಕಾನೂನು ಮತ್ತು ವಿಶ್ವಸಂಸ್ಥೆಯ ಸನ್ನದಿನ ಉದ್ದೇಶಗಳನ್ನು ದುರ್ಬಲಗೊಳಿಸುವ ಕಾನೂನುಬಾಹಿರ ಏಕಪಕ್ಷೀಯ ಬಲವಂತದ ಕ್ರಮಗಳನ್ನು ರದ್ದುಗೊಳಿಸಲು ರಷ್ಯಾ ಮತ್ತು ಚೀನಾ ಕರೆ ನೀಡಿವೆ ಎಂದು ಹೇಳಿಕೆಯಲ್ಲಿ ತಿಳಿಸಲಾಗಿದೆ. "ಎಲ್ಲಾ ರಾಜ್ಯಗಳು ವಿಶ್ವಸಂಸ್ಥೆಯ ಉದ್ದೇಶ ಮತ್ತು ತತ್ವಗಳನ್ನು ಅವುಗಳ ಸಂಪೂರ್ಣತೆ, ಪೂರ್ಣತೆ ಮತ್ತು ಪರಸ್ಪರ ಸಂಪರ್ಕದಲ್ಲಿ ಗೌರವಿಸಬೇಕು, ಎಲ್ಲಾ ದೇಶಗಳ ಸಾರ್ವಭೌಮತ್ವ ಮತ್ತು ಪ್ರಾದೇಶಿಕ ಸಮಗ್ರತೆಗೆ ಗೌರವವನ್ನು ಎತ್ತಿಹಿಡಿಯಬೇಕು ಮತ್ತು ಇತರ ರಾಜ್ಯಗಳ ಮೂಲಭೂತ ಹಿತಾಸಕ್ತಿಗಳಿಗೆ, ವಿಶೇಷವಾಗಿ ಭದ್ರತಾ ಕ್ಷೇತ್ರದಲ್ಲಿ ಹಾನಿ ಮಾಡುವ ಕ್ರಮಗಳನ್ನು ವಿರೋಧಿಸಬೇಕು" ಎಂದು ಪಕ್ಷಗಳು ಪ್ರತಿಪಾದಿಸುತ್ತವೆ. "ಸಮಾನತೆ ಮತ್ತು ಅವಿಭಾಜ್ಯ ಭದ್ರತೆಯ ಆಧಾರದ ಮೇಲೆ ಸಂವಾದ ಮತ್ತು ಸಮಾಲೋಚನೆಗಳ ಮೂಲಕ ಭಿನ್ನಾಭಿಪ್ರಾಯಗಳನ್ನು ಶಾಂತಿಯುತವಾಗಿ ಪರಿಹರಿಸುವುದು, ಸಂಘರ್ಷಗಳ ಮೂಲ ಕಾರಣಗಳನ್ನು ನಿವಾರಿಸುವುದು ಮತ್ತು ಜಾಗತಿಕ ಆಡಳಿತ ವ್ಯವಸ್ಥೆ ಮತ್ತು ಅಂತರರಾಷ್ಟ್ರೀಯ ಸಂಬಂಧಗಳ ನಿಯಂತ್ರಣವನ್ನು ಸುಧಾರಿಸುವುದು" ಎಂಬ ಎರಡು ರಾಷ್ಟ್ರಗಳ ಉದ್ದೇಶವನ್ನು ದಾಖಲೆಯು ಒತ್ತಿಹೇಳಿದೆ. ಏಕಪಕ್ಷೀಯ ನಿರ್ಬಂಧಗಳು, ದ್ವಿತೀಯ ನಿರ್ಬಂಧಗಳು ಮತ್ತು ಇತರ ನಿರ್ಬಂಧಿತ ವ್ಯಾಪಾರ ಪದ್ಧತಿಗಳ ಬಳಕೆಯನ್ನು ರಷ್ಯಾ ಮತ್ತು ಚೀನಾ ದೃಢವಾಗಿ ವಿರೋಧಿಸುತ್ತವೆ ಎಂದು ಹೇಳಿಕೆಯಲ್ಲಿ ಸೇರಿಸಲಾಗಿದೆ. ರಷ್ಯಾದ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಮೇ 19 ರಂದು ಅಧಿಕೃತ ಭೇಟಿಗಾಗಿ ಚೀನಾಕ್ಕೆ ಆಗಮಿಸಿದರು. ಬುಧವಾರ, ರಷ್ಯಾದ ಅಧ್ಯಕ್ಷ ಮತ್ತು ಚೀನಾ ಅಧ್ಯಕ್ಷ ಕ್ಸಿ ಜಿನ್ಪಿಂಗ್ ನಡುವೆ ಬೀಜಿಂಗ್‌ನ ಗ್ರೇಟ್ ಹಾಲ್ ಆಫ್ ದಿ ಪೀಪಲ್‌ನಲ್ಲಿ ಮಾತುಕತೆ ನಡೆಯಿತು.

# ಗಂಗಾನದಿ ನೀರು ಹಂಚಿಕೆ ಒಪ್ಪಂದ ಡಿಸೆಂಬರ್‌ಗೆ ಕೊನೆ

**ಢಾಕಾ, ಮೇ 20:** ಜಂಟಿ ನದಿ ಆಯೋಗದ ಸಭೆ ಮತ್ತು ಭಾಗೀರಥಿ–ಹೂಗ್ಲಿಯಾಗಿ ವಿಭಜಿಸಿ ಕೋಲ್ಕತ್ತಾ ಕಡೆಗೆ ಹರಿಯುವ ಗಂಗಾನದಿಯ ಹರಿವನ್ನು ಅಳೆಯುವ ಫರಕ್ಕಾ ಬ್ಯಾರೇಜ್‌ಗೆ ಭೇಟಿ ನೀಡಲು ಬಾಂಗ್ಲಾದೇಶದ ನಿಯೋಗ ಬುಧವಾರ ನಗರಕ್ಕೆ ಹಾರಿತು.

ಈ ವರ್ಷದ ಡಿಸೆಂಬರ್‌ನಲ್ಲಿ 30 ವರ್ಷಗಳ ಗಂಗಾನದಿ ನೀರು ಹಂಚಿಕೆ ಒಪ್ಪಂದದ ಮುಕ್ತಾಯಕ್ಕೆ ಕೆಲವೇ ತಿಂಗಳುಗಳ ಮೊದಲು ನಡೆದ ಸಭೆಯು, ಭಾರತದೊಂದಿಗೆ ನೀರು ಹಂಚಿಕೆ ಕುರಿತು ಢಾಕಾದಲ್ಲಿ ರಾಜಕೀಯ ಚರ್ಚೆ ಬಿರುಗಾಳಿಯ ತಿರುವು ಪಡೆದುಕೊಂಡಿರುವುದರಿಂದ ಮಹತ್ವವನ್ನು ಪಡೆದುಕೊಂಡಿದೆ.

ಈ ವಾರದ ಆರಂಭದಲ್ಲಿ, ಆಡಳಿತಾರೂಢ ಬಿಎನ್ಪಿಯ ಪ್ರಧಾನ ಕಾರ್ಯದರ್ಶಿ ಮಿರ್ಜಾ ಫಕ್ರುಲ್ ಇಸ್ಲಾಂ ಅಲಮ್‌ಗಿರ್ ಅವರು ಭಾರತ–ಬಾಂಗ್ಲಾದೇಶ ಸಂಬಂಧಗಳ ಭವಿಷ್ಯವು ಗಂಗಾ ಮಾತುಕತೆಗಳ ಫಲಿತಾಂಶದ ಮೇಲೆ ಗಮನಾರ್ಹವಾಗಿ ಅವಲಂಬಿತವಾಗಿದೆ ಎಂದು ಎಚ್ಚರಿಸಿದರು, ಇದು ಅವರ ಪಕ್ಷದ ನಿರೀಕ್ಷೆ ಮತ್ತು ಅಗತ್ಯಗಳನ್ನು ಪ್ರತಿಬಿಂಬಿಸುತ್ತದೆ.

"ಭಾರತ ಮತ್ತು ಬಾಂಗ್ಲಾದೇಶ ಸಾಮಾನ್ಯವಾಗಿ ಜಂಟಿಯಾಗಿ ಬರಗಾಲದ ಆರಂಭದಲ್ಲಿ ನೀರಿನ ಹರಿವನ್ನು ಅಳೆಯುತ್ತವೆ. ಇದು ನಿರಂತರ ಪ್ರಕ್ರಿಯೆ. ಆದಾಗ್ಯೂ, ಒಪ್ಪಂದವನ್ನು ನವೀಕರಿಸುವ ಬಗ್ಗೆ ನಿಜವಾದ ಮಾತುಕತೆಗಳು ಪ್ರಾರಂಭವಾಗುವ ಮೊದಲೇ ಬಾಂಗ್ಲಾದೇಶದ ನಾಯಕರು ಬಲವಾದ ಪೂರ್ವನಿರ್ಧಾರಿತ ನಿಲುವು ತೆಗೆದುಕೊಳ್ಳುವ ಪ್ರವೃತ್ತಿಯು ಕಳವಳಕಾರಿಯಾಗಿದೆ. ನೀವು ಕಠಿಣ ನಿಲುವುಗಳನ್ನು ತೆಗೆದುಕೊಳ್ಳಲು ಪ್ರಾರಂಭಿಸಿದರೆ ಅದು ಮಾತುಕತೆಗಳ ಉದ್ದೇಶವನ್ನು ಸೋಲಿಸುತ್ತದೆ," ಎಂದು ಬಾಂಗ್ಲಾದೇಶದ ಮಾಜಿ ಹೈಕಮಿಷನರ್ ವೀಣಾ ಸಿಕ್ರಿ.

ಬಾಂಗ್ಲಾದೇಶದ ನಿಯೋಗವನ್ನು ಜಂಟಿ ನದಿ ಆಯೋಗದ ಸದಸ್ಯ ಎಂಡಿ ಅನ್ವರ್ ಕದಿರ್ ನೇತೃತ್ವ ವಹಿಸಿದ್ದಾರೆ ಮತ್ತು ಬಾಂಗ್ಲಾದೇಶದ ಜಲಸಂಪನ್ಮೂಲ ಸಚಿವಾಲಯ, ವಿದೇಶಾಂಗ ಸಚಿವಾಲಯ ಮತ್ತು ಜಲವಿಜ್ಞಾನ ಸಂಸ್ಥೆಗಳ ಹಿರಿಯ ಪ್ರತಿನಿಧಿಗಳನ್ನು ಒಳಗೊಂಡಿದ್ದು, ಢಾಕಾ ಮುಂಬರುವ ಚರ್ಚೆಗಳಿಗೆ ನೀಡುವ ಪ್ರಾಮುಖ್ಯವನ್ನು ಒತ್ತಿಹೇಳುತ್ತದೆ.

ಅಧಿಕೃತವಾಗಿ ಸಭೆಗಳು ನಿಯಮಿತ ತಾಂತ್ರಿಕ ಸಮಾಲೋಚನೆಗಳಾಗಿದ್ದರೂ, ಅವು ಕಾರ್ಯತಂತ್ರದ ಸೂಕ್ಷ್ಮ ಕ್ಷಣದಲ್ಲಿ ಬರುತ್ತವೆ. ಎರಡೂ ಕಡೆಯ ಅಧಿಕಾರಿಗಳು ಈಗಾಗಲೇ ನವೀಕರಣದ ಕುರಿತು ಪ್ರಾಥಮಿಕ ಚರ್ಚೆಗಳನ್ನು ಪ್ರಾರಂಭಿಸಿದ್ದಾರೆ. ಆದಾಗ್ಯೂ, ಪ್ರಸ್ತುತ ರಾಜಕೀಯ ಸಂದರ್ಭಗಳಲ್ಲಿ ಸಮಗ್ರ ಮರು ಮಾತುಕತೆ ಕಷ್ಟಕರವೆಂದು ವಿಶ್ಲೇಷಕರು ಸೂಚಿಸುತ್ತಾರೆ, ಇದು ತಾತ್ಕಾಲಿಕ ವಿಸ್ತರಣೆಯನ್ನು ಅಲ್ಪಾವಧಿಯ ಫಲಿತಾಂಶವನ್ನಾಗಿ ಮಾಡುತ್ತದೆ.

ಗಂಗಾಜಲ ಒಪ್ಪಂದವನ್ನು "ಪ್ರತ್ಯೇಕವಾಗಿ ನೋಡಲಾಗುವುದಿಲ್ಲ" ಮತ್ತು ಸಂಪರ್ಕ ಮತ್ತು ವ್ಯಾಪಾರ ಸೇರಿದಂತೆ ಹಲವಾರು ಒಪ್ಪಂದಗಳು ಮತ್ತು ಸಂಬಂಧಗಳನ್ನು ಒಟ್ಟಾಗಿ ಪರಿಗಣಿಸಬೇಕಾಗಿದೆ ಎಂದು ಸಿಕ್ರಿ ಗಮನಸೆಳೆದರು.

ಫರಕ್ಕಾ ಮೂಲ ನದಿಯಲ್ಲಿ 50:50 ಅನುಪಾತದಲ್ಲಿ ಹರಿವನ್ನು ಹಂಚಿಕೊಂಡ ಗಂಗಾ ಒಪ್ಪಂದವನ್ನು ಪರಿಷ್ಕರಿಸುವ ಅಗತ್ಯವಿದೆ ಎಂದು ಭಾರತೀಯ ಅಧಿಕಾರಿಗಳು ನಂಬಿದ್ದಾರೆ, ಏಕೆಂದರೆ ಗಂಗಾನದಿಗೆ ನೀರು ನೀಡುವ ಹಿಮನದಿ ಕರಗುವಿಕೆ ಕಡಿಮೆಯಾಗಿದೆ, ಆದರೆ ಗಡಿಯ ಎರಡೂ ಬದಿಗಳಲ್ಲಿ ಜನಸಂಖ್ಯೆ ಸ್ಫೋಟಗೊಳ್ಳುತ್ತಿರುವುದರಿಂದ ನೀರಿನ ಕೆಳಭಾಗದ ಬೇಡಿಕೆ ಹೆಚ್ಚಾಗಿದೆ.

ಚೀನಾ ಮತ್ತು ಪಾಕಿಸ್ತಾನದೊಂದಿಗಿನ ಬಾಂಗ್ಲಾದೇಶದ ಬೆಳೆಯುತ್ತಿರುವ ಸಂಬಂಧವು ನೀರಿನ ಕುರಿತಾದ ಮಾತುಕತೆಗಳನ್ನು ಸಂಕೀರ್ಣಗೊಳಿಸುತ್ತಿದೆ. ಗಂಗಾ ಜಲ ಒಪ್ಪಂದದ ಬಗ್ಗೆ ಅಲಮ್‌ಗೀರ್ ಭಾರತಕ್ಕೆ ಎಚ್ಚರಿಕೆ ನೀಡುವ ಮೊದಲೇ, ಬಾಂಗ್ಲಾದೇಶದ ವಿದೇಶಾಂಗ ಸಚಿವ ಖಲೀಲುರ್ ರೆಹಮಾನ್ ಬೀಜಿಂಗ್ನಲ್ಲಿ ತಮ್ಮ ಚೀನಾದ ಪ್ರತಿರೂಪ ವಾಂಗ್ ಯಿ ಅವರನ್ನು ಭೇಟಿ ಮಾಡಿ ತೀಸ್ತಾ ನದಿ ಸಮಗ್ರ ನಿರ್ವಹಣೆ ಮತ್ತು ಪುನಃಸ್ಥಾಪನೆ ಯೋಜನೆಯಲ್ಲಿ ಚೀನಾದ ಒಳಗೊಳ್ಳುವಿಕೆಯನ್ನು ಔಪಚಾರಿಕವಾಗಿ ಕೋರಿದರು, ಭಾರತದ ಸಿಲಿಗುರಿ ಕಾರಿಡಾರ್‌ನಿಂದ ಗಡಿಯುದ್ದಕ್ಕೂ ಅಂತಹ ಯೋಜನೆಯನ್ನು ನಿರ್ವಹಿಸುವ ಬಗ್ಗೆ ಭಾರತೀಯ ಸೂಕ್ಷ್ಮತೆಯನ್ನು ಮರೆತುಬಿಟ್ಟರು. ಸುಮಾರು ಒಂದು ವಾರದ ಹಿಂದೆ, ಪಾಕಿಸ್ತಾನದ ಉನ್ನತ ಮಟ್ಟದ ವಾಯುಪಡೆಯ ತಂಡವು ಇಸ್ಲಾಮಾಬಾದ್ನಲ್ಲಿ ಬಾಂಗ್ಲಾದೇಶಿ ಪೈಲಟ್ಗಳಿಗೆ ತರಬೇತಿಯನ್ನು ಅಂತಿಮಗೊಳಿಸಲು ಢಾಕಾಗೆ ಭೇಟಿ ನೀಡಿತು. ಪಾಕಿಸ್ತಾನದ ಪಂಜಾಬ್ನ ಕಮ್ರಾದಲ್ಲಿ ಚೀನಾದಿಂದ ಪರವಾನಗಿ ಅಡಿಯಲ್ಲಿ ಉತ್ಪಾದಿಸಲಾಗುವ ಪಾಕಿಸ್ತಾನದ ಜೆಎಫ್ –17 ಥಂಡರ್ ಫೈಟರ್ ಜೆಟ್‌ಗಳನ್ನು ಖರೀದಿಸಲು ಬಾಂಗ್ಲಾದೇಶ ಉತ್ಸುಕವಾಗಿದೆ ಎಂದು ಸೂಚಿಸುವ ವರದಿಗಳ ಜೊತೆಗೆ ಇದು ಬಂದಿದೆ.

ಪಾಕಿಸ್ತಾನದ ಮಿಲಿಟರಿ ಗುಪ್ತಚರ ವಿಭಾಗ – ಐಎಸ್‌ಐ – ಢಾಕಾದಲ್ಲಿ ತನ್ನ ಅಸ್ತಿತ್ವವನ್ನು ವಿಸ್ತರಿಸಿದೆ ಎಂದು ಮೂಲಗಳು ತಿಳಿಸಿವೆ. ಐಎಸ್‌ಐ ಹಿಂದಿನ ದಶಕಗಳಲ್ಲಿ ಭಾರತದ ಈಶಾನ್ಯ ಬಂಡುಕೋರರಿಗೆ ಶಸ್ತ್ರಾಸ್ತ್ರಗಳನ್ನು ಸಾಗಿಸುವಲ್ಲಿ ಮತ್ತು ನಂತರ ದಕ್ಷಿಣ ಏಷ್ಯಾದ ಉಪಖಂಡದ ಇತರ ಭಾಗಗಳಿಗೆ ಕಳುಹಿಸಲಾದ ಬಾಂಗ್ಲಾದೇಶದ ಇಸ್ಲಾಮಿಸ್ಟ್ ಉಗ್ರಗಾಮಿಗಳಿಗೆ ತರಬೇತಿ ಮತ್ತು ಹಣಕಾಸು ಒದಗಿಸುವಲ್ಲಿ ಭಾಗಿಯಾಗಿದೆ ಎಂದು ಶಂಕಿಸಲಾಗಿದೆ.

ಕಳೆದ ಎರಡು ದಶಕಗಳಲ್ಲಿ, ಗುಪ್ತಚರ ವರದಿಗಳು 2002ರಲ್ಲಿ ಕೋಲ್ಕತ್ತಾದ ಅಮೇರಿಕನ್ ಸೆಂಟರ್ ಮೇಲೆ ನಡೆದ ದಾಳಿಯನ್ನು ಪಾಕಿಸ್ತಾನ ಮೂಲದ ಲಷ್ಕರ್–ಎ–ತೈಬಾ ಮತ್ತು ಬಾಂಗ್ಲಾದೇಶ ಮೂಲದ ಹರ್ಕತ್–ಉಲ್–ಜಿಹಾದ್ ಅಲ್–ಇಸ್ಲಾಮಿ (ಹುಜಿ–ಬಿ) ಎರಡಕ್ಕೂ ಸಂಬಂಧಿಸಿವೆ, ಇವು ಐಎಸ್‌ಐ ಜೊತೆ ಸಂಪರ್ಕ ಹೊಂದಿವೆ ಮತ್ತು 2018 ರಲ್ಲಿ ಟಿಬೆಟಿಯನ್ ಆಧ್ಯಾತ್ಮಿಕ ನಾಯಕ ದಲೈ ಲಾಮಾ ಭೇಟಿ ನೀಡುವ ಮೊದಲು ಬೋಧ್‌ಗಯಾದಲ್ಲಿ ಐಇಡಿ ಸ್ಫೋಟಕಗಳೊಂದಿಗೆ ಭಯೋತ್ಪಾದಕ ಬಾಂಬ್ ದಾಳಿ ನಡೆಸಿವೆ ಎಂದು ತಿಳಿದುಬಂದಿದೆ.

# ಗೋವಾದಲ್ಲಿ 5ನೇ ಬೋನಸ್ ಏಷ್ಯಾ ಕಪ್ ಬ್ರಿಜ್ ಚಾಂಪಿಯನ್‌ಶಿಪ್

## ಜಾಗತಿಕ ಮೈಂಡ್ ಸ್ಪೋರ್ಟ್ ಐಕಾನ್‌ಗಳು, ಏಷ್ಯನ್ ಗೇಮ್ಸ್ ಪದಕ ವಿಜೇತರು, ಅಂತಾರಾಷ್ಟ್ರೀಯ ಆಟಗಾರರು ಭಾಗಿ

**ಬೆಂಗಳೂರು, ಮೇ.20:** ಭಾರತದಲ್ಲಿ ಕಾನ್ಟ್ರಾಕ್ಟ್ ಬ್ರಿಡ್ಜ್ ಆಟದ ಶ್ರೇಷ್ಠ ಆಡಳಿತ ಸಂಸ್ಥೆಯಾಗಿರುವ ಹಾಗೂ ಯುವ ವ್ಯವಹಾರ ಮತ್ತು ಕ್ರೀಡಾ ಸಚಿವಾಲಯದಿಂದ ಮಾನ್ಯತೆ ಪಡೆದಿರುವ ಬ್ರಿಡ್ಜ್ ಫೆಡರೇಶನ್ ಆಫ್ ಇಂಡಿಯಾ, ಪ್ರತಿಷ್ಠಿತ 5ನೇ ಬೋನಸ್ ಏಷ್ಯಾ ಕಪ್ ಬ್ರಿಜ್ ಚಾಂಪಿಯನ್‌ಶಿಪ್ ಅನ್ನು ಜೂನ್ 21ರಿಂದ 27ರವರೆಗೆ ಗೋವಾದ ತಾಜ್ ಸಿಡಾಡೆ ಡಿ ಗೋವಾ ಹೊರೈಜನ್‌ನಲ್ಲಿ ಆಯೋಜಿಸಿದೆ.



ಪ್ರತಿ ನಾಲ್ಕು ವರ್ಷಕ್ಕೊಮ್ಮೆ ನಡೆಯುವ ಏಷ್ಯಾ ಕಪ್, ಏಷ್ಯಾ ಮತ್ತು ಓಷಿಯಾನಿಯಾದ ಪ್ರಮುಖ ರಾಷ್ಟ್ರಗಳ ಭಾಗವಹಿಸುವಿಕೆಯಿಂದ ಏಷ್ಯಾ ಬ್ರಿಜ್ ಸಮುದಾಯದ ಆಶ್ರಯದಲ್ಲಿ ನಡೆಯುವ ಅತ್ಯಂತ ಪ್ರತಿಷ್ಠಿತ ಖಂಡ ಮಟ್ಟದ ಬ್ರಿಡ್ಜ್ ಚಾಂಪಿಯನ್ಶಿಪ್ಗಳಲ್ಲಿ ಒಂದಾಗಿದೆ.

ಈ ವರ್ಷ ಭಾರತ, ಚೀನಾ, ಜಪಾನ್, ಚೈನೀಸ್ ತೈಪೆ, ಹಾಂಗ್‌ಕಾಂಗ್ ಚೈನಾ, ಸಿಂಗಾಪುರ, ಥೈಲ್ಯಾಂಡ್, ಇಂಡೋನೇಷ್ಯಾ, ಮಲೇಷ್ಯಾ, ಫಿಲಿಪೈನ್ಸ್, ಕೊರಿಯಾ, ಆಸ್ಟ್ರೇಲಿಯಾ, ನ್ಯೂಜಿಲೆಂಡ್, ಬಾಂಗ್ಲಾದೇಶ, ಶ್ರೀಲಂಕಾ, ಪಾಕಿಸ್ತಾನ, ಯುನೈಟೆಡ್ ಅರಬ್ ಎಮಿರೇಟ್ಸ್, ಜೋರ್ಡಾನ್, ಕುವೈತ್ ಮತ್ತು ಸೌದಿ ಅರೇಬಿಯಾ ಸೇರಿ 20ಕ್ಕೂ ಹೆಚ್ಚು ದೇಶಗಳಿಂದ ಸ್ಪರ್ಧಿಗಳು ಭಾಗವಹಿಸುವ ನಿರೀಕ್ಷೆಯಿದೆ.

ಬ್ರಿಡ್ಜ್ ಫೆಡರೇಶನ್ ಆಫ್ ಇಂಡಿಯಾದ ಅಧ್ಯಕ್ಷ ಪ್ರಸಾದ್ ಕೆನಿ ಮಾತನಾಡಿ, ಪ್ರತಿಷ್ಠಿತ ಬೋನಸ್ ಏಷ್ಯಾ ಕಪ್ ಬ್ರಿಜ್ ಚಾಂಪಿಯನ್‌ಶಿಪ್ ಆಯೋಜಿಸಲು ಭಾರತಕ್ಕೆ ಇದು ಎರಡನೇ ಬಾರಿ ಸಿಕ್ಕಿರುವ ಗೌರವ. ಇದು ಜಾಗತಿಕ ಮೈಂಡ್ ಸ್ಪೋರ್ಟ್ ಹಾಗೂ ಬೌದ್ಧಿಕ ಕ್ರೀಡಾಕೂಟಗಳ ಪ್ರಮುಖ ಗಮ್ಯಸ್ಥಾನವಾಗಿ ಭಾರತದ ಬೆಳೆಯುತ್ತಿರುವ ಪ್ರತಿಷ್ಠೆಯನ್ನು ತೋರಿಸುತ್ತದೆ ಎಂದು ಹೇಳಿದರು.

ನಂತರ ವಾರಪೂರ್ತಿ ಅರ್ಹತಾ ಸುತ್ತುಗಳು, ಸೆಮಿಫೈನಲ್ ಹಾಗೂ ಫೈನಲ್ ಪಂದ್ಯಗಳು ನಡೆಯಲಿವೆ. ಪ್ರತಿ ವಿಭಾಗಕ್ಕೆ ಕೇವಲ 16 ತಂಡಗಳಿಗೆ ಅವಕಾಶ ಇರುತ್ತದೆ. ಈ ಟೂರ್ನಿಯ ಪ್ರಮುಖ ಆಕರ್ಷಣೆಯಾಗಿ 2026ರ ಜೂನ್ 27ರಂದು ಎಲ್ಲಾ ನೋಂದಾಯಿತ ಆಟಗಾರರಿಗಾಗಿ ವಿಶೇಷ ಸ್ನೇಹದ ಜೋಡಿಗಳ ಪಂದ್ಯ ಆಯೋಜಿಸಲಾಗಿದೆ.

ಭಾರತ ಈ ಚಾಂಪಿಯನ್‌ಶಿಪ್‌ನಲ್ಲಿ ಇದುವರೆಗೆ 8 ಚಿನ್ನ ಸೇರಿದಂತೆ ಒಟ್ಟು 20 ಪದಕಗಳನ್ನು ಗೆದ್ದು ಹೆಮ್ಮೆಯ ಪರಂಪರೆಯನ್ನು ಹೊಂದಿದೆ. ಸುಭಾಷ್ ಗುಪ್ತಾ, ಸಂದೀಪ್ ಠಾಕ್ರಾಲ್ ಹಾಗೂ ರಾಜೇಶ್ವರ್ ತಿವಾರಿ, ಸುಮಿತ್ ಮುಖರ್ಜಿ ಮೊದಲಾದ ಭಾರತದ ಪ್ರಮುಖ ಜೋಡಿಗಳು ಈ ಬಾರಿ ಭಾರತದ ಪದಕ ಸಂಖ್ಯೆಯನ್ನು ಹೆಚ್ಚಿಸಲು ಪ್ರಯತ್ನಿಸಲಿವೆ.

ಈ ವರ್ಷದ ಚಾಂಪಿಯನ್‌ಶಿಪ್ ಏಷ್ಯಾ–ಪೆಸಿಫಿಕ್ ಪ್ರದೇಶದ ಅತ್ಯಂತ ಸಾಧನೆಗೈದ ಬ್ರಿಜ್ ಆಟಗಾರರು, ರಾಷ್ಟ್ರೀಯ ಚಾಂಪಿಯನ್‌ಗಳು ಮತ್ತು ಅಂತರರಾಷ್ಟ್ರೀಯ ಪದಕ ವಿಜೇತರನ್ನು ಒಂದೇ ವೇದಿಕೆಗೆ ತರುತ್ತದೆ ಎಂದು ಕೆನಿ ಹೇಳಿದರು.